24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 132 | ನವದೆಹಲಿ | ಬೆಲೆ ₹10 | ನವೆಂಬರ್ 7, 2026, ಶನಿವಾರ

ಒಳಪುಟಗಳಲ್ಲಿ

ಕರ್ಮಭೂಮಿ ಎಕ್ಸ್‌ಪ್ರೆಸ್ ರೈಲಿಗೆ ಬೆಂಕಿ ಹೊತ್ತಿ ಉರಿದ ನಾಲ್ಕು ಬೋಗಿಗಳು - ಪು.4

ಎಲ್‌ಇಡಿ ಬೀದಿದೀಪ ಯೋಜನೆಯಿಂದ 100 ಕೋಟಿ ರೂ. ಉಳಿತಾಯ: ಜಿಬಿಎ ಸಚಿವ ಕೃಷ್ಣ ಬೈರೇಗೌಡ - ಪು.5

ಗೃಹಲಕ್ಷ್ಮಿ ಯೋಜನೆ ನಿಲ್ಲದು: ಮಹಿಳೆಯರಿಗೆ ಮುಖ್ಯಮಂತ್ರಿ ಅಭಯ

ಗೃಹಕಚೇರಿ ಕೃಷ್ಣಾದಲ್ಲಿ ಫಲಾನುಭವಿಗಳೊಂದಿಗೆ ಡಿ.ಕೆ.ಶಿವಕುಮಾರ್ ಸಂವಾದ



ಬೆಂಗಳೂರು, ನ.6: ನನ್ನ ಮಗ ಕೊಪ್ಪಳದಲ್ಲಿ ಎಂಬಿಬಿಎಸ್ ಓದುತ್ತಿದ್ದಾನೆ. ಗೃಹಲಕ್ಷ್ಮಿ ಹಣದಿಂದ ಸುಮಾರು 59 ಸಾವಿರದಷ್ಟು ಶುಲ್ಕ ಕಟ್ಟಿದ್ದೇನೆ. ಶಕ್ತಿ ಯೋಜನೆ ಇರುವ ಕಾರಣಕ್ಕೆ ಆಗಾಗ್ಗೆ ಮಗನನ್ನು ನೋಡಿಕೊಂಡು ಬರಲು ಅನುಕೂಲವಾಗಿದೆ" ಎಂದು ಚಿಕ್ಕಮಗಳೂರು ಜಿಲ್ಲೆಯ ಮಹಿಳೆಯೊಬ್ಬರು ಹೇಳಿದಾಗ ಇಡೀ ಸಭಾಂಗಣವೇ ಭಾವುಕತೆಯಲ್ಲಿ ಮಿಂದೆದ್ದಿತು.

ನಿಮ್ಮ ಮಗ ಎಷ್ಟು ಮಾರ್ಕ್ಸ್ ತಗೊಂಡಿದಾನೆ ತಾಯಿ ಎಂದು ಸಿಎಂ ಕೇಳಿದಾಗ, ಮಗ ಪಿಯುಸಿಯಲ್ಲಿ 98 ಪರ್ಸೆಂಟ್ ತಗೊಂಡಿದ್ದಾನೆ ಎಂದು ಹೇಳುವಾಗ ತಾಯಿಯ ಹುಮ್ಮಸ್ಸು ಇಮ್ಮಡಿಯಾಗಿತ್ತು.

ಇವೆಲ್ಲವೂ ಶುಕ್ರವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಗೃಹಲಕ್ಷ್ಮಿ ಯೋಜನೆ ಫಲಾನುಭವಿಗಳ ಜೊತೆ ನಡೆಸಿದ ಸಂವಾದ ಕಾರ್ಯಕ್ರಮದಲ್ಲಿ ಕಂಡುಬಂದ ಕ್ಷಣಗಳು. ಸಂವಾದದಲ್ಲಿ ಗೃಹಲಕ್ಷ್ಮಿ ಯೋಜನೆಯಿಂದ ತಮಗಾದ ಅನುಕೂಲ, ತಮ್ಮ ಅನುಭವಗಳನ್ನು ಫಲಾನುಭವಿಗಳು ಮುಕ್ತವಾಗಿ ತೆರೆದಿಟ್ಟರು. ಜತೆಗೆ ಊರಿನ ಸಮಸ್ಯೆಗಳನ್ನು ಸಿಎಂ ಗಮನಕ್ಕೆ ತರಲು ಮರೆಯಲಿಲ್ಲ.

ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲ್ಲೂಕಿನ ಹಿರಿಯ ಮಹಿಳೆಯೊಬ್ಬರು, ಗೃಹಲಕ್ಷ್ಮಿಯ ಮೊತ್ತ ಹಿರಿಯ ಮಹಿಳೆಯರ ಔಷಧಿಗೆ, ಸ್ವಾಭಿಮಾನದ ಬದುಕಿಗೆ ನೆರವಾಗಿದೆ" ಎಂದು ಭಾವುಕರಾಗಿ ನುಡಿದರು. ಗೃಹಲಕ್ಷ್ಮಿ ಯೋಜನೆಯನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸಿದಂತೆ ಫಲಾನುಭವಿಗಳು ಮನವಿ ಮಾಡಿದರು. ಅದಕ್ಕೆ ಪ್ರತಿಕ್ರಿಯಿಸಿದ ಸಿಎಂ, "ಈ ಯೋಜನೆ ನಿಲ್ಲಿಸಲಾಗದು ಎಂದು ಭರವಸೆ ನೀಡಿದರು.

ಹೀಗೆ ಹಲವಾರು ಫಲಾನುಭವಿಗಳು ಗೃಹಲಕ್ಷ್ಮೀ ಯೋಜನೆಯಿಂದ ತಮಗಾದ ಅನುಕೂಲಗಳನ್ನು ಮುಖ್ಯಮಂತ್ರಿಗಳ ಜತೆ ಹಂಚಿಕೊಂಡರು.

ಪ್ರತಿ ಜಿಲ್ಲೆಯಲ್ಲಿ ಸಮಾವೇಶ: ಗೃಹಲಕ್ಷ್ಮಿ ಯೋಜನೆಗೆ 86,000 ಕೋಟಿ ರೂ. ವೆಚ್ಚ ಮಾಡಲಾಗಿದೆ. ಇದು 1 ಲಕ್ಷ ಕೋಟಿ ಮೊತ್ತಕ್ಕೆ ತಲುಪಿದಾಗ ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಲ್ಲಿ ಗೃಹಲಕ್ಷ್ಮಿಯರ ಸಮಾವೇಶ ಮಾಡಲಾಗುವುದು. ಮೈಸೂರಿನಲ್ಲಿ ತಾಯಿ ಚಾಮುಂಡೇಶ್ವರಿಯ ಮಡಿಲಿಗೆ ನಾನು ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯನವರು 2000 ರೂ.ಗಳನ್ನಿಟ್ಟು ಈ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಮಾಡುವ ಶಕ್ತಿ ಕೊಡಮ್ಮ ಎಂದು ಪ್ರಾರ್ಥಿಸಿದ್ದೆವು. ಜನರು ನಮಗೆ 136 ಸೀಟುಗಳೊಂದಿಗೆ ಆಶೀರ್ವಾದ ಮಾಡಿದರು ಎಂದು ಸಿಎಂ ತಿಳಿಸಿದರು.

ಗೃಹಲಕ್ಷ್ಮಿ ದುರುಪಯೋಗ ತಡೆಯಲು ಮರು ಪರಿಶೀಲನೆ: ಗೃಹಲಕ್ಷ್ಮಿ ಯೋಜನೆಯಲ್ಲೂ ದುರುಪಯೋಗ ಆಗುತ್ತಿರುವುದು ಗಮನಕ್ಕೆ ಬಂದಿದೆ. ಒಂದು ಲಕ್ಷಕ್ಕೂ ಹೆಚ್ಚು ಮೃತರ ಖಾತೆಗೆ ಹಣ ಹೋಗುತ್ತಿರುವುದು, ಇತರ ರಾಜ್ಯದ ಮಹಿಳೆಯರು ಈ ಸೌಲಭ್ಯದ ದುರುಪಯೋಗ ಪಡೆದಿರುವುದು, ಬಾಗಲಕೋಟೆಯ ಫಲಾನುಭವಿಯ ವಿವರ ಪರಿಶೀಲಿಸಿದಾಗ ಫೋನ್ ನಂಬರ್ ಒಂದು ಊರಿನದ್ದು, ಹಣ ಬೇರೆಯವರಿಗೆ ತಲುಪುತ್ತಿರುವುದು ಇಂತಹ ವ್ಯತ್ಯಾಸಗಳು ಗಮನಕ್ಕೆ ಬಂದಿವೆ. ಗೃಹಲಕ್ಷ್ಮಿ ಮೊತ್ತ ಸಾಲಕ್ಕೆ ವಜಾ ಆಗುತ್ತಿರುವ ಘಟನೆಗಳೂ ನಡೆದಿವೆ. ಈ ಹಿನ್ನೆಲೆಯಲ್ಲಿ ಗೃಹಲಕ್ಷ್ಮಿ ಫಾರಂ ಸಿದ್ಧಪಡಿಸಲಾಗಿದೆ. ಮಹಿಳೆಯರು ತಮ್ಮದೇ ದೂರವಾಣಿ ಸಂಖ್ಯೆ ನಮೂದಿಸಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಮನವಿ ಮಾಡಿದರು. ಮುಂದಿನ ಅಧಿವೇಶನಕ್ಕೂ ಮೊದಲೇ ಮಹಿಳೆಯೊಬ್ಬರನ್ನು ಸಚಿವರನ್ನಾಗಿ ನೇಮಕ ಮಾಡಲಾಗುವುದು.

ಮೀಟರ್ ಬಡ್ಡಿ ವ್ಯವಹಾರಕ್ಕೆ ಕಡಿವಾಣ: ಮೀಟರ್ ಬಡ್ಡಿ ವ್ಯವಹಾರದಲ್ಲಿ ತೊಡಗಬಾರದು ಎಂದು ಎಚ್ಚರಿಕೆ ನೀಡುತ್ತಿರುವುದಕ್ಕೆ ಕಾರಣವೇನಿದೆ ಎಂಬ ಪ್ರಶ್ನೆಗೆ, "ಕೆಲವರು ಬೆಳಗ್ಗೆ ಮಾರುಕಟ್ಟೆಗೆ ಹೋಗುವಾಗ 2 ಸಾವಿರ ರೂಪಾಯಿ ಸಾಲ ಪಡೆದು, ಸಂಜೆ ಹಣ ಹಿಂದಿರುಗಿಸುವಾಗ ಶೇ.10 ರಷ್ಟು ನೀಡುವ ಅತಿಯಾದ ಬಡ್ಡಿ ವ್ಯವಹಾರ ನಡೆಸುತ್ತಿದ್ದಾರೆ. ಶೇ.5–10 ರೂಪಾಯಿಗಳ ಲೆಕ್ಕದಲ್ಲಿ ಬಡ್ಡಿ ವಸೂಲಿ ಮಾಡುವ ಪದ್ಧತಿಯೂ ಇದೆ. ಇಂತಹ ವ್ಯವಹಾರಗಳಿಂದ ಜನರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವುದಲ್ಲದೆ, ಅಪರಾಧ ಪ್ರಕರಣಗಳೂ ಹೆಚ್ಚಾಗುತ್ತಿವೆ. ಆದರೆ, ಸಂತ್ರಸ್ತರು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಹಿಂಜರಿಯುತ್ತಿದ್ದಾರೆ. ಹೀಗಾಗಿ, ಇಂತಹ ವ್ಯವಹಾರಗಳಿಗೆ ಒಳಗಾಗದಂತೆ ಜನರಿಗೆ ಎಚ್ಚರಿಕೆ ನೀಡುತ್ತಿದ್ದೇನೆ. ಅಗತ್ಯಬಿದ್ದರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಮೊಮ್ಮಗಳಿಗಾಗಿ ಆಟಿಕೆ ತೊಟ್ಟಿಲು ಖರೀದಿಸಿದ ಸಿಎಂ

ಕಲಬುರಗಿ ಜಿಲ್ಲೆಯ ಮಹಿಳೆ ಗೃಹಲಕ್ಷ್ಮಿ ಯೋಜನೆಯ ಮೊತ್ತವನ್ನೇ ಬಂಡವಾಳವಾಗಿಸಿಕೊಂಡು ಕರಕುಶಲ ವಸ್ತುಗಳನ್ನು ತಯಾರಿಸಿ ಮಾರಾಟ ಮಾಡುತ್ತಿರುವುದಾಗಿ ಹೆಮ್ಮೆಯಿಂದ ತಿಳಿಸಿ, ತಾವು ತಂದ ತೊಟ್ಟಿಲು, ದೀಪ ಮತ್ತಿತರ ವಸ್ತುಗಳನ್ನು ಪ್ರದರ್ಶಿಸಿದರು. ಆ ವಸ್ತುಗಳನ್ನು ಸಿಎಂಗೆ ಉಡುಗೊರೆ ನೀಡಿ, ಮಗುವಿಗೆ ಶುಭವಾಗಲಿ ಎಂದು ಹಾರೈಸಿದರು. ತೊಟ್ಟಿಲು ನಂಗೆ ಕೊಡಮ್ಮ, ಮೊಮ್ಮಗಳಿಗೆ ಕೊಡ್ತೇನೆ. ಎಷ್ಟು ರೂಪಾಯಿ ಆಗುತ್ತೆ ಇದು" ಎಂದು ಕೇಳಿ 500 ರೂಪಾಯಿ ನೀಡಿ ತೊಟ್ಟಿಲು ಖರೀದಿಸಿದರು.



ಗೃಹಲಕ್ಷ್ಮಿ ಯೋಜನೆಯ ಹಣದಿಂದ ವ್ಯವಹಾರ, ಉದ್ಯಮಗಳಲ್ಲಿ ತೊಡಗಿಸಿಕೊಂಡವರು, ಮಕ್ಕಳ ಶಿಕ್ಷಣಕ್ಕೆ ಬಳಸಿಕೊಂಡಿರುವುದು ತಿಳಿದು ಸಂತೋಷವಾಯಿತು. ವಿದ್ಯೆ ಬಹುದೊಡ್ಡ ಆಸ್ತಿ. ಆದರೆ ಈ ಮೊತ್ತವನ್ನು ಎಂದಿಗೂ ಬಡ್ಡಿ ವ್ಯವಹಾರ ಅಥವಾ ಚೀಟಿ ವ್ಯವಹಾರಕ್ಕೆ ಬಳಸಿಕೊಳ್ಳಬೇಡಿ. ನಿಮ್ಮ ಆಶೀರ್ವಾದ ಇರಲಿ. ಮತ್ತೆ ನಾವು 2028 ರಲ್ಲಿ ಅಧಿಕಾರಕ್ಕೆ ಬರುತ್ತೇವೆ. ಈ ಬಗ್ಗೆ ನಿಮ್ಮ ಪತಿ, ನಿಮ್ಮ ಗೆಳತಿಯರಿಗೂ ಅರಿವು ಮೂಡಿಸಿ.

–ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ

ಗೃಹಲಕ್ಷ್ಮಿ ಯೋಜನೆಗೆ ಜಾನಪದ ಗೀತೆ ಪ್ರೇರಣೆ

"ತಾಯಿ ಸತ್ತ ಮೇಲೆ ತವರಿಗೆ ಎಂದು ಹೋಗಬಾರದವ್ವ, ನಾಯಿಗಿಂತ ಕಡೆಯಾಗಿ ಹೋಯಿತೇ ನನ ಬಾಳು ಕೇಳವ್ವ" ಜಾನಪದ ಹಾಡಿನ ಈ ಸಾಲುಗಳು ದೇಶದ ಅತಿದೊಡ್ಡ ಸಾಮಾಜಿಕ ಭದ್ರತಾ ಯೋಜನೆಯಾಗಿರುವ ಗೃಹಲಕ್ಷ್ಮಿ ಉದಯಕ್ಕೆ ಪ್ರೇರಣೆಯಾಗಿದೆ. ಈ ವೇಳೆ ಮಾತನಾಡಿದ ಮುಖ್ಯಮಂತ್ರಿಗಳು, ಒಂದು ರಾತ್ರಿ ನನ್ನ ಸಂಬಂದಿ ಈ ಹಾಡು ಹೇಳುವಾಗ ಗೃಹಲಕ್ಷ್ಮಿ ಯೋಜನೆ ಕುರಿತ ಕಲ್ಪನೆ ಮೂಡಿತು. ಹೆಣ್ಣುಮಕ್ಕಳಿಗೆ ಶಕ್ತಿ ನೀಡಬೇಕೆಂದು ಶಕ್ತಿ ಹಾಗೂ ಗೃಹಲಕ್ಷ್ಮಿ ಯೋಜನೆಯನ್ನು ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಲಾಯಿತು. ಹೆಣ್ಣುಮಕ್ಕಳ ಜೀವನದಲ್ಲಿ ಬದಲಾವಣೆ ತರುವ ಉದ್ದೇಶದಿಂದ ಗೃಹಲಕ್ಷ್ಮಿ ಹಾಗೂ ಶಕ್ತಿ ಯೋಜನೆಯನ್ನು ನಮ್ಮ ಸರ್ಕಾರ ಜಾರಿಗೆ ತಂದಿದೆ. ನಾವು ಅಂದುಕೊಂಡಂತೆ ಮಹಿಳೆಯರ ಬದುಕಿನಲ್ಲಿ ಬದಲಾವಣೆ ಆಗಿದೆ ಎಂದು ಆತ್ಮತೃಪ್ತಿ ವ್ಯಕ್ತಪಡಿಸಿದರು. ಸಿಎಂ ಮಾತಿಗೆ ದನಿಗೂಡಿಸಿದ ಮಹಿಳೆಯರು ಈ ಮೊತ್ತ ನಮಗೆ ತವರುಮನೆ ಉಡುಗೊರೆಯಂತೆ ಎಂದು ಬಣ್ಣಿಸಿದರು.

300 ಕುರಿ ಸಾಕಣೆ

ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕು – ಗಂಡಬೊಮ್ಮನಹಳ್ಳಿ ಪಂಚಾಯಿತಿಯ ಮಹಿಳೆ ಗೃಹಲಕ್ಷ್ಮಿ ಯೋಜನೆಯಿಂದ ತಮ್ಮ ಸ್ವಸಹಾಯ ಗುಂಪಿನ ಗೆಳತಿಯರು ಕುರಿ ಸಾಕಣೆಯನ್ನು ಬೆಳೆಸಿದ ಪರಿಯನ್ನು ವಿವರಿಸಿದರು. ಐದು ಕುರಿಯಿಂದ ಪ್ರಾರಂಭವಾಗಿ ಇಂದು 300 ಕುರಿಗಳನ್ನು ಸಾಕುತ್ತಿರುವುದಾಗಿ ಹೇಳಿದರು. ಜೊತೆಗೆ ಕುರಿ ಮೇಯಿಸಲು ಐವರು ಗಂಡುಮಕ್ಕಳಿಗೆ ಉದ್ಯೋಗ ನೀಡಿರುವುದಾಗಿ ಹೇಳಿದಾಗ ಸಿಎಂ ಆದಿಯಾಗಿ ಎಲ್ಲರಿಂದ ಚಪ್ಪಾಳೆಯ ಸುರಿಮಳೆ.

ಡಿ.2ರಿಂದ 11ರವರೆಗೆ ಬೆಳಗಾವಿ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನ



ಬೆಂಗಳೂರು, ನ.6: ಡಿಸೆಂಬರ್ 2ರಿಂದ 11ರವರೆಗೆ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆಯಲಿದೆ. ಈ ಸಂಬಂಧ ವಿಧಾನಸಭೆ ಕಾರ್ಯದರ್ಶಿ ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ. ಅಧಿವೇಶನ 9 ದಿನ ನಡೆಯಲಿದ್ದು, ಶನಿವಾರವೂ ಕಲಾಪ ನಡೆಸಲು ಸರ್ಕಾರ ನಿರ್ಧರಿಸಿದೆ. ಈ ಹಿಂದೆ ನ.30ರಿಂದ ಡಿ.11 ರವರೆಗೆ ಒಟ್ಟು 10 ದಿನ ಅಧಿವೇಶನ ನಡೆಸಲು ನಿಶ್ಚಿಯಿಸಲಾಗಿತ್ತು. ಅಲ್ಲದೇ ಈ ಕುರಿತ ಕಡತವನ್ನು ರಾಜ್ಯಪಾಲರ ಅನುಮೋದನೆಗಾಗಿ ಸಂಸದೀಯ ವ್ಯವಹಾರಗಳ ಇಲಾಖೆಯು ರಾಜ್ಯಪಾಲರಿಗೆ ಕಳುಹಿಸಿತ್ತು. ಆದರೆ, ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಉಪಚುನಾವಣೆ ಹಿನ್ನೆಲೆ ಅಧಿವೇಶನ ದಿನಾಂಕದಲ್ಲಿ ಬದಲಾವಣೆಯಾಗಿದೆ. ಸರ್ಕಾರದ ಸೂಚನೆ ಅನ್ವಯ ಕಡತವನ್ನು ವಾಪಸ್ ಪಡೆದುಕೊಂಡಿರುವ ಇಲಾಖೆಯು ಡಿ.2 ರಿಂದ ಅಧಿವೇಶನ ಆರಂಭಿಸುವ ಬಗ್ಗೆ ದಿನಾಂಕವನ್ನು ಮರು ನಿಗದಿಪಡಿಸಿ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕಡತ ರವಾನಿಸಿತು. ಹೀಗಾಗಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಅಂತಿಮ ನಿರ್ಣಯ ತೆಗೆದುಕೊಳ್ಳಲಾಗಿತ್ತು.

ರಾಮಲೀಲಾ ರ್‍ಯಾಲಿಗೆ ಗೈರುಹಾಜರು: 60 ಯುವ ಕಾಂಗ್ರೆಸ್ ನಾಯಕರ ಅಮಾನತು

ನವದೆಹಲಿ, ನ.6: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಇತ್ತೀಚಿಗೆ ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆದ ರ್‍ಯಾಲಿಗೆ ಗೈರುಹಾಜರಾದ ಮಧ್ಯಪ್ರದೇಶದ 60 ಯುವ ಕಾಂಗ್ರೆಸ್ ನಾಯಕರನ್ನು ಅಮಾನತು ಗೊಳಿಸಲಾಗಿದೆ. ಇದು ಪಕ್ಷದ ರಾಜ್ಯ ಘಟಕದಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಈ ನಿರ್ಧಾರವನ್ನು ಹಲವು ನಾಯಕರು 'ಏಕಪಕ್ಷೀಯ' ಮತ್ತು 'ಪ್ರಜಾಪ್ರಭುತ್ವ ವಿರೋಧಿ' ಎಂದು ಕರೆದಿದ್ದಾರೆ. ತಮ್ಮ ಕುಟುಂಬದಲ್ಲಿನ ಅನಾರೋಗ್ಯ ಅಥವಾ ಅಂತ್ಯಕ್ರಿಯೆಯಂತಹ ತುರ್ತು ವೈಯಕ್ತಿಕ ಕಾರಣಗಳಿಂದಾಗಿ ನ.1 ರಂದು ರಾಮ್‌ಲೀಲಾ ಮೈದಾನದಲ್ಲಿ ನಡೆದ ಕಾರ್ಯಕ್ರಮಕ್ಕೆ ಹಾಜರಾಗಲು ಸಾಧ್ಯವಾಗಲಿಲ್ಲ ಎಂದು ಅಮಾನತುಗೊಂಡ ನಾಯಕರು ತಿಳಿಸಿದ್ದಾರೆ. ಈ ಶಿಸ್ತುಕ್ರಮ ಕ್ಷೇತ್ರಗಳಲ್ಲಿ ತಮ್ಮನ್ನು ಅಪಹಾಸ್ಯ ಮಾಡಲು ಬಿಜೆಪಿಗೆ ಸುಲಭವಾದ ಅವಕಾಶವನ್ನು ಒದಗಿಸಿಕೊಟ್ಟಿದೆ ಎಂದು ಅವರು ದೂರಿದ್ದಾರೆ. ಮಧ್ಯಪ್ರದೇಶದ 5 ಉಪಾಧ್ಯಕ್ಷರು, 14 ಪ್ರಧಾನ ಕಾರ್ಯದರ್ಶಿಗಳು, 32 ಕಾರ್ಯದರ್ಶಿಗಳು ಮತ್ತು ಒಂಬತ್ತು ಜಿಲ್ಲಾ ಅಧ್ಯಕ್ಷರು ಸೇರಿದಂತೆ 60 ಪದಾಧಿಕಾರಿಗಳನ್ನು ಯುವ ಕಾಂಗ್ರೆಸ್ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿದೆ.

ನಿತ್ಯ 3,000 ಕ್ಯೂಸೆಕ್‌ನಂತೆ ಮುಂದಿನ 15 ದಿನ ತಮಿಳುನಾಡಿಗೆ ಕಾವೇರಿ ನೀರು ಹರಿಸಲು ಆದೇಶ



ನ.7ರಿಂದಲೇ ಜಾರಿಗೆ ಕರ್ನಾಟಕಕ್ಕೆ ಸೂಚನೆ: ಸಿಡಬ್ಲ್ಯುಆರ್‌ಸಿ ಶಿಫಾರಸಿಗೆ ಸಿಡಬ್ಲ್ಯುಎಂಎ ಸಮ್ಮತಿ

ನವದೆಹಲಿ, ನ.6: ಕಾವೇರಿ ನದಿಯಿಂದ ಪ್ರತಿದಿನ 3,000 ಕ್ಯೂಸೆಕ್‌ನಂತೆ ಮುಂದಿನ 15 ದಿನ ತಮಿಳುನಾಡಿಗೆನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಆದೇಶಿಸಿದೆ. ಕಾವೇರಿ ನೀರು ನಿಯಂತ್ರಣ ಸಮಿತಿ ಮಾಡಿದ್ದ ಶಿಫಾರಸನ್ನು ಪ್ರಾಧಿಕಾರ ಎತ್ತಿಹಿಡಿದಿದ್ದು, ನವೆಂಬರ್ 7ರಿಂದ ಮುಂದಿನ 15 ದಿನಗಳವರೆಗೆ ನೀರು ಬಿಡುಗಡೆ ಮಾಡುವಂತೆ ಸೂಚಿಸಿದೆ.

ಇಂದು ನಡೆದ ಕಾವೇರಿ ನೀರು ನಿಯಂತ್ರಣ ಸಮಿತಿಯ ಸಭೆಯಲ್ಲಿ ಎರಡೂ ರಾಜ್ಯಗಳ ವಾದಗಳನ್ನು ಪರಿಗಣಿಸಿದ ಸಮಿತಿ, ಬಿಳಿಗುಂಡ್ಲು ಅಣೆಕಟ್ಟಿನಲ್ಲಿ ಪ್ರತಿದಿನ 3,000 ಕ್ಯೂಸೆಕ್ ನೀರಿನ ಹರಿವು ಖಚಿತಪಡಿಸುವಂತೆ ಕರ್ನಾಟಕಕ್ಕೆ ಸೂಚಿಸಿತ್ತು. ಮುಂದಿನ 15 ದಿನಗಳಲ್ಲಿ ಒಟ್ಟು 3.88 ಟಿಎಂಸಿ ನೀರು ಹರಿಯುವಂತೆ ನೋಡಿಕೊಳ್ಳಲು ಶಿಫಾರಸು ಮಾಡಿತ್ತು.

ಕರ್ನಾಟಕವು ರಾಜ್ಯದ ಜಲಾಶಯಗಳಿಗೆ ಹರಿದುಬರುತ್ತಿರುವ ಒಳಹರಿವಿನ ಪ್ರಮಾಣ ಕಡಿಮೆಯಾಗಿರುವುದು ಹಾಗೂ ಬರ ಪರಿಸ್ಥಿತಿಯನ್ನು ಪ್ರಮುಖವಾಗಿ ಪ್ರಸ್ತಾಪಿಸಿತ್ತು. ಕಾವೇರಿ ಜಲಾನಯನ ಪ್ರದೇಶದ 56 ತಾಲೂಕುಗಳ ಪೈಕಿ 55 ತಾಲೂಕುಗಳು ಬರಪೀಡಿತವಾಗಿವೆ. ರಾಜ್ಯದ ನಾಲ್ಕು ಪ್ರಮುಖ ಕಾವೇರಿ ಜಲಾಶಯಗಳಿಗೆ ಕಳೆದ 30 ವರ್ಷಗಳ ಸರಾಸರಿಗೆ ಹೋಲಿಸಿದರೆ ಶೇ.53.88ರಷ್ಟು ಒಳಹರಿವು ಕೊರತೆಯಾಗಿದೆ ಎಂದು ಸಭೆಗೆ ತಿಳಿಸಿತ್ತು.

ಜುಲೈ 29ರಿಂದ ನವೆಂಬರ್ 6ರವರೆಗೆ ಬಿಳಿಗುಂಡ್ಲುವಿನಲ್ಲಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ಸುಮಾರು 2.28 ಟಿಎಂಸಿ ನೀರು ಹರಿದಿದೆ ಎಂದು ಕರ್ನಾಟಕ ವಾದಿಸಿತ್ತು. ತಮಿಳುನಾಡಿನಲ್ಲಿ ಈಶಾನ್ಯ ಮುಂಗಾರು ಮಳೆಯ ಪ್ರಮಾಣ ಸಾಮಾನ್ಯಕ್ಕಿಂತ ಶೇ.23ರಷ್ಟು ಹೆಚ್ಚಿದ್ದು, ಮೆಟ್ಟೂರು, ಭವಾನಿ ಮತ್ತು ಅಮರಾವತಿ ಜಲಾಶಯಗಳಲ್ಲಿ ನವೆಂಬರ್ 5ರಂದು ಒಟ್ಟು 37.125 ಟಿಎಂಸಿ ನೀರಿನ ಸಂಗ್ರಹವಿತ್ತು. ಹೀಗಾಗಿ ತಮಿಳುನಾಡಿನ ಸಾಂಬಾ ಬೆಳೆಗಳಿಗೆ ಡಿಸೆಂಬರ್ 15ರವರೆಗೆ ನೀರಿನ ಅಗತ್ಯವನ್ನು ಪೂರೈಸಲು ಸಾಧ್ಯವಿದೆ ಎಂದು ಕರ್ನಾಟಕ ಪ್ರತಿಪಾದಿಸಿತ್ತು.

ಇನ್ನೊಂದೆಡೆ, ತಮಿಳುನಾಡು ತನ್ನ ಪಾಲಿನ ನೀರಿನಲ್ಲಿ ಕೊರತೆಯಾಗಿದೆ ಎಂದು ವಾದಿಸಿತ್ತು. ನವೆಂಬರ್ 4ರವರೆಗೆ 16.895 ಟಿಎಂಸಿ ನೀರಿನ ಬಾಕಿ ಇದೆ ಎಂದು ಹೇಳಿದ್ದಲ್ಲದೆ, ನವೆಂಬರ್ 5ರಿಂದ 21ರವರೆಗೆ ಬಿಳಿಗುಂಡ್ಲುವಿನಲ್ಲಿ 20.678 ಟಿಎಂಸಿ ನೀರು ಲಭ್ಯವಾಗುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕೆಂದು ಮನವಿ ಮಾಡಿತ್ತು. ಸಾಂಬಾ ಬೆಳೆಗಳಿಗೆ ತಕ್ಷಣ ನೀರಾವರಿ ಅಗತ್ಯವಿದೆ ಎಂದೂ ತಿಳಿಸಿತ್ತು.

ಸರ್ಕಾರಿ ಯೋಜನೆಗಳಿಗೆ ಆಧಾರ್ ಕಾರ್ಡ್ ಬದಲು ವೋಟರ್ ಐಡಿ: ರಾಹುಲ್ ಗಾಂಧಿ ಕಿಡಿ

ನವದೆಹಲಿ, ನ.6: ಸಾಮಾಜಿಕ ಕಲ್ಯಾಣ ಯೋಜನೆಗಳ ಫಲಾನುಭವಿಗಳನ್ನು ಗುರುತಿಸಲು ಆಧಾರ್ ಬದಲಿಗೆ ಮತದಾರರ ಗುರುತಿನ ಚೀಟಿಯನ್ನು ಬಳಸಲಾಗುವುದು ಎಂಬ ಕೇಂದ್ರ ಸಚಿವ ರಾಜೀವ್ ರಂಜನ್ ಸಿಂಗ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಇದು ಕೇವಲ ಮತ ಕಳ್ಳತನವಲ್ಲ, ಹಕ್ಕುಗಳ ಕಳ್ಳತನ. ಇದೊಂದು ಷಡ್ಯಂತ್ರ ಎಂದಿದ್ದಾರೆ.



ಈ ಷಡ್ಯಂತ್ರವನ್ನು ಇದನ್ನು ಅರ್ಥಮಾಡಿಕೊಳ್ಳಲು ಸಮಯ ತೆಗೆದುಕೊಳ್ಳಿ. ಎಸ್‌ಐಆರ್ ಹೆಸರಲ್ಲಿ ಲಕ್ಷಾಂತರ ಜನರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ. ಇದನ್ನು ತಡೆಯದಿದ್ದರೆ, ಇನ್ನೂ ಹೆಚ್ಚಿನ ಹೆಸರುಗಳನ್ನು ತೆಗೆದುಹಾಕಲಾಗುತ್ತದೆ. ಮುಖ್ಯವಾಗಿ ಬಿಜೆಪಿ ವಿರುದ್ಧ ಆಕ್ರೋಶ ಹೊಂದಿರುವವರ ಹೆಸರುಗಳನ್ನು ಗುರಿಯಾಗಿಸಲಾಗಿದೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮತದಾರರ ಪಟ್ಟಿಗಳು ನಿಷ್ಪಕ್ಷಪಾತವಾಗಿರುವ ಚುನಾವಣಾ ಆಯೋಗದ ಕೈಯಲ್ಲಿರಬೇಕು. ಆದರೆ ಈಗ ಅವು ಮೋದಿ ಸರ್ಕಾರದ ಉದ್ಯೋಗಿ ಜ್ಞಾನೇಶ್ ಕುಮಾರ್" ಅವರ ಕೈಯಲ್ಲಿವೆ. ಮತ ಕಳ್ಳತನದ ವಿಷಯದಲ್ಲಿ ಬಿಜೆಪಿ ಜೊತೆಗಿನ ಅವರ ಸಾಮೀಲಾತಿಯನ್ನು ನಾವು ಸಾಕ್ಷ್ಯಸಮೇತ ಕೈಗೆ ಸಿಕ್ಕಿಬೀಳುವಂತೆ ಹಿಡಿದಿದ್ದೇವೆ"ಎಂದು ಆರೋಪಿಸಿದ್ದಾರೆ.


ಬಿಜೆಪಿಗೆ ಬಹುಮತ ಸಿಗುವಂತೆಯೇ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಕೆಲಸ ನಡೆಯುತ್ತಿದೆ. ಈಗ ಇದೇ ಪಟ್ಟಿಯು ನಿಮಗೆ ಸರ್ಕಾರದ ಯೋಜನೆಗಳ ಲಾಭ ಸಿಗುತ್ತದೆಯೇ ಅಥವಾ ಇಲ್ಲವೇ ಎಂಬುದನ್ನು ನಿರ್ಧರಿಸುತ್ತದೆ ಎಂದು ಗಾಂಧಿ ದೂರಿದ್ದಾರೆ. "ಬಿಜೆಪಿಯನ್ನು ಅಧಿಕಾರದಿಂದ ಕೆಳಗಿಳಿಸಬೇಕು ಎಂದು ನಿರ್ಧರಿಸಿದವರ ಹೆಸರುಗಳನ್ನು ಆಯ್ದು, ಪಟ್ಟಿಯಿಂದ ತೆಗೆದುಹಾಕಲಾಗುತ್ತದೆ. ಹೆಸರು ತೆಗೆದುಹಾಕಿದರೆ, ಮತವು ಹೋಯಿತು, ಹಕ್ಕುಗಳೂ ಹೋದವು" ಎಂದು ಅವರು ಹೇಳಿದ್ದಾರೆ.

ಇಂದು ಪಂಚಾಯತ್ ರಾಜ್ ಯೋಜನೆಗಳು; ನಾಳೆ ಪಡಿತರ, ಪಿಂಚಣಿ, ಎಂ.ಜಿ.ಎನ್.ಆರ್.ಇ.ಜಿ.ಎ, ವಸತಿ, ವಿದ್ಯಾರ್ಥಿವೇತನಗಳು ಅಥವಾ ಮೀಸಲಾತಿಗಳ ಸರದಿ ಬರಬಹುದು ಎಂದು ಗಾಂಧಿ ಹೇಳಿದ್ದಾರೆ.

ಇದು ಚುನಾವಣೆಗಳನ್ನು ಗೆಲ್ಲುವ ರಾಜಕೀಯವಲ್ಲ, ಬದಲಾಗಿ ಚುನಾವಣೆಗಳನ್ನು ಕದಿಯುವ ವ್ಯವಸ್ಥೆ ಮತ್ತು ಅಧಿಕಾರದಲ್ಲಿ ಅಂಟಿಕೊಂಡಿರಲು ರೂಪಿಸಿದ ಶಾಶ್ವತ ಏರ್ಪಾಡು ಎಂದು ಆರೋಪಿಸಿದ್ದಾರೆ.

ಸಂವಿಧಾನ, ಪ್ರಜಾಪ್ರಭುತ್ವ-ಮತದಾನದ ಹಕ್ಕಿನ ರಕ್ಷಣೆಗೆ ರಾಹುಲ್ ಗಾಂಧಿ ಹೋರಾಟ

ನವದೆಹಲಿ, ನ.6: ರಾಹುಲ್ ಗಾಂಧಿ ಅವರ ಭೇಟಿ ಬಳಿಕ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಸ್‌ಐಆರ್ ವಿರುದ್ಧ ರಾಹುಲ್ ಗಾಂಧಿ ನಡೆಸುತ್ತಿರುವ ಅಭಿಯಾನ ವೈಯಕ್ತಿಕ ಹೋರಾಟವಲ್ಲ, ಅದು ದೇಶದ ಹೋರಾಟ ಹಾಗೂ ಜನರ ಧ್ವನಿ ಮತ್ತು ಮತದಾನದ ಹಕ್ಕಿನ ರಕ್ಷಣೆಯ ಹೋರಾಟ ಎಂದು ಹೇಳಿದರು.



ದೀಪಾವಳಿ ಅಂಗವಾಗಿ ಪಕ್ಷದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಕ್ಷಕ್ಕಾಗಿ ದುಡಿದ ಕಾರ್ಯಕರ್ತರು ಹಾಗೂ ಮುಖಂಡರಿಗೆ ಶುಭಾಶಯ ಕೋರಲಾಯಿತು. ಪಕ್ಷದ ಬೆಳವಣಿಗೆಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರ ನಡುವೆ ಪ್ರೀತಿ, ಒಗ್ಗಟ್ಟು ಹಾಗೂ ಶಾಂತಿ ಇರಬೇಕು ಎಂಬ ಸಂದೇಶವನ್ನು ನೀಡಲಾಗಿದೆ ಎಂದು ತಿಳಿಸಿದರು. ದೇಶದಲ್ಲಿ ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಸ್ಥಾಪಿಸುವಲ್ಲಿ ಕಾಂಗ್ರೆಸ್ ಮಹತ್ವದ ಪಾತ್ರ ವಹಿಸಿದೆ. ಇದೀಗ ರಾಹುಲ್ ಗಾಂಧಿ ಅವರು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗಾಗಿ ಹೋರಾಟ ನಡೆಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಶಕ್ತಿಯೇ ದೇಶದ ಶಕ್ತಿಯಾಗಿದೆ. ಕಾಂಗ್ರೆಸ್ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಸಮಾಜದ ಎಲ್ಲ ವರ್ಗಗಳಿಗೂ ಸಮಾನವಾಗಿ ಸೌಲಭ್ಯಗಳನ್ನು ಹಂಚಲಾಗಿದೆ. ಫಲಾನುಭವಿಗಳ ಯೋಜನೆಗಳಿಗೆ ಸಂಬಂಧಿಸಿದಂತೆ ಚರ್ಚಿಸಲು ಸಾಕಷ್ಟು ವಿಚಾರಗಳಿವೆ. ಆದರೆ ತಾವು ಸರ್ಕಾರದ ಭಾಗವಾಗಿರುವುದರಿಂದ ಈ ವಿಚಾರಗಳ ಬಗ್ಗೆ ಸೂಕ್ತ ಸಂದರ್ಭದಲ್ಲಿ ಚರ್ಚಿಸುವುದಾಗಿ ತಿಳಿಸಿದರು.


ನವದೆಹಲಿಯ ವಾಯುಮಾಲಿನ್ಯಕ್ಕೆ ಸುಪ್ರೀಂಕೋರ್ಟ್ ಕಳವಳ

ನವದೆಹಲಿ, ನ.6: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯುಮಾಲಿನ್ಯದ ಪ್ರಮಾಣ ತೀವ್ರ ಮಟ್ಟದತ್ತ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿದೆ. ದೆಹಲಿಯ ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) ಅಪಾಯಕಾರಿ ಮಟ್ಟದತ್ತ ಸಾಗುತ್ತಿರುವ ಸಂದರ್ಭದಲ್ಲಿ, ನ್ಯಾಯಾಲಯವು ದೆಹಲಿಯ ಹವಾಮಾನದ ಬಗ್ಗೆ ವ್ಯಂಗ್ಯಭರಿತವಾಗಿ ಪ್ರತಿಕ್ರಿಯಿಸಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ನ್ಯಾಯಮೂರ್ತಿಗಳಾದ ಜೋಯ್ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು ದೆಹಲಿ–ಎನ್‌ಸಿಆರ್ ವಾಯುಮಾಲಿನ್ಯಕ್ಕೆ ಸಂಬಂಧಿಸಿದ ಸ್ವಯಂಪ್ರೇರಿತ ಪ್ರಕರಣದ ವಿಚಾರಣೆ ನಡೆಸಿತು.

ವಿಚಾರಣೆ ಆರಂಭಿಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನೀವೆಲ್ಲರೂ ದೆಹಲಿಯ ಹವಾಮಾನವನ್ನು ಆನಂದಿಸುತ್ತಿದ್ದೀರಿ ಎಂದು ಭಾವಿಸುತ್ತೇನೆ ಎಂದು ವ್ಯಂಗ್ಯಭರಿತವಾಗಿ ಹೇಳಿದರು.

ಹವಾಮಾನವನ್ನು ಆನಂದಿಸುತ್ತಿದ್ದೀರಾ ಎಂದು ವ್ಯಂಗ್ಯ



ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಾಲಯದ ಸಹಾಯಕ ವಕೀಲೆ ಅಪರಾಜಿತಾ ಸಿಂಗ್, ದೆಹಲಿಯ ವಾಯುಮಾಲಿನ್ಯ ತೀವ್ರ ಹಂತದ ಸಮೀಪದಲ್ಲಿದೆ. ಮಾಲಿನ್ಯದಿಂದಾಗಿ ಮಾತನಾಡಲೂ ಕಷ್ಟವಾಗುತ್ತಿದೆ. ದಿನಕ್ಕೆ 30 ಸಿಗರೇಟ್ ಸೇದಿದಷ್ಟೇ ಮಾಲಿನ್ಯದ ಪರಿಣಾಮ ಉಂಟಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ನ.5ರಂದು ದೆಹಲಿಯ ವಾಯುಮಾಲಿನ್ಯದಲ್ಲಿ ಶೇ.14ರಷ್ಟು ಕೊಡುಗೆ ಬೆಳೆ ತ್ಯಾಜ್ಯ ಸುಡುವಿಕೆಯಿಂದ ಬಂದಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು.

ಈ ವೇಳೆ ವಾಹನಗಳ ಹೊಗೆ ಮತ್ತು ಸಂಚಾರ ದಟ್ಟಣೆಯೇ ದೆಹಲಿ–ಎನ್‌ಸಿಆರ್ ವಾಯುಮಾಲಿನ್ಯದ ಪ್ರಮುಖ ಸಮಸ್ಯೆಗಳಲ್ಲಿ ಒಂದಾಗಿದೆ ಎಂದು ನ್ಯಾಯಪೀಠ ಗಮನ ಸೆಳೆಯಿತು. ದೆಹಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಹನಗಳ ಸಂಖ್ಯೆ ಮತ್ತು ಸಂಚಾರ ದಟ್ಟಣೆಯನ್ನು ನಿಯಂತ್ರಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿತು. ಬೆಳೆ ತ್ಯಾಜ್ಯ ಸುಡುವುದನ್ನು ತಡೆಯಲು ರೈತರಿಗೆ ಮುಂಚಿತವಾಗಿಯೇ ಸೂಕ್ತ ಆರ್ಥಿಕ ಪ್ರೋತ್ಸಾಹ ನೀಡಬೇಕು. ಬೆಳೆತ್ಯಾಜ್ಯ ಖರೀದಿ ದರವನ್ನು ಮುಂಚಿತವಾಗಿ ಪ್ರಕಟಿಸುವ ಮೂಲಕ ರೈತರು ಅದನ್ನು ಸುಡುವ ಬದಲು ಮಾರಾಟ ಮಾಡಲು ಉತ್ತೇಜಿಸಬಹುದು ಎಂದು ನ್ಯಾಯಾಲಯ ಸಲಹೆ ನೀಡಿತು. ಗ್ರಾಪಂಗಳಲ್ಲಿಯೂ ಬೆಳೆತ್ಯಾಜ್ಯ ಸಂಗ್ರಹಣೆ ಮತ್ತು ನಿರ್ವಹಣೆಗೆ ಅಗತ್ಯ ಯಂತ್ರೋಪಕರಣ ಹಾಗೂ ವ್ಯವಸ್ಥೆ ಕಲ್ಪಿಸಬೇಕೆಂದು ಸೂಚಿಸಿತು.

ಇನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಂಕಿ–ಅಂಶಗಳ ಪ್ರಕಾರ, ನವೆಂಬರ್ 6ರ ಬೆಳಿಗ್ಗೆ 8 ಗಂಟೆಗೆ ದೆಹಲಿಯ ಒಟ್ಟಾರೆ ಎಕ್ಯೂಐ 389 ದಾಖಲಾಗಿತ್ತು. ಬೆಳಿಗ್ಗೆ 9 ಗಂಟೆಗೆ ಅದು 391ಕ್ಕೆ ಏರಿಕೆಯಾಗಿತ್ತು. ನಗರದ 59 ವಾಯು ಗುಣಮಟ್ಟ ಮಾಪನ ಕೇಂದ್ರಗಳ ಪೈಕಿ 30 ಕೇಂದ್ರಗಳಲ್ಲಿ ಗಾಳಿಯ ಗುಣಮಟ್ಟ ತೀವ್ರ ಹಂತಕ್ಕೆ ತಲುಪಿತ್ತು. ರೋಹಿಣಿಯಲ್ಲಿ 475 ಮತ್ತು ಐಟಿಒ ದೆಹಲಿ ಪ್ರದೇಶದಲ್ಲಿ 472 ಎಕ್ಯೂಐ ದಾಖಲಾಗಿತ್ತು.

ದೀಪಾವಳಿ ಹಬ್ಬ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ವಾಯುಮಾಲಿನ್ಯ ಮತ್ತಷ್ಟು ಹೆಚ್ಚಾಗುವ ಆತಂಕವೂ ಎದುರಾಗಿದೆ.

ನಿತ್ಯ ಪಂಚಾಂಗ 7.11.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ–ಆಶ್ವಯುಜ ಮಾಸ

ಆಶ್ವಯುಜ ಬಹುಳ, ತ್ರಯೋದಶಿ, ಚಿತ್ತ ನಕ್ಷತ್ರ, ಮಾಸ ಶಿವರಾತ್ರಿ, ಧನ ತ್ರಯೋದಶಿ, ಶಿಶು ಸಂರಕ್ಷಣಾ ದಿನ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಮೆಟ್ರೋ ಉದ್ಘಾಟನೆಗೂ ಬಿಜೆಪಿಗೂ ಏನು ಸಂಬಂಧ: ಸಿಎಂ ಡಿ.ಕೆ. ಶಿವಕುಮಾರ್

ಮೆಟ್ರೋ ಉದ್ಘಾಟಿಸಲು ಪ್ರಧಾನಿ ಆಹ್ವಾನಿಸಿದ್ದು ನಾವು, ಕೆಲವರು ನಾವು ಎಂದು ಪ್ರಚಾರ ಗಿಟ್ಟಿಸುತ್ತಿದ್ದಾರೆ

ಕನಕಪುರ, ನ.6: ನಮ್ಮ ಆಹ್ವಾನದ ಮೇರೆಗೆ ಪ್ರಧಾನಮಂತ್ರಿಯವರು ಮೆಟ್ರೋ ಗುಲಾಬಿ ಮಾರ್ಗವನ್ನು ಉದ್ಘಾಟಿಸಲು ನವೆಂಬರ್ 13ರಂದು ಬೆಂಗಳೂರಿಗೆ ಆಗಮಿಸುತ್ತಿದ್ದಾರೆ. ಆದರೆ, ಕೆಲವರು ಪ್ರಧಾನಿಯನ್ನು ಆಹ್ವಾನಿಸಿದ್ದು ನಾವು ಎಂದು ಪ್ರಚಾರ ಗಿಟ್ಟಿಸುತ್ತಿದ್ದಾರೆ. ಬಿಜೆಪಿಯವರಿಗೂ ಇದಕ್ಕೂ ಏನು ಸಂಬಂಧ ಎಂದು ಸಿಎಂ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದರು.

ಕನಕಪುರದಲ್ಲಿ ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿ, ಇದು ಜನರ ದುಡ್ಡು. ಸರ್ಕಾರ ಸಾಲ ಪಡೆದು ಮೆಟ್ರೋ ಅಭಿವೃದ್ಧಿ ಮಾಡುತ್ತಿದ್ದೇವೆ. ಕೆಲವು ವಿಚಾರಗಳನ್ನು 13ರಂದು ಪ್ರಧಾನಿಗಳ ಮುಂದೆ ಮಂಡಿಸಲಿದ್ದೇನೆ ಎಂದರು.

ಪ್ರಧಾನಿ ಬಳಿ ಸಕ್ಕರೆ ಬೆಲೆ ನಿಗದಿ ಮಾಡುವ ಬಗ್ಗೆ ಪ್ರಸ್ತಾಪ

ಕಬ್ಬು ಬೆಳೆಗಾರರು ಹೋರಾಟ ಕೈಬಿಟ್ಟಿರುವ ಬಗ್ಗೆ ಪ್ರತಿಕ್ರಿಯಿಸಿದ ಡಿ.ಕೆ. ಶಿವಕುಮಾರ್, ರೈತರಿಗೆ ಮನವಿ ಮಾಡಿದ್ದೆವು, ಇದರಲ್ಲಿ ಪ್ರತಿಷ್ಠೆ ಬೇಡ.



ಇಂದು ಸಕ್ಕರೆ ಕಾರ್ಖಾನೆಗಳು ಹಾಗೂ ನಮ್ಮ ಸಚಿವರು ಕುಳಿತು ಚರ್ಚಿಸಿದ್ದಾರೆ. ಕೆಲವರು ಕಬ್ಬು ಅರೆಯಲು ಅನುಮತಿ ನೀಡಿ ರಕ್ಷಣೆ ಕೊಡಿ ಎಂದು ನ್ಯಾಯಾಲಯದ ಮೊರೆಯನ್ನು ಹೋಗಿದ್ದಾರೆ. ಅದಕ್ಕೂ ಇಂದು ಅಫಿಡವಿಟ್ ಹಾಕಲಾಗುತ್ತಿದೆ. ಕೇಂದ್ರ ಸರ್ಕಾರದವರು ಸಕ್ಕರೆ ಬೆಲೆಯನ್ನು ನಿಗದಿ ಮಾಡಬೇಕು. ಈ ಬಗ್ಗೆಯೂ ಪ್ರಧಾನಿಗಳ ಬಳಿ ಪ್ರಸ್ತಾಪಿಸಿ ಪತ್ರವನ್ನು ಬರೆಯಲಾಗಿದೆ. ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕೂಡ ಈ ಬಗ್ಗೆ ಪ್ರಯತ್ನ ಮಾಡುತ್ತಿರುವುದಾಗಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ರೈತರಿಗೆ ಅಗೌರವ ತೋರಿಸಬಾರದು

ಸಮಸ್ಯೆ ಇತ್ಯರ್ಥವಾಗದಿದ್ದರೆ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆಸಲು ಬಿಡುವುದಿಲ್ಲ ಎಂದು ಸರ್ಕಾರವನ್ನು ಹೆದರಿಸುವುದು ಸರಿಯಲ್ಲ. ಸ್ವಲ್ಪ ಸೌಜನ್ಯ ಇರಬೇಕು. ಏ ಬಾರೋ ಇಲ್ಲಿ ಎಂದು ಕರೆಯುವುದು ರೈತರಿಗೆ ಅಗೌರವವಾದಂತೆ. ಇಂಥದ್ದು ಆಗಬಾರದು ಡಿ.ಕೆ. ಶಿವಕುಮಾರ್ ಹೇಳಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರನ್ನು ಸೌಹಾರ್ದಯುತವಾಗಿ ಭೇಟಿ ಮಾಡಿದ ರಾಜ್ಯಪಾಲರು



ಬೆಂಗಳೂರು, ನ,6: ರಾಜ್ಯಪಾಲೆ ಡಾ. ಸುಧಾ ಯಾದವ್ ಅವರು ಶುಕ್ರವಾರ ಬೆಂಗಳೂರಿನ ಪದ್ಮನಾಭ ನಗರದ ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಅವರ ನಿವಾಸಕ್ಕೆ ಸೌಜನ್ಯಯುತ ಭೇಟಿ ನೀಡಿ, ಅವರೊಂದಿಗೆ ಆತ್ಮೀಯವಾಗಿ ಮಾತುಕತೆ ನಡೆಸಿದರು.

ರಾಜ್ಯಪಾಲರನ್ನು ದೇವೇಗೌಡರ ಪುತ್ರಿ ಶೈಲಜಾ ಅವರು ಆತ್ಮೀಯವಾಗಿ ಬರಮಾಡಿಕೊಂಡರು. ಕರ್ನಾಟಕದ ರಾಜ್ಯಪಾಲರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಇದೇ ಮೊದಲ ಬಾರಿಗೆ ಮಾಜಿ ಪ್ರಧಾನಿಗಳ ನಿವಾಸಕ್ಕೆ ಭೇಟಿ ನೀಡಿ, ಅವರ ಆಶೀರ್ವಾದ ಪಡೆದುಕೊಂಡರು.

ಎಚ್.ಡಿ.ದೇವೇಗೌಡ ಅವರು ರಾಜ್ಯಪಾಲರನ್ನು ಆತ್ಮೀಯವಾಗಿ ಸ್ವಾಗತಿಸಿ, ಸನ್ಮಾನಿಸಿ, ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಪುತ್ರಿ ಶೈಲಜಾ ಸೇರಿದಂತೆ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ಸಿದ್ದರಾಮಯ್ಯರೊಂದಿಗೆ ಎಲ್ಲವೂ ಸರಿಹೋಗಲಿದೆ, ಒಂದಾಗುವ ಕಾಲ ಬರುತ್ತದೆ: ಸಚಿವ ಜಾರಕಿಹೊಳಿ ಕುತೂಹಲದ ಹೇಳಿಕೆ



ಬೆಂಗಳೂರು, ನ.6: ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಸತೀಶ್ ಜಾರಕಿಹೊಳಿ ನಡುವೆ ಭಿನ್ನಾಭಿಪ್ರಾಯ ಇದೆ ಎಂಬ ಚರ್ಚೆ ಕಾಂಗ್ರೆಸ್ ವಲಯದಲ್ಲಿ ದೊಡ್ಡ ಮಟ್ಟದಲ್ಲಿ ನಡೆಯುತ್ತಿದೆ. ಈ ನಡುವೆ ಕಾಲ ಕೂಡಿ ಬರುತ್ತದೆ, ಎಲ್ಲವೂ ಸರಿಹೋಗಲಿದೆ ಎನ್ನುವ ಮೂಲಕ ಸತೀಶ್ ಜಾರಕಿಹೊಳಿ ಕುತೂಹಲದ ಮಾತನ್ನು ಆಡಿದ್ದಾರೆ.

ನನ್ನ ವಿರುದ್ಧ ಇ.ಡಿ. ದಾಳಿಯಾದಾಗ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ಮನೆಗೆ ಬಂದಿದ್ದರು. ನನ್ನನ್ನು ಎರಡು ಬಾರಿ ಭೇಟಿ ಮಾಡಿ ಮಾತುಕತೆ ನಡೆಸಿದ್ದರು. ಅಹಿಂದ ಪರಿಕಲ್ಪನೆ ಒಂದೇ ಇದೆ. ಇಬ್ಬರು ಸೇರುವ ಸಮಯ ಬರುತ್ತದೆ ಎಂದು ಸಚಿವ ಸತೀಶ್ ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಡಿಕೆಶಿ ಕೆಳಗಿಳಿಸುವ ಪ್ರಶ್ನೆಯೇ ಉದ್ಭವಿಸಲ್ಲ

ಕಾಂಗ್ರೆಸ್‌ನಲ್ಲಿ 3ನೇ ಸಿಎಂ ಆಗಲಿದ್ದಾರೆ ಎಂಬ ಚರ್ಚೆಗೆ ಪ್ರತಿಕ್ರಿಯೆ ನೀಡಿದ ಅವರು, ಡಿಕೆ ಶಿವಕುಮಾರ್ ಅವರು ಸಿಎಂ ಆಗಿ ಆರು ತಿಂಗಳು ಆಯ್ತು. ಸರ್ಕಾರ ನಡೆಸೋಕೆ ಸ್ವಲ್ಪ ಸಮಯಾವಕಾಶ ಬೇಕಾಗುತ್ತದೆ. ಡಿಕೆಶಿ ಅವರೇ ಸಿಎಂ ಆಗಿ ಇರುತ್ತಾರೆ. ಅವರನ್ನು ಕೆಳಗಿಳಿಸುವ ಸನ್ನಿವೇಶ ಬರುವುದಿಲ್ಲ ಎಂದು ಸತೀಶ್ ಜಾರಕಿಹೊಳಿ ಹೇಳಿದರು.

ಪಕ್ಷದ ಸೋಲಿಗೆ ಪಕ್ಷ ಬಿಟ್ಟು ಹೋಗಲಿ ಎನ್ನಲಾಗಲ್ಲ

ಸಿದ್ದರಾಮಯ್ಯ ಅವರು ಕಾಂಗ್ರೆಸ್‌ಗೆ ಅನಿವಾರ್ಯ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಜಾರಕಿಹೊಳಿ, ಅವರು ಪಕ್ಷದ ಪರವಾಗಿ ಕೆಲಸ ಮಾಡುತ್ತೇನೆ ಎಂದಿದ್ದಾರೆ. ಅವರ ಮೇಲೆ ಜವಾಬ್ದಾರಿ ಇದೆ. ಕೆಲವೊಂದು ಗೊಂದಲ ಆಗಿರಬಹುದು. ಅದನ್ನು ಸರಿಮಾಡಬೇಕು ಎಂದು ಮಾರ್ಮಿಕವಾಗಿ ಉತ್ತರಿಸಿದರು. ಕೆ.ಎನ್. ರಾಜಣ್ಣ ಭಿನ್ನಾಭಿಪ್ರಾಯದ ಕುರಿತಾಗಿ ಪ್ರತಿಕ್ರಿಯಿಸಿ, ಅವರು ಹೇಳುವುದಕ್ಕೂ ವಾಸ್ತವಕ್ಕೂ ವ್ಯತ್ಯಾಸ ಇರುತ್ತದೆ. ಅವರು ಕಾಂಗ್ರೆಸ್ ಪಕ್ಷದಲ್ಲೇ ಇರುತ್ತಾರೆ. ರಾಜಣ್ಣ ಪಕ್ಷ ಬಿಟ್ಟು ಹೋಗಲಿ ಎಂಬ ಸಚಿವ ಬಾಲಕೃಷ್ಣ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ಮಾತನಾಡಲು ಕೆಪಿಸಿಸಿ ಅಧ್ಯಕ್ಷರು ಹಾಗೂ ಸಿಎಂ ಇದ್ದಾರೆ ಎಂದರು. ಪರಿಷತ್ ಸೋಲಿನ ಬಗ್ಗೆ ಯಾರು ಕಾರಣ ಗೊತ್ತಿಲ್ಲ. ಹಾಗಂತ ಸೋಲಿಗೆ ಕಾರಣವಾದವರು ಪಕ್ಷ ಬಿಟ್ಟು ಹೋಗಲಿ ಅನ್ನೋದಕ್ಕೆ ಆಗಲ್ಲ. ಮೇಲೆ ವರಿಷ್ಠರಿದ್ದಾರೆ, ಅವರು ತೀರ್ಮಾನ ಮಾಡುತ್ತಾರೆ ಎಂದು ಉತ್ತರಿಸಿದರು.

ಧರ್ಮಪುರ ಭಾಗದ 14 ಕೆರೆಗಳನ್ನು ತುಂಬಿಸುವ ಯೋಜನೆಗೆ ಅನುಮೋದನೆ: ಸಚಿವ ಅಜಯ್ ಸಿಂಗ್

- ವೇದಾವತಿ ನದಿಯಿಂದ 66.19 ಎಂ.ಸಿ.ಎಫ್.ಟಿ ನೀರು ತುಂಬಿಸುವ ಏತ ನೀರಾವರಿ ಯೋಜನೆ

- ಕುಡಿಯುವ ನೀರು, ಅಂತರ್ಜಲ ಮರು ಪೂರಣಗೊಳಿಸುವ ಹಾಗೂ ಕೃಷಿಗೆ ಮಹತ್ವದ ನೆರವು



ಬೆಂಗಳೂರು, ನ.6: ಚಿತ್ರದುರ್ಗ ಜಿಲ್ಲೆಯ ಅತಿ ಹಿಂದುಳಿದ ಹಿರಿಯೂರು ತಾಲೂಕಿನ ಧರ್ಮಪುರ ಹೋಬಳಿಯ 14 ಕೆರೆಗಳನ್ನು ತುಂಬಿಸುವ 35 ಕೋಟಿ ಅಂದಾಜು ಮೊತ್ತದ ಏತ ನೀರಾವರಿ ಯೋಜನೆಗೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ.

ಅತಿ ಹಿಂದುಳಿದ ಹಿರಿಯೂರು ತಾಲೂಕು ಮಳೆಯ ಕೊರತೆ ಮತ್ತು ನಿರಂತರ ಅಂತರ್ಜಲ ಕುಸಿತವನ್ನು ಎದುರಿಸುತ್ತಿರುವ ಪ್ರದೇಶವಾಗಿದ್ದು, ಧರ್ಮಪುರ ಹೋಬಳಿಯ ಹಲವಾರು ಕೆರೆಗಳು ಹಲವು ವರ್ಷಗಳಿಂದ ಸಮರ್ಪಕವಾಗಿ ತುಂಬಿಲ್ಲ. ಈ ಭಾಗದಲ್ಲಿ ಕೆರೆ–ಕಟ್ಟೆಗಳು ಜನರು ಹಾಗೂ ರೈತರ ಜೀವನಾಡಿಯಾಗಿರುವ ಹಿನ್ನೆಲೆಯಲ್ಲಿ, ಅವುಗಳನ್ನು ಮರುಪೂರಣ ಗೊಳಿಸುವ ಮಾಡುವ ಉದ್ದೇಶದಿಂದ ಈ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.


ಯೋಜನೆಯಡಿ ಧರ್ಮಪುರ ಕೆರೆಯಿಂದ ಏತ ನೀರಾವರಿ ಮೂಲಕ ಹಲಗಲದ್ದಿ, ಮುದ್ದಿಹಳ್ಳಿ, ಖಂಡೇನಹಳ್ಳಿ, ಬೇತೂರು ಸೇರಿದಂತೆ ಒಟ್ಟು 14 ಕೆರೆಗಳಿಗೆ ನೀರು ತುಂಬಿಸಲಾಗುತ್ತದೆ. ಮಾರ್ಗಮಧ್ಯೆ ಬರುವ ಗೋಕಟ್ಟೆಗಳಿಗೂ ನೀರು ತಲುಪಿಸುವ ಉದ್ದೇಶ ಹೊಂದಲಾಗಿದೆ.

ಈ ಭಾಗದಲ್ಲಿ ಕುಡಿಯುವ ನೀರಿನ ಭದ್ರತೆ, ಅಂತರ್ಜಲ ಮರುಪೂರಣಗೊಳಿಸುವ ಹಾಗೂ ಕೃಷಿ ಚಟುವಟಿಕೆಗಳಿಗೆ ದೀರ್ಘಕಾಲಿಕ ನೆರವು ಒದಗಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಕೆರೆಗಳನ್ನು ತುಂಬಿಸುವುದರಿಂದ ಕೇವಲ ಮೇಲ್ಮೈ ನೀರಿನ ಲಭ್ಯತೆ ಮಾತ್ರವಲ್ಲ, ಸುತ್ತಮುತ್ತಲಿನ ಬೋರ್‌ವೆಲ್‌ಗಳು ಹಾಗೂ ಕೃಷಿಭೂಮಿಗಳಿಗೂ ನೇರ ಪ್ರಯೋಜನವಾಗಲಿದೆ ಎಂದು ಡಾ. ಅಜಯ್ ಧರ್ಮಸಿಂಗ್ ಹೇಳಿದ್ದಾರೆ.

2025–26ನೇ ಸಾಲಿನ ಅಂತರ್ಜಲ ಮೌಲ್ಯಮಾಪನ ವರದಿಯ ಪ್ರಕಾರ ಹಿರಿಯೂರು ತಾಲೂಕು ಅತಿ ಬಳಕೆ ಪ್ರದೇಶವಾಗಿ ಗುರುತಿಸಲ್ಪಟ್ಟಿರುವುದರಿಂದ, ಅಂತರ್ಜಲ ಮರುಪೂರಣಗೊಳಿಸುವ ಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದು ಸಚಿವರು ತಿಳಿಸಿದ್ದಾರೆ. ಈ ಯೋಜನೆಯ ಮೂಲಕ ವೇದಾವತಿ ನದಿಯಿಂದ 66.19 ಎಂ.ಸಿ.ಎಫ್.ಟಿ ನೀರನ್ನು ಕೆರೆಗಳಿಗೆ ತುಂಬಿಸಲು ಉದ್ದೇಶಿಸಲಾಗಿದೆ. ಯೋಜನೆಯ ವ್ಯಾಪ್ತಿಯಲ್ಲಿ ಹಲಗಲದ್ದಿ ಕೆರೆ, ಮುದ್ದಿಹಳ್ಳಿ ಕೆರೆ, ಮುದ್ದಿಹಳ್ಳಿ ಕಿವುಡನಕಟ್ಟೆ ಕೆರೆ, ಖಂಡೇನಹಳ್ಳಿ ಕೆರೆ, ಹರಳೀಕೆರೆ–1, ಹರಳೀಕೆರೆ–2, ಹರಳೀಕೆರೆ–3, ಹರಳೀಕೆರೆ–4, ಹೊಸಕೆರೆ, ಬೇತೂರು, ಬೆನಕನಹಳ್ಳಿ ಕೆರೆ, ಸಕ್ಕರೆ ಕೆರೆ–1 ಮತ್ತು ಸಕ್ಕರೆ ಕೆರೆ–2 ಸೇರಿದಂತೆ ಕೆರೆಗಳನ್ನು ಒಳಗೊಂಡಿದೆ.

ಬರಪೀಡಿತ ಪ್ರದೇಶಗಳಲ್ಲಿ ಕೆರೆಗಳನ್ನು ತುಂಬಿಸಿ ಅಂತರ್ಜಲವನ್ನು ಮರುಪೂರಣಗೊಳಿಸುವುದು ನಮ್ಮ ಇಲಾಖೆಯ ಪ್ರಮುಖ ಆದ್ಯತೆಯಾಗಿದೆ. ಈ 35 ಕೋಟಿ ಯೋಜನೆ ಧರ್ಮಪುರ ಭಾಗದ ಜಲಭದ್ರತೆಯನ್ನು ಬಲಪಡಿಸುವ ಮಹತ್ವದ ಹೆಜ್ಜೆಯಾಗಲಿದೆ ಎಂದು ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ.

ಸಾಹಿತಿ, ಭಾಷಾಶಾಸ್ತ್ರಜ್ಞ ಕೆ.ವಿ.ನಾರಾಯಣ ನಿಧನ



ಬೆಂಗಳೂರು, ನ.6: ಕನ್ನಡದ ಹಿರಿಯ ಸಾಹಿತಿ, ಖ್ಯಾತ ಭಾಷಾಶಾಸ್ತ್ರಜ್ಞ, ವಿಮರ್ಶಕ ಹಾಗೂ ಸಂಸ್ಕೃತಿ ಚಿಂತಕ ಡಾ.ಕೆ.ವಿ. ನಾರಾಯಣ (ಕೆವಿಎನ್) ಅವರು ಶುಕ್ರವಾರ ನಿಧನರಾಗಿದ್ದಾರೆ. ಅವರಿಗೆ 78 ವರ್ಷಗಳಾಗಿದ್ದವು. ಡಾ.ಕೆವಿಎನ್ ಅಗಲಿಕೆ ಯಿಂದ ಕನ್ನಡ ಸಾಹಿತ್ಯ ಮತ್ತು ಭಾಷಾ ಅಧ್ಯಯನ ಕ್ಷೇತ್ರದ ಹಿರಿಯ ವಿದ್ವಾಂಸರೊಬ್ಬರನ್ನು ನಾಡು ಕಳೆದುಕೊಂಡಂತಾಗಿದೆ. ಕಂಪಲಾಪುರ ವೀರಣ್ಣ ನಾರಾಯಣ ಎಂಬ ಪೂರ್ಣ ಹೆಸರಿನ ಕೆ.ವಿ. ನಾರಾಯಣ್ ಅವರು 1948ರ ಅಕ್ಟೋಬರ್ 20ರಂದು ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಕಂಪಲಾಪುರದಲ್ಲಿ ಜನಿಸಿದ್ದರು. ಕನ್ನಡ ಭಾಷೆ, ಸಾಹಿತ್ಯ, ಭಾಷಾವಿಜ್ಞಾನ ಮತ್ತು ಸಾಹಿತ್ಯ ಮೀಮಾಂಸೆ ಕ್ಷೇತ್ರಗಳಲ್ಲಿ ಆಳವಾದ ಅಧ್ಯಯನ ನಡೆಸಿದ್ದ ಅವರು, ತಮ್ಮ ವೈಚಾರಿಕ ಬರಹಗಳು ಹಾಗೂ ವಿಮರ್ಶೆಗಳ ಮೂಲಕ ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದರು. 1993ರಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯಕ್ಕೆ ಕನ್ನಡ ಪ್ರಾಧ್ಯಾಪಕರಾಗಿ ಸೇರ್ಪಡೆಯಾದ ಅವರು, ಬಳಿಕ ವಿಶ್ವವಿದ್ಯಾಲಯದ ಕುಲಸಚಿವರಾಗಿ, ಡೀನ್ ಆಗಿ ಹಾಗೂ ಪ್ರಭಾರ ಕುಲಪತಿಯಾಗಿಯೂ ಸೇವೆ ಸಲ್ಲಿಸಿದ್ದರು. ಕನ್ನಡ ವಿಶ್ವವಿದ್ಯಾಲಯದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷ ರಾಗಿಯೂ ಡಾ.ಕೆವಿಎನ್ ಕಾರ್ಯನಿರ್ವಹಿಸಿದ್ದರು.

ಹಲವಾರು ಕೃತಿಗಳನ್ನು ರಚಿಸಿರುವ ಕೆವಿಎನ್ ಅವರ ಭಾಷೆಗಳ ಅಳಿವು, ಭಾಷಾ ವೈವಿಧ್ಯತೆ ಹಾಗೂ ಕನ್ನಡದ ಬೆಳವಣಿಗೆಯ ಕುರಿತು ಅವರು ನಡೆಸಿದ ಅಧ್ಯಯನಗಳು ಗಮನ ಸೆಳೆದಿದ್ದವು. 2007ರಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿ ಹಾಗೂ ಜಿ.ಎಸ್. ಶಿವರುದ್ರಪ್ಪ ಸಾಹಿತ್ಯ ವಿಮರ್ಶಾ ಪ್ರಶಸ್ತಿ, 2010ರಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವು ಪ್ರಶಸ್ತಿ, ಪುರಸ್ಕಾರಗಳ ಗೌರವಗಳಿಗೆ ಅವರು ಭಾಜನರಾಗಿದ್ದರು.

ನುಡಿಗಳ ಅಳಿವು' ಕೃತಿಗೆ 2024ನೇ ಸಾಲಿನ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯೂ ಲಭಿಸಿತ್ತು.

ಶಿವರಾಜ್ ತಂಗಡಗಿ ಸಂತಾಪ

ಕನ್ನಡ ಭಾಷೆಯ ಅಧ್ಯಯನ, ಸಾಹಿತ್ಯ ವಿಮರ್ಶೆ ಮತ್ತು ಸಾಂಸ್ಕೃತಿಕ ಚಿಂತನೆಗೆ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡಿದ್ದ ಕೆ.ವಿ. ನಾರಾಯಣ್ ಅವರ ನಿಧನ ಕನ್ನಡ ಸಾರಸ್ವತ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ. ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಖ್ಯಾತ ವಿಮರ್ಶಕ, ಭಾಷಾತಜ್ಞ ಹಾಗೂ ಹಿರಿಯ ಸಾಹಿತಿ ಕೆ.ವಿ. ನಾರಾಯಣ ಅವರ ನಿಧನದ ಸುದ್ದಿ ತಿಳಿದು ತೀವ್ರ ದುಃಖವಾಗಿದೆ. ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಕೆ.ವಿ. ನಾರಾಯಣ ಅವರು ಅಮೂಲ್ಯ ಕೊಡುಗೆಗಳನ್ನು ನೀಡಿದ್ದರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾಗಿ, ಕುವೆಂಪು ಭಾಷಾ ಭಾರತಿ ಅಧ್ಯಕ್ಷರಾಗಿ ಸಲ್ಲಿಸಿದ ಅವರ ಸೇವೆ ಸದಾ ಸ್ಮರಣೀಯ. ಅವರ ಅಗಲಿಕೆಯಿಂದ ಕನ್ನಡ ಸಾಹಿತ್ಯ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ. ಮೃತರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಕುಟುಂಬ ವರ್ಗ ಮತ್ತು ಅಭಿಮಾನಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಓಂ ಶಾಂತಿ.

– ಡಿ.ಕೆ.ಶಿವಕುಮಾರ್
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಬರ ನಿರ್ವಹಣೆ: ಕೇಂದ್ರದ ಜತೆ ಕಾಟಾಚಾರಕ್ಕೆನ್ನುವಂತೆ ವ್ಯವಹಾರ

ಪತ್ರ ಬರೆಯುವುದರಲ್ಲೇ ಕಾಲಹರಣ: ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತರಾಟೆ



ಬೆಂಗಳೂರು, ನ.6: ರಾಜ್ಯದಲ್ಲಿ ಉಂಟಾಗಿರುವ ಬರ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಇದುವರೆಗೂ ಪ್ರಧಾನಿ ಯನ್ನಾಗಲಿ, ಗೃಹ ಸಚಿವರನ್ನಾಗಲಿ ಅಥವಾ ಸಂಬಂಧಿತ ಸಚಿವರನ್ನು ಭೇಟಿಯಾಗದೆ ಕೇಂದ್ರ ಸರಕಾರ ನೆರವು ನೀಡಬೇಕು ಎಂದು ಕಾಟಾಚಾರಕ್ಕೆ ಹೇಳುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ತರಾಟೆಗೆ ತೆಗೆದುಕೊಂಡರು.

ಬೆಂಗಳೂರಿನ ವಿಜಯನಗರದಲ್ಲಿರುವ ಭಾರತ್ ಹೆವಿ ಎಲೆಕ್ಟ್ರಿಕಲ್ ಕಾರ್ಖಾನೆಯ ಆವರಣದಲ್ಲಿ 71ನೆ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಸಂದರ್ಭದಲ್ಲಿ ಮಾಧ್ಯಮಗಳ ಜತೆ ಮಾತನಾಡಿದರು.

ಕೇಂದ್ರದ ಬಳಿಗೆ ಸರ್ವಪಕ್ಷ ನಿಯೋಗ ಕೊಂಡೊಯ್ಯುವ ರಾಜ್ಯ ಸರ್ಕಾರದ ಆಲೋಚನೆಯನ್ನು ಕಟುವಾಗಿ ಟೀಕಿಸಿದ ಅವರು; ಸರ್ಕಾರವು ಕಳೆದ ಎರಡು ತಿಂಗಳಿಂದ ಪರಿಹಾರಕ್ಕಾಗಿ ಕೇಂದ್ರ ಸರ್ಕಾರಕ್ಕೆ ಕೇವಲ ಪತ್ರಗಳನ್ನು ಬರೆಯುವುದರಲ್ಲಿಯೇ ಕಾಲಹರಣ ಮಾಡುತ್ತಿದೆ. 3,000 ಕೋಟಿಯಿಂದ ಆರಂಭಿಸಿ ಈಗ 26,000 ಕೋಟಿ ಪರಿಹಾರ ಕೇಳುತ್ತಿದ್ದಾರೆ, ಆದರೆ, ಕನಿಷ್ಠ ಸೌಜನ್ಯಕ್ಕಾದರೂ ಮುಖ್ಯಮಂತ್ರಿಗಳಾಗಲಿ, ಕಂದಾಯ ಅಥವಾ ಕೃಷಿ ಸಚಿವರಾಗಲಿ ಒಮ್ಮೆಯಾದರೂ ನವದೆಹಲಿಗೆ ತೆರಳಿ ಪ್ರಧಾನಿ ಅಥವಾ ಗೃಹ ಸಚಿವರನ್ನು ಖುದ್ದಾಗಿ ಭೇಟಿ ಮಾಡಿಲ್ಲ. ಕೇಂದ್ರದ ಮನವೊಲಿಸುವ ಯಾವುದೇ ಪ್ರಾಮಾಣಿಕ ಪ್ರಯತ್ನ ಮಾಡದೆ ಈಗ ಸರ್ವಪಕ್ಷನಿಯೋಗದ ನಾಟಕವಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಉಚಿತ ಯೋಜನೆ ಹೆಸರಲ್ಲಿ ಜನರ ಜೇಬಿಗೆ ಕತ್ತರಿ

ಉಚಿತ ಯೋಜನೆಗಳ ಹೆಸರಿನಲ್ಲಿ ಜನರ ಜೇಬಿಗೆ ಕತ್ತರಿ ಹಾಕಲಾಗುತ್ತಿದೆ. ಮಹಿಳೆಯರಿಗೆ ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣ ಸೌಲಭ್ಯ ನೀಡಿ, ಈಗ ಬಸ್ ಟಿಕೆಟ್ ದರವನ್ನು ಶೇ.33ರಿಂದ 40ರಷ್ಟು ಹೆಚ್ಚಿಸಲು ಹೊರಟಿದ್ದಾರೆ. ಹಾಲಿನ ದರವನ್ನು 8 ರೂ. ಏರಿಕೆ ಮಾಡುತ್ತಿರುವುದು ರೈತರಿಗೆ ನೇರವಾಗಿ ತಲುಪುವುದಾದರೆ ನನ್ನ ಸಂಪೂರ್ಣ ಸ್ವಾಗತವಿದೆ, ಆದರೆ, ವಿಪರೀತವಾಗಿ ಬೆಲೆ ಏರಿಕೆಯಿಂದ ಮಾರುಕಟ್ಟೆಯಲ್ಲಿ ನಂದಿನಿ ಹಾಲು ಮಾರಾಟವಾಗದೆ, ಭವಿಷ್ಯದಲ್ಲಿ ಖಾಸಗಿ ಡೇರಿಗಳು ಮಾರುಕಟ್ಟೆಯನ್ನು ಆಕ್ರಮಿಸಿಕೊಳ್ಳುವ ಅಪಾಯವಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಎಚ್ಚರಿಸಿದರು.

ಅರಣ್ಯ ಇಲಾಖೆ ಅಧಿಕಾರಿಗಳ ವರ್ಗಾವಣೆ

ಬೆಂಗಳೂರು, ನ.6: ರಾಜ್ಯ ಸರ್ಕಾರವು ಅರಣ್ಯ ಇಲಾಖೆಯಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಮುಖ ಹುದ್ದೆಗಳಲ್ಲಿದ್ದ ಭಾರತೀಯ ಅರಣ್ಯ ಸೇವೆ ಹಾಗೂ ರಾಜ್ಯ ಅರಣ್ಯ ಸೇವೆ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಿ ಅಧಿಕೃತ ಆದೇಶ ಹೊರಡಿಸಿದೆ . ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಈ ಕುರಿತ ಅಧಿಸೂಚನೆ ಪ್ರಕಟಿಸಿದೆ.

ಅಧಿಕಾರಿಗಳ ನಿಯೋಜನೆ ವಿವರ:

* ಶಿವಮೊಗ್ಗ ವನ್ಯಜೀವಿ ವಿಭಾಗದ ಡಿಸಿಎಫ್ ಆಗಿದ್ದ ಪ್ರಸನ್ನ ಕೃಷ್ಣ ಪಾಟ್ಗಾರ್ ಅವರನ್ನು ಮಡಿಕೇರಿಯ ಡಿಸಿಎಫ್ (ರಿಸರ್ಚ್) ಹುದ್ದೆಗೆ ವರ್ಗಾಯಿಸಲಾಗಿದೆ.

* ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಕ್ಷೇತ್ರ ನಿರ್ದೇಶಕಿ ಹಾಗೂ ಡಿಸಿಎಫ್ ಆಗಿದ್ದ ಸೀಮಾ ಪಿ.ಎ. ಅವರನ್ನು ತುಮಕೂರು ವಿಭಾಗದ ಡಿಸಿಎಫ್ ಆಗಿ ನೇಮಿಸಲಾಗಿದೆ.

* ಸ್ಥಳ ನಿಯೋಜನೆಗಾಗಿ ಕಾಯುತ್ತಿದ್ದ ಶ್ರೀಪತಿ ಬಿ.ಎಸ್. ಅವರನ್ನು ಚಿಕ್ಕಮಗಳೂರು ಡಿಸಿಎಫ್ (ವರ್ಕಿಂಗ್ ಪ್ಲಾನ್) ಹುದ್ದೆಗೆ ಹಾಗೂ ರಮೇಶ್ ಬಾಬು ಎನ್. ಅವರನ್ನು ಬೆಂಗಳೂರಿನ ಡಿಸಿಎಫ್ (ಬಜೆಟ್ ಮತ್ತು ಆಡಿಟ್) ಹುದ್ದೆಗೆ ನಿಯೋಜಿಸಲಾಗಿದೆ.

*ಹಾಸನ ವಿಭಾಗದ ಡಿಸಿಎಫ್ ಆಗಿದ್ದ ಸೌರಭ್ ಕುಮಾರ್ ಅವರನ್ನು ಹುಣಸೂರಿನ ನಾಗರಹೊಳೆ ರಾಜೀವ್ ಗಾಂಧಿ ರಾಷ್ಟ್ರೀಯ ಉದ್ಯಾನವನದ ಕ್ಷೇತ್ರ ನಿರ್ದೇಶಕ ಮತ್ತು ಡಿಸಿಎಫ್ ಆಗಿ ವರ್ಗಾವಣೆ ಮಾಡಲಾಗಿದೆ.

* ಚಿತ್ರದುರ್ಗ ಸಾಮಾಜಿಕ ಅರಣ್ಯ ವಿಭಾಗದ ಡಿಸಿಎಫ್ ಹರೀಶ್ ಕೆ. ಅವರನ್ನು ಹಾಸನ ವಿಭಾಗದ ಡಿಸಿಎಫ್ ಆಗಿ ನೇಮಿಸಲಾಗಿದೆ.

* ಕೆಎಫ್‌ಡಿಸಿ ಶಿವಮೊಗ್ಗ ವಿಭಾಗದ ವ್ಯವಸ್ಥಾಪಕರಾಗಿದ್ದ ರಾಘವೇಂದ್ರ ರಾವ್ ಎನ್.ಎಸ್. ಅವರನ್ನು ಶಿವಮೊಗ್ಗ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಯನ್ನಾಗಿ ವರ್ಗಾಯಿಸಲಾಗಿದೆ.

ಎಸ್‌ಎಫ್‌ಎಸ್ ಅಧಿಕಾರಿಗಳ ವರ್ಗಾವಣೆ:

* ಮಡಿಕೇರಿ ಅರಣ್ಯ ಸಂಚಾರಿ ದಳದ ಡಿಸಿಎಫ್ ಆಗಿದ್ದ ಕೆ.ಪಿ. ಗೋಪಾಲ್ ಅವರನ್ನು ಮಡಿಕೇರಿ ವನ್ಯಜೀವಿ ವಿಭಾಗದ ಡಿಸಿಎಫ್ ಆಗಿ ವರ್ಗಾಯಿಸಲಾಗಿದೆ.

*ಮುನಿರಾಬಾದ್‌ನ ತುಂಗಭದ್ರಾ ಕಾಡಾ ಆಡಳಿತಾಧಿಕಾರಿಯಾಗಿದ್ದ ಭಾಗ್ಯಲಕ್ಷ್ಮಿ ಎಂ.ಸಿ. ಅವರನ್ನು ಕೆಎಫ್‌ಡಿಸಿ ಶಿವಮೊಗ್ಗ ವಿಭಾಗದ ಡಿವಿಜನಲ್ ಮ್ಯಾನೇಜರ್ ಮತ್ತು ಡಿಸಿಎಫ್ ಹುದ್ದೆಗೆ ನಿಯೋಜಿಸಿ ಸರ್ಕಾರ ಆದೇಶಿಸಿದೆ.

ಸಂವಿಧಾನಕ್ಕೆ ಅಪಚಾರ ಮಾಡಲು, ಅರಾಜಕತೆ ಸೃಷ್ಟಿಸಲು ಷಡ್ಯಂತ್ರ

ಇಂಡಿ ಒಕ್ಕೂಟದ ವಿರುದ್ಧ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆರೋಪ




ಬೆಂಗಳೂರು: ನ.6: ಭಾರತದ ಸಂವಿಧಾನಕ್ಕೆ ಅಪಚಾರ ಮಾಡುವ ಹಾಗೂ ಅರಾಜಕತೆ ಸೃಷ್ಟಿಸಲು ಷಡ್ಯಂತ್ರ ನಡೆಯುತ್ತಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆರೋಪಿಸಿದ್ದಾರೆ.

ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ – ಪಾದಯಾತ್ರೆ ಸಂದರ್ಭದಲ್ಲಿ ಮಾತನಾಡಿದ ಅವರು, ಎಸ್‌ಐಆರ್ ವೇಳೆ 13 ಕೋಟಿ ಜನರ ಹೆಸರು ಮತಪಟ್ಟಿಯಿಂದ ತೆಗೆಯಲಾಗಿದೆ. ಸ್ಥಳಾಂತರ ಹೊಂದಿದವರು, ಮೃತರು, ನಕಲಿ ಮತದಾರರನ್ನು ಕೈಬಿಡಲಾಗಿದೆ. ಸ್ಪಷ್ಟ ಮಾಹಿತಿ ಇದ್ದರೂ ಕೆಲವರು ಬೇಕೆಂದೇ ನಾಟಕ ಮಾಡುತ್ತಿದ್ದಾರೆ. ಭಾರತದಲ್ಲಿ ಅರಾಜಕತೆ ಸೃಷ್ಟಿ ಮಾಡಲು ಇಂಡಿ ಒಕ್ಕೂಟದ ಪ್ರಯತ್ನ ನಡೆದಿದೆ. ಇವರಿಗೆ ಪ್ರಜಾಪ್ರಭುತ್ವ ಬೇಡ; ಅರಾಜಕತೆಯೇ ಬೇಕಿದೆ. ಕಾಂಗ್ರೆಸ್ಸಿನವರು ಅರಾಜಕತೆಯ ವಕ್ತಾರರು ಎಂದು ಆರೋಪಿಸಿದರು.

ಮಾಜಿ ಸಂಸದ ಪ್ರತಾಪಸಿಂಹ ಅವರು ಮಾತನಾಡಿ, ವಂದೇ ಮಾತರಂ ಗೀತೆಯನ್ನು ಪೂರ್ಣವಾಗಿ ಹಾಡಬೇಕೆಂಬ ಗೊತ್ತುವಳಿಯನ್ನು ಕೇಂದ್ರ ಸರಕಾರವು ಅಂಗೀಕರಿಸಿದಾಗ ಅದನ್ನು ಕಾಂಗ್ರೆಸ್ ವಿರೋಧಿಸಿತ್ತು. ಈ ದೇಶದ ಜಲ, ನೆಲ, ಸಂಸ್ಕೃತಿಯನ್ನು ಕಾಂಗ್ರೆಸ್ ವಿರೋಧಿಸುತ್ತದೆ. ಅರಾಜಕತೆಯನ್ನು ವ್ಯವಸ್ಥಿತವಾಗಿ ಸೃಷ್ಟಿಸಲು ಅವರ ಪ್ರಯತ್ನ ನಡೆದಿದೆ. ಅದಕ್ಕೋಸ್ಕರ ಈ ಅಭಿಯಾನವನ್ನು ನಡೆಸಲಾಗುತ್ತಿದೆ ಎಂದು ವಿವರಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ನರೇಂದ್ರ ಮೋದಿಯವರ ಜನಪ್ರಿಯತೆಯನ್ನು ಸಹಿಸಿಕೊಳ್ಳಲು ಆಗುತ್ತಿಲ್ಲ. ಇದಕ್ಕಾಗಿಯೇ ಪ್ರಶಸ್ತಿ ವಾಪಸಾತಿ ಚಳವಳಿ ಮಾಡಿದ್ದರು. ಭೂಸ್ವಾಧೀನ ಕಾಯ್ದೆ ವಿರುದ್ಧ ಹೋರಾಟ, ಡಿಮಾನಿಟೈಸೇಷನ್ ವಿರುದ್ಧ ಹೋರಾಟ ನಡೆಸಿದ್ದರು ಎಂದು ಗಮನ ಸೆಳೆದರು. ಸಿಎಎ ವಿರುದ್ಧ ಹೋರಾಟ, ಸಿಜೆಪಿ ಇದೀಗ ಎಸ್‌ಐಆರ್ ವಿಚಾರದಲ್ಲಿ ಹೋರಾಟ ನಡೆಸುತ್ತಿದೆ. ಕಾಂಗ್ರೆಸ್ಸಿನ, ಭಾರತದ ವಿಶ್ವಾಸಾರ್ಹತೆ ಹಾಳು ಮಾಡುವ ಸತತ ಪ್ರಯತ್ನದ ಒಂದು ಭಾಗವಿದು ಎಂದು ಆರೋಪಿಸಿದರು.

ರಾಜ್ಯಾಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ, ಮಾಜಿ ಸಚಿವ ಸಿ.ಟಿ. ರವಿ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ, ವಿಧಾನಪರಿಷತ್ತಿನ ವಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್, ಶಾಸಕ ಶ್ರೀವತ್ಸ, ಪಕ್ಷದ ಚುನಾಯಿತ ಪ್ರತಿನಿಧಿಗಳು, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಪ್ರಮುಖರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.



ರಾಹುಲ್ ಪ್ರಧಾನಿಯಾಗುವುದು ಸಾಧ್ಯವಿಲ್ಲ: ವಿಜಯೇಂದ್ರ

ಕೆಲವರಿಗೆ ಹೇಗಾದರೂ ಮಾಡಿ ಒಂದು ಬಾರಿಯಾದರೂ ಪ್ರಧಾನಿ ಆಗುವ ಕನಸಿದೆ. ರಾಹುಲ್ ಗಾಂಧಿಗೆ ಮದುವೆಯೂ ಆಗಿಲ್ಲ; ಹುಚ್ಚು ಬಿಡುತ್ತಿಲ್ಲ; ಪ್ರಧಾನಿ ಆಗುವುದು ಸಾಧ್ಯವೇ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತ ದೊಡ್ಡ ಶಕ್ತಿಯಾಗಿ ಪರಿವರ್ತನೆ ಹೊಂದಿದೆ. ಇದನ್ನು ಸಹಿಸಿಕೊಳ್ಳಲು ರಾಹುಲ್ ಗಾಂಧಿಯವರಿಗೆ ಆಗುತ್ತಿಲ್ಲ. ರಾಹುಲ್ ಗಾಂಧಿ ಅನಿವಾಸಿ ವಿರೋಧ ಪಕ್ಷದ ನಾಯಕ. ಇವರ ಮೂಲಕ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ.

ಹಾಗಾಗಿ ಎನ್‌ಡಿಎ ಸರಕಾರವನ್ನು ಹೇಗಾದರೂ ಮಾಡಿ ಕೆಳಗಿಳಿಸಲು ಇವರ ಸಂಚು, ಷಡ್ಯಂತ್ರ ರೂಪಿಸುತ್ತಿದ್ದಾರೆ ಎಂದರು. ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶವು ಅಭಿವೃದ್ಧಿಯತ್ತ ಮುನ್ನಡೆದಿದೆ. ಭಯೋತ್ಪಾದನೆ ಮೂಲೋತ್ಪಾಟನೆ ಆಗಿದೆ. ನಕ್ಸಲಿಸಂ ಕಿತ್ತು ಹಾಕಲಾಗಿದೆ. ದೇಶದಲ್ಲಿ ಶಾಂತಿಯುತ ಪರಿಸ್ಥಿತಿ ಇದೆ. ದೇಶದ ಪ್ರಗತಿ ಸಹಿಸಲು ಸಾಧ್ಯವಾಗದೇ ಕಮ್ಮಿ ನಿಷ್ಠೆ ಉಳ್ಳವರನ್ನು ಕರೆದುಕೊಂಡು ದೇಶಕ್ಕೆ ಬೆಂಕಿ ಹಾಕುವ ಕೆಲಸ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

ಗಣಪತಿ ಹಬ್ಬ ಆಚರಿಸಲೂ ಕರ್ನಾಟಕದಲ್ಲಿ ಆಗುತ್ತಿಲ್ಲ. ದೀಪಾವಳಿ, ದಸರಾ ಆಚರಣೆ ಸಂದರ್ಭದಲ್ಲಿ ಹಾಲು, ಮೊಸರಿನ ದರ ತೀವ್ರವಾಗಿ ಹೆಚ್ಚಿಸಿದ್ದಾರೆ. ಇದು ಬಡವರ ವಿರೋಧಿ, ಜನವಿರೋಧಿ ಸರಕಾರ. ಇದನ್ನು ಮನೆಗೆ ಕಳಿಸಲು ನಾವೆಲ್ಲರೂ ಸಿದ್ಧರಾಗಬೇಕು. ರೈತವಿರೋಧಿ, ಯುವಜನರ ವಿರೋಧಿ, ಹಿಂದೂ ವಿರೋಧಿ ಸರಕಾರವನ್ನು ಕಿತ್ತು ಹಾಕಲು ಮುಂದಾಗೋಣ ಎಂದು ಮನವಿ ಮಾಡಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಅಂದು ವಿವೇಕಾನಂದರು, ಇಂದು ಅಮೃತಾನಂದಮಯಿ: ಸಿಎಂ ಡಿ.ಕೆ. ಶಿವಕುಮಾರ್

ಮಾತಾ ಅಮೃತಾನಂದಮಯಿ ಮಾತೆಯಿಂದ ನ್ಯಾಯ, ನೀತಿ, ಧರ್ಮದ ಉಳಿದಿದೆ

ಅಮೃತಾನಂದಮಯಿ ಮಠದಲ್ಲಿ ಬ್ರಹ್ಮಸ್ಥಾನಂ ದೇವಾಲಯ ಉತ್ಸವ ಉದ್ಘಾಟನೆ



ಬೆಂಗಳೂರು, ನ.6: ದೇಶದಲ್ಲಿ ನ್ಯಾಯ, ನೀತಿ, ಧರ್ಮ, ಸೇವಾಮನೋಭಾವ ಉಳಿದಿರುವುದು ಮಾತಾ ಅಮೃತಾನಂದಮಯಿ ಅವರಂಥ ಮಹಾತಾಯಿ ಹಾಗೂ ಧರ್ಮಗುರುಗಳಿಂದ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಬೆಂಗಳೂರಿನ ಮಾತಾ ಅಮೃತಾನಂದಮಯಿ ಮಠದಲ್ಲಿ ಆಯೋಜಿಸಲಾಗಿದ್ದ ಬ್ರಹ್ಮಸ್ಥಾನಂ ದೇವಾಲಯ ಉತ್ಸವವನ್ನು ಶಿವಕುಮಾರ್ ಅವರು ಶುಕ್ರವಾರ ಉದ್ಘಾಟಿಸಿ ಮಾತನಾಡಿ, ಸ್ವಾಮಿ ವಿವೇಕಾನಂದರು ತಮಿಳುನಾಡಿನ ಕನ್ಯಾಕುಮಾರಿಗೆ ಹೋಗಿ ಲೋಕದ ಒಳಿತಿಗೆ ಧ್ಯಾನ ಮಾಡಿದರು. ತಾಯಿ ಮಾತಾ ಅಮೃತಾನಂದಮಯಿ ಅವರು ಮನುಕುಲದ, ಕರ್ನಾಟಕದ ಜನರ ಶ್ರೇಯೋಭಿವೃದ್ಧಿಗಾಗಿ ದೇವರ ನಾಡು ಕೇರಳದಿಂದ ತಾಯಿ ದೇವಿ ಸ್ವರೂಪದಲ್ಲಿ ಇಲ್ಲಿಗೆ ಆಗಮಿಸಿ ದರ್ಶನ ಭಾಗ್ಯ ಕೊಟ್ಟಿದ್ದಾರೆ. ಸಮಸ್ತ ಕನ್ನಡಿಗರ ಪರವಾಗಿ ಅವರಿಗೆ ತುಂಬು ಹೃದಯದ ಸ್ವಾಗತ ಹಾಗೂ ಧನ್ಯವಾದಗಳು ಎಂದರು.

ತಾಯಿಯ ಮಡಿಲಿನಿಂದಲೇ ನಮಗೆ ತ್ಯಾಗದ ಅರ್ಥ ತಿಳಿಯುತ್ತಾ ಹೋಗುತ್ತದೆ. ತಪ್ಪು ಮಾಡಿದಾಗ ತಾಯಿ ತಿದ್ದುತ್ತಾಳೆ. ಸೋತಾಗ ಧೈರ್ಯ ತುಂಬುತ್ತಾಳೆ. ಇಂಥ ತಾಯಿಯ ಆಶೀರ್ವಾದ ನಮಗೆ ಬೇಕು. ಮಾತ ಅಮೃತಾನಂದ ಮಯಿ ಅವರ ತಪಸ್ಸಿನಿಂದಲೇ ನಮ್ಮ ಅಜ್ಞಾನ ನಿರ್ಮೂಲನೆಯಾಗುತ್ತದೆ ಎಂದು ಬಣ್ಣಿಸಿದರು.

ಅಮ್ಮನ ನೆನಪು ಪ್ರೀತಿಯ ಮೂಲ. ಗುರುವಿನ ನೆನಪು ಜ್ಞಾನದ ಮೂಲ. ದೇವರ ನೆನಪು ಭಕ್ತಿಯ ಮೂಲ. ಈ ಮೂರು ಮನುಷ್ಯತ್ವದ ಮೂಲ. ಮನುಷ್ಯತ್ವ ಮೋಕ್ಷಕ್ಕೆ ಮೂಲ. ಧರ್ಮ ಯಾವುದಾದರು ತತ್ವ ಒಂದೇ. ನಾಮ ನೂರಾದರು ದೈವ ಒಂದೇ. ಪೂಜೆ ಯಾವುದಾದರೂ ಭಕ್ತಿ ಒಂದೇ. ಕರ್ಮ ಹಲವಾದರೂ ನಿಷ್ಠೆ ಒಂದು. ದೇವನೊಬ್ಬ ನಾಮ ಹಲವು" ಎಂದರು.

ಅಧ್ಯಾತ್ಮ ದೇಶದ ಶಕ್ತಿ

ನಮ್ಮ ದೇಶದ ಶಕ್ತಿ ಅಧ್ಯಾತ್ಮ. ದೇಶದ ಆಸ್ತಿ ಸಂಸ್ಕೃತಿ. ದೇವರನ್ನು ನೋಡಲು ದೇವಸ್ಥಾನಕ್ಕೆ ಹೋಗಬೇಕು ಅಂತಿಲ್ಲ. ಇಂಥ ಪುಣ್ಯಸ್ಥಳಗಳಿಗೆ ಬಂದರೆ ಸಾಕು. ಭಕ್ತಿ ಇಲ್ಲದ ಜ್ಞಾನ ಕುರುಡು. ನೆಮ್ಮದಿ ಶಾಂತಿಗಾಗಿ ದೇವಸ್ಥಾನಕ್ಕೆ ಹೋಗುತ್ತೇವೆ. ಅವೆಲ್ಲವನ್ನೂ ಕರುಣಿಸಲು ತಾಯಿ ಮಾತಾ ಅಮೃತಾನಂದಮಯಿ ದೇವಿ ಸ್ವರೂಪದಲ್ಲಿ ಇಲ್ಲಿಗೆ ಆಗಮಿಸಿದ್ದಾರೆ. ಮಾನವ ಧರ್ಮಕ್ಕೆ ಜಯವಾಗಲಿ. ಧರ್ಮದಿಂದ ವಿಶ್ವಕ್ಕೆ ಶಾಂತಿ ಎಂದು ನಮ್ಮ ಗುರುಗಳು ಹೇಳುತ್ತಿದ್ದರು. ಅದನ್ನು ಅಮೃತಾನಂದಮಯಿ ತಾಯಿ ಮಾಡುತ್ತಿದ್ದಾರೆ. ಎಲ್ಲದರ ಮೂಲಕ ಭಕ್ತಿ, ಪ್ರೀತಿ, ಕರುಣೆ. ಭಕ್ತಿ ಎನ್ನುವುದು ಅಂತರಂಗದ ನಂದಾದೀಪ. ಅದನ್ನು ಸದಾ ಬೆಳಗುವಂತೆ ಕಾಪಾಡಿಕೊಳ್ಳಬೇಕು. ಈ ಕಾರ್ಯಮವನ್ನು ಅಮ್ಮ ಮಾಡುತ್ತಿದ್ದಾರೆ ಎಂದು ಡಿ.ಕೆ.ಶಿವಕುಮಾರ್ ಅವರು ಭಕ್ತಿಯ ಮಹತ್ವ ವಿವರಿಸಿದರು.

15 ದಿನದಲ್ಲಿ ಬಗೆಹರಿಯಲಿದೆ ಸಾಮಾಜಿಕ ಭದ್ರತಾ ಪಿಂಚಣಿ ಸಮಸ್ಯೆ: ಡಿಸಿಎಂ ಡಾ.ಜಿ. ಪರಮೇಶ್ವರ್

ಬೆಂಗಳೂರು, ನ.6: ಸಾಮಾಜಿಕ ಭದ್ರತಾ ಪಿಂಚಣಿ ವಿತರಣೆ ಸಮಸ್ಯೆ 15 ದಿನದೊಳಗೆ ಬಗೆಹರಿಯಲಿದೆ ಎಂದು ಡಿಸಿಎಂ ಜಿ.ಪರಮೇಶ್ವರ್ ತಿಳಿಸಿದರು.

ಸದಾಶಿವನಗರದ ತಮ್ಮ ನಿವಾಸದ ಬಳಿ ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ವೃದ್ಧಾಪ್ಯ, ಅಂಗವಿಕಲ ಸೇರಿ ವಿವಿಧ ಸಾಮಾಜಿಕ ಭದ್ರತಾ ಪಿಂಚಣಿಗಳು ಸ್ಥಗಿತಗೊಂಡಿರುವ ಬಗ್ಗೆ ಪ್ರತಿಕ್ರಿಯಿಸಿ, "ಈ ಸಂಬಂಧ ಈಗಾಗಲೇ ಎರಡು-ಮೂರು ಸಭೆಗಳನ್ನು ನಡೆಸಲಾಗಿದೆ. ಈ ಹಿಂದೆ 30,000 ಇದ್ದ ಆದಾಯದ ಮಿತಿಯನ್ನು 1.20 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಹೀಗಾಗಿ ಆದಾಯದ ಕಾರಣದಿಂದ ಅರ್ಹರಿಗೆ ಸಮಸ್ಯೆಯಾಗುವುದಿಲ್ಲ ಎಂದರು.

ಇನ್ನೊಂದು ಪ್ರಮುಖ ಸಮಸ್ಯೆಯೆಂದರೆ ಅರ್ಹ ವಯಸ್ಸು ತಲುಪದವರು ಪಿಂಚಣಿಗಾಗಿ ಅರ್ಜಿ ಸಲ್ಲಿಸಿರುವುದು. 60 ವರ್ಷ ಮೇಲ್ಪಟ್ಟವರಿಗೆ ನೀಡಬೇಕಾದ ವೃದ್ಧಾಪ್ಯ ಪಿಂಚಣಿಗೆ 40, 30 ಹಾಗೂ 20 ವರ್ಷದವರೂ ಅರ್ಜಿ ಸಲ್ಲಿಸಿರುವ ಪ್ರಕರಣಗಳು ಗಮನಕ್ಕೆ ಬಂದಿವೆ. ಇಂತಹ ಸುಮಾರು 23 ಲಕ್ಷ ಅರ್ಜಿಗಳನ್ನು ಪರಿಶೀಲಿಸಿ ಅನರ್ಹ ಅರ್ಜಿಗಳನ್ನು ವಿಲೇವಾರಿ ಮಾಡುವ ಪ್ರಕ್ರಿಯೆ ನಡೆಯುತ್ತಿದೆ. ಈ ಕಾರಣದಿಂದಾಗಿ ಮಧ್ಯಂತರದಲ್ಲಿ ಪಿಂಚಣಿ ವಿತರಣೆ ಪ್ರಕ್ರಿಯೆ ಕೆಲವು ದಿನಗಳ ಕಾಲ ಸ್ಥಗಿತಗೊಂಡಿತ್ತು. ಇದೀಗ ಮತ್ತೆ ಚಾಲನೆ ನೀಡಲಾಗಿದ್ದು, ಮುಂದಿನ ಒಂದು ವಾರದಿಂದ 15 ದಿನಗಳೊಳಗೆ ಸಮಸ್ಯೆ ಬಗೆಹರಿಯಲಿದೆ ಎಂದು ಭರವಸೆ ನೀಡಿದರು.



ಸರ್ಕಾರ ಯಾವುದೇ ವೆಚ್ಚ ಮಾಡಿದರೂ ಅದು ಆರ್ಥಿಕ ಹೊರೆ ಎನಿಸಿಕೊಳ್ಳುತ್ತದೆ. ಆದರೆ ಆದಾಯ ಮತ್ತು ವೆಚ್ಚ ಎರಡನ್ನೂ ಗಮನದಲ್ಲಿಟ್ಟು ಕೊಂಡು ನಿರ್ಧಾರ ಕೈಗೊಳ್ಳಬೇಕಾಗುತ್ತದೆ. ಈ ಬಾರಿ ಕಳೆದ ವರ್ಷಕ್ಕಿಂತ ಸರ್ಕಾರದ ಆದಾಯ ಉತ್ತಮವಾಗಿದೆ. ವಾಣಿಜ್ಯ ತೆರಿಗೆ, ಅಬಕಾರಿ ತೆರಿಗೆ, ಮುದ್ರಾಂಕ ಮತ್ತು ನೋಂದಣಿ ಇಲಾಖೆಗಳ ಮೂಲಕ ಉತ್ತಮ ಆದಾಯ ಬರುತ್ತಿದೆ. ಆದಾಯದ ಸ್ಥಿತಿಗತಿಗಳನ್ನು ಪರಿಶೀಲಿಸಿಯೇ ಸರ್ಕಾರ ವಿವಿಧ ಕ್ರಮಗಳನ್ನು ಕೈಗೊಂಡಿದೆ ಎಂದು ಪರಮೇಶ್ವರ್ ಹೇಳಿದರು.

ಸ್ಥಳಾಂತರಗೊಂಡಿರುವವರ ಹೆಸರು ಮತದಾರ ಪಟ್ಟಿಯಲ್ಲಿರಬೇಕಲ್ಲವೇ?

ಎಸ್‌ಐಆರ್ ಕುರಿತು ನಡೆದ ಚರ್ಚೆಯ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಕೆಲವು ಸಚಿವರು ತಮ್ಮ ಕ್ಷೇತ್ರಗಳಲ್ಲಿ ಎಸ್‌ಐಆರ್‌ನಿಂದ ಹೆಚ್ಚಿನ ಪರಿಣಾಮವಾಗಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಆದರೆ ಅದರಿಂದ ರಾಜ್ಯಾದ್ಯಂತ ಪ್ರಕ್ರಿಯೆ ಸರಿಯಾಗಿದೆ ಎಂದರ್ಥವಲ್ಲ.

ಕೆಲವು ಕ್ಷೇತ್ರಗಳಲ್ಲಿ ಸುಮಾರು ಎರಡು ಸಾವಿರ ಮತದಾರರ ಹೆಸರುಗಳು ಮಾತ್ರ ಬಿಟ್ಟುಹೋಗಿರಬಹುದು ಅಥವಾ ಸೇರ್ಪಡೆಯಾಗಿರಬಹುದು. ಆದರೆ ಒಟ್ಟಾರೆ ಚಿತ್ರಣವನ್ನು ಗಮನಿಸಿದರೆ ಗಂಭೀರ ಪ್ರಶ್ನೆಗಳು ಎದುರಾಗುತ್ತವೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸುಮಾರು ಒಂದು ಕೋಟಿ ಎಂಟು ಲಕ್ಷ ಮತದಾರರ ಹೆಸರುಗಳನ್ನು ತೆಗೆದುಹಾಕಲಾಗಿದೆ. ಈ ಪೈಕಿ 16 ಲಕ್ಷ ಮಂದಿ ಮೃತಪಟ್ಟಿದ್ದಾರೆ ಎಂದು ದಾಖಲಿಸಲಾಗಿದೆ. ಆದರೆ ಅವರಲ್ಲಿ ಕೆಲವರು ಜೀವಂತವಾಗಿದ್ದಾರೆ ಎಂಬ ದೂರುಗಳಿವೆ. ಇನ್ನು ಸುಮಾರು 65 ಲಕ್ಷ ಮಂದಿ ಸ್ಥಳಾಂತರ ಗೊಂಡಿದ್ದಾರೆ ಎಂದು ಹೇಳಲಾಗಿದೆ. ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸ್ಥಳಾಂತರಗೊಂಡಿದ್ದರೆ, ಅವರ ಹೆಸರು ಹೊಸ ಸ್ಥಳದ ಮತದಾರರ ಪಟ್ಟಿಯಲ್ಲಿ ಇರಬೇಕಲ್ಲವೇ, ಉದಾಹರಣೆಗೆ ಬೆಂಗಳೂರಿನಿಂದ ಮೈಸೂರಿಗೆ ಸ್ಥಳಾಂತರಗೊಂಡಿದ್ದರೆ ಮೈಸೂರಿನ ಪಟ್ಟಿಯಲ್ಲಿ ಹೆಸರು ಇರಬೇಕು. ಆದರೆ ಅಲ್ಲಿ ಹೆಸರು ಇಲ್ಲದಿರುವುದು ಗಂಭೀರ ಪ್ರಶ್ನೆಯಾಗಿದೆ. ಇಂತಹ ಉದಾಹರಣೆಗಳ ಕಾರಣದಿಂದಲೇ ಎಸ್‌ಐಆರ್ ಪ್ರಕ್ರಿಯೆ ಸರಿಯಾಗಿಲ್ಲ ಎಂಬುದು ಕಾಂಗ್ರೆಸ್ ನಿಲುವಾಗಿದೆ ಎಂದು ಡಾ.ಜಿ. ಪರಮೇಶ್ವರ್ ತಿಳಿಸಿದರು.

ಉತ್ಪಾದನಾ ಘಟಕ ಅಭಿವೃದ್ಧಿಗೆ 200 ಕೋಟಿ ರೂ. ಹೂಡಿಕೆ

ರಸಗೊಬ್ಬರ, ಕೀಟನಾಶಕ ಉತ್ಪಾದನೆ, 220 ಉದ್ಯೋಗ ಸೃಷ್ಟಿ: ಸಚಿವ ಎಂ.ಬಿ. ಪಾಟೀಲ್

ಜರ್ಮನಿಯ ಬೇಯರ್ ಕಂಪನಿಗೆ ಜತೆ ಕರ್ನಾಟಕ ಸರ್ಕಾರ ಒಡಂಬಡಿಕೆ



ಬೆಂಗಳೂರು, ನ.6: ಆರೋಗ್ಯ ಸೇವೆ ಮತ್ತು ಕೃಷಿ ಕ್ಷೇತ್ರಗಳಲ್ಲಿ ಜಾಗತಿಕ ಮಟ್ಟದ ಕಂಪನಿಯಾಗಿರುವ ಜರ್ಮನಿ ಮೂಲದ ಬೇಯರ್ ಸೈನ್ಸ್ ಅಂಡ್ ಇನ್ನೋವೇಶನ್ ಬೆಂಗಳೂರಿನ ಸಮೀಪ ತನ್ನ ಅತ್ಯಾಧುನಿಕ ಉತ್ಪಾದನಾ ಸ್ಥಾವರ ಅಭಿವೃದ್ಧಿಗೆ 200 ಕೋಟಿ ಹೂಡಿಕೆ ಮಾಡಲಿದ್ದು, ಈ ಸಂಬಂಧ ಶುಕ್ರವಾರ ಕರ್ನಾಟಕ ಸರ್ಕಾರದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸಮ್ಮುಖದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್.ಸೆಲ್ವಕುಮಾರ್ ಮತ್ತು ಬೇಯರ್ ಕಂಪನಿಯ ಸಿಎಫ್‌ಓ ವಿನೀತ್ ಜಿಂದಾಲ್ ಒಡಂಬಡಿಕೆಗೆ ಸಹಿ ಹಾಕಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಬೇಯರ್ ಕಂಪನಿಯು ಮುಂದಿನ 7 ವರ್ಷಗಳಲ್ಲಿ ಹಂತಹಂತವಾಗಿ ಈ ಹೂಡಿಕೆ ಮಾಡಲಿದೆ. ಇದರಿಂದ 220 ಉದ್ಯೋಗಗಳು ಸೃಷ್ಟಿಯಾಗಲಿವೆ. ತಾವು ಇತ್ತೀಚೆಗೆ ರಾಜ್ಯಕ್ಕೆ ಬಂಡವಾಳ ಆಕರ್ಷಿಸಲು ನೆದರ್ಲೆಂಡ್ಸ್ ಪ್ರವಾಸ ಕೈಗೊಂಡಿದ್ದಾಗ ಆಮ್ಸ್ಟರ್‌ಡ್ಯಾಮ್‌ನಲ್ಲಿ ಕಂಪನಿಯ ಉನ್ನತ ಮಟ್ಟದ ಪ್ರತಿನಿಧಿಗಳ ಜತೆ ಮಾತುಕತೆ ನಡೆಸಲಾಗಿತ್ತು ಎಂದಿದ್ದಾರೆ.

ಈ ಘಟಕದಲ್ಲಿ ರಸಗೊಬ್ಬರ, ಕೀಟನಾಶಕ ಮತ್ತು ಶಿಲೀಂಧ್ರನಾಶಕ ಮುಂತಾದವನ್ನು ಉತ್ಪಾದಿಸಲಾಗುತ್ತದೆ. ಕಂಪನಿಯು ಮುಂದಿನ ವರ್ಷದ ಏಪ್ರಿಲ್ ತಿಂಗಳಲ್ಲಿ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶಕ್ಕೂ ಮೊದಲೇ ಯೋಜನೆಯ ಭೂಮಿಪೂಜೆ ನೆರವೇರಿಸಲು ಬಯಸಿದ್ದು, ತ್ವರಿತವಾಗಿ ತಯಾರಿಕೆ ಚಟುವಟಿಕೆಗಳನ್ನು ಆರಂಭಿಸಲು ಉತ್ಸುಕವಾಗಿದೆ. ಕಂಪನಿಯು ಈಗಾಗಲೇ ಬೆಂಗಳೂರಿನಲ್ಲಿ ತನ್ನ ಸೇವಾ ಮತ್ತು ನಾವೀನ್ಯತೆಯ ಹಬ್ ಹಾಗೂ ಚಾಮರಾಜನಗರದಲ್ಲಿ ಬೆಳೆ ಪರೀಕ್ಷಾ ಕೇಂದ್ರವನ್ನು ಹೊಂದಿದೆ. ಭಾರತದಲ್ಲಿ ಇದು 125 ವರ್ಷಗಳಿಂದಲೂ ಇದ್ದು 11 ಸಾವಿರ ಜನರಿಗೆ ಕೆಲಸ ಕೊಟ್ಟಿದೆ. ದೇಶದಲ್ಲಿ ಬೇಯರ್ ಕಂಪನಿಯು 7 ಉತ್ಪಾದನಾ ಸ್ಥಾವರಗಳು ಮತ್ತು 3 ಜಿಇಸಿ ಕೇಂದ್ರಗಳನ್ನು ಹೊಂದಿದೆ ಎಂದು ನುಡಿದಿದ್ದಾರೆ. ಈ ಸಂದರ್ಭದಲ್ಲಿ ಕೈಗಾರಿಕಾ ಇಲಾಖೆಯ ಆಯುಕ್ತೆ ಖುಷ್ಬೂ ಗೋಯಲ್ ಚೌಧರಿ, ಕೆಐಎಡಿಬಿ ಗೋವಿಂದ ರೆಡ್ಡಿ ಹಾಜರಿದ್ದರು.

ಖಾದಿ ಉದ್ಯಮಕ್ಕೆ ಆಧುನಿಕ ಮಾರುಕಟ್ಟೆ, ಜಾಗತಿಕ ಬ್ರ್ಯಾಂಡಿಂಗ್ ಅಗತ್ಯ

ಜಾಗತಿಕವಾಗಿ ಖಾದಿ ಪರಿಚಯಿಸಲು ರಾಯಭಾರಿಗಳ ನೇಮಕ: ಸಚಿವ ವಿಜಯಾನಂದ ಕಾಶಪ್ಪನವರ್ ಸೂಚನೆ



ಬೆಂಗಳೂರು, ನ.6: ಕರ್ನಾಟಕದ ಖಾದಿ ಉತ್ಪನ್ನಗಳನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸಿ, ಜಾಗತಿಕ ಮಾರುಕಟ್ಟೆಯಲ್ಲಿ ಖಾದಿಗೆ ಬೇಡಿಕೆ ಹೆಚ್ಚಿಸುವ ನಿಟ್ಟಿನಲ್ಲಿ ವಿಶೇಷ ಕಾರ್ಯಯೋಜನೆ ರೂಪಿಸಬೇಕು. ಖಾದಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿವಿಧ ದೇಶಗಳಲ್ಲಿ ರಾಯಭಾರಿಗಳ ರೀತಿಯಲ್ಲಿ ಕಾರ್ಯನಿರ್ವಹಿಸುವ ವ್ಯಕ್ತಿಗಳನ್ನು ಗುರುತಿಸಿ ನೇಮಿಸಿ ಕೊಳ್ಳಬೇಕು ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ್ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರಿನ ಖಾದಿ ಭವನದಲ್ಲಿ ನಡೆದ ಖಾದಿ, ಉಣ್ಣೆ ಮತ್ತು ರೇಷ್ಮೆ ಸಂಘ-ಸಂಸ್ಥೆಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಖಾದಿ ಕೇವಲ ಸಾಂಪ್ರದಾಯಿಕ ಉದ್ದೇಶದಿಂದ, ವಿದೇಶಗಳಲ್ಲಿ ಉಡುಪು ಮಾತ್ರವಲ್ಲ. ಕರ್ನಾಟಕದ ಗ್ರಾಮೀಣ ಪ್ರದೇಶಗಳ ಸಾವಿರಾರು ಕಸುಬುದಾರರ ಜೀವನಾಧಾರವಾಗಿರುವ ಈ ಉದ್ಯಮಕ್ಕೆ ಆಧುನಿಕ ಮಾರುಕಟ್ಟೆ ಮತ್ತು ಜಾಗತಿಕ ಬ್ರ್ಯಾಂಡಿಂಗ್ ಅಗತ್ಯವಿದೆ ಎಂದರು.

ಖಾದಿಯನ್ನು ಅಂತರಾಷ್ಟ್ರೀಯ ಬ್ರ್ಯಾಂಡ್ ಆಗಿ ರೂಪಿಸುವ ಖಾದಿಯ ಪ್ರಚಾರಕ್ಕೆ ನೆರವಾಗುವಂತಹ ರಾಯಭಾರಿಗಳನ್ನು ನೇಮಿಸಿಕೊಳ್ಳುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ವಿದೇಶಿ ಮಾರುಕಟ್ಟೆಯಲ್ಲಿ ಕರ್ನಾಟಕದ ಖಾದಿ, ರೇಷ್ಮೆ ಮತ್ತು ಉಣ್ಣೆ ಉತ್ಪನ್ನಗಳಿಗೆ ಅವಕಾಶ ಕಲ್ಪಿಸಲು ರಫ್ತು, ಆನ್‌ಲೈನ್ ಮಾರಾಟ, ಬ್ರ್ಯಾಂಡಿಂಗ್ ಮತ್ತು ಆಧುನಿಕ ಮಾರುಕಟ್ಟೆ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.

ಜಿಲ್ಲಾಮಟ್ಟದಲ್ಲಿ ಖಾದಿ ಶೋರೂಂ: ಖಾದಿ ಉತ್ಪನ್ನಗಳ ಬಗ್ಗೆ ಸಾರ್ವಜನಿಕರಲ್ಲಿ ವಿಶ್ವಾಸ ಹೆಚ್ಚಿಸಲು ಕಾವೇರಿ ಎಂಪೋರಿಯಂ ಮಾದರಿಯಲ್ಲಿ ಜಿಲ್ಲಾಕೇಂದ್ರಗಳಲ್ಲಿ ಖಾದಿ ಶೋರೂಂ ಸ್ಥಾಪಿಸುವ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಸೂಚಿಸಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಮಸ್ಕಿ ಶಾಸಕ ಬಸನಗೌಡ ತುರುವಿಹಾಳ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಟೇಶ್ ಸೇರಿದಂತೆ ಖಾದಿ, ಉಣ್ಣೆ ಮತ್ತು ರೇಷ್ಮೆ ಕ್ಷೇತ್ರದ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

100 ಕೋಟಿ ಪ್ರಸ್ತಾವನೆ ಸಿದ್ಧಪಡಿಸಲು ಸೂಚನೆ

ಖಾದಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅಗತ್ಯವಿರುವ ಅನುದಾನವನ್ನು ಹೆಚ್ಚಿಸುವ ಉದ್ದೇಶದಿಂದ 2027-28ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ 100 ಕೋಟಿ ಮೊತ್ತದ ವಿಶೇಷ ಪ್ರಸ್ತಾವನೆ ಸಿದ್ಧಪಡಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಈ ಅನುದಾನವನ್ನು ಖಾದಿ ಉತ್ಪಾದನಾ ಸಂಸ್ಥೆಗಳ ಮೂಲಸೌಕರ್ಯ ಅಭಿವೃದ್ಧಿ, ಆಧುನಿಕ ಯಂತ್ರೋಪಕರಣಗಳ ಅಳವಡಿಕೆ, ಸಾಮಾನ್ಯ ಸೇವಾ ಕೇಂದ್ರಗಳ ಸ್ಥಾಪನೆ, ಮಾರುಕಟ್ಟೆ ವಿಸ್ತರಣೆ, ಬ್ರ್ಯಾಂಡಿಂಗ್, ಡಿಜಿಟಲ್ ಹಾಗೂ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ, ಕಸುಬುದಾರರ ಕಲ್ಯಾಣ ಸೇರಿದಂತೆ ವಿವಿಧ ಉದ್ದೇಶಗಳಿಗೆ ಬಳಸುವಂತೆ ಸಮಗ್ರ ಯೋಜನೆ ರೂಪಿಸಬೇಕು ಎಂದು ನಿರ್ದೇಶನ ನೀಡಿದರು. ರಾಜ್ಯದಲ್ಲಿ ಪ್ರಸ್ತುತ 207 ಖಾದಿ ಸಂಘ-ಸಂಸ್ಥೆಗಳು ನೋಂದಣಿಯಾಗಿದ್ದು, 180 ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. 196 ಖಾದಿ ಭಂಡಾರಗಳು ವಿವಿಧ ಜಿಲ್ಲೆ, ತಾಲೂಕು ಮತ್ತು ಹೋಬಳಿ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆ. ಅರಳೆ ಖಾದಿ, ಉಣ್ಣೆ ಖಾದಿ ಮತ್ತು ರೇಷ್ಮೆ ಖಾದಿ ಕ್ಷೇತ್ರಗಳಲ್ಲಿ ಸಾವಿರಾರು ನೂಲುಗಾರರು, ನೇಕಾರರು ಹಾಗೂ ಇತರ ಕಸುಬುದಾರರು ತೊಡಗಿಸಿಕೊಂಡಿದ್ದಾರೆ.

ವಾಯವ್ಯ ಸಾರಿಗೆ ನಿಗಮಕ್ಕೆ ಕಿತ್ತೂರು ರಾಣಿ ಚೆನ್ನಮ್ಮ ರಸ್ತೆ ಸಾರಿಗೆ ಸಂಸ್ಥೆ ನಾಮಕರಣ

ಬೆಂಗಳೂರು, ನ.6: ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯನ್ನು ಅಧಿಕೃತವಾಗಿ ಕಿತ್ತೂರು ರಾಣಿ ಚೆನ್ನಮ್ಮ ರಸ್ತೆ ಸಾರಿಗೆ ಸಂಸ್ಥೆ ಎಂದು ಮರುನಾಮಕರಣ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಪ್ರಗತಿಯ ಹಾದಿಯಲ್ಲಿರುವ ಈ ಸಾರಿಗೆ ಸಂಸ್ಥೆಯು ಹೊಸ ವಿನ್ಯಾಸದ ವಾಹನಗಳ ಆಚರಣೆ, ಪ್ರಯಾಣಿಕರಿಗೆ ಆರಾಮದಾಯಕ ಪ್ರಯಾಣ ಹಾಗೂ ಆಧುನಿಕ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಜನಪ್ರಶಂಸೆಗೆ ಪಾತ್ರವಾಗಿದೆ. ಅಲ್ಲದೆ, ಮಧ್ಯಮ ಗಾತ್ರದ ನಗರಗಳು ಮತ್ತು ಪಟ್ಟಣಗಳಲ್ಲಿ ನಗರ ಸಾರಿಗೆ ವ್ಯವಸ್ಥೆಯನ್ನು ಯಶಸ್ವಿಯಾಗಿ ಕಾರ್ಯಾಚರಣೆ ಮಾಡುತ್ತಾ, ಸಮಾಜದ ಮಧ್ಯಮ ಹಾಗೂ ಕಡಿಮೆ ಆದಾಯದ ಜನಸಮೂಹದ ಮೆಚ್ಚುಗೆಯನ್ನು ಗಳಿಸಿದೆ. ರಾಜ್ಯದ ಪ್ರತಿ ಗ್ರಾಮಗಳಿಗೂ ಸಾರಿಗೆ ಸೌಲಭ್ಯ ಕಲ್ಪಿಸುವಲ್ಲಿ ಸಂಸ್ಥೆಯು ಅವಿರತ ಸೇವೆಯನ್ನು ನೀಡುತ್ತಿದ್ದು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಕೋರಿಕೆಯ ಹಿನ್ನೆಲೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ.

ಸಚಿವ ಸಂಪುಟ ನೀಡಿರುವ ಅನುಮೋದನೆಯನ್ವಯ, ಸಾರಿಗೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಪುಷ್ಪಾ ವಿ.ಎಸ್. ಈ ಅಧಿಕೃತ ಆದೇಶವನ್ನು ಹೊರಡಿಸಿದ್ದಾರೆ.

ಶೀಘ್ರದಲ್ಲೇ ನೂತನ ಜವಳಿ ನೀತಿ ಪ್ರಕಟ: ಸಚಿವ ರುದ್ರಪ್ಪ ಲಮಾಣಿ



ಬೆಂಗಳೂರು, ನ.6: ರಾಜ್ಯದ ಜವಳಿ ಕ್ಷೇತ್ರದಲ್ಲಿ ಹೂಡಿಕೆ, ಉದ್ಯೋಗ ಸೃಷ್ಟಿ ಮತ್ತು ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿರುವ ಕರ್ನಾಟಕ ಜವಳಿ ಮತ್ತು ಉಡುಪು ನೀತಿ 4.0 (2026-31) ಸಿದ್ಧವಾಗಿದ್ದು, ಶೀಘ್ರದಲ್ಲೇ ಮುಖ್ಯ ಮಂತ್ರಿಗಳಿಂದ ಅಧಿಕೃತವಾಗಿ ಪ್ರಕಟಗೊಳ್ಳಲಿದೆ ಎಂದು ಸಕ್ಕರೆ ಮತ್ತು ಜವಳಿ ಸಚಿವ ರುದ್ರಪ್ಪ ಲಮಾಣಿ ತಿಳಿಸಿದ್ದಾರೆ.

ವಿಕಾಸಸೌಧದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಯೋಜನೆಗಳು ಹಾಗೂ ವಿವಿಧ ನಿಗಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೂತನ ಜವಳಿ ನೀತಿಯಲ್ಲಿ ರಾಜ್ಯದ ವಿವಿಧ ಭಾಗಗಳಿಗೆ ಹೂಡಿಕೆ ಮತ್ತು ಉದ್ಯೋಗಾವಕಾಶ ಗಳನ್ನು ವಿಸ್ತರಿಸುವ ಹಲವು ಹೊಸ ಕ್ರಮಗಳನ್ನು ಅಳವಡಿಸಲಾಗಿದೆ ಎಂದರು.

ಮುಖ್ಯಮಂತ್ರಿಗಳು ವಿಶೇಷ ಮುತುವರ್ಜಿ ವಹಿಸಿ ನೂತನ ಜವಳಿ ನೀತಿಯಲ್ಲಿ ಹಲವು ಹೊಸ ಅಂಶಗಳನ್ನು ಸೇರಿಸಿದ್ದಾರೆ. ಬೆಂಗಳೂರು ಸೇರಿ ಈಗಾಗಲೇ ಅಭಿವೃದ್ಧಿ ಹೊಂದಿರುವ ಪ್ರದೇಶಗಳಿಗೆ ಮಾತ್ರ ಸೀಮಿತವಾಗದೆ, ರಾಜ್ಯದ ಇತರ ಭಾಗಗಳಿಗೂ ಜವಳಿ ಹೂಡಿಕೆ ಮತ್ತು ಉದ್ಯೋಗ ಸೃಷ್ಟಿಯನ್ನು ವಿಸ್ತರಿಸುವುದು ಈ ನೀತಿಯ ಪ್ರಮುಖ ಉದ್ದೇಶವಾಗಿದೆ ಎಂದು ಸಚಿವರು ಹೇಳಿದರು.

ರೇಷ್ಮೆ ಕ್ಷೇತ್ರವು ಕರ್ನಾಟಕದ ಗುರುತಿನ ಭಾಗವಾಗಿದೆ.

ರೇಷ್ಮೆ ನೂಲು ಉತ್ಪಾದನೆಯಿಂದ ಹಿಡಿದು ಮೌಲ್ಯವರ್ಧಿತ ಉತ್ಪನ್ನಗಳವರೆಗೆ ಸಂಪೂರ್ಣ ಮೌಲ್ಯ ಸರಪಳಿಗೆ ಹೊಸ ಹೂಡಿಕೆ ಮತ್ತು ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ನಮ್ಮ ಉದ್ದೇಶ ಎಂದು ಸಚಿವ ರುದ್ರಪ್ಪ ಲಮಾಣಿ ತಿಳಿಸಿದರು.

ಅಧಿಕಾರಿಗಳು ಯೋಜನೆಗಳ ಅನುಷ್ಠಾನದಲ್ಲಿ ನಿಗದಿತ ಗುರಿ ಸಾಧಿಸುವುದರ ಜೊತೆಗೆ, ಕೈಮಗ್ಗ ನೇಕಾರರು, ಜವಳಿ ಉದ್ಯಮಿಗಳು, ಎಂಎಸ್‌ಎಂಇ ಗಳು ಹಾಗೂ ಫಲಾನುಭವಿಗಳಿಗೆ ಯೋಜನೆಗಳ ಪ್ರಯೋಜನ ತ್ವರಿತವಾಗಿ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಸೂಚಿಸಿದರು.

ಸಭೆಯಲ್ಲಿ ಜವಳಿ ಅಭಿವೃದ್ಧಿ ಆಯುಕ್ತ ಎ.ಬಿ. ಬಸವರಾಜು, ಹೆಚ್ಚುವರಿ ನಿರ್ದೇಶಕ ಸಿ.ಎಸ್. ಯೋಗೇಶ್ ಮತ್ತು ಶ್ರೀಧರ್ ನಾಯಕ್, ಕಾವೇರಿ ಹ್ಯಾಂಡ್‌ಲೂಮ್ಸ್ ವ್ಯವಸ್ಥಾಪಕ ನಿರ್ದೇಶಕಿ ಸೌಮ್ಯಾ ಎಂ. ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು.

371(ಎ) ಸಮಿತಿ ಸೇವಾ ವಿಷಯಗಳಿಗೆ ಮಾತ್ರ ಸೀಮಿತವಾಗಬಾರದು; ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಯನ್ನೂ ಪರಿಶೀಲಿಸಿ: ಡಾ. ಅಜಯ್ ಧರ್ಮಸಿಂಗ್

- ಕೇಂದ್ರದಿಂದಲೂ ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ವಿಶೇಷ ಅನುದಾನ ನೀಡುವಂತೆ ಒತ್ತಾಯಿಸಲು ಸಚಿವರ ಪ್ರಸ್ತಾವ

- ಶಿಕ್ಷಕರು, ಆರೋಗ್ಯ ಕೇಂದ್ರಗಳು, ಸಿಬ್ಬಂದಿ ಹಾಗೂ ಅಭಿವೃದ್ಧಿ ಅನುದಾನ ಹಂಚಿಕೆಯಲ್ಲಿ ಕಲ್ಯಾಣ ಕರ್ನಾಟಕಕ್ಕೆ ಸಮಾನ ಪಾಲು ನೀಡುವಂತೆ ವಿಷಯ ಮಂಡನೆ

ಬೆಂಗಳೂರು, ನ.6: ಸಂವಿಧಾನದ ಅನುಚ್ಛೇದ 371(ಎ) ಅನುಷ್ಠಾನಕ್ಕೆ ಸಂಬಂಧಿಸಿದ ಸಚಿವ ಸಂಪುಟ ಉಪಸಮಿತಿಯ ಕಾರ್ಯವ್ಯಾಪ್ತಿಯನ್ನು ಕೇವಲ ಸೇವಾ ಜೇಷ್ಠತೆ ಮತ್ತು ಖಾಲಿ ಹುದ್ದೆಗಳ ವಿಚಾರಗಳಿಗೆ ಸೀಮಿತಗೊಳಿಸದೆ, ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿ, ಸಿಬ್ಬಂದಿ ಹಂಚಿಕೆ, ಇಲಾಖಾವಾರು ಅನುದಾನ ಹಾಗೂ ಶಿಕ್ಷಣ-ಆರೋಗ್ಯ ಮೂಲಸೌಕರ್ಯದಲ್ಲಿನ ತಾರತಮ್ಯಗಳನ್ನೂ ಸಮಗ್ರವಾಗಿ ಪರಿಶೀಲಿಸಬೇಕು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ಸಭೆಯಲ್ಲಿ ವಿಷಯ ಮಂಡಿಸಿದರು.

ಇಂದು ವಿಕಾಸಸೌಧದಲ್ಲಿ ನಡೆದ 371(ಎ) ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಭಾಗವಹಿಸಿದ ಅವರು, ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ ನೀಡಿರುವ ಮೂಲ ಆಶಯವೇ ಪ್ರದೇಶದ ಸಮಗ್ರ ಅಭಿವೃದ್ಧಿ ಮತ್ತು ಸಮಾನ ಅವಕಾಶ ಕಲ್ಪಿಸುವುದಾಗಿದೆ. ಹೀಗಾಗಿ 371(ಎ) ಅನುಷ್ಠಾನವನ್ನು ಸೇವಾ ವಿಷಯಗಳಿಗೆ ಮಾತ್ರ ಸೀಮಿತಗೊಳಿಸಬಾರದು ಎಂದು ಪ್ರತಿಪಾದಿಸಿದರು.

ಜೇಷ್ಠತಾ ಪಟ್ಟಿಯ ನಿರ್ಣಯಗಳಿಗೆ ಕಾಲಮಿತಿಯಲ್ಲಿ ಅನುಷ್ಠಾನ

ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ 2023, 2024 ಮತ್ತು 2025ರಲ್ಲಿ ನಡೆದ ಸಭೆಗಳಲ್ಲಿ ಹಲವು ನಿರ್ಣಯಗಳನ್ನು ಕೈಗೊಳ್ಳಲಾಗಿದ್ದರೂ, ಅವುಗಳ ಅನುಷ್ಠಾನದಲ್ಲಿ ವಿಳಂಬವಾಗಿರುವ ವಿಷಯವೂ ಸಭೆಯಲ್ಲಿ ಚರ್ಚೆಗೆ ಬಂದಿತು.



ಈ ಹಿಂದಿನ ನಿರ್ಣಯಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಕಂಖ) ಹಾಗೂ ಸಂಬಂಧಿಸಿದ ಇಲಾಖೆಗಳು ನಿಗದಿತ ಕಾಲಮಿತಿಯೊಳಗೆ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸ ಬೇಕು ಎಂದು ಸಭೆಯ ಅಧ್ಯಕ್ಷರು ಸೂಚಿಸಿದರು.

ಕೇಂದ್ರದಿಂದಲೂ ವಿಶೇಷ ಅನುದಾನಕ್ಕೆ ಒತ್ತಾಯ

ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಪ್ರತಿ ವರ್ಷ 5,000 ಕೋಟಿ ವಿಶೇಷ ಅನುದಾನ ಒದಗಿಸುತ್ತಿದ್ದು, ಇದೇ ಮಾದರಿಯಲ್ಲಿ ಕೇಂದ್ರ ಸರ್ಕಾರವೂ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಪ್ರತ್ಯೇಕ ವಿಶೇಷ ಅನುದಾನ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಲು ಸಮಿತಿಯು ನಿಲುವು ಕೈಗೊಳ್ಳುವಂತೆ ಡಾ. ಅಜಯ್ ಧರ್ಮಸಿಂಗ್ ವಿಷಯ ಮಂಡಿಸಿದರು.

371(ಎ) ಮೂಲಕ ವಿಶೇಷ ಸ್ಥಾನಮಾನ ದೊರೆತಿರುವ ಪ್ರದೇಶಕ್ಕೆ ರಾಜ್ಯ ಸರ್ಕಾರದ ಜೊತೆಗೆ ಕೇಂದ್ರ ಸರ್ಕಾರವೂ ಅಭಿವೃದ್ಧಿ ದೃಷ್ಟಿಯಿಂದ ವಿಶೇಷ ಆರ್ಥಿಕ ನೆರವು ನೀಡಬೇಕು. ಈ ಕುರಿತು ಕೇಂದ್ರದ ಮೇಲೆ ಒತ್ತಡ ತರಬೇಕಾಗಿದೆ,? ಎಂದು ಸಚಿವರು ಅಭಿಪ್ರಾಯಪಟ್ಟರು.

ಅನುದಾನ ಹಂಚಿಕೆಯಲ್ಲಿ ಕಲ್ಯಾಣ ಕರ್ನಾಟಕಕ್ಕೆ ಸಮಾನ ಪಾಲು

ಬೆಂಗಳೂರು, ಮೈಸೂರು ಮತ್ತು ಬೆಳಗಾವಿ ವಿಭಾಗಗಳಿಗೆ ವಿವಿಧ ಇಲಾಖೆಗಳ ಮೂಲಕ ನೀಡಲಾಗುತ್ತಿರುವ ಅಭಿವೃದ್ಧಿ ಅನುದಾನದ ಅನುಪಾತದಲ್ಲಿಯೇ ಕಲ್ಯಾಣ ಕರ್ನಾಟಕ ವಿಭಾಗಕ್ಕೂ ಆಯಾ ಇಲಾಖಾವಾರು ಸಮಾನ ಅನುದಾನ ಹಂಚಿಕೆ ಆಗಬೇಕು ಎಂದು ಸಚಿವರು ಸಭೆಯ ಗಮನಕ್ಕೆ ತಂದರು.

ಉಳಿದ ವಿಭಾಗಗಳಿಗೆ ಆಯಾ ಇಲಾಖಾವಾರು ಪ್ರತಿ ವರ್ಷ ಒದಗಿಸುವಷ್ಟೇ ಅನುದಾನವನ್ನು ಕಲ್ಯಾಣ ಕರ್ನಾಟಕ ವಿಭಾಗಕ್ಕೂ ಒದಗಿಸಿ ತದನಂತರ ಹೆಚ್ಚುವರಿಯಾಗಿ ವಿಶೇಷ ಅನುದಾನ ಒದಗಿಸಿದಲ್ಲಿ ಮಾತ್ರ ಸಮಾನ ಅಭಿವೃದ್ಧಿ ಸಾಧಿಸಲು ಸಾಧ್ಯವಿದ್ದು ಎಲ್ಲಾ ಇಲಾಖಾ ಅಧಿಕಾರಿಗಳು ಈ ಕುರಿತು ಕ್ರಮವಹಿಸಲು ಸಮಿತಿ ನಿರ್ದೇಶನ ನೀಡಲು ಕೋರಿದರು. ವಿವಿಧ ಇಲಾಖೆಗಳು ಕಲ್ಯಾಣ ಕರ್ನಾಟಕದಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳಿಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನವನ್ನು ಬಳಕೆಮಾಡಲು ಕಡ್ಡಾಯವಾಗಿ ಮಂಡಳಿಯ ಗಮನಕ್ಕೆ ತಂದು ಸಂಪುಟ ಸಭೆಯಲ್ಲಿ ಮಂಡಿಸಲು ಕ್ರಮವಹಿಸಲು ಸೂಕ್ತ ನಿರ್ದೇಶನ ನೀಡಲು ಸಭೆಯಲ್ಲಿ ಅಭಿಪ್ರಾಯ ಮಂಡಿಸಿದರು.

ಶಿಕ್ಷಕರು, ಆರೋಗ್ಯ ಕೇಂದ್ರಗಳು ಮತ್ತು ಸಿಬ್ಬಂದಿ ಹಂಚಿಕೆಯಲ್ಲಿ ಸಮಾನತೆ

ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಸಂಬಂಧಿಸಿದಂತೆ, ರಾಜ್ಯದ ಬೆಂಗಳೂರು, ಮೈಸೂರು ಮತ್ತು ಬೆಳಗಾವಿ ವಿಭಾಗಗಳಿಗೆ ಯಾವ ಅನುಪಾತದಲ್ಲಿ ಶಿಕ್ಷಕರ ಹುದ್ದೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಹಂಚಿಕೆ ಮಾಡಲಾಗುತ್ತಿದೆಯೋ, ಅದೇ ಅನುಪಾತದಲ್ಲಿ ಕಲ್ಯಾಣ ಕರ್ನಾಟಕ ವಿಭಾಗಕ್ಕೂ ಹಂಚಿಕೆ ಆಗಬೇಕು ಎಂದು ಡಾ. ಅಜಯ್ ಧರ್ಮಸಿಂಗ್ ಒತ್ತಾಯಿಸಿದರು. ಇದೇ ತತ್ವವನ್ನು ಇತರ ಇಲಾಖೆಗಳ ಸಿಬ್ಬಂದಿ ಮತ್ತು ಹುದ್ದೆಗಳ ಹಂಚಿಕೆಯಲ್ಲಿ ಕೂಡ ಅನುಸರಿಸಿ, ಕಲ್ಯಾಣ ಕರ್ನಾಟಕಕ್ಕೆ ಸಮಾನ ಅವಕಾಶ ಕಲ್ಪಿಸುವಂತೆ ಅಗತ್ಯ ನಿರ್ದೇಶನ ನೀಡಲು ಸಮಿತಿಯಲ್ಲಿ ನಿರ್ಣಯ ಕೈಗೊಳ್ಳಬೇಕೆಂದು ಅವರು ವಿಷಯ ಮಂಡಿಸಿದರು. 371(ಎ)ಯ ಉದ್ದೇಶ ಕೇವಲ ಉದ್ಯೋಗ ಮೀಸಲಾತಿಗೆ ಸೀಮಿತವಲ್ಲ. ಕಲ್ಯಾಣ ಕರ್ನಾಟಕದ ಶಿಕ್ಷಣ, ಆರೋಗ್ಯ, ಆಡಳಿತ, ಮೂಲಸೌಕರ್ಯ ಮತ್ತು ಅಭಿವೃದ್ಧಿ ಅವಕಾಶಗಳಲ್ಲಿ ಇರುವ ಅಂತರವನ್ನು ಕಡಿಮೆ ಮಾಡಿ, ರಾಜ್ಯದ ಇತರೆ ಭಾಗಗಳ ಸಮಾನ ಮಟ್ಟಕ್ಕೆ ತರುವುದು ಅದರ ಮೂಲ ಆಶಯವಾಗಿದೆ. ಆ ಆಶಯವನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೊಳಿಸಬೇಕು,? ಎಂದು ಡಾ. ಅಜಯ್ ಧರ್ಮಸಿಂಗ್ ಹೇಳಿದರು. ಸಭೆಯಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಸಚಿವ ಸಂಪುಟ ಉಪಸಮಿತಿಯ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಐಆರ್‌ನಲ್ಲಿ ಕೈಬಿಟ್ಟ ಮತದಾರರಿಗೆ ಮತ್ತೊಂದು ಅವಕಾಶ

ಅಂತಿಮ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ಚುನಾವಣಾ ಆಯೋಗದಿಂದ ಮಹತ್ವದ ಆದೇಶ

ನವದೆಹಲಿ,ನ.6: ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ವಿವಿಧ ಕಾರಣಗಳಿಂದ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗದ ಮತದಾರರಿಗೆ ಅಂತಿಮ ಪಟ್ಟಿಯಲ್ಲಿ ಹೆಸರು ಸೇರಿಸಿಕೊಳ್ಳಲು ಕೇಂದ್ರ ಚುನಾವಣಾ ಆಯೋಗ ಮತ್ತೊಂದು ಅವಕಾಶ ಕಲ್ಪಿಸಿದೆ.



ಗೈರುಹಾಜರಿ, ಸ್ಥಳಾಂತರ, ಮರಣ ಮತ್ತು ನಕಲಿ ನೋಂದಣಿ ಕಾರಣಗಳಿಂದ ಗುರುತಿಸಲ್ಪಟ್ಟು, ಗಣತಿ ನಮೂನೆಗಳನ್ನು ಹಿಂದಿರುಗಿಸದ ಹಿನ್ನೆಲೆಯಲ್ಲಿ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗದವರಿಗೆ ಈ ಅವಕಾಶ ನೀಡಲಾಗಿದೆ. ಈ ಸಂಬಂಧ ಚುನಾವಣಾ ಆಯೋಗ ಆದೇಶ ಹೊರಡಿಸಿದ್ದು, ದೆಹಲಿ ಸೇರಿದಂತೆ ಮಹಾರಾಷ್ಟ್ರ, ಹರಿಯಾಣ, ಆಂಧ್ರಪ್ರದೇಶ, ಜಾರ್ಖಂಡ್, ತೆಲಂಗಾಣ ಮತ್ತು ನಾಗಾಲ್ಯಾಂಡ್ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

ಆಯೋಗದ ನಿರ್ದೇಶನದಂತೆ, ಮತದಾರರ ಪಟ್ಟಿಯಿಂದ ಕೈಬಿಟ್ಟವರ ಬೂತ್‌ವಾರು ಪಟ್ಟಿಯನ್ನು ಮತ್ತೊಮ್ಮೆ ಪ್ರಕಟಿಸಬೇಕು. ಮತಗಟ್ಟೆಗಳ ಸೂಚನಾ ಫಲಕ, ಪಂಚಾಯತ್ ಭವನ, ನಗರ ಸ್ಥಳೀಯ ಸಂಸ್ಥೆಗಳ ಕಚೇರಿ ಹಾಗೂ ಬ್ಲಾಕ್ ಅಭಿವೃದ್ಧಿ ಅಧಿಕಾರಿಗಳ ಕಚೇರಿಗಳಲ್ಲಿ ಈ ಪಟ್ಟಿಯನ್ನು ಪ್ರದರ್ಶಿಸಬೇಕು. ಅಲ್ಲದೆ, ಹೆಸರು ಸೇರ್ಪಡೆಯಾಗದಿರುವ ಸಂಭವನೀಯ ಕಾರಣಗಳೊಂದಿಗೆ ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್‌ನಲ್ಲೂ ಓದಲು ಸಾಧ್ಯವಾಗುವ ಪಿಡಿಎಫ್ ರೂಪದಲ್ಲಿ ಪ್ರಕಟಿಸಬೇಕು.

ಕೈಬಿಟ್ಟ ಮತದಾರರು ತಮ್ಮ ಪ್ರಸ್ತುತ ಸಾಮಾನ್ಯ ವಾಸಸ್ಥಳಕ್ಕೆ ಸಂಬಂಧಿಸಿದ ಚುನಾವಣಾ ನೋಂದಣಾಧಿಕಾರಿ ಅಥವಾ ಸಹಾಯಕ ಚುನಾವಣಾ ನೋಂದಣಾಧಿಕಾರಿಗೆ ಭರ್ತಿ ಮಾಡಿದ ಗಣತಿ ನಮೂನೆಯನ್ನು ಸಲ್ಲಿಸಬಹುದು. ಬಿಎಲ್‌ಒಗಳ ಮೂಲಕ ಮತದಾರರನ್ನು ಸಂಪರ್ಕಿಸಿ ನಮೂನೆ ತಲುಪಿಸಲು ಸೂಚಿಸಲಾಗಿದೆ. ವಾಟ್ಸ್‌ಆ್ಯಪ್, ಇ–ಮೇಲ್ ಮತ್ತು ಎಸ್‌ಎಂಎಸ್ ಮೂಲಕವೂ ನಮೂನೆ ಕಳುಹಿಸಬಹುದು. ಮತದಾರರು ಚುನಾವಣಾ ಆಯೋಗದ ವೆಬ್‌ಸೈಟ್ ಅಥವಾ ಇಸಿ–ಐನೆಟ್ ಆ್ಯಪ್ ಮೂಲಕ ತಮ್ಮ ಹಿಂದಿನ ಇಪಿಐಸಿ ಸಂಖ್ಯೆಯನ್ನು ನಮೂದಿಸಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡುವ ಅವಕಾಶವೂ ಇದೆ.

ಹಿಂದಿನ ನಿವಾಸದಲ್ಲೇ ಮುಂದುವರಿದಿರುವ ಮತದಾರರು ಗಣತಿ ನಮೂನೆಯೊಂದಿಗೆ ಈ ಹಿಂದೆ ನಮೂನೆ ಸಲ್ಲಿಸಲು ಸಾಧ್ಯವಾಗದ ಕಾರಣವನ್ನು ವಿವರಿಸುವ ಹೇಳಿಕೆಯನ್ನು ಸಲ್ಲಿಸಬೇಕು. ರಾಜ್ಯದೊಳಗೆ ಬೇರೆ ಸ್ಥಳಕ್ಕೆ ಸ್ಥಳಾಂತರಗೊಂಡಿರುವವರು ಹೊಸ ವಿಳಾಸ ಮತ್ತು ವಿಧಾನಸಭಾ ಕ್ಷೇತ್ರದ ವಿವರಗಳೊಂದಿಗೆ ಅಗತ್ಯ ವಿಳಾಸದ ದಾಖಲೆಗಳನ್ನು ಸಲ್ಲಿಸಬೇಕು. ಇಂತಹ ಪ್ರಕರಣಗಳಲ್ಲಿ ಫಾರ್ಮ್–8 ಸಲ್ಲಿಸುವ ಅಗತ್ಯವಿಲ್ಲ ಎಂದು ಆಯೋಗ ಸ್ಪಷ್ಟಪಡಿಸಿದೆ. ವಸತಿರಹಿತರಿಗೆ ವಿಳಾಸದ ಯಾವುದೇ ದಾಖಲೆ ಲಭ್ಯವಿಲ್ಲದಿದ್ದರೆ ಬಿಎಲ್‌ಒ ಸಲ್ಲಿಸುವ ಕ್ಷೇತ್ರ ಪರಿಶೀಲನಾ ವರದಿಯನ್ನೇ ವಿಳಾಸದ ಪುರಾವೆಯಾಗಿ ಪರಿಗಣಿಸಬಹುದು. ಈಗಾಗಲೇ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಹೊಸದಾಗಿ ಮತದಾರರ ನೋಂದಣಿಗಾಗಿ ಫಾರ್ಮ್–6 ಸಲ್ಲಿಸಿರುವವರು ಮತ್ತೊಮ್ಮೆ ಗಣತಿ ನಮೂನೆ ಮತ್ತು ಹೇಳಿಕೆ ಸಲ್ಲಿಸುವ ಅಗತ್ಯವಿಲ್ಲ. ಸ್ವೀಕರಿಸಿದ ಅರ್ಜಿಗಳನ್ನು ಸಂಬಂಧಪಟ್ಟ ಚುನಾವಣಾ ನೋಂದಣಾಧಿಕಾರಿಗಳು ಪರಿಶೀಲಿಸಿ, ಅರ್ಹತೆ ಮತ್ತು ಸಾಮಾನ್ಯ ವಾಸಸ್ಥಳವನ್ನು ಖಚಿತಪಡಿಸಿಕೊಂಡ ನಂತರ ನಿಯಮಾನುಸಾರ ವಿಲೇವಾರಿ ಮಾಡಲಿದ್ದಾರೆ. ಸ್ವೀಕೃತ ಅರ್ಜಿಗಳನ್ನು ಪ್ರತ್ಯೇಕವಾಗಿ ಇರಿಸಿ ಅಂತಿಮ ಮತದಾರರ ಪಟ್ಟಿಯಲ್ಲಿ ಸೇರಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಈ ಸಂದರ್ಭದಲ್ಲಿ ಎಸ್‌ಐಆರ್‌ಗೂ ಮುನ್ನ ಇದ್ದ ಅದೇ ಮತದಾರರ ಗುರುತಿನ ಚೀಟಿ ಸಂಖ್ಯೆ ಮರುನೀಡಲಾಗುತ್ತದೆ. ಈ ಅವಕಾಶದ ಕುರಿತು ಮತದಾರರಿಗೆ ವ್ಯಾಪಕ ಪ್ರಚಾರದ ಮೂಲಕ ಮಾಹಿತಿ ತಲುಪಿಸಬೇಕು. ಸಾಮಾಜಿಕ ಜಾಲತಾಣ, ಪತ್ರಿಕೆ, ಅಧಿಕೃತ ವೆಬ್‌ಸೈಟ್ ಹಾಗೂ ಧ್ವನಿವರ್ಧಕಗಳ ಮೂಲಕ ಜಾಗೃತಿ ಮೂಡಿಸಬೇಕು. ಅರ್ಹ ಮತದಾರರು ಅಂತಿಮ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೊಳಿಸುವ ಅವಕಾಶದಿಂದ ವಂಚಿತರಾಗದಂತೆ ಮೇಲ್ವಿಚಾರಣಾ ವ್ಯವಸ್ಥೆ ರೂಪಿಸಬೇಕು ಎಂದು ಚುನಾವಣಾ ಆಯೋಗ ನಿರ್ದೇಶಿಸಿದೆ.

ಕರ್ಮಭೂಮಿ ಎಕ್ಸ್‌ಪ್ರೆಸ್ ರೈಲಿಗೆ ಬೆಂಕಿ ಹೊತ್ತಿ ಉರಿದ ನಾಲ್ಕು ಬೋಗಿಗಳು

ಸರಾಯ್ ಬಂಜಾರ್ (ಪಂಜಾಬ್), ನ.6: ಪಂಜಾಬ್‌ನ ಸರಾಯ್ ಬಂಜಾರ ರೈಲು ನಿಲ್ದಾಣದ ಸಮೀಪ ಶುಕ್ರವಾರ 'ಕರ್ಮಭೂಮಿ ಎಕ್ಸ್‌ಪ್ರೆಸ್' ರೈಲಿನ ನಾಲ್ಕು ಬೋಗಿಗಳಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಪ್ರಯಾಣಿಕರಲ್ಲಿ ತೀವ್ರ ಆತಂಕಕ್ಕೆ ಕಾರಣವಾಯಿತು. ಈ ಘಟನೆಯಲ್ಲಿ ಯಾವುದೇ ಪ್ರಾಣಹಾನಿಯಾದ ವರದಿಯಾಗಿಲ್ಲ.



ಲಭ್ಯವಿರುವ ಮಾಹಿತಿಯ ಪ್ರಕಾರ, ಅಮೃತಸರ ಮತ್ತು ಹೊಸ ಜಲ್ಪೈಗುರಿ ನಡುವೆ ಸಂಚರಿಸುವ 12508 ಸಂಖ್ಯೆಯ 'ಕರ್ಮಭೂಮಿ ಎಕ್ಸ್‌ಪ್ರೆಸ್' ರೈಲಿನ, ಎಂಜಿನ್‌ನಿಂದ ಐದನೇ ಬೋಗಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಮೂಲಗಳ ಪ್ರಕಾರ, ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರಬಹುದು ಎಂದು ಶಂಕಿಸಲಾಗಿದೆ. ಆದರೆ, ಬೆಂಕಿಗೆ ನಿಖರವಾದ ಕಾರಣವೇನು ಎಂಬುದು ಇನ್ನೂ ಅಧಿಕೃತವಾಗಿ ದೃಢಪಟ್ಟಿಲ್ಲ. ಘಟನಾ ಸ್ಥಳದ ದೃಶ್ಯಗಳಲ್ಲಿ, ರೈಲಿನ ಹಲವು ಬೋಗಿಗಳಿಂದ ಬೆಂಕಿ ಮತ್ತು ದಟ್ಟ ಹೊಗೆ ಬರುತ್ತಿರುವುದು ಕಂಡುಬಂದಿದೆ.

ರೈಲ್ವೆ ಅಧಿಕಾರಿಗಳು ಮತ್ತು ತುರ್ತು ಸೇವಾಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಶ್ರಮಿಸಿದರು. ಕಾರ್ಯದಲ್ಲಿ ತೊಡಗಿದ್ದಾರೆ.

ದೀಪಾವಳಿಗೆ ಬೆಂಗಳೂರು-ಬೆಳಗಾವಿ ಎರಡು ವಿಶೇಷ ರೈಲು ಸಂಚಾರ

ನವದೆಹಲಿ, ನ.6: ದೀಪಾವಳಿ ಹಬ್ಬದ ವೇಳೆ ರಾಜ್ಯ ರಾಜಧಾನಿ ಬೆಂಗಳೂರು ಮತ್ತು ಗಡಿ ಜಿಲ್ಲೆ ಬೆಳಗಾವಿ ನಡುವೆ ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ ನೈರುತ್ಯ ರೈಲ್ವೆ ವಿಶೇಷ ಎಕ್ಸ್‌ಪ್ರೆಸ್ ರೈಲು ಸೇವೆ ಕಲ್ಪಿಸಿದೆ. ನವೆಂಬರ್ 7 ರಿಂದ 10ರವರೆಗೆ ಈ ವಿಶೇಷ ರೈಲು ಸಂಚರಿಸಲಿದೆ. ಈ ಸಂಬಂಧ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ನೈರುತ್ಯ ರೈಲ್ವೆ ಅಧಿಕಾರಿಗಳ ಜತೆ ಚರ್ಚಿಸಿದ್ದರು. ಸಚಿವರ ಮನವಿಗೆ ಸ್ಪಂದಿಸಿದ ರೈಲ್ವೆ ಇಲಾಖೆ ಎರಡು ವಿಶೇಷ ರೈಲು ಸಂಚಾರ ಕಲ್ಪಿಸಿದೆ. ಬೆಂಗಳೂರಿನ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಹಾಗೂ ಬೆಳಗಾವಿ ನಿಲ್ದಾಣಗಳ ನಡುವೆ ತಲಾ ಎರಡು ಟ್ರಿಪ್‌ಗಳಂತೆ ವಿಶೇಷ ರೈಲು ಸಂಚರಿಸಲಿವೆ. ಬೆಂಗಳೂರು, ದಾವಣಗೆರೆ, ಹಾವೇರಿ, ಹುಬ್ಬಳ್ಳಿ– ಧಾರವಾಡ ಮಾರ್ಗವಾಗಿ ಬೆಳಗಾವಿವರೆಗೆ ಸಂಚರಿಸಲಿದೆ. ನವೆಂಬರ್ 7 ಮತ್ತು 9ರಂದು ಸಂಜೆ 7 ಗಂಟೆಗೆ 06551 ಸಂಖ್ಯೆ ವಿಶೇಷ ರೈಲು ಬೆಂಗಳೂರಿನಿಂದ ಹೊರಟು, ಮರುದಿನ ಬೆಳಗ್ಗೆ 8:25ಕ್ಕೆ ಬೆಳಗಾವಿ ತಲುಪಲಿದೆ. 06552 ಸಂಖ್ಯೆಯ ಮತ್ತೊಂದು ವಿಶೇಷ ರೈಲು ನವೆಂಬರ್ 8 ಮತ್ತು 10ರಂದು ಸಂಜೆ 5.30ಕ್ಕೆ ಬೆಳಗಾವಿಯಿಂದ ಹೊರಟು, ಮರುದಿನ ಬೆಳಗ್ಗೆ 5 ಗಂಟೆಗೆ ಬೆಂಗಳೂರು ತಲುಪಲಿದೆ.



- ನ.7ರಿಂದ 10ರವರೆಗೆ ರಾಜ್ಯದ ಜನರ ಸುಗಮ ಪ್ರಯಾಣಕ್ಕೆ ವಿಶೇಷ ರೈಲು ಸೌಲಭ್ಯ

ಪ್ರಯಾಣಿಕರ ಅನುಕೂಲಕ್ಕಾಗಿ ಸಂಚರಿಸಲಿರುವ ಈ ವಿಶೇಷ ರೈಲು ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ಎಸ್‌ಎಂಎಂ ಹಾವೇರಿ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಲೋಂಡಾ ಹಾಗೂ ಖಾನಾಪುರ ರೈಲ್ವೆ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಲಿದೆ.

ಎನ್‌ಸಿಪಿ ವಿಲೀನಕ್ಕೆ ವೇಗ ಪಡೆದ ಮಾತುಕತೆ

- ವಿಲೀನಕ್ಕೆ ಸುನೇತ್ರಾ, ಪಾರ್ಥ್ ಪವಾರ್ ವಿರೋಧ
- ಶರದ್ ಪವಾರ್ ಎನ್‌ಡಿಎಗೆ ಕರೆತರಲು ಬಿಜೆಪಿ ಪ್ರಯತ್ನ

ಮುಂಬೈ,ನ.6: ಮಹಾರಾಷ್ಟ್ರ ರಾಜಕಾರಣದಲ್ಲಿ ಮತ್ತೆ ರಾಷ್ಟ್ರೀಯವಾದಿ ಕಾಂಗ್ರೆಸ್ ಪಕ್ಷದ ಎರಡು ಬಣಗಳ ವಿಲೀನದ ಚರ್ಚೆ ಮುನ್ನೆಲೆಗೆ ಬಂದಿದೆ. ಶರದ್ ಪವಾರ್ ನೇತೃತ್ವದ ಎನ್‌ಸಿಪಿ ಮತ್ತು ದಿವಂಗತ ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ಬಣಗಳನ್ನು ಒಗ್ಗೂಡಿಸಿ, ಒಗ್ಗಟ್ಟಿನ ಪಕ್ಷವನ್ನು ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟಕ್ಕೆ ಕರೆತರುವ ಪ್ರಯತ್ನಗಳು ನಡೆಯುತ್ತಿವೆ. ಆದರೆ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಸುನೇತ್ರಾ ಪವಾರ್ ಮತ್ತು ಅವರ ಪುತ್ರ ಪಾರ್ಥ್ ಪವಾರ್ ಈ ವಿಲೀನ ಪ್ರಸ್ತಾಪಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಎನ್‌ಸಿಪಿಯಲ್ಲಿನ ಆಂತರಿಕ ಭಿನ್ನಾಭಿಪ್ರಾಯಗಳ ನಡುವೆಯೇ ಪಕ್ಷದ ಹಿರಿಯ ನಾಯಕರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದಾರೆ. ಪ್ರಫುಲ್ ಪಟೇಲ್, ಸುನಿಲ್ ತತ್ಕರೆ, ಛಗನ್ ಭುಜಬಲ್, ಹಸನ್ ಮುಶ್ರಿಫ್ ಸೇರಿದಂತೆ ಹಲವು ನಾಯಕರು ಈ ಸಭೆಯಲ್ಲಿ ಭಾಗವಹಿಸಿದ್ದರು. ಸುನೇತ್ರಾ ಮತ್ತು ಪಾರ್ಥ್ ಪವಾರ್ ಸಭೆಯಲ್ಲಿ ಭಾಗವಹಿಸಿರಲಿಲ್ಲ.

ಪಕ್ಷದ ನಿರ್ಧಾರಗಳಲ್ಲಿ ಪಾರ್ಥ್ ಪವಾರ್ ಅವರ ಹೆಚ್ಚುತ್ತಿರುವ ಹಸ್ತಕ್ಷೇಪ ಹಾಗೂ ಹಿರಿಯ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ ಎಂಬ ಅಸಮಾಧಾನವನ್ನು ಹಿರಿಯ ನಾಯಕರು ಅಮಿತ್ ಶಾ ಅವರ ಗಮನಕ್ಕೆ ತಂದಿದ್ದಾರೆ ಎನ್ನಲಾಗಿದೆ. ಪಕ್ಷದ ಸಂಘಟನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಆಂತರಿಕ ಭಿನ್ನಾಭಿಪ್ರಾಯಗಳನ್ನು ಬಗೆಹರಿಸಿಕೊಳ್ಳುವಂತೆ ಅಮಿತ್ ಶಾ ಸೂಚಿಸಿದ್ದಾರೆ ಎನ್ನಲಾಗಿದೆ. ಇನ್ನೊಂದೆಡೆ, ಶರದ್ ಪವಾರ್ ಬಣದೊಂದಿಗೆ ವಿಲೀನವಾದರೆ ಪಕ್ಷದ ನಾಯಕತ್ವ ಮತ್ತು ಅಧಿಕಾರ ಹಂಚಿಕೆಯಲ್ಲಿ ತಮ್ಮ ಪ್ರಭಾವ ಕಡಿಮೆಯಾಗಬಹುದು ಎಂಬ ಕಾರಣಕ್ಕೆ ಸುನೇತ್ರಾ ಮತ್ತು ಪಾರ್ಥ್ ಪವಾರ್ ಈ ಪ್ರಸ್ತಾಪಕ್ಕೆ ಒಲವು ತೋರುತ್ತಿಲ್ಲ ಎನ್ನಲಾಗಿದೆ. ವಿಲೀನದ ವಿಚಾರವಾಗಿ ಎರಡೂ ಬಣಗಳಲ್ಲಿ ಇನ್ನೂ ಒಮ್ಮತ ಮೂಡಿಲ್ಲ. ಶರದ್ ಪವಾರ್ ಅವರನ್ನು ಮತ್ತೆ ಎನ್‌ಡಿಎ ಮೈತ್ರಿಕೂಟಕ್ಕೆ ಕರೆತರುವ ಮೂಲಕ ಮಹಾರಾಷ್ಟ್ರದಲ್ಲಿ ಮೈತ್ರಿಕೂಟವನ್ನು ಮತ್ತಷ್ಟು ಬಲಪಡಿಸುವುದು ಬಿಜೆಪಿಯ ಉದ್ದೇಶ ಎಂದು ರಾಜಕೀಯ ವಲಯದಲ್ಲಿ ಚರ್ಚೆಯಾಗುತ್ತಿದೆ. ಆದರೆ ಶರದ್ ಪವಾರ್ ಬಣದಿಂದಲೂ ವಿಲೀನ ಅಥವಾ ಎನ್‌ಡಿಎ ಸೇರ್ಪಡೆ ಕುರಿತು ಅಂತಿಮ ನಿರ್ಧಾರ ಪ್ರಕಟವಾಗಿಲ್ಲ.

ಬಿಎಚ್‌ಇಎಲ್‌ಗೆ 1500 ಕೋಟಿ ಲಾಭ

ಬೆಂಗಳೂರು, ನ.6: ಕೇಂದ್ರದ ಬೃಹತ್ ಕೈಗಾರಿಕೆ ಸಚಿವನಾಗಿ ನಾನು ಅಧಿಕಾರ ವಹಿಸಿಕೊಂಡಾಗ ಬಿಎಚ್‌ಇಎಲ್ ಕಾರ್ಖಾನೆಯ ಲಾಭವು 200 ಕೋಟಿಯಷ್ಟಿತ್ತು. ಪ್ರಸಕ್ತ ಸಾಲಿನಲ್ಲಿ ಅದರ ಲಾಭದ ಪ್ರಮಾಣ 1500 ಕೋಟಿ ಮೀರಿದೆ ಎಂದು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.



ಕಾರ್ಖಾನೆಯಲ್ಲಿ ಬಿಎಚ್‌ಇಎಲ್ ಕನ್ನಡ ಹಿತರಕ್ಷಣಾ ಸಮಿತಿ ಏರ್ಪಡಿಸಿದ್ದ 71ನೆ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರದ ಅಧೀನದಲ್ಲಿರುವ ಸಾರ್ವಜನಿಕ ಸ್ವಾಮ್ಯದ ಕೈಗಾರಿಕೆಗಳ ಬೆಳವಣಿಗೆ ಆಶಾದಾಯಕವಾಗಿದೆ. ಈ ಪೈಕಿ ಬಿಎಚ್‌ಇಎಲ್ ಕಾರ್ಖಾನೆಯ ಬೆಳವಣಿಗೆ ಉತ್ತಮವಾಗಿದೆ. ರಾಷ್ಟ್ರದ ವ್ಯೂಹಾತ್ಮಕ ಯಂತ್ರೋಪಕರಣ ತಯಾರಿಕಾ ಕಾರ್ಖಾನೆಗಳಲ್ಲಿ ಒಂದಾಗಿದ್ದು, ಈಗ ಸದೃಢವಾಗಿ ಲಾಭದ ಹಾದಿಯಲಿ ಮುನ್ನಡೆಯುತ್ತಿದೆ. ಒಂದು ಹಂತದಲ್ಲಿ ಬಿಎಚ್‌ಇಎಲ್ ಕಾರ್ಖಾನೆ ಕುಸಿತದತ್ತ ಸಾಗುತ್ತಿತ್ತು. ಎಚ್ಚರಿಕೆ ವಹಿಸಿದ ನಂತರ ಲಾಭವು 200 ಕೋಟಿ ಲಾಭದಿಂದ 1500 ಕೋಟಿಗೆ ಬಂದಿದೆ. 3000 ಕೋಟಿ ಲಾಭ ಗಳಿಸುವ ಗುರಿಯೊಂದಿಗೆ ನಾವು ಕೆಲಸ ಮಾಡುತ್ತಿದ್ದೇವೆ. ಇದು ನಮ್ಮ ಶ್ರೇಯಸ್ಸು ಎನ್ನುವುದಕ್ಕಿಂತ ಕಾರ್ಖಾನೆಯಲ್ಲಿ ದುಡಿಮೆ ಮಾಡುವ ಕಾರ್ಮಿಕರ ಶ್ರೇಯಸ್ಸು ಎಂದು ಹೇಳಲು ಬಯಸುತ್ತೇನೆ. ಈ ಕಾರ್ಖಾನೆಯಲ್ಲಿ 24,000 ನೌಕರರು ಕೆಲಸ ಮಾಡುತ್ತಿದ್ದಾರೆ. ಇದರ ಪ್ರಮಾಣ ದ್ವಿಗುಣ ಆಗಬೇಕು. ಅಂದರೆ, ಕಾರ್ಮಿಕರ ಸಂಖ್ಯೆ ಇನ್ನೂ ಹೆಚ್ಚಾಗಬೇಕು ಎಂದ ಹೇಳಿದರು.

ಕೇಂದ್ರ ಸ್ವಾಮ್ಯದ ಕಾರ್ಖಾನೆಗಳು ಕನ್ನಡ ಭಾಗವಾಗಿ, ಈ ನಾಡಿನ ಪರಂಪರೆಯ ಭಾಗವಾಗ ಕೆಲಸ ಮಾಡುತ್ತಿವೆ. ಉದಾಹರಣೆಗೆ ಹೇಳುವುದಾದರೆ ಈಗ ನಾನು ನಿಂತಿರುವ ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಕಾರ್ಖಾನೆಯಲ್ಲಿ ಕನ್ನಡಿಗರಿಗೆ ಹೆಚ್ಚು ಅವಕಾಶ ನೀಡಲಾಗಿದೆ. ಪ್ರಮುಖ ಹುದ್ದೆಗಳಲ್ಲಿಯೂ ಕೆಲಸ ಮಾಡುತ್ತಾ ನೀತಿ ನಿರೂಪಣೆಯಲ್ಲಿ ಕೂಡ ಮುಂಚೂಣಿಯಲ್ಲಿ ನಿಂತಿದ್ದಾರೆ ಎಂದು ಸಚಿವರು ಹೇಳಿದರು. ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತ ವೈದ್ಯೆ ಡಾ. ವಿಜಯಲಕ್ಷ್ಮೀ ದೇಶಮಾನೆ, ಸಾಹಿತಿ ಮತ್ತು ನಿರೂಪಕ ನಾ.ಸೋಮೇಶ್ವರ, ಡಾ.ರಾಹುಲ್ ದೇವರಾಜ್, ಬಿಎಚ್‌ಇಎಲ್ ಕನ್ನಡ ಹಿತರಕ್ಷಣಾ ಸಮಿತಿ ಗೌರವಾಧ್ಯಕ್ಷ ಸಾ.ರಾ. ಗೋವಿಂದು ಮುಂತಾದವರು ಭಾಗಿಯಾಗಿದ್ದರು

ಎಚ್‌ಎಂಟಿ ಕಾರ್ಖಾನೆ ಪುನಶ್ಚೇತನದತ್ತ ಹೆಜ್ಜೆ

ಹೆಚ್‌ಎಂಟಿ ಕಾರ್ಖಾನೆಯನ್ನು ಪುನಶ್ಚೇತನ ಮಾಡುವ ಕೆಲಸ ಮಾಡ್ತಿದ್ದೇವೆ. ಈಗಾಗಲೇ ಹಲವಾರು ಸಭೆಗಳನ್ನು ನಡೆಸಿ ಮಹತ್ವದ ನಿರ್ಧಾರಗಳನ್ನು ಕೈಗೊಂಡಿದ್ದೇವೆ. ಯೋಜನಾ ಆಯೋಗದ ಸದಸ್ಯರಾದ ವಿ.ಕೆ. ಸಾರಸ್ವತ್ ಅವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿ ಶಿಫಾರಸುಗಳನ್ನು ಸ್ವೀಕರಿಸಲಾಗಿದೆ. ಅದಷ್ಟು ಬೇಗ ಈ ಕಾರ್ಖಾನೆಯ ಪುನಶ್ಚೇತನಕ್ಕೆ ನಿರ್ಧಾರ ಕೈಗೊಳ್ಳುಲಾಗುವುದು.

ಪ್ರಧಾನಿಗಳೂ ಈ ಬಗ್ಗೆ ಹಲವಾರು ಮಹತ್ವದ ಸಲಹೆ, ಸೂಚನೆಗಳನ್ನು ನೀಡಿದ್ದಾರೆ ಎಂದು ಎಂದು ಎಚ್.ಡಿ. ಕುಮಾರಸ್ವಾಮಿ ಹೇಳಿದರು.

ರಾಜ್ಯಪಾಲರ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಬಿಜೆಪಿ ಟ್ಯಾಗ್: ರಾಷ್ಟ್ರಪತಿಗೆ ದೂರು

ನವದೆಹಲಿ, ನ. 6: ಕೇರಳದ ನೂತನ ರಾಜ್ಯಪಾಲರಾದ ಓಂ ಪ್ರಕಾಶ್ ಮಾಥುರ್ ಅವರ ಅಧಿಕೃತ ಇನ್ಸ್ಟಾಗ್ರಾಮ್ ಹ್ಯಾಂಡಲ್‌ನಲ್ಲಿ ಬಿಜೆಪಿ ಹೆಸರನ್ನು ಬಳಸಲಾಗಿದೆ ಎಂದು ಆರೋಪಿಸಿ, ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಐಎಫ್‌ಐ) ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ದೂರು ಸಲ್ಲಿಸಿದೆ. ಎಸ್‌ಎಫ್‌ಐ ತಿರುವನಂತಪುರಂ ಜಿಲ್ಲಾ ಕಾರ್ಯದರ್ಶಿ ನಂದನ್ ಎಂ. ಎ. ಅವರು ಇಮೇಲ್ ಮೂಲಕ ರಾಷ್ಟ್ರಪತಿಗೆ ಈ ದೂರನ್ನು ರವಾನಿಸಿದ್ದಾರೆ. ರಾಜ್ಯಪಾಲ ಓಂ ಪ್ರಕಾಶ್ ಮಾಥುರ್ ಅವರ ಇನ್ಸ್ಟಾಗ್ರಾಮ್ ಖಾತೆಯ ಬಳಕೆದಾರ ಹೆಸರು @ommathurbjp ಎಂದಿದ್ದು, ಇದು ರಾಜಕೀಯ ಪಕ್ಷವೊಂದರ ಸಂಕೇತವನ್ನು ಒಳಗೊಂಡಿದೆ ಎಂದು ಎಸ್‌ಎಫ್‌ಐ ದೂರಿದೆ. ರಾಜ್ಯಪಾಲರ ಹುದ್ದೆಯು ಸಂವಿಧಾನಿಕವಾದದ್ದು ಮತ್ತು ರಾಜಕೀಯ ತಟಸ್ಥತೆಯನ್ನು ಕಾಯ್ದುಕೊಳ್ಳಬೇಕಾದ ಸ್ಥಾನವಾಗಿದೆ. ರಾಜ್ಯದ ಉನ್ನತ ಸ್ಥಾನದಲ್ಲಿರುವ ವ್ಯಕ್ತಿಯು ಸಾಮಾಜಿಕ ಜಾಲತಾಣಗಳಲ್ಲಿ ನಿರ್ದಿಷ್ಟ ರಾಜಕೀಯ ಪಕ್ಷದ ಹೆಸರನ್ನು ಇಟ್ಟುಕೊಳ್ಳುವುದು ಸಂವಿಧಾನದ ಮೌಲ್ಯಗಳಿಗೆ ಮತ್ತು ರಾಜಕೀಯ ತಟಸ್ಥತೆಯ ತತ್ವಕ್ಕೆ ವಿರುದ್ಧವಾಗಿದೆ ಎಂದು ದೂರಿನಲ್ಲಿ ಎಸ್‌ಎಫ್‌ಐ ಪ್ರತಿಪಾದಿಸಿದೆ. ಈ ವಿಷಯದಲ್ಲಿ ರಾಷ್ಟ್ರಪತಿಯವರು ತಕ್ಷಣವೇ ಮಧ್ಯಪ್ರವೇಶಿಸಿ ಸಂವಿಧಾನಿಕ ಹುದ್ದೆಯ ಘನತೆಯನ್ನು ಎತ್ತಿಹಿಡಿಯಬೇಕು ಎಂದು ಆಗ್ರಹಿಸಲಾಗಿದೆ. ರಾಜಸ್ಥಾನ ಮೂಲದ ಹಿರಿಯ ಬಿಜೆಪಿ ನಾಯಕರಾಗಿದ್ದ ಓಂ ಪ್ರಕಾಶ್ ಮಾಥುರ್ ಅವರು ಇತ್ತೀಚೆಗಷ್ಟೇ ಕೇರಳದ 29ನೇ ರಾಜ್ಯಪಾಲರಾಗಿ ಪ್ರಮಾಣವಚನ ಸ್ವೀಕರಿಸಿದ್ದರು. ಈ ಹಿಂದೆ ಸಿಕ್ಕಿಂ ರಾಜ್ಯಪಾಲರಾಗಿಯೂ ಸೇವೆ ಸಲ್ಲಿಸಿದ್ದ ಅವರು, ಆರ್‌ಎಸ್‌ಎಸ್ ಮತ್ತು ಬಿಜೆಪಿಯಲ್ಲಿ ಹಲವು ಜವಾಬ್ದಾರಿಗಳನ್ನು ನಿರ್ವಹಿಸಿದ ಹಿನ್ನೆಲೆ ಹೊಂದಿದ್ದಾರೆ. ಪ್ರಸ್ತುತ ಎಸ್‌ಎಫ್‌ಐ ನೀಡಿದ ದೂರಿಗೆ ಸಂಬಂಧಿಸಿದಂತೆ ರಾಜ್ಯಪಾಲರ ಭವನದಿಂದ (ರಾಜ್ ಭವನ್) ಯಾವುದೇ ಅಧಿಕೃತ ಸ್ಪಷ್ಟನೆ ಅಥವಾ ಪ್ರತಿಕ್ರಿಯೆ ಲಭ್ಯವಾಗಿಲ್ಲ.

ಬಾಲಿವುಡ್ ಹಿರಿಯ ನಟ ಅಮಿತಾಭ್ ಬಚ್ಚನ್ ನಿವಾಸಕ್ಕೆ ಬಾಂಬ್ ಬೆದರಿಕೆ ಇ–ಮೇಲ್: ಮುಂಬೈನಲ್ಲಿ ಭದ್ರತೆ ಹೆಚ್ಚಳ

ಮುಂಬೈ,ನ.6: ಬಾಲಿವುಡ್ ಹಿರಿಯ ನಟ ಅಮಿತಾಭ್ ಬಚ್ಚನ್ ಅವರ ಮುಂಬೈನ ಜುಹು ಪ್ರದೇಶದಲ್ಲಿರುವ ಜಲ್ಸಾ ನಿವಾಸಕ್ಕೆ ಮತ್ತೊಮ್ಮೆ ಬಾಂಬ್ ಸ್ಫೋಟದ ಬೆದರಿಕೆ ಬಂದಿದೆ. ಈ ಸಂಬಂಧ ಕಳುಹಿಸಲಾದ ಇ–ಮೇಲ್‌ನಿಂದ ಮುಂಬೈನಲ್ಲಿ ಭದ್ರತಾ ಎಚ್ಚರಿಕೆ ವಹಿಸಲಾಗಿದೆ.



ನವೆಂಬರ್ 6ರಂದು ಬಾಂಬೆ ಹೈಕೋರ್ಟ್‌ಗೆ ಬಂದಿದ್ದ ಬೆದರಿಕೆ ಇ–ಮೇಲ್ನಲ್ಲಿ ಅಮಿತಾಭ್ ಬಚ್ಚನ್ ಅವರ ನಿವಾಸ ಜಲ್ಸಾ, ಬಾಂಬೇ ಷೇರುಪೇಟೆ (ಬಿಎಸ್‌ಇ) ಹಾಗೂ ವರ್ಲಿ ರೇಸ್ ಕೋರ್ಸ್‌ಗಳನ್ನೂ ಗುರಿಯಾಗಿಸುವುದಾಗಿ ಉಲ್ಲೇಖಿಸಲಾಗಿದೆ. ಬೆದರಿಕೆ ಹಿನ್ನೆಲೆಯಲ್ಲಿ ಮುಂಬೈ ಪೊಲೀಸರು ಹಾಗೂ ಭದ್ರತಾ ಸಂಸ್ಥೆಗಳು ತಕ್ಷಣ ಕಾರ್ಯಪ್ರವೃತ್ತವಾಗಿವೆ. ಅಮಿತಾಭ್ ಬಚ್ಚನ್ ಅವರ ನಿವಾಸ ಸೇರಿದಂತೆ ಇ–ಮೇಲ್‌ನಲ್ಲಿ ಉಲ್ಲೇಖಿಸಲಾದ ಸ್ಥಳಗಳಲ್ಲಿ ತೀವ್ರ ತಪಾಸಣೆ ನಡೆಸಲಾಗಿದೆ. ಆದರೆ ಯಾವುದೇ ಅನುಮಾನಾಸ್ಪದ ವಸ್ತು ಅಥವಾ ಸ್ಫೋಟಕಗಳು ಪತ್ತೆಯಾಗಿಲ್ಲ.

ಇ–ಮೇಲ್ ಕಳುಹಿಸಿದ ವ್ಯಕ್ತಿ ಯಾರು ಎಂಬುದನ್ನು ಪತ್ತೆಹಚ್ಚಲು ಪೊಲೀಸರು ತನಿಖೆ ಆರಂಭಿಸಿದ್ದಾರೆ. ಬೆದರಿಕೆಯ ಸತ್ಯಾಸತ್ಯತೆಯನ್ನು ಪರಿಶೀಲಿಸುವುದರ ಜೊತೆಗೆ ಇ–ಮೇಲ್‌ನ ಮೂಲವನ್ನು ಪತ್ತೆಹಚ್ಚುವ ಕಾರ್ಯವೂ ನಡೆಯುತ್ತಿದೆ.

ಇದಕ್ಕೂ ಮೊದಲು ಅಕ್ಟೋಬರ್ 23ರಂದು ಅಮಿತಾಭ್ ಬಚ್ಚನ್ ಅವರ ನಿವಾಸದ ಮೇಲೆ ದಾಳಿ ನಡೆಸುವ ಬೆದರಿಕೆಯ ಇ–ಮೇಲ್ ಬಂದಿತ್ತು. ಮುಂಬೈ ಮೇಯರ್ ರಿತು ತಾವ್ಡೆ ಅವರ ಕಚೇರಿ ಹಾಗೂ ಗಾಯಕ ದಿಲ್ಜಿತ್ ದೋಸಾಂಜ್ ಅವರ ಸಂಗೀತ ಕಾರ್ಯಕ್ರಮ ನಡೆಯಲಿರುವ ಸ್ಥಳವನ್ನೂ ಗುರಿಯಾಗಿಸುವುದಾಗಿ ಆ ಸಂದೇಶದಲ್ಲಿ ಉಲ್ಲೇಖಿಸಲಾಗಿತ್ತು.

ಬೆದರಿಕೆಗಳ ಹಿನ್ನೆಲೆಯಲ್ಲಿ ಅಮಿತಾಭ್ ಬಚ್ಚನ್ ಅವರು ಕಳೆದ ಭಾನುವಾರ ತಮ್ಮ ನಿವಾಸದ ಹೊರಗೆ ಅಭಿಮಾನಿಗಳನ್ನು ಭೇಟಿಯಾಗುವ ಸಂಪ್ರದಾಯವನ್ನು ಮುಂದುವರಿಸಿದ್ದರೂ, ಈ ಬಾರಿ ಗುಂಡು ನಿರೋಧಕ ಗಾಜಿನ ರಕ್ಷಣೆಯ ಒಳಗಿನಿಂದ ಅಭಿಮಾನಿಗಳಿಗೆ ಕೈಬೀಸಿ ಶುಭಾಶಯ ಕೋರಿದ್ದರು. ಮುಂಬೈ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಬೆದರಿಕೆ ಇ–ಮೇಲ್ ಹಿಂದಿರುವವರ ಪತ್ತೆಗೆ ತನಿಖೆ ಮುಂದುವರಿಸಿದ್ದಾರೆ.

ಕೇರಳದ ಆನೆಗೆ ಗುಜರಾತ್‌ನಲ್ಲಿ ಚಿಕಿತ್ಸೆ

ಅಹಮದಾಬಾದ್, ನ. 7: ಕೇರಳದ ಅಭಯಾರಣ್ಯದಲ್ಲಿದ್ದ, ಗಂಭೀರವಾಗಿ ಅಸ್ವಸ್ಥಗೊಂಡಿದ್ದ 18 ತಿಂಗಳ ಆನೆ ಮರಿ ಮಾಯಾಳನ್ನು ಹೆಚ್ಚಿನ ತೀವ್ರ ನಿಗಾ ಚಿಕಿತ್ಸೆಗಾಗಿ ಗುಜರಾತ್ನ ವಂತರಾ ಆಸ್ಪತ್ರೆಗೆ ವಾಯುಮಾರ್ಗದ ಮೂಲಕ ಸ್ಥಳಾಂತರಿಸಲಾಗಿದೆ.

ಹುಟ್ಟಿದಾಗ ಅನಾಥವಾಗಿ ಪತ್ತೆಯಾಗಿ ಕೇರಳ ಅರಣ್ಯ ಇಲಾಖೆಯಿಂದ ಆರೈಕೆ ಪಡೆಯುತ್ತಿದ್ದ ಈ ಮಾಯಾ ಎಂಬ ಆನೆ ಮರಿಗೆ ಇತ್ತೀಚೆಗೆ ಆಟವಾಡುವಾಗ ಬಿದ್ದು ಬಲ ಭುಜಕ್ಕೆ ಗಾಯವಾಗಿತ್ತು. ತಪಾಸಣೆಯ ವೇಳೆ ಎಡ ಹ್ಯೂಮರಸ್ ಮುರಿತ, ಬಲ ರೇಡಿಯಸ್ನ ಬಹು ಮುರಿತಗಳು ಸಂಭವಿಸಿರುವುದು ಮತ್ತು ಮೂಳೆಗಳು ಅತ್ಯಂತ ದುರ್ಬಲವಾಗಿರುವುದು ಪತ್ತೆಯಾಗಿತ್ತು.

ಮೂಳೆಗಳ ತೀವ್ರ ದೌರ್ಬಲ್ಯದಿಂದಾಗಿ ಮರಿಯು ನಿಲ್ಲಲು ಅಸಾಧ್ಯವಾಗಿತ್ತು. ಚೇತರಿಕೆಯ ಸಾಧ್ಯತೆ ಕಡಿಮೆ ಇತ್ತು. ಆದರೆ ಕೇರಳದ ಮುಖ್ಯ ವನ್ಯಜೀವಿ ವಾರ್ಡನ್ ಅವರು ವಂತಾರಾ ಸಂಸ್ಥೆಯ ತಜ್ಞರೊಂದಿಗೆ ಸಮಾಲೋಚನೆ ನಡೆಸಿ, ಅಸ್ಸಾಂನ ಖ್ಯಾತ ಆನೆ ತಜ್ಞ ಡಾ. ಕುಶಲ್ ಕೊನ್ವಾರ್ ಶರ್ಮಾ ಅವರ ಸಲಹೆಯಂತೆ ಮರಿಗೆ ಮತ್ತೊಬ್ಬರ ವಿಶೇಷ ಚಿಕಿತ್ಸೆಯ ಅವಕಾಶ ನೀಡಲು ನಿರ್ಧರಿಸಿದರು.

2026ರ ನವೆಂಬರ್ 5 ರಂದು ವಂತಾರಾ ವ್ಯವಸ್ಥೆ ಮಾಡಿದ್ದ ವಿಶೇಷ ವಿಮಾನದಲ್ಲಿ ಜೀವ ರಕ್ಷಕ ಉಪಕರಣಗಳು ಮತ್ತು ಪಶುವೈದ್ಯರ ತಂಡದೊಂದಿಗೆ ಮಾಯಾಳನ್ನು ಜಾಮ್‌ನಗರಕ್ಕೆ ಕರೆದೊಯ್ಯಲಾಯಿತು. ಕೇರಳದ ಪಶುವೈದ್ಯ ಡಾ. ಬಿನೋಯ್ ಸಿ. ಬಾಬು ಹಾಗೂ ಈ ಆನೆಮರಿಯ ಪ್ರಾಥಮಿಕ ಆರೈಕೆದಾರ ನಿಖಿಲ್ ಬಾಬು ಅವರು ಜೊತೆ ತೆರಳಿದ್ದಾರೆ.

ವಂತಾರಾದಲ್ಲಿ ಅತ್ಯಾಧುನಿಕ ಹೈಡ್ರಾಲಿಕ್ ವ್ಯವಸ್ಥೆಗಳು, ನೋವು ನಿರ್ವಹಣೆ ಮತ್ತು 24 ಗಂಟೆಗಳ ವೈದ್ಯಕೀಯ ಮೇಲ್ವಿಚಾರಣೆಯಲ್ಲಿ ಮರಿಗೆ ಚಿಕಿತ್ಸೆ ನೀಡಲಾಗುತ್ತದೆ. ಚಿಕಿತ್ಸೆ ಪೂರ್ಣಗೊಂಡ ಬಳಿಕ ಮಾಯಾಳನ್ನು ಮರಳಿ ಕೇರಳದ ಅಭಯಾರಣ್ಯಕ್ಕೆ ಕರೆತರಲಾಗುತ್ತದೆ ಎಂದು ಅರಣ್ಯ ಇಲಾಖೆ ತಿಳಿಸಿದೆ.

ಪಾಕ್ ಆಕ್ರಮಿತ ಕಾಶ್ಮೀರದ ರಾವಲ್‌ಕೋಟ್‌ನಲ್ಲಿ ಮತ್ತೆ ಹಿಂಸಾಚಾರ

ಶ್ರೀನಗರ, ನ. 7: ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ರಾವಲ್‌ಕೋಟ್‌ನಲ್ಲಿ ಪ್ರತಿಭಟನೆಗಳು ಹಿಂಸಾತ್ಮಕ ರೂಪ ಪಡೆದಿವೆ. ಮೂಲಭೂತ ಹಕ್ಕುಗಳು, ರಾಜಕೀಯ ಸುಧಾರಣೆ, ಆಹಾರ ಬೆಲೆ ಇಳಿಕೆ ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟುಕೊಂಡು ತಿಂಗಳುಗಳಿಂದ ನಡೆಯುತ್ತಿದ್ದ ಪ್ರತಿಭಟನೆಯನ್ನು ತೆರವುಗೊಳಿಸಲು ಭದ್ರತಾ ಪಡೆಗಳು ಕಾರ್ಯಾಚರಣೆ ನಡೆಸಿವೆ. ಈ ವೇಳೆ ಗುಂಡಿನ ಚಕಮಕಿ ನಡೆದಿದ್ದು, ಹಲವರು ಮೃತಪಟ್ಟಿದ್ದಾರೆ ಮತ್ತು ಗಾಯಗೊಂಡಿದ್ದಾರೆ ಎಂಬ ವರದಿಗಳಿವೆ. ಆದರೆ ಸಾವಿನ ಸಂಖ್ಯೆಯ ಬಗ್ಗೆ ವಿಭಿನ್ನ ಮಾಹಿತಿ ಹೊರಬರುತ್ತಿದೆ.

ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ರಾವಲ್‌ಕೋಟ್‌ನಲ್ಲಿ, ಗುರುವಾರ ಬೆಳಗ್ಗೆಯಿಂದ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು. ಕಳೆದ ಐದು ತಿಂಗಳಿನಿಂದ ಪ್ರತಿಭಟನೆ ನಡೆಸುತ್ತಿದ್ದ ಜಂಟಿ ಅವಾಮಿ ಕ್ರಿಯಾ ಸಮಿತಿ ಸದಸ್ಯರ ಪ್ರತಿಭಟನಾ ಸ್ಥಳಗಳನ್ನು ತೆರವುಗೊಳಿಸಲು ಭದ್ರತಾ ಪಡೆಗಳು ಕಾರ್ಯಾಚರಣೆ ನಡೆಸಿವೆ. ಈ ವೇಳೆ ಪ್ರತಿಭಟನಾಕಾರರು ಮತ್ತು ಭದ್ರತಾ ಸಿಬ್ಬಂದಿ ನಡುವೆ ಘರ್ಷಣೆ ನಡೆದಿದೆ. ಗುಂಡಿನ ದಾಳಿ ನಡೆದಿದ್ದು, ಹಲವು ಮಂದಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ರಾವಲ್‌ಕೋಟ್‌ನಲ್ಲಿ ನಡೆದ ಕಾರ್ಯಾಚರಣೆಯಲ್ಲಿ ನಾಲ್ವರು ಮಕ್ಕಳು ಸೇರಿದಂತೆ 18 ಮಂದಿ ಮೃತಪಟ್ಟಿದ್ದಾರೆ ಎಂಬ ವರದಿಗಳು ಕೆಲವು ಮಾಧ್ಯಮಗಳಲ್ಲಿ ಪ್ರಕಟವಾಗಿವೆ. ಆದರೆ ಈ ಸಂಖ್ಯೆಯನ್ನು ಅಧಿಕೃತವಾಗಿ ದೃಢಪಟ್ಟಿಲ್ಲ.

ರಾವಲ್‌ಕೋಟ್‌ನ ಮುಖ್ಯ ಬಸ್ ನಿಲ್ದಾಣದ ಸಮೀಪ ಹಲವು ತಿಂಗಳಿಂದ ಪ್ರತಿಭಟನಾಕಾರರು ಧರಣಿ ನಡೆಸುತ್ತಿದ್ದರು. ಗುರುವಾರ ಮುಂಜಾನೆ ಭದ್ರತಾ ಪಡೆಗಳು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ, ರಸ್ತೆ ತಡೆಗಳನ್ನು ತೆರವುಗೊಳಿಸಲು ಮುಂದಾದವು. ಈ ವೇಳೆ ಪ್ರತಿಭಟನಾಕಾರರು ಮತ್ತು ಭದ್ರತಾ ಸಿಬ್ಬಂದಿ ನಡುವೆ ಘರ್ಷಣೆ ಉಂಟಾಯಿತು. ಭದ್ರತಾ ಪಡೆಗಳು ಗುಂಡಿನ ದಾಳಿ ನಡೆಸಿದವು ಎಂದು ಜಂಟಿ ಅವಾಮಿ ಕ್ರಿಯಾ ಸಮಿತಿಯ ನಾಯಕರು ಆರೋಪಿಸಿದ್ದಾರೆ. ಡ್ರೋನ್ ಮೂಲಕ ದಾಳಿ ನಡೆಸಲಾಗಿದೆ ಮತ್ತು RPG-7 ರಾಕೆಟ್ ಬಳಸಲಾಗಿದೆ ಎಂಬ ಆರೋಪಗಳೂ ಕೇಳಿಬಂದಿವೆ.

ಪ್ರತಿಭಟನಾಕಾರರ ನಾಯಕ ಉಮರ್ ನಜೀರ್ ಅವರು ರಾಕೆಟ್‌ನ ತುಣುಕನ್ನು ಪ್ರದರ್ಶಿಸಿ, ಭದ್ರತಾ ಪಡೆಗಳು ಭಾರೀ ಶಸ್ತ್ರಾಸ್ತ್ರಗಳನ್ನು ಬಳಸಿವೆ ಎಂದು ಆರೋಪಿಸಿದ್ದಾರೆ. ಆದರೆ ಈ ಆರೋಪಗಳನ್ನು ಸ್ವತಂತ್ರವಾಗಿ ದೃಢಪಡಿಸುವ ಮಾಹಿತಿ ಲಭ್ಯವಿಲ್ಲ.

ಜಂಟಿ ಅವಾಮಿ ಕ್ರಿಯಾ ಸಮಿತಿ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಜನರ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸುತ್ತಿರುವ ಸಂಘಟನೆ. ಆಹಾರ ಪದಾರ್ಥಗಳ ಬೆಲೆ ಏರಿಕೆ, ವಿದ್ಯುತ್ ದರ, ರಾಜಕೀಯ ಹಕ್ಕುಗಳು ಮತ್ತು ಆಡಳಿತಾತ್ಮಕ ಸುಧಾರಣೆ ಸೇರಿದಂತೆ ಹಲವು ವಿಷಯಗಳ ಕುರಿತು ಈ ಸಮಿತಿ ಪ್ರತಿಭಟನೆಗಳನ್ನು ಸಂಘಟಿಸಿದೆ. ಈ ಹಿಂದೆ ಸ್ಥಳೀಯ ವಿಧಾನಸಭೆಯಲ್ಲಿ ಪಾಕಿಸ್ತಾನದ ಇತರ ಭಾಗಗಳಿಂದ ಬಂದ ನಿರಾಶ್ರಿತರಿಗೆ ಮೀಸಲಿಟ್ಟಿರುವ 12 ಸ್ಥಾನಗಳನ್ನು ರದ್ದುಗೊಳಿಸಬೇಕು ಎಂಬ ಬೇಡಿಕೆಯನ್ನೂ ಸಮಿತಿ ಮುಂದಿಟ್ಟಿತ್ತು. ಈ ಸ್ಥಾನಗಳಿಂದ ಸ್ಥಳೀಯ ಜನರ ರಾಜಕೀಯ ಪ್ರಾತಿನಿಧ್ಯಕ್ಕೆ ಧಕ್ಕೆಯಾಗುತ್ತಿದೆ ಎಂಬುದು ಸಮಿತಿಯ ವಾದವಾಗಿದೆ.

ಈ ವರ್ಷದ ಜೂನ್‌ನಿಂದ ರಾವಲಕೋಟ್ ಸೇರಿದಂತೆ ಪಾಕ್ ಆಕ್ರಮಿತ ಕಾಶ್ಮೀರದ ಹಲವು ಭಾಗಗಳಲ್ಲಿ ಪ್ರತಿಭಟನೆಗಳು ನಡೆಯುತ್ತಿವೆ. ಪ್ರತಿಭಟನಾಕಾರರು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸುತ್ತಿದ್ದಾರೆ. ಪ್ರತಿಭಟನೆಯ ಹಿನ್ನೆಲೆಯಲ್ಲಿ ಸಮಿತಿಯ ನಾಯಕರ ಬಂಧನ, ಸಂಘಟನೆಯ ಮೇಲಿನ ನಿಷೇಧ ಮತ್ತು ಪ್ರತಿಭಟನಾ ಸ್ಥಳಗಳ ತೆರವು ಸೇರಿದಂತೆ ಹಲವು ಕ್ರಮಗಳನ್ನು ಸರ್ಕಾರ ಕೈಗೊಂಡಿದೆ ಎಂದು ವರದಿಯಾಗಿದೆ. ಇದರಿಂದ ಸ್ಥಳೀಯ ಜನರ ಆಕ್ರೋಶ ಮತ್ತಷ್ಟು ಹೆಚ್ಚಾಗಿದೆ.

ರಾವಲ್‌ಕೋಟ್‌ನ ಕೆಲವು ಭಾಗಗಳಲ್ಲಿ ಇಂಟರ್ನೆಟ್ ಮತ್ತು ದೂರವಾಣಿ ಸಂಪರ್ಕಕ್ಕೆ ಅಡಚಣೆ ಉಂಟಾಗಿದೆ ಎಂದು ವರದಿಗಳು ತಿಳಿಸಿವೆ. ಇದರಿಂದ ಪ್ರತಿಭಟನೆಯ ಸ್ಥಳದಲ್ಲಿನ ನೈಜ ಪರಿಸ್ಥಿತಿ ಮತ್ತು ಸಾವು–ನೋವಿನ ವಿವರಗಳನ್ನು ಸ್ವತಂತ್ರವಾಗಿ ಪರಿಶೀಲಿಸುವುದು ಕಷ್ಟವಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಪ್ರತಿಭಟನಾಕಾರರು ಹಂಚಿಕೊಳ್ಳುತ್ತಿರುವ ವಿಡಿಯೋಗಳು ಮತ್ತು ಚಿತ್ರಗಳ ಬಗ್ಗೆ ವಿವಿಧ ರೀತಿಯ ಹೇಳಿಕೆಗಳು ಹರಿದಾಡುತ್ತಿವೆ. ಆದರೆ ಅವುಗಳ ನಿಖರತೆ ಮತ್ತು ಹಿನ್ನೆಲೆಯನ್ನು ಪರಿಶೀಲಿಸುವುದು ಅಗತ್ಯ.

ಎಲ್‌ಇಡಿ ಬೀದಿದೀಪ ಯೋಜನೆಯಿಂದ 100 ಕೋಟಿ ರೂ. ಉಳಿತಾಯ: ಜಿಬಿಎ ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು, ನ.6: ನಗರದ ಬೀದಿ ದೀಪಗಳ ವ್ಯವಸ್ಥೆಯನ್ನು ಆಧುನೀಕರಿಸುವ ನಿಟ್ಟಿನಲ್ಲಿ ಇಂಧನ ದಕ್ಷ ಎಲ್‌ಇಡಿ ತಂತ್ರಜ್ಞಾನ ಹಾಗೂ ಅತ್ಯಾಧುನಿಕ ಕೇಂದ್ರೀಕೃತ ನಿಯಂತ್ರಣ ಮತ್ತು ಮೇಲ್ವಿಚಾರಣಾ ವ್ಯವಸ್ಥೆಯನ್ನು ಅಳವಡಿಸಿಕೊಳ್ಳುವ ಮಹತ್ವದ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಿಂದ 100 ಕೋಟಿ ರೂ. (ಶೇ.54ರಷ್ಟು) ಹಣ ಉಳಿತಾಯವಾಗುವ ನಿರೀಕ್ಷೆಯಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ದಕ್ಷಿಣ ನಗರ ಪಾಲಿಕೆಯಿಂದ ಜಯನಗರದಲ್ಲಿ ಮೊದಲ ಕೇಂದ್ರೀಕೃತ ನಿಯಂತ್ರಣ ಮತ್ತು ಮೇಲ್ವಿಚಾರಣಾ ವ್ಯವಸ್ಥೆ ಸ್ಥಾಪನೆಯ ಸ್ಥಳಕ್ಕೆ ಭೇಟಿ ನೀಡಿ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಯೋಜನೆಯು ಸಾರ್ವಜನಿಕ ಬೆಳಕಿನ ವ್ಯವಸ್ಥೆಯನ್ನು ಸುಧಾರಿಸುವುದು, ಕಾರ್ಯಾಚರಣೆಯ ದಕ್ಷತೆಯನ್ನು ಹೆಚ್ಚಿಸುವುದು, ವಿದ್ಯುತ್ ಬಳಕೆಯನ್ನು ಕಡಿಮೆ ಮಾಡುವುದು ಹಾಗೂ ಬೆಂಗಳೂರಿನ ನಾಗರಿಕ ಸೇವೆಗಳ ಗುಣಮಟ್ಟವನ್ನು ಮತ್ತಷ್ಟು ಉತ್ತಮಪಡಿಸುವ ಗುರಿಯನ್ನು ಹೊಂದಿದೆ. ಈ ತಂತ್ರಜ್ಞಾನದ ಪ್ರಮುಖ ವೈಶಿಷ್ಟ್ಯವೆಂದರೆ ದೋಷಯುಕ್ತ ಅಥವಾ ಕಾರ್ಯ ನಿರ್ವಹಿಸದ ಬೀದಿ ದೀಪಗಳನ್ನು ಮುಂಚಿತವಾಗಿಯೇ ಪತ್ತೆಹಚ್ಚುವ ಸಾಮರ್ಥ್ಯ. ಇದರಿಂದ ಸಾರ್ವಜನಿಕರು ದೂರು ಸಲ್ಲಿಸುವವರೆಗೆ ಕಾಯದೆ, ತಾಂತ್ರಿಕ ತಂಡಗಳೇ ದೋಷಗಳನ್ನು ಗುರುತಿಸಿ ತಕ್ಷಣ ದುರಸ್ತಿ ಕಾರ್ಯ ಕೈಗೊಳ್ಳಲು ಸಾಧ್ಯವಾಗಲಿದೆ. ಇದರಿಂದ ಸಮಸ್ಯೆಗಳಿಗೆ ತ್ವರಿತ ಪರಿಹಾರ, ಹೆಚ್ಚಿನ ಹೊಣೆಗಾರಿಕೆ ಹಾಗೂ ಬೀದಿ ದೀಪಗಳ ಸಮರ್ಪಕ ನಿರ್ವಹಣೆ ಸಾಧ್ಯವಾಗಲಿದೆ.

ಈ ಯೋಜನೆಯಡಿ ಸಾಂಪ್ರದಾಯಿಕ ಬೀದಿ ದೀಪಗಳನ್ನು ಇಂಧನ ದಕ್ಷ ಎಲ್‌ಇಡಿ ದೀಪಗಳಾಗಿ ಬದಲಾಯಿಸುವುದರ ಜೊತೆಗೆ, ಈಗಾಗಲೇ ಅಳವಡಿಸಲಾಗಿರುವ ಎಲ್‌ಇಡಿ ಬೀದಿ ದೀಪಗಳನ್ನು ಬುದ್ಧಿವಂತ, ಜಿಎಸ್‌ಎಂ ಸೌಲಭ್ಯ ಹೊಂದಿರುವ ಇಂಟರ್‌ನೆಟ್ ಆಫ್ ಥಿಂಗ್ಸ್ ಆಧಾರಿತ ಕೇಂದ್ರೀಕೃತ ನಿಯಂತ್ರಣ ಮತ್ತು ಮೇಲ್ವಿಚಾರಣಾ ವ್ಯವಸ್ಥೆಗೆ ಸಂಪರ್ಕಿಸಲಾಗುತ್ತಿದೆ.



ಜಿಬಿಎ ವ್ಯಾಪ್ತಿಯಲ್ಲಿ ಒಟ್ಟು 5,00,381 ಎಲ್‌ಇಡಿ ಬೀದಿ ದೀಪಗಳನ್ನು ಈ ಯೋಜನೆಯಡಿ ಒಳಪಡಿಸಲಾಗಿದ್ದು, ಇದರಲ್ಲಿ 3,02,919 ಹೊಸ ಎಲ್‌ಇಡಿ ದೀಪಗಳ ಅಳವಡಿಕೆ, 1,97,432 ಈಗಾಗಲೇ ಅಳವಡಿಸಿರುವ ಎಲ್‌ಇಡಿ ದೀಪಗಳನ್ನು ಸಿಸಿಎಂಎಸ್ ವ್ಯವಸ್ಥೆಗೆ ಸಂಯೋಜಿಸುವುದು ಹಾಗೂ 24,677 ಸಿಸಿಎಂಎಸ್ ಘಟಕಗಳ ಅಳವಡಿಕೆ ಸೇರಿವೆ.

ಈ ಯೋಜನೆಯಿಂದ ಶೇ.54ಕ್ಕೂ ಅಧಿಕ ವಿದ್ಯುತ್ ಉಳಿತಾಯವಾಗುವ ನಿರೀಕ್ಷೆಯಿದ್ದು, ವಿದ್ಯುತ್ ವೆಚ್ಚದಲ್ಲಿ ಗಣನೀಯ ಇಳಿಕೆಯಾಗುವುದರ ಜೊತೆಗೆ ಸುಸ್ಥಿರ ನಗರ ಮೂಲಸೌಕರ್ಯ ಅಭಿವೃದ್ಧಿಗೆ ಉತ್ತೇಜನ ದೊರೆಯಲಿದೆ.

ಮೊದಲ ಹಂತದಲ್ಲಿ ಬೆಂಗಳೂರು ದಕ್ಷಿಣದಲ್ಲಿ ಸ್ಥಾಪನೆ: ನಗರವ್ಯಾಪಿ ಅನುಷ್ಠಾನಗೊಳ್ಳುತ್ತಿರುವ ಈ ಮಹತ್ವದ ಯೋಜನೆಯ ಮೊದಲ ಹಂತದ ಮೈಲಿಗಲ್ಲಾಗಿ ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ವತಿಯಿಂದ ಜಯನಗರದಲ್ಲಿ ಮೊದಲ ಕೇಂದ್ರೀಕೃತ ನಿಯಂತ್ರಣ ಮತ್ತು ಮೇಲ್ವಿಚಾರಣಾ ವ್ಯವಸ್ಥೆಯನ್ನು ಸ್ಥಾಪಿಸಲಾಗಿದೆ. ಇದು ತಂತ್ರಜ್ಞಾನ ಆಧಾರಿತ ಬೀದಿ ದೀಪಗಳ ನಿರ್ವಹಣೆ ಹಾಗೂ ನಗರ ಮೂಲಸೌಕರ್ಯಗಳ ದೋಷಗಳನ್ನು ಮುಂಚಿತವಾಗಿಯೇ ಗುರುತಿಸಿ ಪರಿಹರಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ವಿದ್ಯುತ್ ಉಳಿತಾಯ ಮತ್ತು ವೆಚ್ಚ ಕಡಿತದ ಜೊತೆಗೆ, ಈ ಯೋಜನೆಯಿಂದ ರಸ್ತೆಗಳ ಬೆಳಕಿನ ಗುಣಮಟ್ಟ ಸುಧಾರಣೆ, ಸಾರ್ವಜನಿಕ ಸುರಕ್ಷತೆ ಹೆಚ್ಚಳ, ನಿರ್ವಹಣಾ ಕಾರ್ಯಗಳ ತ್ವರಿತ ಸ್ಪಂದನೆ ಹಾಗೂ ಇಂಧನ ವ್ಯರ್ಥವಾಗುವುದನ್ನು ತಡೆಗಟ್ಟಲು ಸಾಧ್ಯವಾಗಲಿದೆ.

ದಲಿತರಿಗೆ ಶಿಕ್ಷಣ–ಉದ್ಯೋಗದ ಮೂಲಕ ಸ್ವಾಭಿಮಾನದ ಬದುಕು ಕಲ್ಪಿಸಿ: ಬೊಮ್ಮಾಯಿ ಕರೆ

ಬೆಂಗಳೂರು, ನ.6: ದಲಿತರನ್ನು ಕೇವಲ ವೋಟ್ ಬ್ಯಾಂಕ್ ಆಗಿ ಬಳಸಿಕೊಳ್ಳುವುದನ್ನು ಬಿಟ್ಟು, ಅವರಿಗೆ ಶಿಕ್ಷಣ ಹಾಗೂ ಉದ್ಯೋಗದ ಮೂಲಕ ಸ್ವಾಭಿಮಾನದ ಬದುಕು ಕಲ್ಪಿಸಬೇಕು ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ.

ದೇಶದಲ್ಲಿ ದಲಿತ ಜಾಗೃತಿಗೆ ಮೂಲ ಕಾರಣಕರ್ತರಾದ ಬಾಬಾ ಸಹೇಬ್ ಅಂಬೇಡ್ಕರ್ ಅವರಿಗೆ ಬುದ್ಧನೇ ಪ್ರೇರಣೆಯಾಗಿದ್ದನು. ರಾಜ್ಯಭಾರವನ್ನು ತೊರೆದು ಜ್ಞಾನದ ಬೆಳಕನ್ನು ಜಗತ್ತಿಗೆ ನೀಡಿದ ಬುದ್ಧ, ಕನ್ನಡ ನಾಡಿಗೆ ಬಸವಣ್ಣ ಹಾಗೂ ಇಡೀ ವಿಶ್ವಕ್ಕೆ ಜೀಸಸ್ ಕ್ರೈಸ್ಟ್ ಹೇಗೆ ಪ್ರೇರಣೆಯಾಗಿದ್ದಾರೋ, ಅದೇ ರೀತಿ ಮಹಾನ್ ಸಾಧಕರು ಕಾಲಾತೀತವಾಗಿ ಸಮಾಜದಲ್ಲಿ ತಮ್ಮ ವಿಚಾರಧಾರೆಗಳ ಮೂಲಕ ಎಂದೆಂದಿಗೂ ಜೀವಂತವಾಗಿರುತ್ತಾರೆ ಎಂದು ತಿಳಿಸಿದರು.

ಸಾಧಕರಿಗೆ ಸಾವಿಲ್ಲ: ಸ್ವಾಮಿ ವಿವೇಕಾನಂದರು ಒಂದು ಮಾತನ್ನು ಹೇಳಿದ್ದಾರೆ. ಇಂತಹ ದೊಡ್ಡ ದೊಡ್ಡ ಸಾಧಕರ ಬಗ್ಗೆ ಅವರು ಹೇಳಿರುವಂತದ್ದು ಸಾಧಕರಿಗೆ ಸಾವು ಅಂತ್ಯವಲ್ಲ. ಸಾವಿನ ನಂತರವೂ ಬದುಕುವುದು ಸಾಧಕ. ನಮಗೆಲ್ಲ ಸಾವು ಅಂತ್ಯ ಇದೆ. ಬಾಬಾಸಹೇಬ್ ಅಂಬೇಡ್ಕರ್ ಅವರು ಜೀವಂತವಾಗಿ ಇರುವುದಕ್ಕಿಂತ ಇವತ್ತು ಬಹಳ ಪ್ರಸ್ತುತವಾಗಿದ್ದಾರೆ.

ಬಸವಣ್ಣ, ಬುದ್ಧ ಈಗಲೂ ಪ್ರಸ್ತುತ ರಾಗಿದ್ದಾರೆ.. ಯಾಕಂದ್ರೆ ಅವರದ್ದು ಏಕಾಕೃತವಾಗಿ ತಮ್ಮ ದೇಯನ, ತಮ್ಮ ಪದ್ಧತಿಯನ್ನ, ತಮ್ಮ ವಿಚಾರಧಾರೆ ಯನ್ನ ಅವರು ಗಟ್ಟಿಯಾಗಿ ಕಟ್ಟಿಕೊಂಡಿರುವುದು.

ಪಾಶ್ಚಾತ್ಯ ದೇಶದಲ್ಲಿ ಒಬ್ಬ ಬಹಳ ದೊಡ್ಡ ಪ್ರಸಿದ್ಧ ಫಿಲಾ ಸಫರ್ ಸಾಕ್ರಟೀಸ್. ಆತ ಯಾವಾಗ್ಲೂ ಕೂಡ ಪ್ರಶ್ನೆಗಳನ್ನು ಕೇಳುವಂತ ಒಂದು ರೂಢಿಯಿತ್ತು.

ಆಗ ಚರ್ಚ್‌ಗಳ ಆಡಳಿತ ಇತ್ತು, ಮರಣದಂಡನೆ ಕೊಡ್ತಾ ಇದ್ದವು. ಇವನು ಚರ್ಚ್‌ಗಳು ಪ್ರಶ್ನೆ ಮಾಡಿದ. ನಿಮಗೆ ಜನ್ಮ ಕೊಡುವ ಅಧಿಕಾರ ಇಲ್ಲ, ನಿಮಗೆ ಜನ್ಮ ಕೊಡುವ ಶಕ್ತಿ ಇಲ್ಲ, ಮರಣದಂಡನೆ ಕೊಡುವಂತಹ ಅಧಿಕಾರ ಯಾಕೆ ಬೇಕು ಎಂದು ಪ್ರಶ್ನಿಸಿದ, ಅದು ದೊಡ್ಡ ಚರ್ಚೆ ಆಯ್ತು. ಕೊನೆಗೆ ಐದು ವೋಟ್ ಇಂದ ಸಾಕ್ರಟೀಸ್ ವಾದ ಸೋತರು. ಅದಕ್ಕೆ ಅವನಿಗೆ ಮರಣದಂಡನೆ ಇಲ್ಲವೇ ವಿಷ ಕುಡಿಬೇಕು ಎಂದು ಆದೇಶ ಆಯಿತು. ಆದರೆ ಅವನು ಇಷ್ಟು ಪ್ರಸಿದ್ಧನಾಗಿದ್ದಾಗ ಎಲ್ಲಾ ಎಂಪೈರ್ ಗ್ರೀಸ್ ಏಡನ್ ನಗರ ಅವನ ಪರವಾಗಿ ನಡ್ಕೊಂಡು ಹೋದರು. ಅವಾಗ ಚರ್ಚ್ ನವರು ಅವರ ಗೆಳೆಯರನ್ನು ಕರಿಸಿ ಸುಮ್ನೆ ಯಾಕೆ ಅವನು ಜೀವನ ಹಾಳು ಮಾಡ್ಕೊ ತಾನೆ? ನಮ್ಮ ಚರ್ಚ್‌ನ ಸಾರ್ವಭೌಮತ್ವವನ್ನು ಒಪ್ಪಿಕೊಳ್ಳಿ. ಅಥೆನ್ಸ್ ನಗರ ಸ್ಥಳವನ್ನು ಬಿಟ್ಟು ಹೋಗಲಿ. ಅವನಿಗೆ ಮರಣದಂಡನೆ ಕ್ಯಾನ್ಸಲ್ ಮಾಡ್ತೀವಿ ಅಂದರು.



ದಲಿತ ಚಳವಳಿಯ ಮಹತ್ವ: ದಲಿತ ಚಳವಳಿ ಎನ್ನುವುದು ಕೇವಲ ಸರ್ಕಾರಗಳಿಗೆ ಅನುಗುಣವಾಗಿರುವುದಕ್ಕಲ್ಲ, ಬದಲಾಗಿ ಭಾರತೀಯ ಸಂಸ್ಕೃತಿಯಲ್ಲಿ ಅಡಗಿರುವ ಮಾನವೀ ಯತೆಯನ್ನು ಜೀವಂತವಾಗಿರಿಸಿ, ತಳಮಟ್ಟದ ಜನರಿಗೆ ನ್ಯಾಯ ಒದಗಿಸುವ ಸುದೀರ್ಘ ಹೋರಾಟ ವಾಗಿದೆ. ದಲಿತರನ್ನು ಕೇವಲ ವೋಟ್ ಬ್ಯಾಂಕ್ ಆಗಿ ಬಳಸಿಕೊಳ್ಳುವುದನ್ನು ಬಿಟ್ಟು, ಅವರಿಗೆ ಶಿಕ್ಷಣ ಹಾಗೂ ಉದ್ಯೋಗದ ಮೂಲಕ ಸ್ವಾಭಿಮಾನದ ಬದುಕು ಕಲ್ಪಿಸಬೇಕು ಎಂದರು.

ಚಿ. ನಾ. ರಾಮು ಸಾಹಿತ್ಯಿಕ ಕೃಷಿಯ ಮೆಚ್ಚುಗೆ: ಲೇಖಕ ಚಿ. ನಾ. ರಾಮು ಅವರ 'ನನ್ನ ಜನ ಅನಾಥ' ಪುಸ್ತಕವು ಕೇವಲ ನೋವನ್ನು ಮಾತ್ರವಲ್ಲದೆ, ದೇಶದ ವಿವಿಧ ರಾಜ್ಯಗಳ ವಾಸ್ತವಿಕ ಚಿತ್ರಣವನ್ನು ಹಾಗೂ ಸತ್ಯವನ್ನು ಧೈರ್ಯವಾಗಿ ಕಟ್ಟಿಕೊಟ್ಟಿದೆ. ಇಂತಹ ಶ್ರೇಷ್ಠ ಕೃತಿಗಳನ್ನು ಹೋರಾಟಗಾರರು ಗಂಭೀರವಾಗಿ ಓದಬೇಕು. ಸಮುದಾಯದ ಅಭಿವೃದಿಗಾಗಿ ಮತ್ತು ಸ್ವಾಭಿಮಾನಿ ಸಮಾಜವನ್ನು ನಿರ್ಮಿಸಲು ಎಲ್ಲರೂ ಇವರ ಚಿಂತನೆ ಮತ್ತು ಸಂಘಟನೆಗೆ ಬೆಂಬಲ ನೀಡಬೇಕು ಎಂದು ಕರೆ ನೀಡಿದರು.

ಬೆಲೆ ಏರಿಕೆ ಖಂಡಿಸಿ ಜೆಡಿಎಸ್‌ನಿಂದ ಫ್ರೀಡಂಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ

ಅಗತ್ಯ ವಸ್ತುಗಳ ಬೆಲೆ ಏರಿಕೆ ಹಿಂಪಡೆಯಲು ಹೆಚ್.ಎಂ. ರಮೇಶ್ ಗೌಡ ಆಗ್ರಹ

HDK ಟೀಕಿಸಿದ ಪ್ರಿಯಾಂಕ್ ಖರ್ಗೆ ತೀವ್ರ ತರಾಟೆ



ಬೆಂಗಳೂರು, ನ.06– ರಾಜ್ಯ ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಯ ವಿರುದ್ಧ ಗ್ರೇಟರ್ ಬೆಂಗಳೂರು ಜನತಾದಳ (ಜಾತ್ಯತೀತ) ಪಕ್ಷದ ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡ ನೇತೃತ್ವದಲ್ಲಿ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ದಿನಬಳಕೆಯ ಅಗತ್ಯ ವಸ್ತುಗಳು, ಹಾಲು ಮತ್ತು ಹಾಲಿನ ಉತ್ಪನ್ನಗಳು ಹಾಗೂ KSRTC, BMTC ಬಸ್ ಪ್ರಯಾಣ ದರವನ್ನು ಏಕಾಏಕಿ ಹೆಚ್ಚಿಸಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿ ಬೃಹತ್ ಈ ಹೋರಾಟ ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ರಮೇಶ್ ಗೌಡ ಅವರು; ಕರ್ನಾಟಕ ಹಾಲು ಒಕ್ಕೂಟಗಳ ಮಹಾಮಂಡಳಿ ವತಿಯಿಂದ ಸಾರ್ವಜನಿಕರಿಗೆ ವಿತರಿಸುವ ಹಾಲು, ಮೊಸರು, ತುಪ್ಪ, ಬೆಣ್ಣೆ, ಪನೀರ್ ಸೇರಿದಂತೆ ಇತರೆ ಹಾಲಿನ ಉತ್ಪನ್ನಗಳ ಬೆಲೆಯನ್ನು ರೂ.8 ರಿಂದ ರೂ.35 ವರೆಗೆ ಹೆಚ್ಚಿಸಿದೆ. ಈಗಾಗಲೇ ಬೆಲೆ ಏರಿಕೆಯಿಂದ ತತ್ತರಿಸಿರುವ ಬಡ, ಕೆಳ ಮಧ್ಯಮ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮೇಲೆ ಈ ಏರಿಕೆ ಮತ್ತಷ್ಟು ಆರ್ಥಿಕ ಹೊರೆ ಹೊರಿಸಿದೆ. ಹಾಲು ಮತ್ತು ಹಾಲಿನ ಉತ್ಪನ್ನಗಳು ಪ್ರತಿನಿತ್ಯ ತಾಯಂದಿರು, ಮಕ್ಕಳು, ವಯಸ್ಸಾದವರು ಬಳಸುವ ಅಗತ್ಯ ಆಹಾರ ಪದಾರ್ಥವಾಗಿರುವುದ ರಿಂದ ಇದರ ಬೆಲೆ ಏರಿಕೆ ನೇರವಾಗಿ ಜನರ ಜೀವನ ನಿರ್ವಹಣೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

ಈ ರೀತಿ ಹಾಲು ಮತ್ತು ಉತ್ಪನ್ನಗಳ ಮೇಲಿನ ಬೆಲೆ ಏರಿಕೆಯಿಂದ ಹೋಟೆಲ್ಗಳು, ಖಾನಾವಳಿಗಳು ಮತ್ತು ಇತರೆ ವಿತರಕರು ತಾವು ತಯಾರಿಸಿ ಒದಗಿಸುವ ಆಹಾರ ಪದಾರ್ಥಗಳ ಬೆಲೆಯನ್ನು ಗಗನಕ್ಕೇರಿಸಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ರಾಜ್ಯದ ಬಹುತೇಕ ಭಾಗಗಳಲ್ಲಿ ತೀವ್ರ ಬರ ಪರಿಸ್ಥಿತಿ ಉಂಟಾಗಿದ್ದು, ರೈತರು ಹಾಗೂ ಗ್ರಾಮೀಣ ಜನತೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕುಡಿಯುವ ನೀರಿನ ಅಭಾವ, ಜಾನುವಾರುಗಳಿಗೆ ಮೇವು ಹಾಗೂ ನೀರಿನ ಕೊರತೆ, ಕೃಷಿ ಉತ್ಪಾದನೆಯಲ್ಲಿ ಕುಸಿತ ಉಂಟಾಗಿದೆ. ಇದರ ಪರಿಣಾಮವಾಗಿ ಅಕ್ಕಿ, ಸಕ್ಕರೆ, ಬೇಳೆಕಾಳುಗಳು ಸೇರಿದಂತೆ ಅಗತ್ಯ ವಸ್ತುಗಳ ಬೆಲೆಗಳು ಏರಿಕೆಯಾಗಿವೆ. ಇದರ ಜತೆಗೆ ರಾಜ್ಯ ಸರ್ಕಾರದ ಸ್ವಯಂ ಸಂಸ್ಥೆಯಾದ KSRTC ಹಾಗೂ BMTC ಸಾರಿಗೆ ನಿಗಮಗಳ ಬಸ್ ಪ್ರಯಾಣ ದರವನ್ನು ಶೇಕಡಾ 23 ರಿಂದ 30 ರವರೆಗೆ ಹೆಚ್ಚಿಸಿರುವುದು ದಿನನಿತ್ಯ ಪ್ರಯಾಣಿಸುವ ಕಾರ್ಮಿಕರು, ವಿದ್ಯಾರ್ಥಿಗಳು, ನೌಕರರು, ಹಿರಿಯ ನಾಗರಿಕರು ಹಾಗೂ ಸಾಮಾನ್ಯ ಜನರ ಮೇಲೆ ಭಾರೀ ಹೊರೆ ಹಾಕಿದೆ. ಸಾರ್ವಜನಿಕ ಸಾರಿಗೆ ವ್ಯವಸ್ಥೆ ಜನಸಾಮಾನ್ಯರ ಜೀವನಾಡಿಯಾಗಿದ್ದು, ದರ ಏರಿಕೆಯಿಂದ ಕುಟುಂಬಗಳ ಮಾಸಿಕ ಖರ್ಚು ಹೆಚ್ಚಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಆಹಾರ ಪದಾರ್ಥಗಳ ಬೆಲೆ ಏರಿಕೆ, ಹಾಲಿನ ಉತ್ಪನ್ನಗಳ ಬೆಲೆ ಏರಿಕೆ, ಬಸ್ ಪ್ರಯಾಣ ದರ ಹೆಚ್ಚಳ ಹಾಗೂ ಬರ ಪರಿಸ್ಥಿತಿಯಿಂದ ಉಂಟಾದ ಸಂಕಷ್ಟಗಳು ಒಟ್ಟಾಗಿ ಜನಸಾಮಾನ್ಯರ ಖರೀದಿ ಸಾಮರ್ಥ್ಯವನ್ನು ಕುಗ್ಗಿಸಿವೆ. ಬಡವರು ಮತ್ತು ಮಧ್ಯಮ ವರ್ಗದವರು ತಮ್ಮ ಮೂಲಭೂತ ಅಗತ್ಯಗಳನ್ನು ಪೂರೈಸಿಕೊಳ್ಳುವುದಕ್ಕೂ ಸಂಕಷ್ಟ ಎದುರಿಸುತ್ತಿದ್ದಾರೆ. ಪ್ರಯಾಣಿಕರ ಹೆಚ್ಚಳವನ್ನು ಪ್ರತಿಬಾರಿ ಶ್ರೀಸಾಮಾನ್ಯ ಭರಿಸಬೇಕೆಂದು ರಾಜ್ಯ ಸರ್ಕಾರದ ನಿಲುವು ಸಮಂಜಸವಲ್ಲ. ಈ ಹೊರೆಯನ್ನು ರಾಜ್ಯ ಸರ್ಕಾರವೇ ಹೊರಬೇಕು ಎಂದರು.

ಸರಕಾರಕ್ಕೆ ಮನವಿ: ಕೂಡಲೇ ಹಾಲು, ಮೊಸರು, ತುಪ್ಪ, ಬೆಣ್ಣೆ, ಪನೀರ್ ಹಾಗೂ ಇತರೆ ಹಾಲಿನ ಉತ್ಪನ್ನಗಳ ಬೆಲೆ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು. KSRTC ಹಾಗೂ ಇತರೆ ಸಾರಿಗೆ ನಿಗಮಗಳ ಬಸ್ ಪ್ರಯಾಣ ದರ ಹೆಚ್ಚಳವನ್ನು ಹಿಂಪಡೆಯಬೇಕು ಹಾಗೂ ರಾಜ್ಯದಲ್ಲಿ ಉಂಟಾಗುವ ಬೀಕರ ಬರಪೀಡಿತ ಹಿನ್ನೆಲೆಯಲ್ಲಿ ಬಸ್ ದರ ಏರಿಕೆಯನ್ನು ತಡೆಯಿಡಬೇಕು. ಬರಪೀಡಿತ ರೈತರು, ಗ್ರಾಮೀಣ ಕುಟುಂಬಗಳು ಹಾಗೂ ಜಾನುವಾರು ಸಾಕಾಣಿಕೆದಾರರಿಗೆ ವಿಶೇಷ ಪರಿಹಾರ ಕ್ರಮಗಳನ್ನು ಘೋಷಿಸಬೇಕು.

ಬರ ಪೀಡಿತ ಗ್ರಾಮಗಳಲ್ಲಿ ಜನಸಾಮಾನ್ಯರಿಗೆ ಶೇಕಡ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವು ಮತ್ತು ನೀರಿನ ಲಭ್ಯತೆಯನ್ನು ಖಚಿತಪಡಿಸಬೇಕು. ಅಕ್ಕಿ, ಸಕ್ಕರೆ, ಬೇಳೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ನಿಯಂತ್ರಣಕ್ಕೆ ತುರ್ತು ಕ್ರಮ ಕೈಗೊಳ್ಳಬೇಕು. ಬಡ, ಕೆಳ ಮಧ್ಯಮ ಹಾಗೂ ಮಧ್ಯಮ ವರ್ಗದ ಜನರ ಹಿತಾಸಕ್ತಿಯನ್ನು ರಕ್ಷಿಸುವ ನಿಟ್ಟಿನಲ್ಲಿ ಬೆಲೆ ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸಬೇಕು. ಜನಸಾಮಾನ್ಯರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ತಕ್ಷಣ ಸೂಕ್ತ ಕ್ರಮ ಜರುಗಿಸುತ್ತದೆ ಎಂಬ ನಿರೀಕ್ಷೆಯಿಂದ ಈ ಮನವಿಯನ್ನು ಸಲ್ಲಿಸುತ್ತಿದ್ದೇವೆ. ಒಂದು ವೇಳೆ ರಾಜ್ಯ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ಹಿಂಪಡೆಯುವಲ್ಲಿ ವಿಫಲವಾದರೆ, ಜನತಾದಳ (ಜಾತ್ಯತೀತ) ವತಿಯಿಂದ ರಾಜ್ಯದಂತ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯ ನಂತರ ಹೆಚ್.ಎಂ.ರಮೇಶ್ ಗೌಡ ಅವರ ನೇತೃತ್ವದಲ್ಲಿ ಮುಖಂಡರ ನಿಯೋಗವು ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಮನವಿ ಪತ್ರವನ್ನು ಸಲ್ಲಿಸಿತು. ಸದರಿ ಮನವಿಯನ್ನು ಘನವೆತ್ತ ರಾಜ್ಯಪಾಲರಿಗೆ ಮತ್ತು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಯಿತು.

ಪ್ರಿಯಾಂಕ್ ಖರ್ಗೆ ವಿರುದ್ಧ ಆಕ್ರೋಶ

ಕೇಂದ್ರ ಸಚಿವ ಹೆಚ್.ಡಿ.ಕುಮಾರ ಸ್ವಾಮಿ ಅವರನ್ನು ಅವಿವೇಕಿ, ಹಳ್ಳಿಗುಗ್ಗು ಎಂದು ನಾಲಿಗೆ ಹರಿಯಬಿಟ್ಟಿರುವ ಪ್ರಿಯಾಂಕ್ ಖರ್ಗೆ, ತನ್ನ ವಾಚಾಳಿತನವನ್ನು ಬದಲಿಸಿಕೊಳ್ಳದಿದ್ದರೆ ತಕ್ಕ ಪಾಠ ಕಲಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ರಮೇಶ್ ಗೌಡ ಎಚ್ಚರಿಕೆ ನೀಡಿದರು.

ರಾಜ್ಯದ ಗೃಹ ಸಚಿವರಾಗಿ ಪ್ರಿಯಾಂಕ ಖರ್ಗೆ ದುರಹಂಕಾರದ ಪರಮಾವಧಿ. ಆ ವ್ಯಕ್ತಿ ಅವಿವೇಕಿಯಂತೆ ಮಾತನಾಡುತ್ತಿದ್ದಾರೆ. ಎಐಸಿಸಿಐ ಅಧ್ಯಕ್ಷರ ಮಗ ಮಾತನಾಡುವ ಮಾತೇ ಇದು. ಅವರ ಪಾರ್ಟಿ ಅಧ್ಯಕ್ಷರ ಮಗನ ಕಥೆಯೇ ಹೀಗಾದರೆ ಉಳಿದ ಮಂತ್ರಿಗಳ ವಿಷಯವೇನು? ಎಂದು ಅವರು ಹರಿಹಾಯ್ದರು.



ಶುಕ್ರವಾರ ಬಾಗಲಕೋಟೆಯಲ್ಲಿ ಬಸ್ ದರ ಮತ್ತು ಹಾಲಿನ ಬೆಲೆ ಏರಿಕೆಯ ವಿರುದ್ಧ ಭಾರತೀಯ ಜನತಾ ಪಕ್ಷದ ಸದಸ್ಯರು ಪ್ರತಿಭಟನೆ ನಡೆಸಿದರು.

ನ.29ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಉತ್ತರ ಕರ್ನಾಟಕ ಉತ್ಸವ

ಸಚಿವ ಲಕ್ಷ್ಮಣ ಸವದಿ ಅವರಿಂದ ಉತ್ಸವದ ಲಾಂಛನ ಬಿಡುಗಡೆ

ಬೆಂಗಳೂರು, ನ.6: ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾಸಂಸ್ಥೆ ವತಿಯಿಂದ ಇದೇ ನವೆಂಬರ್ 29ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಿರುವ ಉತ್ತರ ಕರ್ನಾಟಕ ಉತ್ಸವ 2026ರ ಲಾಂಛನವನ್ನು ಸಹಕಾರ ಸಚಿವ ಲಕ್ಷ್ಮಣ ಸವದಿ ಬಿಡುಗಡೆ ಮಾಡಿದರು.

ಬೆಂಗಳೂರಿನ ತಮ್ಮ ನಿವಾಸದಲ್ಲಿ ಲೋಗೊ ಬಿಡುಗಡೆ ಮಾಡಿ ಮಾತನಾಡಿದ ಅವರು, ಉತ್ತರ ಕರ್ನಾಟಕ ಭಾಗದ ಜನರು ಉದ್ಯೋಗ ಹಾಗೂ ವ್ಯಾಪಾರಕ್ಕಾಗಿ ರಾಜಧಾನಿ ಬೆಂಗಳೂರಿಗೆ ಆಗಮಿಸಿ ಇಲ್ಲಿಯೇ ನೆಲೆಯೂರಿದ್ದು, ಬೆಂಗಳೂರಿನ ವಿವಿಧ ಬಡಾವಣೆಗಳಲ್ಲಿ ಸುಮಾರು 25 ಲಕ್ಷಕ್ಕೂ ಹೆಚ್ಚು ಉತ್ತರ ಕರ್ನಾಕಟ ಭಾಗದ ಜನರು ವಾಸವಾಗಿದ್ದಾರೆ. ಬೆಂಗಳೂರಿನಲ್ಲಿರುವ ಸುಮಾರು 20ಕ್ಕೂ ಉತ್ತರ ಕರ್ನಾಟಕ ಸಂಘಗಳು ಸೇರಿಕೊಂಡು ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾಸಂಸ್ಥೆ ಎಂದು ಒಂದು ಒಕ್ಕೂಟ ಮಾಡಿ ಕೊಂಡಿದ್ದಾರೆ. ಈ ಒಕ್ಕೂಟದ ವತಿಯಿಂದ ಉತ್ತರ ಕರ್ನಾಟಕ ಉತ್ಸವ ಮಾಡಲು ತೀರ್ಮಾನಿಸಿದ್ದಾರೆ.

ಈ ಸಾಂಸ್ಕೃತಿಕ ಉತ್ಸವದ ಉದ್ಘಾಟನೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನೂ ಆಹ್ವಾನಿಸಿದ್ದೇವೆ. ನಾನೂ ಈ ಉತ್ಸವದಲ್ಲಿ ಪಾಲ್ಗೊಳ್ಳುತ್ತಿದ್ದೇನೆ.




ಬೆಂಗಳೂರಿನಲ್ಲಿರುವ ಎಲ್ಲ ಉತ್ತರ ಕರ್ನಾಟಕ ಭಾಗದ ಜನರು ಆಗಮಿಸಿ, ಎಲ್ಲರೂ ಸೇರಿ ಈ ಉತ್ಸವವನ್ನು ಯಶಸ್ವಿಗೊಳಿಸೋಣ ಎಂದು ಹೇಳಿದರು.

ನ.11ರಂದು ವೀರಪ್ಪ ಮೊಯಿಲಿ ರಚಿತ ಗದ್ಯ ಮಹಾಕಾವ್ಯ 4ನೇ ಸಂಪುಟ ಲೋಕಾರ್ಪಣೆ

ಬೆಂಗಳೂರು, ನ.6: ಮಾಜಿ ಮುಖ್ಯಮಂತ್ರಿ ಹಾಗೂ ಮಾಜಿ ಕೇಂದ್ರ ಸಚಿವ ಡಾ. ಎಂ. ವೀರಪ್ಪ ಮೊಯಿಲಿ ಅವರ ಏಳು ಸಂಪುಟಗಳ ಗದ್ಯ ಮಹಾಕಾವ್ಯ 'ವಿಶ್ವ ಸಂಸ್ಕೃತಿಯ ಮಹಾಯಾನ'ದ ನಾಲ್ಕನೇ ಸಂಪುಟವು ನ.11ರಂದು ಮೈಸೂರಿನ ಸುತ್ತೂರು ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ಬಿಡುಗಡೆಯಾಗಲಿದೆ.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೃತಿಯನ್ನು ಲೋಕಾರ್ಪಣೆ ಮಾಡಲಿದ್ದಾರೆ.



ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳ ಸಾನ್ನಿಧ್ಯದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ, ಯತೀಂದ್ರ ಸಿದ್ದರಾಮಯ್ಯ, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ, ಶಾಸಕ ತನ್ವೀರ್ ಸೇಠ್ ಸಂಶೋಧಕ, ಧಾರ್ಮಿಕ ಪರಿಷತ್ತಿನ ಕೆ.ಎಂ.ನಾಗರಾಜ್, ಡಾ. ಕೆ. ಅನಂತರಾಮ್, ಸಂಸ್ಕೃತ ವಿಶ್ವವಿದ್ಯಾಲಯದ ಮಾಜಿ ಉಪಕುಲಪತಿ ಡಾ. ಪದ್ಮಶೇಖರ್ ಉಪಸ್ಥಿತರಿರುತ್ತಾರೆ.

ಕೃತಿಯ ಆಶಯ ಮತ್ತು ಅದರ ಹಿಂದಿನ ಉದ್ದೇಶ ಕುರಿತು ವೀರಪ್ಪ ಮೊಯಿಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವ್ಯಕ್ತಿ ಮತ್ತು ಸಮಾಜವನ್ನು ವಿಶ್ವಪ್ರಜ್ಞೆ ಹಾಗೂ ವಿಶ್ವಸಂಸ್ಕೃತಿಯ ಮೂಲಕ ಬೆಸೆಯುವ ಪ್ರಯತ್ನವನ್ನು ವಿಶ್ವ ಸಂಸ್ಕೃತಿಯ ಮಹಾಯಾನ ಮಾಡುತ್ತದೆ ಎಂದರು.

ಅಡ್ಡಂಡ ಕಾರ್ಯಪ್ಪ ರಚಿಸಿದ ಗಾಂಧಿ ಹತ್ಯೆಯ ಸತ್ಯ ಪುಸ್ತಕ, ನಾಟಕ ನಿಷೇಧಿಸಿ: ಮದ್ಯಪಾನ ಸಂಯಮ ಮಂಡಳಿ, ಗಾಂಧಿ ಸ್ಮಾರಕ ನಿಧಿ ಆಗ್ರಹ

ಬೆಂಗಳೂರು,ನ.6: ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹತ್ಯೆಗೆ ಸಂಬಂಧಿಸಿದಂತೆ ಅಡ್ಡಂಡ ಕಾರ್ಯಪ್ಪ ಅವರು ರಚಿಸಿರುವ 'ಗಾಂಧಿ ಹತ್ಯೆಯ ಸತ್ಯ ಎಂಬ ನಾಟಕ ಮತ್ತು ಪುಸ್ತಕದ ಪ್ರದರ್ಶನ ಹಾಗೂ ಪ್ರಸರಣಕ್ಕೆ ನಿಷೇಧ ಹೇರಬೇಕು ಎಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ ಅವರು ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ, ನಾಡೋಜ ಡಾ. ವೂಡೇ ಪಿ. ಕೃಷ್ಣ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.



ಮಹಾತ್ಮ ಗಾಂಧೀಜಿಯವರು ಸತ್ಯ, ಅಹಿಂಸೆ, ಶಾಂತಿ, ಸರ್ವಧರ್ಮ ಸಮನ್ವಯ ಮತ್ತು ಮಾನವೀಯ ಮೌಲ್ಯಗಳ ಮೂಲಕ ಜಗತ್ತಿಗೆ ಮಾರ್ಗದರ್ಶನ ನೀಡಿದ ಮಹಾನ್ ನಾಯಕರು ಎಂದು ಪತ್ರದಲ್ಲಿ ಸ್ಮರಿಸಲಾಗಿದೆ.

ಗಾಂಧೀಜಿಯವರ ಹತ್ಯೆಗೆ ಸಂಬಂಧಿಸಿದ ಐತಿಹಾಸಿಕ ಘಟನೆಗಳ ಕುರಿತು ತಪ್ಪು ತಿಳಿವಳಿಕೆ ಮೂಡಿಸುವ ಅಥವಾ ಇತಿಹಾಸವನ್ನು ವಿಕೃತಗೊಳಿಸುವ ಅಂಶಗಳು ಕೃತಿಯಲ್ಲವೆಯೇ ಎಂಬುದನ್ನು ಗಂಭೀರವಾಗಿ ಪರಿಶೀಲಿಸಬೇಕಾದ ಅಗತ್ಯವಿದೆ ಎಂದಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಇತಿಹಾಸದ ಕುರಿತು ಭಿನ್ನಾಭಿಪ್ರಾಯ ವ್ಯಕ್ತಪಡಿಸುವ ಸ್ವಾತಂತ್ರ್ಯ ವಿದ್ದರೂ, ನ್ಯಾಯಾಲಯದ ದಾಖಲೆ ಗಳು, ಐತಿಹಾಸಿಕ ಸಾಕ್ಷ್ಯಗಳು ಮತ್ತು ಅಧಿಕೃತ ದಾಖಲೆಗಳ ಆಧಾರದ ಮೇಲೆಯೇ ಇಂತಹ ಕೃತಿಗಳನ್ನು ಪರಿಶೀಲಿಸಬೇಕು ಎಂದು ಅಭಿಪ್ರಾಯ ಪಡಲಾಗಿದೆ.

ಕನ್ನಡಿಗರಿಗೆ ಉದ್ಯೋಗವಕಾಶ: ಕೆಐಎಗೆ ಕರವೇ ನಿಯೋಗ ಭೇಟಿ, ವಿವಿಧ ಸಂಸ್ಥೆಗಳ ಮುಖ್ಯಸ್ಥರ ಜತೆ ಮಾತುಕತೆ

ಬೆಂಗಳೂರು, ನ.6: ನಾಡಪ್ರಭು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕನ್ನಡಿಗರಿಗೆ ಉದ್ಯೋಗಾವಕಾಶಗಳು ದೊರೆಯುತ್ತಿಲ್ಲ ಎಂಬ ದೂರುಗಳ ಹಿನ್ನೆಲೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡರು ಖುದ್ದಾಗಿ ಭೇಟಿ ನೀಡಿ ಅಲ್ಲಿನ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಸ್ಥಳೀಯರಿಗೆ ಉದ್ಯೋಗ ನೇಮಕಾತಿಯಲ್ಲಿ ಯಾವುದೇ ಅನ್ಯಾಯವಾಗದಂತೆ ನೋಡಿಕೊಳ್ಳುವ ಭರವಸೆಯನ್ನು ಸಂಸ್ಥೆಗಳ ಮುಖಂಡರು ನೀಡಿದರು.

ಆಗ್ರಹ ಅಭಿಯಾನದ ಉದ್ದೇಶವನ್ನು ವಿವಿಧ ಸಂಸ್ಥೆಗಳ ಮುಖ್ಯಸ್ಥರಿಗೆ ವಿವರಿಸಿದ ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ, ನಾವು ಯಾವುದೇ ಉದ್ಯಮಗಳ ವಿರುದ್ಧವಾಗಿಲ್ಲ, ಕರ್ನಾಟಕದ ಎಲ್ಲ ಉದ್ಯಮಗಳೂ ಸ್ಥಳೀಯರಿಗೆ ಆದ್ಯತೆ ನೀಡಬೇಕು ಎಂಬುದಷ್ಟೇ ನಮ್ಮ ಆಗ್ರಹ. ಅದು ಸಂಸ್ಥೆಗಳ ನೈತಿಕ, ಸಾಮಾಜಿಕ, ಆಡಳಿತಾತ್ಮಕ ಜವಾಬ್ದಾರಿ ಕೂಡ. ಈ ಹಿನ್ನೆಲೆಯಲ್ಲಿ ಎಲ್ಲ ಸಂಸ್ಥೆಗಳ ಕರ್ತವ್ಯವನ್ನು ನೆನಪಿಸುವ ಕಾರ್ಯವನ್ನಷ್ಟೇ ನಾವು ಮಾಡುತ್ತಿದ್ದೇವೆ. ನಾವು ಕೇಳಿದ ಮಾಹಿತಿಗಳನ್ನು ಸಂಸ್ಥೆಗಳು ನೀಡಿದರೆ ರಾಜ್ಯ ಸರ್ಕಾರಕ್ಕೆ ಒಂದು ಸಮಗ್ರ ವರದಿಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು.

ನಾಲ್ಕು ಪಥದ ಎಲಿವೇಟೆಡ್ ಕಾಮಗಾರಿ: ಮುಂದಿನ 18 ತಿಂಗಳವರೆಗೆ ಬಳ್ಳಾರಿ ರಸ್ತೆಯಲ್ಲಿ ಸಂಚಾರ ಮಾರ್ಗ ಬದಲಾವಣೆ

ಬೆಂಗಳೂರು, ನ.6: ನಗರದ ಬಳ್ಳಾರಿ ರಸ್ತೆಯ ಯುಎಎಸ್ ಸ್ಟಾಫ್ ಕ್ವಾರ್ಟರ್ಸ್‌ನಿಂದ ಮೇಖ್ರಿ ಸರ್ಕಲ್‌ವರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನಾಲ್ಕು ಪಥದ ಬೃಹತ್ ಎಲಿವೇಟೆಡ್ ಕಾರಿಡಾರ್ ಕಾಮಗಾರಿ ಕೈಗೆತ್ತಿಕೊಳ್ಳುತ್ತಿರುವುದರಿಂದ, ನವೆಂಬರ್ 6, ರಿಂದ ಮುಂದಿನ 18 ತಿಂಗಳ ಕಾಲ ಬಳ್ಳಾರಿ ರಸ್ತೆಯಲ್ಲಿ ಸಂಚಾರ ಮಾರ್ಗ ಬದಲಾವಣೆ ಮಾಡಲಾಗಿದೆ.

ಶುಕ್ರವಾರ ಕಾಮಗಾರಿ ಆರಂಭವಾಗಲಿದ್ದು, ಸಂಚಾರ ದಟ್ಟಣೆ ಉಂಟಾಗುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಸದಾಶಿವನಗರ ಮತ್ತು ಸಂಜಯನಗರ ಸಂಚಾರ ಪೊಲೀಸ್ ಠಾಣೆಗಳ ವ್ಯಾಪ್ತಿಗೆ ಬರುವ ಈ ರಸ್ತೆಯಲ್ಲಿ ವಾಹನ ಸಂಚಾರದ ಮೇಲೆ ನಿರ್ಬಂಧಗಳನ್ನು ವಿಧಿಸಲಾಗಿದೆ. ಇಂದಿನಿಂದ ಮೇಖ್ರಿ ಸರ್ಕಲ್‌ನಿಂದ ಹೆಬ್ಬಾಳದವರೆಗಿನ ಪ್ರಮುಖ ರಸ್ತೆಯನ್ನು ಸಂಪೂರ್ಣವಾಗಿ ಮುಚ್ಚಲಾಗುತ್ತಿದ್ದು, ಕೇವಲ ಸರ್ವಿಸ್ ರಸ್ತೆಯಲ್ಲಿ ಮಾತ್ರವೇ ಸೀಮಿತ ವಾಹನ ಸಂಚಾರಕ್ಕೆ ಅವಕಾಶ ನೀಡಲಾಗಿದೆ.

ಪರ್ಯಾಯ ಮಾರ್ಗ:

ಬಳ್ಳಾರಿ ರಸ್ತೆಯಲ್ಲಿ ಎಲ್ಲಾ ರೀತಿಯ ಸರಕು ಸಾಗಣೆ ವಾಹನಗಳು (ಹಗುರ, ಮಧ್ಯಮ ಮತ್ತು ಭಾರೀ ಸರಕು ವಾಹನಗಳು) ಹಾಗೂ ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್‌ಗಳ ಸಂಚಾರವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಆದ್ದರಿಂದ, ಹೆಬ್ಬಾಳದ ಮೂಲಕ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಬೆಂಗಳೂರು ನಗರದ ಕಡೆಗೆ ಸಂಚರಿಸುವ



ವಾಹನಗಳು ತುರ್ತು ಸೇವಾ ವಾಹನಗಳು ಸೇರಿ ಕೆಳಗೆ ಸೂಚಿಸಲಾದ ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಸಲಹೆ ನೀಡಲಾಗಿದೆ.

ಹಳೇ ಹೈಗ್ರೌಂಡ್ಸ್ – ಬೆಂಗಳೂರು ದಂಡು ರೈಲ್ವೆ ನಿಲ್ದಾಣ – ಟ್ಯಾನರಿ ರಸ್ತೆ – ನಾಗವಾರ ಮೂಲಕ ಅಥವಾ ಯಶವಂತಪುರದಿಂದ ಬಿಇಎಲ್ ವೃತ್ತ – ಹೊರವರ್ತುಲ ರಸ್ತೆ ಮೂಲಕ ತೆರಳಬಹುದು. ವಿಮಾನ ನಿಲ್ದಾಣದಿಂದ ನಗರಕ್ಕೆ: ಹೆಬ್ಬಾಳದಲ್ಲಿ ಎಡತಿರುವು ಪಡೆದು ನಾಗವಾರ – ಕ್ವೀನ್ಸ್ ರಸ್ತೆ ಮಾರ್ಗವಾಗಿ ಅಥವಾ ಹೆಬ್ಬಾಳ ರಿಂಗ್ ರಸ್ತೆ – ಗೊರಗುಂಟೆಪಾಳ್ಯ – ಡಾ. ರಾಜ್‌ಕುಮಾರ್ ರಸ್ತೆ ಮಾರ್ಗವಾಗಿ ಬರಬಹುದು ಸ್ಥಳೀಯ ಸಂಚಾರ: ಆನಂದನಗರ ಮತ್ತು ಆರ್.ಟಿ. ನಗರದ ಕಡೆಗೆ ತೆರಳುವವರು ಬ್ಯಾಪ್ಟಿಸ್ಟ್ ಆಸ್ಪತ್ರೆ ಸರ್ವಿಸ್ ರಸ್ತೆ ಹಾಗೂ ಸಿಬಿಐ ಜಂಕ್ಷನ್ ಮಾರ್ಗ ಬಳಸಲು ಸೂಚಿಸಲಾಗಿದೆ. ಏರ್‌ಪೋರ್ಟ್ ರಸ್ತೆಯಲ್ಲಿ ಭಾರಿ ಕಾಮಗಾರಿ ನಡೆಯುತ್ತಿರುವುದರಿಂದ, ವಿಮಾನ ನಿಲ್ದಾಣಕ್ಕೆ ತೆರಳುವ ಪ್ರಯಾಣಿಕರು ನಿಗದಿತ ಸಮಯಕ್ಕಿಂತ ಕನಿಷ್ಠ 1 ರಿಂದ 2 ಗಂಟೆಗಳ ಮುಂಚಿತವಾಗಿ ಹೊರಡುವುದು ಸೂಕ್ತ ಎಂದು ಸಂಚಾರಿ ಪೊಲೀಸರು ಸೂಚಿಸಿದ್ದಾರೆ.

ಕ್ಯಾಬ್ ಚಾಲಕನಿಂದ 7 ಸಂಬಂಧಿಕರ ಸರಣಿ ಹತ್ಯೆ: 20 ದಿನಗಳಲ್ಲಿ ಘನಘೋರ ಕೃತ್ಯ





ಬೆಂಗಳೂರು, ನ.6: ಕ್ಯಾಬ್ ಚಾಲಕನೊಬ್ಬ ಕೇವಲ 20 ದಿನಗಳ ಅಂತರದಲ್ಲಿ ಪತ್ನಿ ಸೇರಿದಂತೆ ಆಕೆಯ ತವರುಮನೆಯ ಏಳು ಮಂದಿಯನ್ನು ಮನೆಗೆ ಕರೆಸಿ ಒಬ್ಬೊಬ್ಬರನ್ನಾಗಿ ಹತ್ಯೆ ಮಾಡಿ ಒಂದೊಂದೇ ಶವಗಳನ್ನು ಬೆಟ್ಟಗುಡ್ಡಗಳ ಪ್ರದೇಶಗಳಲ್ಲಿ ಬಿಸಾಡಿರುವ ಘನಘೋರ ಕೃತ್ಯಕ್ಕೆ ಸಿಲಿಕಾನ್ ಸಿಟಿ ಸಾಕ್ಷಿಯಾಗಿದೆ. ತನ್ನ ಕೈ ಹಿಡಿದ ಪತ್ನಿ ಸೇರಿದಂತೆ ಆಕೆಯ ತವರು ಮನೆಯ ಏಳು ಮಂದಿಯನ್ನು ಭೀಕರವಾಗಿ ಹತ್ಯೆ ಮಾಡಿರುವ ನರಹಂತಕ ಪತಿಯನ್ನು ಇಂದುಶೇಖರ್(52) ಎಂದು ಗುರುತಿಸಲಾಗಿದೆ. ಆಸ್ತಿ ಅಥವಾ ಪತ್ನಿ ಕುಟುಂಬದ ಮೇಲಿನ ವೈಯಕ್ತಿಕ ದ್ವೇಷದಿಂದ ಈ ಕೃತ್ಯ ವೆಸಗಿದ್ದಾನೆಂದು ಶಂಕಿಸಲಾಗಿದೆ. ರಾಜಾಜಿನಗರದ ಬಾಷ್ಯಂ ಸರ್ಕಲ್ ಸಮೀಪದ 59ನೇ ಕ್ರಾಸ್‌ನಲ್ಲಿ ವಾಸವಿದ್ದ ಕ್ಯಾಬ್ ಚಾಲಕ ಇಂದುಶೇಖರ್ ಪತ್ನಿ ಸುನಿತಾ (40), ರೂಪವತಿ(65), ಶಿವಕುಮಾರ್(30) ಅವರ ಏಳು ವರ್ಷದ ಮಗ ಪುನೀತ್ ಮತ್ತು ಭಾಮೈದ ಶಂಕರ್(44), ಇವರ ಪತ್ನಿ(ನಾದಿನಿ)ಯರಾದ ದಿವ್ಯಾ(30), ನಳಿನಿ (29) ಅವರನ್ನು ಕೊಲೆ ಮಾಡಿದ್ದಾನೆಂದು ರಾಜಾಜಿನಗರ ಠಾಣೆ ಪೊಲೀಸರು ತಿಳಿಸಿದ್ದಾರೆ. ಶೇಖರ್ ಅಲಿಯಾಸ್ ಇಂದುಶೇಖರ್ ಬಂಧಿತ ಆರೋಪಿ. ಈತ 20 ವರ್ಷಗಳ ಹಿಂದೆ ಸುನೀತಾ ಎಂಬುವರನ್ನು ವಿವಾಹವಾಗಿದ್ದನು. ಇವರಿಬ್ಬರ ನಡುವೆ ಕಳೆದ ಕೆಲ ಕಾಲದಿಂದ ದಾಂಪತ್ಯ ಕಲಹಗಳು ನಡೆಯುತ್ತಿದ್ದವು. ಈ ಜಗಳಗಳ ಸಂದರ್ಭದಲ್ಲಿ ಸುನೀತಾ ಅವರ ಕುಟುಂಬದವರು ಹಲವು ಬಾರಿ ಮಧ್ಯಪ್ರವೇಶಿಸಿ ಆಕೆಗೆ ಬೆಂಬಲ ನೀಡುತ್ತಿದ್ದರು. ತನ್ನ ದಾಂಪತ್ಯ ಜೀವನದಲ್ಲಿ ಪತ್ನಿಯ ಕುಟುಂಬದವರು ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದು ಶಂಕೆ ವ್ಯಕ್ತಪಡಿಸಿದ ಶೇಖರ್, ಅವರನ್ನು ಸಂಪೂರ್ಣವಾಗಿ ಮುಗಿಸಲು ನಿರ್ಧರಿಸಿದ್ದ ಎಂದು ಮೂಲಗಳು ತಿಳಿಸಿವೆ.

ಎಂಟು ತಿಂಗಳಿಂದ ಸಂಬಳವಿಲ್ಲ: ನೀರು ಪೂರೈಕೆ ಬಂದ್ ಮಾಡಿ ಪಾಲಿಕೆ ಸಿಬ್ಬಂದಿ ಆಕ್ರೋಶ



ಬೀದರ್, ನ.3: ಬೀದರ್ ನಗರದ ಜನರಿಗೆ ಕುಡಿಯುವ ನೀರು ಪೂರೈಕೆ ಮಾಡುವ ಮಹಾನಗರ ಪಾಲಿಕೆಯ ಸಿಬ್ಬಂದಿ ಕಂಗಾಲಾಗಿದ್ದಾರೆ. ಕಳೆದ 8 ತಿಂಗಳಿಂದ ಸಂಬಳವಿಲ್ಲದೆ 54 ಸಿಬ್ಬಂದಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಲವು ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನ ವಾಗಿಲ್ಲ. ಹೀಗಾಗಿ ಕೊನೆಗೆ ನೀರು ಪೂರೈಕೆಯನ್ನೆ ಬಂದ್ ಮಾಡಿ ಪ್ರತಿಭಟನೆಗೆ ಇಳಿದಿದ್ದಾರೆ. ಸಂಬಳಕೊಡುವ ಭರವಸೆ ಸಿಗುವವರೆಗೂ ಪ್ರತಿಭಟನೆ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ದುಡಿದರೂ ವೇತನವಿಲ್ಲ: ಖರ್ಚು, ವೆಚ್ಚ ಹೊಂದಿಸಲಾಗದೆ ಪರದಾಟ: ಒಂದೆಡೆ ಬೀದರ್ ನಗರದ ಜನರಿಗೆ ಕುಡಿಯುವ ನೀರು ಪೂರೈಸುವ ಜವಾಬ್ದಾರಿ. ಮತ್ತೊಂದೆಡೆ ಎಂಟು ತಿಂಗಳಿಂದ ಕೈ ಸೇರದ ಸಂಬಳ. ದುಡಿದರೂ ವೇತನವಿಲ್ಲದೆ ಜೀವನ ನಡೆಸುವುದೇ ಕಷ್ಟವಾಗಿದೆ. ಇದು ಬೀದರ್ ಮಹಾನಗರ ಪಾಲಿಕೆಯ ನೀರು ಸರಬರಾಜು ವಿಭಾಗದ ಸಿಬ್ಬಂದಿಯ ದುಸ್ಥಿತಿ. ಇಂಜಿನಿಯರ್‌ಗಳು, ಪ್ರಯೋಗಾಲಯ ತಂತ್ರಜ್ಞರು, ಪಂಪ್ ಆಪರೇಟರ್‌ಗಳು, ವಾಲ್ವ್‌ಮ್ಯಾನ್‌ಗಳು, ನೀರಿನ ಬಿಲ್ ಕಲೆಕ್ಟರ್‌ಗಳು ಸೇರಿದಂತೆ ಒಟ್ಟು 54 ಸಿಬ್ಬಂದಿಗೆ ಕಳೆದ ಎಂಟು ತಿಂಗಳಿಂದ ವೇತನ ಪಾವತಿಯಾಗಿಲ್ಲ. ಹೀಗಾಗಿ ಕುಟುಂಬ ನಿರ್ವಹಣೆ, ಮಕ್ಕಳ ಶಿಕ್ಷಣ, ದಿನನಿತ್ಯದ ಖರ್ಚುಗಳಿಗೆ ಹಣ ಹೊಂದಿಸಲಾಗದೆ ಸಿಬ್ಬಂದಿ ಪರದಾಡುತ್ತಿದ್ದಾರೆ.

ಸಂಬಳ ಬಿಡುಗಡೆ ಮಾಡುವಂತೆ ಮಹಾನಗರ ಪಾಲಿಕೆ ಆಯುಕ್ತರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದಾರೆ. ಆದರೆ ಸಿಬ್ಬಂದಿಯ ಮನವಿಗೆ ಅಧಿಕಾರಿಗಳಿಂದ ಸೂಕ್ತ ಸ್ಪಂದನೆ ಸಿಕ್ಕಿಲ್ಲ ಎನ್ನಲಾಗಿದೆ. ಇದರಿಂದ ಆಕ್ರೋಶಗೊಂಡ ಸಿಬ್ಬಂದಿ, ಭಾಲ್ಕಿ ತಾಲೂಕಿನ ನೀಲಮ್ಮನಹಳ್ಳಿ ತಾಂಡಾ ಸಮೀಪದ ನೀರು ಶುದ್ಧೀಕರಣ ಘಟಕದ ಬಳಿ ಧರಣಿ ನಡೆಸಿದ್ದಾರೆ.

ಬೀದರ್ ನಗರಕ್ಕೆ ನೀರು ಪೂರೈಕೆ ಬಂದ್ ಮಾಡಿ ಆಕ್ರೋಶ: ಕೇವಲ ಧರಣಿಗೆ ಸೀಮಿತವಾಗದ ಸಿಬ್ಬಂದಿ, ಕೆಲಸ ಕಾರ್ಯ ಸ್ಥಗಿತಗೊಳಿಸಿ ಬೀದರ್ ನಗರಕ್ಕೆ ನೀರು ಪೂರೈಕೆಯನ್ನೂ ಬಂದ್ ಮಾಡಿ ಆಕ್ರೋಶ ಹೊರಹಾಕಿದ್ದಾರೆ. ಬಾಕಿ ಇರುವ ಎಂಟು ತಿಂಗಳ ಸಂಬಳವನ್ನು ತಕ್ಷಣ ಬಿಡುಗಡೆ ಮಾಡಬೇಕು. ವೇತನ ಪಾವತಿ ಕುರಿತು ಸ್ಪಷ್ಟ ಭರವಸೆ ಸಿಗುವವರೆಗೂ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ಒಟ್ಟಿನಲ್ಲಿ ಜನರಿಗೆ ಕುಡಿಯುವ ನೀರು ಒದಗಿಸುವ ಸಿಬ್ಬಂದಿಯೇ ಇಂದು ಸಂಬಳವಿಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಿಬ್ಬಂದಿಯ ಪ್ರತಿಭಟನೆಯಿಂದ ಕುಡಿಯುವ ನೀರು ಪೂರೈಕೆಗೆ ಅಡ್ಡಿಯಾಗುವ ಆತಂಕ ಎದುರಾಗಿದೆ. ಇನ್ನಾದರೂ ಮಹಾನಗರ ಪಾಲಿಕೆ ಅಧಿಕಾರಿಗಳು ಎಚ್ಚೆತ್ತುಕೊಂಡು ಸಿಬ್ಬಂದಿಯ ಬಾಕಿ ವೇತನ ಬಿಡುಗಡೆ ಮಾಡುತ್ತಾರಾ ಅಥವಾ ಸಿಬ್ಬಂದಿಯ ಹೋರಾಟ ಮತ್ತಷ್ಟು ತೀವ್ರಗೊಳ್ಳುತ್ತಾ ಕಾದು ನೋಡಬೇಕಿದೆ.



ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಶುಕ್ರವಾರ ಮಂಗಳೂರಿನಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಬೃಹತ್ ಪಾದಯಾತ್ರೆ ಹಾಗೂ ಸಾರ್ವಜನಿಕ ಸಭೆ ಆಯೋಜಿಸಿತ್ತು. ರ್‍ಯಾಲಿಯಲ್ಲಿ ಕೇಂದ್ರ ಸಚಿವ ಸುರೇಶ್ ಗೋಪಿ, ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಭಾಗವಹಿಸಿದ್ದರು.

ಮಕ್ಕಳ ಸಾಹಿತ್ಯ ಪ್ರೋತ್ಸಾಹಿಸಲು ಸಾಹಿತಿ ಎ.ಕೆ.ರಾಮೇಶ್ವರ ಕರೆ



ಕಲಬುರಗಿ, ನ. 6: ಇತ್ತೀಚೆಗೆ ಮಕ್ಕಳ ಸಾಹಿತ್ಯ ರಚಿಸುವಲ್ಲಿ ಬಾಲ ಲೇಖಕಿಂಯಿರು ಹೆಚ್ಚಾಗಿ ತೊಡಗಿಸಿಕೊಳ್ಳುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ಇಂಥ ಮಕ್ಕಳಿಗೆ ಪ್ರೋತ್ಸಾಹ ನೀಡುವ ಮೂಲಕ ಬೆಳೆಸಿ, ಮಕ್ಕಳ ಸಾಹಿತ್ಯದ ಬೆಳವಣಿಗೆ ಮಾಡುವುದು ತುಂಬಾ ಅಗತ್ಯವಾಗಿದೆ ಎಂದು ಮಕ್ಕಳ ಸಾಹಿತಿ ಎ.ಕೆ. ರಾಮೇಶ್ವರ ಹೇಳಿದರು.

ನಗರದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಇತ್ತೀಚೆಗೆ ನಡೆದ ಬಾಲ ಲೇಖಕಿ ಕು. ವರ್ಷಿಣಿ ಮಾಲಿಪಾಟೀಲ ವಿರಚಿತ ಕಾವ್ಯ ವರ್ಷಣಿ ಚೊಚ್ಚಲ ಕೃತಿಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಮಕ್ಕಳ ಭಾವನೆಗಳು ಕತೆ–ಕಾವ್ಯದ ರೂಪವಾಗಿ ಹೊರಹೊಮ್ಮುತ್ತಿವೆ. ಅನೇಕ ಹಿರಿಯರು ಮಕ್ಕಳ ಸಾಹಿತ್ಯ ರಚಿಸಿದ್ದಾರೆ. ಆದರೆ ಮಕ್ಕಳೇ ರಚಿಸಿದ ಸಾಹಿತ್ಯ ಹೆಚ್ಚು ಸತ್ವಯುತವಾಗಿರುತ್ತದೆ. ಅವರ ಸಾಹಿತ್ಯಕ್ಕೆ ವೇದಿಕೆಗಳು ಕಲ್ಪಿಸಿ ಕೊಡಬೇಕು. ರಾಜ್ಯ ಸರಕಾರವೂ ಸಹ ಮಕ್ಕಳ ಸಾಹಿತಿಗಳಿಗೆ ಗುರುತಿಸುವಂತಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಅವರು ಮಾತನಾಡಿ, ಈ ನೆಲದಲ್ಲಿ ಪ್ರತಿಭಾವಂತರ ಕೊರತೆ ಇಲ್ಲ. ಆದರೆ ಅವರನ್ನು ಗುರುತಿಸಿ ಬೆಳೆಸುವ ಮನಸ್ಸುಗಳ ಕೊರತೆ ಇದೆ. ಕನ್ನಡ ಸಾಹಿತ್ಯ ಪರಿಷತ್ ಕಳೆದ ಐದು ವರ್ಷಗಳಿಂದ ನಿರಂತರವಾಗಿ ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹಿಸುವ ಮತ್ತು ಗೌರವಿಸುವ ಕಾರ್ಯ ಮಾಡುತ್ತಿದೆ. ಇಂದು ಕು. ವರ್ಷಿಣಿ ಅವರ ಕೃತಿ ಕನ್ನಡ ಸಾರಸ್ವತ ಲೋಕದ ಶ್ರೀಮಂತಿಕೆ ಪೂರಕವಾಗಿದೆ. ಅವರಿಂದ ಇನ್ನಷ್ಟು ಕೃತಿಗಳು ಪ್ರಕಟವಾಗಲಿ ಎಂದು ಆಶಿಸಿದರು.

ಕಳೆದ ಐದು ವರ್ಷಗಳಿಂದ ಜಿಲ್ಲೆಯ ಜನರನ್ನು ಒಗ್ಗೂಡಿಸುವ, ಕನ್ನಡಾಭಿಮಾನ ಬೆಳೆಸುವ ಕಾರ್ಯ ಪರಿಷತ್ತು ಮಾಡುತ್ತಾ ಬರುತ್ತಿದೆ. ಕಸಾಪ ಇದು ಕೇವಲ ಒಂದು ಸಂಘಟನೆ ಅಲ್ಲ. ಬದಲಾಗಿ ಸಮಸ್ತ ಕನ್ನಡಿಗರ ಭಾಷಾಭಿಮಾನ, ಸಾಹಿತ್ಯಕ, ಸಾಂಸ್ಕೃತಿಕ ಪರಂಪರೆಯನ್ನು ಬಿಂಬಿಸುವ ಪವಿತ್ರವಾದ ಸಂಸ್ಥೆಯಾಗಿದೆ. ಪರಿಷತ್ ನಮಗೆ ಘನತೆ, ಗೌರವ ತಂದುಕೊಟ್ಟಿದೆ. ಅದಕ್ಕೆ ಚ್ಯುತಿ ಬರದಂತೆ ಕಾರ್ಯ ನಿರ್ವಹಿಸಿದ್ದೇವೆ ಎಂದು ಅವರು ಹೇಳಿದರು.

ಉದ್ಯಾನ ಜೀವ ವೈವಿಧ್ಯದ ಅರಿವಿನ ತಾಣವಾಗಲಿ: ಈಶ್ವರ ಖಂಡ್ರೆ

ಬೀದರ್, ನ. 6: ಉದ್ಯಾನ ವನಗಳು ಕೇವಲ ಹಸಿರಿನ ತಾಣಗಳಾಗಿರದೆ ಅರಣ್ಯ, ಜೀವ ವೈವಿಧ್ಯದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ವೈಜ್ಞಾನಿಕ ತಾಣಗಳಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ನಗರದ ನೌಬಾದ್ ಪ್ರದೇಶದಲ್ಲಿ ಅರಣ್ಯ ಇಲಾಖೆಯ ಆವರಣದಲ್ಲಿ 5 ಕೋಟಿ ವೆಚ್ಚದ ಅರಣ್ಯ ಭವನ ಹಾಗೂ 2 ಕೋಟಿ ಮೊತ್ತದ ಟ್ರೀ ಪಾರ್ಕ್ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದ ಅವರು, ಮಕ್ಕಳು ಆಟವಾಡಲು, ಸಾರ್ವಜನಿಕರು ವಿರಾಮದ ಸಮಯ ಕಳೆಯಲು ಹಾಗೂ ಪ್ರಕೃತಿ ಸೌಂದರ್ಯವನ್ನು ಆಸ್ವಾದಿಸಲು ಉದ್ಯಾನಗಳು ಉತ್ತಮ ಸ್ಥಳಗಳಾಗಿ ರೂಪುಗೊಳ್ಳಬೇಕು ಎಂದರು.

ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಇಂಚೂರು ಗ್ರಾಮದಲ್ಲಿ ಈಗಾಗಲೇ ಅಭಿವೃದ್ಧಿಪಡಿಸಿ ಉದ್ಘಾಟಿಸಿರುವ ಟ್ರೀ ಪಾರ್ಕ್ ಇಂದು ಬೀದರ್ ಜಿಲ್ಲೆಯ ಪ್ರಮುಖ ಆಕರ್ಷಣೆಯ ಕೇಂದ್ರವಾಗಿದೆ. ಅದೇ ಮಾದರಿಯಲ್ಲಿ



ಬೀದರನ ನೌಬಾದ ಪ್ರದೇಶದಲ್ಲಿ ಅರಣ್ಯ ಇಲಾಖೆಯ ಆವರಣದಲ್ಲಿ 5 ಕೋಟಿ ವೆಚ್ಚದ ಅರಣ್ಯ ಭವನ ನಿರ್ಮಾಣ ಹಾಗೂ 2 ಕೋಟಿ ಮೊತ್ತದ ಟ್ರೀ ಪಾರ್ಕ್ ಅಭಿವೃದ್ಧಿಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಭೂಮಿಪೂಜೆ ನೆರವೇರಿಸಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲೂ ಆಕರ್ಷಕ ಟ್ರೀ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದರು.

ಶಾಲಾ ಮಕ್ಕಳಲ್ಲಿ ಅರಣ್ಯದ ಬಗ್ಗೆ ಹೆಚ್ಚಿನ ಅರಿವು ಮೂಡಿಸಲಾಗುವುದು. ವಿವಿಧ ಪ್ರಭೇದಗಳ ಸಸಿಗಳನ್ನು ನೆಟ್ಟು ಪ್ರತಿಯೊಂದರ ಗಿಡ–ಮರಗಳ ಪರಿಪೂರ್ಣ ಮಾಹಿತಿ ನೀಡಿ ಗಿಡಗಳನ್ನು ಬೆಳೆಸುವಂತೆ ಪ್ರೇರೇಪಿಸಲಾಗುವುದು. ಪ್ರತಿಯೊಂದು ಮಗು ತಮ್ಮ ಮನೆ ಮುಂದೆ ಮರಗಳನ್ನು ಬೆಳೆಸಬೇಕು. ಸುತ್ತ ಮುತ್ತಲಿನ ಜನರಲ್ಲಿ ಅರಿವು ಮೂಡಿಸುವಂತೆ ಮನವರಿಕೆ ಮಾಡಲಾಗುವುದು ಎಂದರು.

ನಾನು ಅರಣ್ಯ ಸಚಿವನಿದ್ದಾಗ ಬೀದರ್ ಜಿಲ್ಲೆಯಲ್ಲಿ ಹಸಿರು ಪರಿಸರವನ್ನು ಬೆಳೆಸುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ರೂಪಿಸಿ, ಜಾರಿಗೆ ತಂದಿದ್ದೇನೆ. ಅದರ ಭಾಗವಾಗಿ ಈಗ ನೆಲಮಹಡಿಯ ಆಡಳಿತ ಭವನ ನಿರ್ಮಿಸಲಾಗುತ್ತಿದೆ.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ರೂ.2 ಕೋಟಿ ವೆಚ್ಚದಲ್ಲಿ ಸುಂದರವಾದ ಟ್ರೀ ಪಾರ್ಕ್ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಿದ್ದೆ. ಅವುಗಳಿಗೆ ಇನ್ನೂ ಹೆಚ್ಚಿನ ಅನುದಾನದ ಅಗತ್ಯವಿದ್ದಲ್ಲಿ ಬಿಡುಗಡೆಗೊಳಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ರಹೀಂ ಖಾನ್, ಉದ್ಯಾನಗಳಲ್ಲಿ ಅರಣ್ಯದ ಕುರಿತು ಜಾಗೃತಿಗೆ ತರಬೇತಿ ಕೇಂದ್ರ ನಿರ್ಮಿಸಬೇಕಿದೆ. ಮಕ್ಕಳು ಹಾಗೂ ಸಾರ್ವಜನಿಕರು ಕುಟುಂಬ ಸಮೇತ ಬಂದು ಕಾಲ ಕಳೆಯಲು ಉದ್ಯಾನಗಳಿಗಿಂತ ಮತ್ತೊಂದು ಉತ್ತಮ ಸ್ಥಳವಿಲ್ಲ ಎಂದರು.

ಬೀದರ್ ತಾಲ್ಲೂಕಿನ ಚಿಲ್ಲರ್ಗಿ ಶಾಲಾ ಮಕ್ಕಳಿಗಾಗಿ ಏರ್ಪಡಿಸಿದ ಚಿಣ್ಣರ ವನದರ್ಶನ ಪ್ರವಾಸಕ್ಕೆ ಸಚಿವರು ಚಾಲನೆ ನೀಡಿದರು.

'ಮದ್ಯ ತಗೊಂಡು ಬಾ, 30 ಸಾವಿರ ಕಾಸು ಕೊಡು...!'

ಗೃಹ ಸಚಿವರ ಜಿಲ್ಲೆಯ ಅಂಬೇಡ್ಕರ್ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ರ್‍ಯಾಗಿಂಗ್



ಕಲಬುರಗಿ, ನ. 6: ನಗರದ ಡಾ. ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿ ನಿಲಯದಲ್ಲಿ ವಾಸವಿರುವ ವಿದ್ಯಾರ್ಥಿಗೆ ಕೆಲವರು ಮದ್ಯ ತಂದುಕೊಡುವಂತೆ ಹಾಗೂ ಹಣ ನೀಡುವಂತೆ ಪೀಡಿಸಿ ಮಾರಣಾಂತಿಕ ಹಲ್ಲೆ ನಡೆಸಿದ ರ್‍ಯಾಗಿಂಗ್ ಘಟನೆ ಗೃಹ ಸಚಿವರ ಉಸ್ತುವಾರಿ ಜಿಲ್ಲೆಯಲ್ಲೇ ನಡೆದಿರುವುದು ವರದಿಯಾಗಿದೆ. ಈ ಘಟನೆಯು ವಿದ್ಯಾರ್ಥಿ ವಲಯದಲ್ಲಿ ಮತ್ತು ಪೋಷಕರಲ್ಲಿ ತೀವ್ರ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.

ವಿದ್ಯಾರ್ಥಿ ನಿಲಯದಲ್ಲಿ ಉಳಿದುಕೊಂಡು ವಿದ್ಯಾಭ್ಯಾಸ ಮಾಡುತ್ತಿರುವ ಸಂತ್ರಸ್ತ ವಿದ್ಯಾರ್ಥಿಗೆ ಕೆಲವು ಕಿಡಿಗೇಡಿಗಳು ನಿರಂತರ ಕಿರುಕುಳ ನೀಡುತ್ತಿದ್ದರು ಎನ್ನಲಾಗಿದೆ. ಆರೋಪಿಗಳು ವಿದ್ಯಾರ್ಥಿಗೆ ಮದ್ಯ ತಂದುಕೊಡುವಂತೆ ಹಾಗೂ ತಮಗೆ 30 ಸಾವಿರ ರೂ. ಹಣ ನೀಡುವಂತೆ ಪದೇ ಪದೇ ಒತ್ತಾಯಿಸಿ ಮಾನಸಿಕ ಹಾಗೂ ದೈಹಿಕವಾಗಿ ಹಿಂಸೆ ನೀಡುತ್ತಿದ್ದರು. ವಿದ್ಯಾರ್ಥಿಯು ಅವರ ಅಕ್ರಮ ಬೇಡಿಕೆಗಳಿಗೆ ಒಪ್ಪದಿದ್ದಾಗ ಮತ್ತು ವಿರೋಧ ವ್ಯಕ್ತಪಡಿಸಿದಾಗ, ಆರೋಪಿಗಳು ಆಕ್ರೋಶಗೊಂಡು ಆತನ ಮೇಲೆ ಏಕಾಏಕಿ ಹಲ್ಲೆ ನಡೆಸಿದ್ದಾರೆ.

ಈ ಮಾರಣಾಂತಿಕ ಹಲ್ಲೆಯಿಂದ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿವೆ. ಘಟನೆಯ ಕುರಿತು ಮಾಹಿತಿ ತಿಳಿದುಬಂದ ತಕ್ಷಣವೇ ಸ್ಥಳೀಯರು ಹಾಗೂ ಸಂಬಂಧಪಟ್ಟವರು ಹಲ್ಲೆಗೊಳಗಾದ ವಿದ್ಯಾರ್ಥಿಯನ್ನು ರಕ್ಷಿಸಿ, ಕೂಡಲೇ ಹತ್ತಿರದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸುತ್ತಿದ್ದಾರೆ. ಸದ್ಯ ಆಸ್ಪತ್ರೆಯಲ್ಲಿ ವಿದ್ಯಾರ್ಥಿಗೆ ಚಿಕಿತ್ಸೆ ಮುಂದುವರಿದಿದೆ.

ವಿದ್ಯಾರ್ಥಿಗಳಿಗೆ ಸುರಕ್ಷಿತ ವಾತಾವರಣ ಕಲ್ಪಿಸಬೇಕಾದ ಹಾಸ್ಟೆಲ್ ನಲ್ಲೇ ಇಂತಹ ಕಾನೂನು ಬಾಹಿರ ಚಟುವಟಿಕೆ ನಡೆಯುತ್ತಿರುವುದು ಮತ್ತು ಅಮಾಯಕ ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆದಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಎಡೆಮಾಡಿಕೊಟ್ಟಿದೆ.

ಈ ಘಟನೆಯ ಹಿಂದೆ ಇರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ಕಾವಲು ಮತ್ತು ಭದ್ರತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಸಾರ್ವಜನಿಕರು ಹಾಗೂ ವಿದ್ಯಾರ್ಥಿ ಸಂಘಟನೆಗಳು ಒತ್ತಾಯಿಸಿವೆ.

ಈ ಕುರಿತು ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಭೌತಿಕ ಸಂಪತ್ತಿನಷ್ಟೇ ಆಧ್ಯಾತ್ಮಿಕ ಸಂಪತ್ತಿನ ಅಗತ್ಯವಿದೆ – ಶ್ರೀ ರಂಭಾಪುರಿ ಜಗದ್ಗುರುಗಳು



ಅರಸೀಕೆರೆ,ನ.6– ಭಾರತೀಯ ಸನಾತನ ಧರ್ಮ ಪರಂಪರೆಯಲ್ಲಿ ಶ್ರೀ ಗಣಪತಿಯ ಆರಾಧನೆಗೆ ಅತ್ಯಂತ ಪವಿತ್ರವಾದ ಸ್ಥಾನವಿದೆ. ಯಾವುದೇ ಶುಭ ಕಾರ್ಯದ ಆರಂಭದಲ್ಲಿ ಪ್ರಥಮ ಪೂಜೆಯನ್ನು ಸ್ವೀಕರಿಸುವ ಗಣನಾಯಕ ಬುದ್ಧಿ ವಿವೇಕ ಜ್ಞಾನ ಶಕ್ತಿ ಹಾಗೂ ಸಿದ್ಧಿಯ ಸಂಕೇತ ವಾಗಿದ್ದಾನೆ. ಭಕ್ತರ ಸಂಕಷ್ಟಗಳನ್ನು ಪರಿಹರಿಸಿ ಸನ್ಮಾರ್ಗದಲ್ಲಿ ಮುನ್ನಡೆ ಯಲು ಅನುಗ್ರಹಿಸುವ ಕರುಣಾಮಯ ದೇವತೆ ಪ್ರಸನ್ನ ಗಣಪತಿ ಆಗಿರುವನೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸುದೀರ್ಘ ಅವಧಿಯಲ್ಲಿ ಶ್ರೀ ಪ್ರಸನ್ನ ಗಣಪತಿಯನ್ನು ಆರಾಧಿಸಲ್ಪ ಡುವ ಪ್ರಸನ್ನ ಗಣಪತಿ ಭಕ್ತ ಮಂಡಳಿಯವರ ಧಾರ್ಮಿಕ ಶ್ರದ್ಧೆ ವಿಶೇಷವಾದದ್ದು. ಪ್ರಸನ್ನ ಗಣಪತಿಯ ಧಾರ್ಮಿಕ ಸಮಾರಂಭವು ಒಂದು ಉತ್ಸವವಲ್ಲ. ಅದು ಭಕ್ತಿ ಶ್ರದ್ಧೆ ಧಾರ್ಮಿಕ ಜಾಗೃತಿ ಹಾಗೂ ಸಾಮಾಜಿಕ ಸಾಮರಸ್ಯದ ಮಹಾಪರ್ವ ವಾಗಿದೆ. ಇಂಥ ಧಾರ್ಮಿಕ ಆಚರಣೆಗಳು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಜೀವಂತಿಕೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಸಮಾರಂಭವಾಗಿದೆ. ಗಣಪತಿಯ ವಿಶಾಲವಾದ ಕಿವಿಗಳು ಎಲ್ಲರ ಮಾತುಗಳನ್ನು ಆಲಿಸುವ ಸಹನೆಯನ್ನು ದೊಡ್ಡ ತಲೆಯೂ ವಿಶಾಲ ಚಿಂತನೆಯನ್ನು, ಸಣ್ಣ ಕಣ್ಣುಗಳು ಏಕಾಗ್ರತೆಯನ್ನು ಸೊಂಡಿಲು ಕಾರ್ಯದಕ್ಷತೆಯನ್ನು ಸಾರುತ್ತವೆ.

ರಸ್ತೆ ಅಪಘಾತಗಳು ಮತ್ತು ಯುವಕರ ಜೀವಹಾನಿ:

ತಕ್ಷಣ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಿ – ಡಾ. ಸೈಯ್ಯದ್ ನಾಸೀರ್ ಹುಸೇನ್



ಬಳ್ಳಾರಿ ನ 06. ಬಳ್ಳಾರಿ ನಗರದಲ್ಲಿ ಇತ್ತೀಚಿನ ದಿನಗಳಲ್ಲಿ ಸಂಭವಿಸುತ್ತಿರುವ ರಸ್ತೆ ಅಪಘಾತಗಳು ಮತ್ತು ಯುವಕರ ಜೀವಹಾನಿ ಆತಂಕಕಾರಿಯಾಗಿದೆ. ಸಾರ್ವಜನಿಕರ ಜೀವ ರಕ್ಷಣೆ ಹಾಗೂ ಸುಗಮ ಸಂಚಾರದ ದೃಷ್ಟಿಯಿಂದ ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ ಮತ್ತು ಸಾರಿಗೆ ಇಲಾಖೆ ಸಮನ್ವಯದಿಂದ ತಕ್ಷಣ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ರಾಜ್ಯಸಭಾ ಸದಸ್ಯರಾದ ಡಾ. ಸೈಯ್ಯದ್ ನಾಸೀರ್ ಹುಸೇನ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಬರೆದಿದ್ದಾರೆ. ಅಪಘಾತಗಳು ಹೆಚ್ಚಾಗಿ ಸಂಭವಿಸುವ ಸ್ಥಳಗಳನ್ನು ಗುರುತಿಸಿ ಅಗತ್ಯ ಎಚ್ಚರಿಕೆ ಫಲಕಗಳನ್ನು ಅಳವಡಿಸಬೇಕು. ನಗರದ ಪ್ರಮುಖ ರಸ್ತೆಗಳಲ್ಲಿ ಅನಧಿಕೃತವಾಗಿ ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸಿ ಸಂಚಾರಕ್ಕೆ ಅಡಚಣೆಯಾಗದಂತೆ ನೋಡಿಕೊಳ್ಳಬೇಕು. ವೇಗತಡೆಗಳಲ್ಲಿ ಬಿಳಿ ಬಣ್ಣದ ಗುರುತು ಹಾಗೂ ರಿಫ್ಲೆಕ್ಟರ್‌ಗಳನ್ನು ಅಳವಡಿಸಿ, ರಸ್ತೆ ಗುರುತುಗಳು ಮತ್ತು ಬೆಳಕಿನ ವ್ಯವಸ್ಥೆಯನ್ನು ಸುಧಾರಿಸಬೇಕು. ಜಿಲ್ಲಾಡಳಿತದ ನೇತೃತ್ವದಲ್ಲಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ನಿಯಮಿತವಾಗಿ ರಸ್ತೆ ಸುರಕ್ಷತಾ ಸಭೆಗಳನ್ನು ನಡೆಸಿ, ನಿರ್ಧರಿಸಿದ ಕ್ರಮಗಳ ಅನುಷ್ಠಾನವನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದ್ದಾರೆ.

ಕೈಗಾರಿಕೆ ಸ್ಥಾಪನೆ ವಿಚಾರದಲ್ಲಿ ಜೆಡಿಎಸ್‌ನಿಂದ ರೈತರನ್ನು ಎತ್ತಿಕಟ್ಟುವ ಕೆಲಸ: ಶಾಸಕ ಗಣಿಗ ರವಿಕುಮಾರ್



ಮಂಡ್ಯ, ನ.6: ಸಕ್ಕರೆ ನಾಡು ಮಂಡ್ಯದಲ್ಲಿ ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ ಕೈಗಾರಿಕಾ ಘಟಕ ಸ್ಥಾಪನೆಯ ವಿಚಾರವು ಕಾಂಗ್ರೆಸ್ ಮತ್ತು ಜೆಡಿಎಸ್ ನಡುವೆ ತೀವ್ರ ರಾಜಕೀಯ ವಾಕ್ಸಮರಕ್ಕೆ ಕಾರಣವಾಗಿದೆ. ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಸಂಬಂಧಿಸಿದಂತೆ ಜೆಡಿಎಸ್ ಉದ್ದೇಶಪೂರ್ವಕವಾಗಿ ರೈತರನ್ನು ಎತ್ತಿಕಟ್ಟುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿರುವ ಮಂಡ್ಯ ಶಾಸಕ ಗಣಿಗ ರವಿಕುಮಾರ್, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಜೆಡಿಎಸ್ ನಾಯಕರಿಗೆ ನೇರ ತಿರುಗೇಟು ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು ಮಂಡ್ಯ ತಾಲೂಕಿನ ಬಸರಾಳು ಸಮೀಪದ ಮುದ್ದನಘಟ್ಟ ಹಾಗೂ ಹೆಗ್ಗಡತಹಳ್ಳಿ ವ್ಯಾಪ್ತಿಯಲ್ಲಿ ಸುಮಾರು 100 ಎಕರೆ ಸರ್ಕಾರಿ ಗೋಮಾಳ ಜಾಗವನ್ನು ಗುರುತಿಸಿ, ಮುಂದಿನ ಪ್ರಕ್ರಿಯೆಗಾಗಿ ಕೆಐಎಡಿಬಿಗೆ ಪ್ರಸ್ತಾವನೆ ಸಲ್ಲಿಸಿದೆ.

ಜೆಡಿಎಸ್ ವಕ್ತಾರರ ಷರತ್ತು ಮತ್ತು ಎಚ್ಚರಿಕೆ: ಈ ಬೆಳವಣಿಗೆಯ ನಡುವೆ, ಜೆಡಿಎಸ್ ವಕ್ತಾರ ಮುದ್ದನಘಟ್ಟ ಮಹಾಲಿಂಗೇಗೌಡ ಅವರು ಯೋಜನೆಗಾಗಿ ಯಾವುದೇ ಪರಿಹಾರ ಪಡೆಯದೆ ತಮ್ಮ ಸ್ವಂತ ಕೃಷಿ ಭೂಮಿಯನ್ನು ಬಿಟ್ಟುಕೊಡಲು ಸಿದ್ಧವಿರುವುದಾಗಿ ಘೋಷಿಸಿದ್ದಾರೆ.

ರೈತರನ್ನು ಎತ್ತಿಕಟ್ಟುತ್ತಿದೆ ಜೆಡಿಎಸ್: ಗಣಿಗ ರವಿಕುಮಾರ್ ಆಕ್ರೋಶ –ಜೆಡಿಎಸ್ ಮುಖಂಡರ ಈ ನಿಲುವಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಶಾಸಕ ಗಣಿಗ ರವಿಕುಮಾರ್, ಮಂಡ್ಯಕ್ಕೆ ಕೈಗಾರಿಕೆಗಳು ಬರಬೇಕು ಎಂಬುದು ಜಿಲ್ಲೆಯ ಪ್ರತಿಯೊಬ್ಬರ ಆಶಯವಾಗಿದೆ. ಕೇಂದ್ರ ಸಚಿವರಾಗಿ ಹೆಚ್.ಡಿ. ಕುಮಾರಸ್ವಾಮಿ ಅವರು ಆಯ್ಕೆಯಾಗಿ ಎರಡೂವರೆ ವರ್ಷಗಳೇ ಕಳೆದಿವೆ. ಈ ಹಿಂದೆ ಅಮೆರಿಕ ಕಂಪನಿ ತರುತ್ತೇವೆ ಎಂದರು.

ಆದರೆ ಆ ಚರ್ಚೆ ಹಾಗೆಯೇ ನಿಂತುಹೋಯಿತು. ಮೈಶುಗರ್ ಶಾಲೆಗೆ 25 ಕೋಟಿ ರೂ. ನೀಡುವುದಾಗಿ ಹೇಳಿ ಕೇವಲ 25 ಲಕ್ಷ ರೂ. ನೀಡಿದರು. ಈಗ ಎಆರ್‌ಎಐ ಘಟಕ ತರುತ್ತೇವೆ ಎಂದು ಜಾಗ ಕೇಳಿದ ಕಾರಣ, ಸ್ಥಳೀಯ ಶಾಸಕನಾಗಿ ನಾನು ಮುತುವರ್ಜಿ ವಹಿಸಿ 100 ಎಕರೆ ಸರ್ಕಾರಿ ಗೋಮಾಳದ ಜಾಗವನ್ನು ಗುರುತಿಸಿಕೊಟ್ಟಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ.

ನೂತನ ಪರೀಕ್ಷಾಂಗ ಕುಲಸಚಿವರಾಗಿ ಪ್ರೊ. ಪಿ. ಕಣ್ಣನ್ ಅಧಿಕಾರ ಸ್ವೀಕಾರ



ಬಳ್ಳಾರಿ, ನ.06.ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾಗಿ ಶುಕ್ರವಾರದಂದು ಪ್ರೊ ಪಿ. ಕಣ್ಣನ್ ಅಧಿಕಾರ ವಹಿಸಿಕೊಂಡಿದ್ದಾರೆ.

ಮೂಲತ ವಿಜಯಪುರದ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಇಂಗ್ಲೀಷ್ ವಿಭಾಗದ ಪ್ರಾಧ್ಯಾಪಕರಾಗಿದ್ದಾರೆ. ವಿಶ್ವವಿದ್ಯಾಲಯ ಆಡಳಿತ ಕಚೇರಿಯಲ್ಲಿ ಮೌಲ್ಯಮಾಪನ ಕುಲಸಚಿವರಾಗಿ ಅಧಿಕಾರ ಸ್ವೀಕರಿಸಿದರು.

ವಿವಿ ಮೌಲ್ಯಮಾಪನ ಕುಲಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದ ಪ್ರೊ ಎನ್ ಎಂ ಸಾಲಿಯ ಅವರನ್ನು ಮಾತೃಸಂಸ್ಥೆಗೆ ವರ್ಗಾಯಿಸಿ ಸರ್ಕಾರ ಆದೇಶ ಹೊರಡಿಸಿದೆ.

ಕಬ್ಬು ಬೆಳೆಗಾರರ ಹೋರಾಟಕ್ಕೆ ತೆರೆ: ಕಟಾವು ಕಾರ್ಯ ಚುರುಕು, ಅರೆಯುವ ಆರಂಭಿಸಿದ ಕಾರ್ಖಾನೆಗಳು

ಬೆಳಗಾವಿ, ನ.6: ಕಬ್ಬು ಬೆಳೆಗಾರರ ಹೋರಾಟಕ್ಕೆ ತೆರೆಬಿದ್ದ ಬೆನ್ನಲ್ಲೇ ಜಿಲ್ಲೆಯಾದ್ಯಂತ ಕಬ್ಬು ಕಟಾವು ಕಾರ್ಯ ಚುರುಕುಗೊಂಡಿದೆ. ರೈತರು ಹೊಲಗಳಲ್ಲಿ ಕಟಾವು ಕಾರ್ಯ ಆರಂಭಿಸಿದ್ದು, ಸಕ್ಕರೆ ಕಾರ್ಖಾನೆಗಳೂ ಕಾರ್ಯಾರಂಭ ಮಾಡಿವೆ. ಮತ್ತೊಂದೆಡೆ ಜಿಲ್ಲಾಡಳಿತ ಪ್ರಕಟಿಸಿರುವ ಕಬ್ಬಿನ ದರಪಟ್ಟಿಯನ್ನು ಜಿಲ್ಲೆಯ 29 ಸಕ್ಕರೆ ಕಾರ್ಖಾನೆಗಳು ತಮ್ಮ ಸೂಚನಾ ಫಲಕಗಳಲ್ಲಿ ಅಳವಡಿಸುವ ಮೂಲಕ ಅಧಿಕೃತವಾಗಿ ಪ್ರಕಟಿಸಿವೆ.

ಕಬ್ಬಿಗೆ ಸೂಕ್ತ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ಕಳೆದ ಎರಡು ತಿಂಗಳಿಂದ ಜಿಲ್ಲೆಯಲ್ಲಿ ರೈತರ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿತ್ತು. ಪ್ರತಿಭಟನೆ, ರಸ್ತೆ ತಡೆ ಹಾಗೂ ಪಾದಯಾತ್ರೆಗಳ ಮೂಲಕ ರೈತರು ಸರ್ಕಾರದ ಮೇಲೆ ಒತ್ತಡ ಹೇರಿದ್ದರು. ಅಂತಿಮವಾಗಿ ನ. 4ರಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಟನ್ ಕಬ್ಬಿಗೆ 3,600 ರೂ. ದರ ಘೋಷಿಸಿದ್ದರು. ಆದರೆ, ಘೋಷಿತ ದರಕ್ಕೆ ಒಪ್ಪದ ರೈತ ಮುಖಂಡರು ಹೋರಾಟ ಮುಂದು ವರೆಸಿದ್ದರು. ಬೆಳಗಾವಿ ನಗರದಲ್ಲಿ ನಿಷೇಧಾಜ್ಞೆ ಜಾರಿಯಲ್ಲಿದ್ದರೂ ರಾಜ್ಯ ರೈತಸಂಘ ಹಾಗೂ ಹಸಿರುಸೇನೆ ಅಧ್ಯಕ್ಷ ಚೂನಪ್ಪ ಪೂಜಾರಿ ನೇತೃತ್ವದಲ್ಲಿ ರೈತರು ಪಾದಯಾತ್ರೆ ಮೂಲಕ ನಗರ ಪ್ರವೇಶಿಸಲು ಮುಂದಾಗಿದ್ದರು. ಈ ವೇಳೆ ಪೊಲೀಸರು ಅವರನ್ನು ತಡೆದು ವಶಕ್ಕೆ ಪಡೆದಿದ್ದರು.

ಗುರುವಾರ ರಾತ್ರಿ ಚೂನಪ್ಪ ಪೂಜಾರಿ ಅವರು ಕೂಡ ಘೋಷಿತ ದರಕ್ಕೆ ಒಪ್ಪಿಗೆ ಸೂಚಿಸಿ ಹೋರಾಟಕ್ಕೆ ತೆರೆ ಎಳೆದಿದ್ದರು.



ಶುಕ್ರವಾರದಿಂದ ಸಕ್ಕರೆ ಕಾರ್ಖಾನೆಗಳು ಆರಂಭವಾಗಲಿ ಎಂದು ಕರೆ ನೀಡಿದ್ದರು. ಈ ಬೆನ್ನಲ್ಲೇ ಜಿಲ್ಲೆಯ ವಿವಿಧೆಡೆ ಕಬ್ಬು ಕಟಾವು ಕಾರ್ಯ ಆರಂಭಗೊಂಡಿದ್ದು, ಕಾರ್ಖಾನೆಗಳತ್ತ ಕಬ್ಬು ಸಾಗಣೆಗೂ ಸಿದ್ಧತೆ ನಡೆದಿದೆ.ಇದರೊಂದಿಗೆ ಜಿಲ್ಲಾಡಳಿತ ಪ್ರಕಟಿಸಿರುವ ದರಪಟ್ಟಿಯನ್ನು ಜಿಲ್ಲೆಯ 29 ಸಕ್ಕರೆ ಕಾರ್ಖಾನೆಗಳು ನ.4ರಂದೇ ಸೂಚನಾ ಫಲಕಗಳಲ್ಲಿ ಅಳವಡಿಸಿವೆ. ಎರಡು ತಿಂಗಳಿನಿಂದ ನಡೆಯುತ್ತಿದ್ದ ಕಬ್ಬಿನ ದರದ ಹೋರಾಟಕ್ಕೆ ವಿರಾಮ ದೊರೆತಿದ್ದು, ಇದೀಗ ಕಬ್ಬು ಕಟಾವು ಹಾಗೂ ಕಾರ್ಖಾನೆಗಳ ಕಾರ್ಯಚಟುವಟಿಕೆಗಳು ಪುನರಾರಂಭಗೊಂಡಿವೆ.

ನ.4ರ ಸಭೆಯ ದರವೇ ಅಂತಿಮ: ಕಬ್ಬು ಬೆಳೆಗಾರರು ಹಾಗೂ ಬೆಳಗಾವಿಯ ಸಕ್ಕರೆ ಕಾರ್ಖಾನೆಯ ಮಾಲೀಕರು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ಸಮ್ಮುಖದಲ್ಲಿ ಚರ್ಚಿಸಿ ದರವನ್ನು ಅಂತಿಮ ಗೊಳಿಸಲಾಗಿದೆ.

ಮೊದಲ ಕಂತಿನಲ್ಲಿ ಟನ್ ಕಬ್ಬಿಗೆ 3,500 ರೂ. ಪಾವತಿಸುವುದು. ಹಂಗಾಮು ಮುಕ್ತಾಯಗೊಂಡ ಬಳಿಕ ಎರಡನೇ ಕಂತಿನಲ್ಲಿ 100 ರೂ. ಹೆಚ್ಚುವರಿಯಾಗಿ ನೀಡುವುದು. ಅಲ್ಲದೇ, ಹೊಸ ಹಂಗಾಮು ಆರಂಭವಾಗುವ ಮೊದಲು ಕೆ.ಜಿ. ಸಕ್ಕರೆಯ ಸರಾಸರಿ ಮಾರುಕಟ್ಟೆ ದರ 45 ರೂ. ಮೀರಿದರೆ, ಅದರ ಆಧಾರದ ಮೇಲೆ ಅಂತಿಮ ಕಂತಿನ ಹಣ ಪಾವತಿಸಲಾಗುತ್ತದೆ. ಸಕ್ಕರೆಯ ಸರಾಸರಿ ದರ 48 ರೂ. ಇದ್ದರೆ ಟನ್ ಕಬ್ಬಿಗೆ 3,650 ರೂ., 49 ರೂ. ಇದ್ದರೆ 3,750 ರೂ., 50 ರೂ. ದರವಿದ್ದರೆ 3,850 ರೂ. ಹಾಗೂ 55 ರೂ. ದರವಿದ್ದರೆ 4,350 ರೂ. ದರ ನಿಗದಿಪಡಿಸಲಾಗಿದೆ.

ಸಕ್ಕರೆ ಮಾರಾಟದ ಸರಾಸರಿ ಲಾಭದಲ್ಲಿ ಶೇ.75ರಷ್ಟು ರೈತರಿಗೆ ಹಾಗೂ ಶೇ.25ರಷ್ಟು ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆ ಮಾಡಲು ನಿರ್ಧರಿಸಲಾಗಿದೆ.ಇದು ಅಧಿಕೃತ ಒಪ್ಪಂದವಾಗಿರುತ್ತದೆ. ಆದರೆ ಕೆಲ ಮಾಧ್ಯಮಗಳಲ್ಲಿ ಬೇರೆ ಬೇರೆ ಹೇಳಿಕೆ ಆಧರಿಸಿ ವಿಭಿನ್ನ ದರವನ್ನು ಪ್ರಕಟಿಸುತ್ತಿರುವುದು ಗಮನಿಸಲಾಗಿದೆ. ಸಭೆಯಲ್ಲಿ ಚರ್ಚಿಸಿದಂತೆ ಅಂತಿಮ ಗೊಳಿಸಲಾಗಿರುವ ದರವನ್ನು ಲಿಖಿತವಾಗಿ ನೀಡಲಾಗಿರುತ್ತದೆ. ಸಭೆಯ ಬಳಿಕ ದಿನಾಂಕ ನ.4ರಂದು ರಾತ್ರಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಲಾಗಿರುವ ದರಗಳೇ ಅಧಿಕೃತವಾಗಿವೆ. ಇದನ್ನು ಹೊರತುಪಡಿಸಿ ಬೇರೆ ರೀತಿಯ ದರವನ್ನು ಅಂತಿಮಗೊಳಿಸಿಲ್ಲ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

ನಾರಾಯಣಪುರ ಜಲಾಶಯದಲ್ಲಿ 2 ಟಿಎಂಸಿ ನೀರು ಮೀಸಲಿಡಿ: ಸಿಎಂಗೆ ಡಾ. ಅಜಯ್‌ಸಿಂಗ್ ಮನವಿ

ಕಲಬುರಗಿ, ನ. 6: ಜೇವರ್ಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರೈತರ ಬೆಳೆ ರಕ್ಷಣೆ, ಜನರ ಕುಡಿಯುವ ನೀರು ಹಾಗೂ ಜಾನುವಾರುಗಳ ನೀರಿನ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು JBC ಮತ್ತು MBC ಕಾಲುವೆಗಳಿಗೆ ಸಮರ್ಪಕ ಪ್ರಮಾಣದಲ್ಲಿ ನೀರು ಹರಿಸುವಂತೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಅಜಯ್ ಧರ್ಮಸಿಂಗ್ ಅವರು ಮುಖ್ಯಮಂತ್ರಿ ಶ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ.

ಜೆಬಿಸಿ ಕಾಲುವೆಯ ಡಿಸ್ಟ್ರಿಬ್ಯೂಟರ್ ಸಂಖ್ಯೆ ಆ–9ರಿಂದ ಆ–18ರವರೆಗೆ ಪ್ರಸ್ತುತ ಸುಮಾರು 600 ಕ್ಯೂಸೆಕ್ಸ್ ನೀರು ಹರಿಸಲಾಗುತ್ತಿದ್ದು, ಟೇಲ್ ಎಂಡ್ ಪ್ರದೇಶಗಳಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ. ರೈತರ ಅಗತ್ಯವನ್ನು ಪರಿಗಣಿಸಿ ಸುಮಾರು 880 ಕ್ಯೂಸೆಕ್ಸ್ ನೀರು ಹರಿಸುವುದು ಅಗತ್ಯವಿದ್ದು, ಮುಂದಿನ ಬೇಸಿಗೆ ಅವಧಿಯ ನೀರಿನ ಅಗತ್ಯಕ್ಕಾಗಿ 2 ಟಿಎಂಸಿ ನೀರನ್ನು ಕಾಯ್ದಿರಿಸಿ ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಕೋರಿದ್ದಾರೆ.

ಅದೇ ರೀತಿ MBC ಕಾಲುವೆಯ ಜೇವರ್ಗಿ ವ್ಯಾಪ್ತಿಯ ಡಿಸ್ಟ್ರಿಬ್ಯೂಟರ್ ಆ–18ರಿಂದ ಆ–26ರವರೆಗೆ ಸುಮಾರು 450 ಕ್ಯೂಸೆಕ್ಸ್ ನೀರಿನ ಅಗತ್ಯವಿದ್ದು, ಪ್ರಸ್ತುತ ಸುಮಾರು 200



ಕ್ಯೂಸೆಕ್ಸ್ ಮಾತ್ರ ಹರಿಯುತ್ತಿರುವುದರಿಂದ ಟೇಲ್ ಎಂಡ್ ಗ್ರಾಮಗಳಿಗೆ ನೀರು ತಲುಪುತ್ತಿಲ್ಲ ಎಂದು ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದಾರೆ.

ಈ ಭಾಗದ ಗ್ರಾಮಗಳಲ್ಲಿ ಜನರು ಹಾಗೂ ಜಾನುವಾರುಗಳ ಕುಡಿಯುವ ನೀರಿನ ಅಗತ್ಯ ಹೆಚ್ಚಿದ್ದು, ಜೊತೆಗೆ ತೊಗರಿ, ಹತ್ತಿ ಮತ್ತು ಮೆಣಸಿನಕಾಯಿ ಸೇರಿದಂತೆ ಬೆಳೆಗಳು ನೀರಿನ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿವೆ.

JBC–ಭೀಮಾ ನದಿ ಸಂಪರ್ಕಿತ ಪ್ರದೇಶಗಳು, ನಾಲೆಗಳು ಹಾಗೂ ಬ್ಯಾರೇಜ್‌ಗಳಿಗೆ ಅಗತ್ಯ ಪ್ರಮಾಣದಲ್ಲಿ ನೀರು ತಲುಪಿಸುವ ಮೂಲಕ ಸ್ಥಳೀಯ ಜಲಮೂಲಗಳನ್ನೂ ತುಂಬಿಸಲು ಅನುಕೂಲವಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ.

ಟೇಲ್ ಎಂಡ್ ರೈತರಿಗೆ ನೀರು ತಲುಪದಿದ್ದರೆ ಕಾಲುವೆಯಲ್ಲಿ ನೀರು ಹರಿಸಿದ ಉದ್ದೇಶವೇ ಈಡೇರುವುದಿಲ್ಲ. ಈಗ ಬೆಳೆ ರಕ್ಷಣೆ ಮಾತ್ರವಲ್ಲ, ಜನರು ಮತ್ತು ಜಾನುವಾರುಗಳ ಕುಡಿಯುವ ನೀರಿನ ಅಗತ್ಯವೂ ಅತ್ಯಂತ ಮುಖ್ಯವಾಗಿದೆ. ಆದ್ದರಿಂದ ಅಗತ್ಯ ಪ್ರಮಾಣದಲ್ಲಿ ನೀರು ಹರಿಸಿ, ನ.30ರವರೆಗೆ ರೈತರಿಗೆ ಅನುಕೂಲ ಕಲ್ಪಿಸಬೇಕು ಎಂದು ಡಾ. ಅಜಯ್ ಸಿಂಗ್ ಮನವಿ ಮಾಡಿದರು.

ಈ ಸಂಬಂಧ ಅಗತ್ಯ ತಾಂತ್ರಿಕ ಪರಿಶೀಲನೆ ನಡೆಸಿ, ಜೇವರ್ಗಿ ಭಾಗದ ರೈತರು ಹಾಗೂ ಸಾರ್ವಜನಿಕರಿಗೆ ತಕ್ಷಣ ಅನುಕೂಲವಾಗುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಮುಖ್ಯಮಂತ್ರಿಗಳನ್ನು ಅವರು ಕೋರಿದರು. ಈ ಸಂದರ್ಭದಲ್ಲಿ ಶಹಾಪುರ ಶಾಸಕ ಶರಣಬಸಪ್ಪ ದರ್ಶನಾಪುರ ಹಾಗೂ ಸುರಪುರ ಶಾಸಕ ವೇಣುಗೋಪಾಲ್ ನಾಯಕ್ ಅವರು ಹಾಜರಿದ್ದರು.



ಬಸ್ ದರ ಮತ್ತು ಹಾಲಿನ ಬೆಲೆ ಏರಿಕೆಯ ವಿರುದ್ಧ ಕಲಬುರಗಿಯಲ್ಲಿ ಶುಕ್ರವಾರ ನಡೆದ ಪ್ರತಿಭಟನೆಯ ವೇಳೆ, ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪ್ರತಿಕೃತಿಯನ್ನು ದಹಿಸಿದರು.

ದೌರ್ಜನ್ಯ ತಡೆಗೆ ಅರಿವು, ಜಾಗೃತಿಯೂ ಅಗತ್ಯ: ಎಡಿಜಿಪಿ ಹರಿಶೇಖರನ್

ರಾಯಚೂರು, ನ. 6: ಸಮಾಜ ದಲ್ಲಿ ಜಾತಿ ತಾರತಮ್ಯ, ಅಸಮಾನತೆ ಹಾಗೂ ದೌರ್ಜನ್ಯಗಳನ್ನು ತಡೆದು ಸಾಮಾಜಿಕ ನ್ಯಾಯ ಮತ್ತು ಸಮಾನತೆ ಸ್ಥಾಪಿಸಲು ಎಲ್ಲ ಸಮುದಾಯದವರು ಒಗ್ಗಟ್ಟಿನಿಂದ ಕೈಜೋಡಿಸಬೇಕು. ಇಂತ ಸಂದರ್ಭದಲ್ಲಿ ಸಮುದಾಯದ ಮುಖಂಡರು ಪರಸ್ಪರ ಭಿನ್ನಾಭಿಪ್ರಾಯ ಗಳನ್ನು ಬದಿಗಿಟ್ಟು ಯುವಕರಿಗೆ ಉತ್ತಮ ಮಾರ್ಗದರ್ಶನ ನೀಡಬೇಕು ಎಂದು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಪಿ. ಹರಿಶೇಖರನ್ ಹೇಳಿದರು.



ಜಿಲ್ಲಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಾಮಾಜಿಕ ನ್ಯಾಯ ಸಭೆಯಲ್ಲಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಗಮನಾರ್ಹ ಪ್ರಮಾಣದಲ್ಲಿದೆ. ಹೀಗಾಗಿ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಸಮಾಜದ ಮುಖಂಡರು ಕೇವಲ ವೇದಿಕೆಗಳಲ್ಲಿ ಮಾತನಾಡುವುದಕ್ಕೆ ಸೀಮಿತವಾಗದೆ, ಜನರ ಸಮಸ್ಯೆಗಳನ್ನು ಗುರುತಿಸಿ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಬೇಕು. ಸಣ್ಣಪುಟ್ಟ ವೈಯಕ್ತಿಕ ಘಟನೆಗಳನ್ನು ಸಮುದಾಯಗಳ ನಡುವಿನ ಸಂಘರ್ಷವಾಗಿ ಬಿಂಬಿ ಸುವುದರಿಂದ ಸಮಾಜದಲ್ಲಿ ಅಂತರ ಹೆಚ್ಚಾಗುತ್ತದೆ. ಇಂತಹ ವಿಚಾರಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿ . ಸಮುದಾಯದ ಸಮಸ್ಯೆಗಳನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳ ಬಾರದು ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸಾಮಾಜಿಕ ನ್ಯಾಯ ಸಭೆ ಆಯೋಜಿಸಿರುವುದು ಸ್ವಾಗತಾರ್ಹ. ಸಭೆಯ ಯಶಸ್ಸಿಗೆ ಪೊಲೀಸ್ ಇಲಾಖೆ ಸಂಪೂರ್ಣ ಸಹಕಾರ ನೀಡಲಿದೆ. ಸಾರ್ವಜನಿಕರು ತಮ್ಮ ಸಮಸ್ಯೆ, ಅಹವಾಲು ಹಾಗೂ ಬೇಡಿಕೆಗಳನ್ನು ಮುಕ್ತವಾಗಿ ಪ್ರಸ್ತಾಪಿಸಬೇಕು ಎಂದರು.

ಹಿಂದೆ ಡಿಸಿಆರ್‌ಇ ವಿಭಾಗವು ನಿರ್ದಿಷ್ಟ ಪ್ರಕರಣಗಳು ಹಾಗೂ ಜಾತಿ ಆಧಾರಿತ ದೌರ್ಜನ್ಯ ಪ್ರಕರಣಗಳ ತನಿಖೆಗೆ ಸೀಮಿತವಾಗಿತ್ತು. ಪ್ರಸ್ತುತ ಎಲ್ಲ ರೀತಿಯ ದೌರ್ಜನ್ಯ ಪ್ರಕರಣಗಳ ತನಿಖೆ ಕೈಗೆತ್ತಿಕೊಳ್ಳುತ್ತಿದೆ. ಈ ಕಾರ್ಯಕ್ಕೆ ಪೊಲೀಸ್ ಇಲಾಖೆಯಿಂದ ಅಗತ್ಯ ಸಹಕಾರ ನೀಡಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಪೂವಿತಾ ಎಸ್. ಮಾತನಾಡಿ, ಡಿಸಿಆರ್‌ಇ ವತಿಯಿಂದ ಜಿಲ್ಲೆಯಲ್ಲಿ ಮೊದಲ ಬಾರಿಗೆ ವಿನೂತನ ಸಾಮಾಜಿಕ ನ್ಯಾಯ ಸಭೆ ಆಯೋಜಿಸಿರುವುದು ವಿಶೇಷ. ಕಳೆದ ನಾಲ್ಕೈದು ತಿಂಗಳಿನಿಂದ ಜಿಲ್ಲೆಯಲ್ಲಿ ಹಲವು ಘಟನೆಗಳು ನಡೆದಿದ್ದು, ತನಿಖೆಗಳು ಪ್ರಗತಿಯಲ್ಲಿವೆ. ಆದರೆ ತನಿಖೆ ನಡೆಸುವುದಷ್ಟೇ ಸಮಸ್ಯೆಗೆ ಪರಿಹಾರವಲ್ಲ. ಇಂತಹ ಘಟನೆ ನಡೆಯಲು ಕಾರಣಗಳೇನು ಮತ್ತು ಮುಂದೆ ಮರುಕಳಿಸದಂತೆ ಯಾವ ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆಯೂ ಚಿಂತನೆ ನಡೆಸಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರ ಮಾತನಾಡಿ, ಬಸವಣ್ಣನವರು ಹಲವು ಶತಮಾನಗಳ ಹಿಂದೆಯೇ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಸಂದೇಶ ಸಾರಿದ್ದರು. ಜಾತಿವ್ಯವಸ್ಥೆ, ಮೇಲು–ಕೀಳು ಎಂಬ ಭಾವನೆಗಳು ಸಮಾಜದಲ್ಲಿ ಇರಬಾರದು ಎಂಬುದು ಅವರ ಆಶಯವಾಗಿತ್ತು. ಆದರೆ ಇಂದಿಗೂ ಜಾತಿ ಆಧಾರಿತ ತಾರತಮ್ಯ, ಹಿಂಸಾಚಾರ, ಅವಮಾನ ಮತ್ತು ಬಹಿಷ್ಕಾರದಂತಹ ಘಟನೆ ನಡೆಯುತ್ತಿರುವುದು ಆತಂಕಕಾರಿ. ಇಂತಹ ಸಮಸ್ಯೆಗಳನ್ನು ಅಧಿಕಾರಿಗಳು ಅಥವಾ ಸರ್ಕಾರ ಮಾತ್ರ ಪರಿಹರಿಸಲು ಸಾಧ್ಯವಿಲ್ಲ. ಸಮಾಜದ ಪ್ರತಿಯೊಬ್ಬರೂ ಜಾತಿ ತಾರತಮ್ಯದ ವಿರುದ್ಧ ಧ್ವನಿ ಎತ್ತಬೇಕು ಎಂದರು.

ವಿದ್ಯಾರ್ಥಿಗಳು ರಾಜ್ಯಮಟ್ಟದ ಸ್ಪರ್ಧೆಗಳಲ್ಲಿ ಜಿಲ್ಲೆಗೆ ಕೀರ್ತಿ ತರಲಿ



ಕಲಬುರಗಿ, ನ. 6: ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ವತಿಯಿಂದ ಕಲಬುರಗಿ ವಿಭಾಗ ಮಟ್ಟದ ದೇಶಭಕ್ತಿ ಹಾಗೂ ಜಾನಪದ ಗೀತ ಗಾಯನ ಸ್ಪರ್ಧೆ ಕಾರ್ಯಕ್ರಮವು ನಗರದ ಅಪ್ಪಾ ಪಬ್ಲಿಕ್ ಸ್ಕೂಲ್‌ನಲ್ಲಿ ನಡೆಯಿತು.

ಕಾರ್ಯಕ್ರಮಕ್ಕೆ ಆಗಮಿಸಿದ ಅತಿಥಿಗಳನ್ನು ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಎಸ್ಕಾರ್ಟ್ ಮೂಲಕ ಸ್ವಾಗತಿಸಿದರು. ಸಾಮೂಹಿಕ ಪ್ರಾರ್ಥನೆ ಯೊಂದಿಗೆ ವೇದಿಕೆ ಕಾರ್ಯಕ್ರಮ ಆರಂಭಗೊಂಡಿತು. ನಂತರ ಗಣ್ಯರು ಸಂಸ್ಥಾಪ ಕರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಜಿಲ್ಲಾ ಕಾರ್ಯದರ್ಶಿ ಪೀರಪ್ಪ ಹೂಗುಂಡ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಭಾಗೀಯ ಸಹಾಯಕ ಆಯುಕ್ತ ಸಿ.ಬಿ. ಪಾಟೀಲ ಓಕಳಿ ಅವರು ಸಸಿಗೆ ನೀರುಣಿಸಿ, ಡೊಳ್ಳು ಬಾರಿಸುವ ಮೂಲಕ ಸ್ಪರ್ಧೆಗೆ ಚಾಲನೆ ನೀಡಿದರು.

ಮುಖ್ಯ ಅತಿಥಿಗಳಾಗಿ ರಾಜ್ಯ ಸರ್ಕಾರಿ ನೌಕರರ ಸಂಘದ ಕಲಬುರಗಿ ಜಿಲ್ಲಾ ಅಧ್ಯಕ್ಷ ಬಸವರಾಜ ಬಳೂಂಡಗಿ ಮಾತನಾಡಿ, ಸ್ಪರ್ಧೆಗಳಿಗೆ ಶುಭ ಹಾರೈಸಿದರು. ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಮಹೇಶ್ ಹೂಗಾರ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಲಬುರಗಿ ಜಿಲ್ಲಾ ಅಧ್ಯಕ್ಷ ಸಂತೋಷ ಗಂಗೂ ಅವರು ಮಾತನಾಡಿ, ಸ್ಪರ್ಧೆ ಯಶಸ್ವಿಯಾಗಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್.ಪಿ. ಸುಳ್ಳದ ಮಾತನಾಡಿ, ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ವಿಭಾಗ ಮಟ್ಟದಲ್ಲಿ ಪ್ರಥಮಸ್ಥಾನ ಪಡೆದು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸುವ ಮೂಲಕ ತಮ್ಮ ಜಿಲ್ಲೆಗಳಿಗೆ ಕೀರ್ತಿ ತರಬೇಕು. ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ದೇಶದ ಏಕತೆ ಹಾಗೂ ಐಕ್ಯತೆಯ ಮೌಲ್ಯಗಳನ್ನು ಮೈಗೂಡಿಸಿಕೊಂಡು ಭವಿಷ್ಯದಲ್ಲಿ ಉತ್ತಮ ನಾಯಕರಾಗಿ ಹೊರಹೊಮ್ಮಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಲಬುರಗಿ ದಕ್ಷಿಣ ಕ್ಷೇತ್ರದ ಶಿಕ್ಷಣಾಧಿಕಾರಿ ವಿಜಯಕುಮಾರ ಜಮಖಂಡಿ, ಜಿಲ್ಲಾ ಉಪಾಧ್ಯಕ್ಷರಾದ ಸೈಯದ್ ಮೊಹಮ್ಮದ್, ಸುಜಾತಾ ಮುಲ್ಲಾ, ಜಿಲ್ಲಾ ಜಂಟಿ ಕಾರ್ಯದರ್ಶಿ ರಾಜ ಕುಮಾರ ಮರಾಠೆ, ಜಿಲ್ಲಾ ಖಜಾಂಚಿ ಪ್ರಮೀಳಾ ಪಾಟೀಲ, ಬೀದರ ಜಿಲ್ಲಾ ಕಾರ್ಯದರ್ಶಿ ರಮೇಶ್‌ತಿಪಶೆಟ್ಟಿ, ಅಪ್ಪಾ ಪಬ್ಲಿಕ್ ಸ್ಕೂಲ್ ಪ್ರಾಚಾರ್ಯ ಶಂಕರಗೌಡ ಹೊಸಮನಿ, ಚಿತ್ತಾಪುರ ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಶಿವಶರಣಪ್ಪ ಮಂಟಾಳೆ, ಅಮರೇಶ ಕೂರಿ (ಡಿಟಿಸಿ–ಎಸ್), ಸುಮಂಗಲಾ ಎನ್.ಎಂ. (ಡಿಟಿಸಿ–ಜಿ), ಚಿತ್ತಾಪುರ ತಾಲೂಕು ಕಾರ್ಯದರ್ಶಿ ರಾಣಪ್ಪ ಸಂಗನ ಹಾಗೂ ನರಸಿಂಗ್ ರಾಠೋಡ ಇದ್ದರು.

ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ: ಕ್ರಮಕ್ಕೆ ಆಗ್ರಹ



ಬೀದರ ಜಿಲ್ಲೆಯ ಔರಾದ್ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸದಸ್ಯ ಸಲಾವುದಿನ್ ಮಾತನಾಡಿದರು.

ಬೀದರ, ನ. 6: ಅನ್ನಭಾಗ್ಯ ಯೋಜನೆಯಡಿ ಬಡ ಕುಟುಂಬಗಳಿಗೆ ಉಚಿತವಾಗಿ ವಿತರಿಸುವ ಪಡಿತರ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಆಗುತ್ತಿದ್ದು, ಸಂಬಂಧಿತರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ಔರಾದ್ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಸದಸ್ಯ ಸಲಾವುದಿನ್ ಈಚೆಗೆ ಮಗಿಯಲ್ಲಿ ಪಡಿತರ ಅಕ್ಕಿ ಮಾರಾಟ ಮಾಡಿರುವುದು ಪತ್ತೆಯಾಗಿದೆ. ತಾಲ್ಲೂಕಿನಲ್ಲಿ ನಿರಂತರವಾಗಿ ಇಂತಹ ಪ್ರಕರಣಗಳು ಕಂಡು ಬರುತ್ತಿದ್ದರೂ ಸಂಬಂಧಿತ ಇಲಾಖೆ ಕಣ್ಣು ಮುಚ್ಚಿ ಕುಳಿತಿದೆ ಎಂದು ದೂರಿದರು. ಇದಕ್ಕೆ ಪ್ರತಿಕ್ರಿಯಿಸಿದ ಗ್ಯಾರಂಟಿ ಸಮಿತಿ ಅಧ್ಯಕ್ಷ ಚೆನ್ನಪ್ಪ ಉಪ್ಪೆ, ಪಡಿತರ ಅಕ್ಕಿ ಮಾರಾಟ ಮಾಡುವುದು ತಪ್ಪು. ಫಲಾನುವಿಗಳು ಅಕ್ಕಿ ಮಾರಾಟ ಮಾಡಿದರೆ ಅವರ ಪರಿತರ ಚೀಟಿ ರದ್ದುಪಡಿಸಲಾಗುತ್ತದೆ. ಆಹಾರ ಇಲಾಖೆ ಹಾಗೂ ಪೊಲೀಸರು ಜಂಟಿಯಾಗಿ ಅಕ್ರಮ ಅಕ್ಕಿ ಮಾರಾಟ ತಡೆಯಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಮಗಿಯಲ್ಲಿ ಬಸ್ ನಿಲ್ದಾಣ ಹಾಗೂ ಬೀದರ್ ಔರಾದ್ ರಸ್ತೆಯಲ್ಲಿ ಹೆದ್ದಾರಿ ಪ್ರಾಧಿಕಾರದಿಂದ ಬಸ್ ನಿಲ್ದಾಣಗಳ ನಿರ್ಮಾಣ ವಿಳಂಬ ಕುರಿತು ಚರ್ಚೆಗೆ ಬಂತು. ಈ ಕುರಿತು ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ತಾಲ್ಲೂಕು ಪಂಚಾಯಿತಿ ಇಒ ಕಿರಣ ಪಾಟೀಲ ಹೇಳಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ, ಬಳ್ಳಾರಿ ಜಿಲ್ಲಾ ಸಮಿತಿಯ ವತಿಯಿಂದ ಪ್ರತಿಭಟನಾ ಧರಣಿ



ಬಳ್ಳಾರಿ ನ 06. ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ, ಬಳ್ಳಾರಿ ಜಿಲ್ಲಾ ಸಮಿತಿಯ ವತಿಯಿಂದ ಬಳ್ಳಾರಿಯ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲಾಗಿತ್ತು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಶೇ. 6% ಹೆಚ್ಚಳಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಅಧಿಸೂಚನೆಯನ್ನು ರದ್ದುಗೊಳಿಸಿದ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ, ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಬಳಿ ಸರ್ವಪಕ್ಷ ನಿಯೋಗವನ್ನು ಕರೆದುಕೊಂಡು ಸಂವಿಧಾನದ 9ನೇ ಶೆಡ್ಯೂಲ್‌ಗೆ ಸೇರಿಸಿ ಕಾನೂನು ರಕ್ಷಣೆಗೊಳಿಸಬೇಕೆಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿ 'ರಾಜ್ಯದಾದ್ಯಂತ ಏಕಕಾಲದಲ್ಲಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಮೀಸಲಾತಿ ರಕ್ಷಣೆ ಹಾಗೂ ಸಂವಿಧಾನಿಕ ಹಕ್ಕು ಗಳ ಜಾಗೃತಿಗಾಗಿ ಒತ್ತಾಯಿಸಿ' ಮಾನ್ಯ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಉಪನ್ಯಾಸಕರಾದ ಶ್ರೀನಿವಾಸ ಮೂರ್ತಿ, ತಳವಾರ ದುರುಗಪ್ಪ, ಎಸ್ ವಿಘ್ನೇಶ್, ಕೊಡ್ಲೆ ಮಲ್ಲಿಕಾರ್ಜುನ, ಜಿ ಗೋವರ್ಧನ, ಫೋಟೊರಾಜ, ನಟರಾಜ, ವೀರಭದ್ರಪ್ಪ, ಗಂಗಾಧರ, ಬಾಪೂಜಿನಗರ ವೆಂಕಟೇಶ್, ಪೆದ್ದ ಎರ್ರಿಸ್ವಾಮಿ, ಮುರಳಿಮೋಹನ, ಆರ್. ಹೆಚ್.ವೆಂಕಟೇಶ್, ಸೋಮಪ್ಪ ಕೊಳಗಲ್ಲು, ಮಾರ್ಕೆಟ್ ರಾಜ, ಗುರುದೇವ, ಕುಡಿತಿನಿ ವೆಂಕಟೇಶ್, ಲೆನಿನ್, ಅತಾವುಲ್ಲಾ, ಮಲ್ಲೇಶ್ವರಿ, ರುದ್ರಪ್ಪ, ಎರಿಸ್ವಾಮಿ ಕೊಳಗಲ್ಲು, ಗುಂಡಪ್ಪ, ಹೊನ್ನೇಶ್ ಬಿ ಗೋನಾಳ್, ಶೇಖರ್, ಅರುಣ್ ಕುಮಾರ್ ಮುಂಡ್ರಿಗಿ ಹಾಗೂ ಪದಾಧಿಕಾರಿಗಳಾದ ತಾಯಣ್ಣ, ಪ್ರಹ್ಲಾದ್, ನಾಗರಾಜ್, ಅಂಜಿ, ರವಿ ಗೊಲ್ಲಲಿಂಗಮ್ಮನಹಳ್ಳಿ ಮುಂತಾದವರು ಉಪಸ್ಥಿತರಿದ್ದರು.

ದತ್ತಾತ್ರೇಯ ದೇವಾಲಯದ ಸ್ತಬ್ಧಚಿತ್ರಕ್ಕೆ ರಾಜ್ಯೋತ್ಸವ ಮೆರವಣಿಗೆಯಲ್ಲಿ ಪ್ರಥಮ ಸ್ಥಾನ

12ನೇ ಶತಮಾನದ ಕಲ್ಯಾಣಿ ಚಾಲುಕ್ಯರ ಕಾಲದ ಚಟ್ಟರಕಿ ದೇವಾಲಯದ ಪರಂಪರೆ, ವೈಶಿಷ್ಟ್ಯಕ್ಕೆ ಜನರ ಮೆಚ್ಚುಗೆ



ವಿಜಯಪುರ, ನ.6 –ಕನ್ನಡ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1ರಂದು ಜಿಲ್ಲಾಡಳಿತದ ವತಿಯಿಂದ ಆಯೋಜಿಸಿದ್ದ ಸ್ತಬ್ಧಚಿತ್ರಗಳ ಮೆರವಣಿಗೆಯಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದ ವತಿಯಿಂದ ರೂಪಿಸಲಾದ ಚಟ್ಟರಕಿ ಗ್ರಾಮದ ಐತಿಹಾಸಿಕ ಶ್ರೀ ದತ್ತಾತ್ರೇಯ ದೇವಾಲಯದ ಸ್ತಬ್ಧಚಿತ್ರವು ಪ್ರಥಮ ಸ್ಥಾನ ಪಡೆದು ಗಮನ ಸೆಳೆದಿದೆ. ದೇವರಹಿಪ್ಪರಗಿ ತಾಲೂಕಿನ ಚಟ್ಟರಕಿ ಗ್ರಾಮದಲ್ಲಿರುವ 12ನೇ ಶತಮಾನದ ಕಲ್ಯಾಣಿ ಚಾಲುಕ್ಯರ ಕಾಲದ ಶ್ರೀ ದತ್ತಾತ್ರೇಯ ದೇವಾಲಯದ ಐತಿಹಾಸಿಕ ಹಿನ್ನೆಲೆ, ಧಾರ್ಮಿಕ ಪರಂಪರೆ ಹಾಗೂ ವಾಸ್ತುಶಿಲ್ಪದ ವೈಶಿಷ್ಟ್ಯವನ್ನು ಬಿಂಬಿಸುವಂತೆ ಸ್ತಬ್ಧಚಿತ್ರವನ್ನು ವಿನ್ಯಾಸಗೊಳಿಸಲಾಗಿತ್ತು.

ಜಿಲ್ಲೆಯ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸುವ ಈ ಸ್ತಬ್ಧಚಿತ್ರವು ಮೆರವಣಿಗೆಯಲ್ಲಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿ ಪ್ರಥಮ ಬಹುಮಾನ ಗಳಿಸಿದೆ.

ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ. ಪಾಟೀಲ ಅವರು ಹಾಗೂ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಹಾಗೂ ಅಧಿಕಾರಿಗಳು ಪ್ರಥಮ ಬಹುಮಾನವನ್ನು ಪ್ರದಾನ ಮಾಡಿದರು.

ವಿಭಾಗೀಯ ಸಾರಿಗೆ ಅಧಿಕಾರಿ ಎಂ.ಎಸ್. ಹಿರೇಮಠ, ಎ.ಎಚ್. ಮದಭಾವಿ ಕನ್ನಡ ಕ್ರಿಯಾ ಸಮಿತಿಯ ಶಿವರಾಯ ಬೈಚಬಾಳ, ಬಸಲಿಂಗಪ್ಪ ಅಂಗಡಿ ಸೇರಿದಂತೆ ಎಲ್ಲರಿಗೂ ಕೃತಜ್ಞತೆ ಸಲ್ಲಿಸಲಾಗಿದೆ ಎಂದು ವಿಜಯಪುರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ: ಹಸಿರು ಪಟಾಕಿ ಹೊರತುಪಡಿಸಿ ಇತರ ಪಟಾಕಿ ಮಾರಾಟಕ್ಕೆ ನಿಷೇಧ

ತಾಲ್ಲೂಕುವಾರು ಕಣ್ಗಾವಲು ಸಮಿತಿಗಳ ರಚನೆ: ಡಿ.ಸಿ ನಾಗೇಂದ್ರ ಪ್ರಸಾದ್

ಬಳ್ಳಾರಿ,ನ.06.ಪರಿಸರ ಸ್ನೇಹಿ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆಯಾದ್ಯಂತ ಹಸಿರು ಪಟಾಕಿಗಳನ್ನು ಹೊರತುಪಡಿಸಿ ಉಳಿದ ಯಾವುದೇ ನಿಷೇಧಿತ ಪಟಾಕಿಗಳ ಉತ್ಪಾದನೆ, ಸಂಗ್ರಹಣೆ ಹಾಗೂ ಮಾರಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ. ಸರ್ವೋಚ್ಚ ನ್ಯಾಯಾಲಯದ ನಿರ್ದೇಶನಗಳು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುತ್ತೋಲೆಯನ್ವಯ ವಾಯುಮಾಲಿನ್ಯ ನಿಯಂತ್ರಣ ಮತ್ತು ಸಾರ್ವಜನಿಕ ಸುರಕ್ಷತೆಯ ದೃಷ್ಟಿಯಿಂದ ಈ ಮಹತ್ವದ ಕ್ರಮ ಕೈಗೊಳ್ಳಲಾಗಿದೆ. ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲು ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿಗೂ ವಿಶೇಷ ಅಧಿಕಾರಿಗಳ ಜಂಟಿ ತಪಾಸಣಾ ತಂಡಗಳನ್ನು ರಚಿಸಲಾಗಿದೆ.

ತಾಲ್ಲೂಕುವಾರು ತಂಡಗಳ ರಚನೆ:
ಬಳ್ಳಾರಿ: ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ಡಿವೈಎಸ್ಪಿ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ, ಲೋಕೋಪಯೋಗಿ ಇಲಾಖೆ, ಮಹಾನಗರ ಪಾಲಿಕೆ, ಜೆಸ್ಕಾಂ, ತಾಲ್ಲೂಕು ಪಂಚಾಯತಿ ಇಒ ಮತ್ತು ಪರಿಸರ ಅಧಿಕಾರಿಗಳನ್ನೊಳ ಗೊಂಡ ತಂಡ.

ಸಿರುಗುಪ್ಪ, ಸಂಡೂರು, ಕಂಪ್ಲಿ ಮತ್ತು ಕುರುಗೋಡು: ಆಯಾ ತಾಲ್ಲೂಕಿನ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಪೊಲೀಸ್ ನಿರೀಕ್ಷಕರು, ಪುರಸಭೆ/ನಗರಸಭೆ ಮುಖ್ಯಾಧಿಕಾರಿಗಳು, ಅಗ್ನಿಶಾಮಕ ಠಾಣಾಧಿಕಾರಿ, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ, ಜೆಸ್ಕಾಂ ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳನ್ನೊಳಗೊಂಡ ತಂಡಗಳನ್ನು ನಿಯೋಜಿಸಲಾಗಿದೆ.

ಜಿಲ್ಲಾಡಳಿತದ ಕಟ್ಟುನಿಟ್ಟಿನ ಸೂಚನೆಗಳು:
ಅನಧಿಕೃತ ಮಳಿಗೆಗಳ ಪರಿಶೀಲನೆ: ಜಿಲ್ಲೆಯಾದ್ಯಂತ ಅನಧಿಕೃತವಾಗಿ ಪಟಾಕಿ ಸಂಗ್ರಹ ಅಥವಾ ಮಾರಾಟ ಮಾಡುವ ಅಂಗಡಿ ಹಾಗೂ ಗೋದಾಮುಗಳನ್ನು



ಜಂಟಿಯಾಗಿ ಪರಿಶೀಲಿಸಿ ವರದಿ ನೀಡಬೇಕು.

ಲೈಸೆನ್ಸ್ ಮತ್ತು ಸುರಕ್ಷತೆ: ಹೊಸದಾಗಿ ಲೈಸೆನ್ಸ್ ನೀಡುವ ಹಾಗೂ ನವೀಕರಣ ಮಾಡುವ ಮೊದಲು ಕಡ್ಡಾಯವಾಗಿ ಸ್ಥಳ ಪರಿಶೀಲನೆ ನಡೆಸಬೇಕು. ಮಳಿಗೆಗಳಲ್ಲಿ ಅಗ್ನಿ ಮತ್ತು ವಿದ್ಯುತ್ ಸುರಕ್ಷತಾ ನಿಯಮಗಳು ಪಾಲನೆಯಾಗುತ್ತಿವೆಯೇ ಎಂದು ಖಚಿತಪಡಿಸಿಕೊಳ್ಳಬೇಕು.

ಹಸಿರು ಪಟಾಕಿ ಮತ್ತು ಕ್ಯೂಆರ್ ಕೋಡ್ ಕಡ್ಡಾಯ: ತಾತ್ಕಾಲಿಕ ಮಳಿಗೆಗಳಲ್ಲಿ ಕೇವಲ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡಲು ಅನುಮತಿಸಬೇಕು. ಪಟಾಕಿ ಪೊಟ್ಟಣಗಳ ಮೇಲೆ ಹಸಿರು ಪಟಾಕಿಗಳ ಅಧಿಕೃತ ಚಿಹ್ನೆ ಹಾಗೂ 'ಕ್ಯೂಆರ್ ಕೋಡ್' ಇರುವುದನ್ನು ಪರಿಶೀಲಿಸಬೇಕು.

ಕಾನೂನು ಕ್ರಮ: ಜಿಲ್ಲಾಡಳಿತದ ಪರವಾನಗಿ ಇಲ್ಲದೆ ಅಥವಾ ನಿಷೇಧಿತ ಪಟಾಕಿಗಳನ್ನು ಮಾರಾಟ ಮಾಡುವವರ ವಿರುದ್ಧ ಮುಲಾಜಿಲ್ಲದೆ ಸೂಕ್ತ ಕಾನೂನು ಕ್ರಮ ಜರುಗಿಸಿ, ಅನುಪಾಲನಾ ವರದಿ ಸಲ್ಲಿಸಬೇಕು.

ನಿಯೋಜಿತ ತಂಡದ ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ತಕ್ಷಣದಿಂದಲೇ ಕ್ಷೇತ್ರ ಭೇಟಿ ಕೈಗೊಂಡು, ಮಳಿಗೆಗಳ ಸುರಕ್ಷತಾ ವ್ಯವಸ್ಥೆಯನ್ನು ಪರಿಶೀಲಿಸಿ ವರದಿ ನೀಡುವಂತೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ.

ಜಾತಿ, ಉಪಜಾತಿ ಸಂಘಟನೆಗಳ ಪದಾಧಿಕಾರಿಗಳ ಪ್ರತಿಭಟನೆ



ರಾಯಚೂರು, ನ. 6: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನಲ್ಲಿ ರಾಜ್ಯ ಸರ್ಕಾರ ಸಮರ್ಥವಾಗಿ ವಾದ ಮಂಡಿಸದೆ ನಿರ್ಲಕ್ಷ್ಯ ವಹಿಸಿರುವುದರಿಂದ ಸಮುದಾಯಗಳಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿ ಮಾದಿಗ–ಸಮಗಾರ–ಡೊಹರ–ಡಕ್ಕಳಿಗ ಜಾತಿ ಉಪಜಾತಿ ಸಂಘಟನೆಗಳ ಒಕ್ಕೂಟ–ಕರ್ನಾಟಕ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿ ಕಚೇರಿ ಅಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನ ಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಇರಲಿಲ್ಲ. ಶೇ 17ರಷ್ಟು ಜನಸಂಖ್ಯೆ ಹೊಂದಿರುವ ಪರಿಶಿಷ್ಟ ಜಾತಿಗೆ ಶೇ 15ರಷ್ಟು ಹಾಗೂ ಶೇ.7ರಷ್ಟು ಜನಸಂಖ್ಯೆ ಹೊಂದಿರುವ ಪರಿಶಿಷ್ಟ ಪಂಗಡಕ್ಕೆ ಶೇ 3ರಷ್ಟು ಮೀಸಲಾತಿ ನೀಡಲಾಗಿತ್ತು. ಮೀಸಲಾತಿ ಹೆಚ್ಚಳಕ್ಕಾಗಿ ಮೂರು ದಶಕಗಳಿಂದ ಹೋರಾಟಗಳು ನಡೆದಿದ್ದವು ಎಂದು ಪ್ರತಿಭಟನಾಕಾರರು ತಿಳಿಸಿದರು.

2018–19ರಲ್ಲಿ ಅಂದಿನ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಮೀಸಲಾತಿ ಹೆಚ್ಚಳದ ಕುರಿತು ಅಧ್ಯಯನ ನಡೆಸಲು ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗ ರಚಿಸಿದ್ದರು. ಆಯೋಗವು 2020ರ ಜುಲೈ 2ರಂದು ಸರ್ಕಾರಕ್ಕೆ ವರದಿ ಸಲ್ಲಿಸಿತ್ತು. ಬಳಿಕ ನ್ಯಾಯಮೂರ್ತಿ ಸುಭಾಷ್ ಅಡಿ ನೇತೃತ್ವದ ಸಮಿತಿಯೂ ವರದಿ ನೀಡಿತ್ತು.

ಯುದ್ಧ ನಿಲ್ಲಿಸಲು ಇರಾನ್ ಹೊಸ ತಂತ್ರ: ಇರಾನ್‌ನ ಹಿರಿಯ ಅಧಿಕಾರಿ

ಕತಾರ್, ನ. 7: ಮತ್ತು ಇರಾನ್ ನಡುವಿನ ಸಂಘರ್ಷ ಮತ್ತೆ ತೀವ್ರಗೊಳ್ಳುವ ಆತಂಕದ ನಡುವೆಯೇ, ಇರಾನ್ ಅಮೆರಿಕಕ್ಕೆ ಹೊಸ ಪರಮಾಣು ಪ್ರಸ್ತಾವನೆಯನ್ನು ಕಳುಹಿಸಿದೆ. ಕತಾರ್ ಮೂಲಕ ಈ ಪ್ರಸ್ತಾವನೆ ವಾಷಿಂಗ್ಟನ್‌ಗೆ ತಲುಪಿದೆ ಎಂದು ಇರಾನ್‌ನ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆದರೆ ಈ ಪ್ರಸ್ತಾವನೆ ಕುರಿತು ಮಾತುಕತೆ ಆರಂಭಿಸುವ ಮೊದಲು ಅಮೆರಿಕವು ಇರಾನ್ ಮುಂದಿಟ್ಟಿರುವ ಏಳು ಷರತ್ತುಗಳನ್ನು ಈಡೇರಿಸಬೇಕು ಎಂಬುದು ಟೆಹ್ರಾನ್‌ನ ನಿಲುವು. ಮತ್ತೊಂದೆಡೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್ ವಿರುದ್ಧ ಮತ್ತೆ ಸೇನಾ ಕಾರ್ಯಾಚರಣೆ ನಡೆಸುವ ಸಾಧ್ಯತೆಯನ್ನು ತಳ್ಳಿಹಾಕಿಲ್ಲ.

ಇರಾನ್ ತನ್ನ ಏಳು ಷರತ್ತುಗಳ ಅಧಿಕೃತ ಸಂಪೂರ್ಣ ಪಟ್ಟಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಿಲ್ಲ. ಆದರೆ ಮಾಧ್ಯಮ ವರದಿಗಳ ಪ್ರಕಾರ, ಟೆಹ್ರಾನ್ ಮುಂದಿಟ್ಟಿರುವ ಪ್ರಮುಖ ಬೇಡಿಕೆಗಳು ಕೆಳಕಂಡಂತಿವೆ. ಇರಾನ್ ಮಾತ್ರವಲ್ಲದೆ ಲೆಬನಾನ್ ಸೇರಿದಂತೆ ಮಧ್ಯಪ್ರಾಚ್ಯದ ಎಲ್ಲ ಸಂಘರ್ಷಗಳಿಗೂ ಅಂತ್ಯ ಹಾಡಬೇಕು. ಇರಾನ್ ಬಂದರುಗಳ ಮೇಲೆ ಅಮೆರಿಕ ವಿಧಿಸಿರುವ ನೌಕಾ ನಿರ್ಬಂಧವನ್ನು ತೆಗೆದುಹಾಕಬೇಕು. ಆರ್ಥಿಕ ನಿರ್ಬಂಧ ತೆರವು: ಇರಾನ್ ಮೇಲೆ ವಿಧಿಸಿರುವ ಅಮೆರಿಕದ ನಿರ್ಬಂಧಗಳನ್ನು ತೆಗೆದುಹಾಕಬೇಕು. ವಿದೇಶಗಳಲ್ಲಿ ಸ್ಥಗಿತಗೊಂಡಿರುವ ಇರಾನ್‌ನ ಆಸ್ತಿಗಳನ್ನು ಬಿಡುಗಡೆ ಮಾಡಬೇಕು.

ಮಧ್ಯಪ್ರಾಚ್ಯದಲ್ಲಿರುವ ಅಮೆರಿಕದ ಸೇನಾ ಪಡೆಗಳನ್ನು ಹಿಂತೆಗೆದುಕೊಳ್ಳಬೇಕು ಅಥವಾ ಅವುಗಳ ಉಪಸ್ಥಿತಿಯನ್ನು ಕಡಿಮೆ ಮಾಡಬೇಕು. ಅಮೆರಿಕದ ದಾಳಿಯಿಂದ ಉಂಟಾದ ಹಾನಿಗೆ ಪರಿಹಾರ ನೀಡಬೇಕು. ಇರಾನ್ ಮೇಲೆ ಅಮೆರಿಕದ ದಾಳಿಗಳನ್ನು ನಿಲ್ಲಿಸಿ, ಭವಿಷ್ಯದಲ್ಲಿ ಮತ್ತೆ ದಾಳಿ ನಡೆಸುವುದಿಲ್ಲ ಎಂಬ ಖಾತರಿ ನೀಡಬೇಕು. ಇರಾನ್‌ನ ಉನ್ನತ ಭದ್ರತಾ ಅಧಿಕಾರಿ ಮೊಹ್ಸಿನ್ ರೆಜೈ ಅವರು ಅಮೆರಿಕ ತನ್ನ ಏಳು ಷರತ್ತುಗಳನ್ನು ಈಡೇರಿಸುವವರೆಗೆ ಹಾರ್ಮುಜ್ ಜಲಸಂಧಿಯನ್ನು ತೆರೆಯುವುದಿಲ್ಲ ಮತ್ತು ಮಾತುಕತೆಯನ್ನೂ ನಡೆಸುವುದಿಲ್ಲ ಎಂದು ಹೇಳಿದ್ದಾರೆ. ಹಾರ್ಮುಜ್ ಜಲಸಂಧಿ ಜಗತ್ತಿನ ಪ್ರಮುಖ ತೈಲಸಾಗಣೆ ಮಾರ್ಗಗಳಲ್ಲಿ ಒಂದು. ಪರ್ಷಿಯನ್ ಕೊಲ್ಲಿಯಿಂದ ಜಾಗತಿಕ ಮಾರುಕಟ್ಟೆಗೆ ತೈಲ ಸಾಗಿಸುವ ಹಡಗುಗಳು ಈ ಮಾರ್ಗವನ್ನು



ಅವಲಂಬಿಸಿವೆ. ಈ ಜಲಸಂಧಿಯಲ್ಲಿ ಸಂಚಾರಕ್ಕೆ ಅಡ್ಡಿಯಾದರೆ ಜಾಗತಿಕ ತೈಲ ಪೂರೈಕೆ ಮತ್ತು ಬೆಲೆಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಹೀಗಾಗಿ ಇರಾನ್ನ ಈ ನಿಲುವು ಅಮೆರಿಕ ಮಾತ್ರವಲ್ಲದೆ ಜಾಗತಿಕ ಇಂಧನ ಮಾರುಕಟ್ಟೆಯ ಮೇಲೂ ಪರಿಣಾಮ ಬೀರಬಹುದು.

ಇರಾನ್ನ ಉನ್ನತ ಭದ್ರತಾ ಅಧಿಕಾರಿ ಮೊಹ್ಸಿನ್ ರೆಜೈ ಅಮೆರಿಕ ತನ್ನ ಏಳು ಷರತ್ತುಗಳನ್ನು ಈಡೇರಿಸುವವರೆಗೆ ಹಾರ್ಮುಜ್ ಜಲಸಂಧಿಯನ್ನು ತೆರೆಯುವುದಿಲ್ಲ ಮತ್ತು ಮಾತುಕತೆಯನ್ನೂ ನಡೆಸುವುದಿಲ್ಲ ಎಂದು ಹೇಳಿದ್ದಾರೆ. ಹಾರ್ಮುಜ್ ಜಲಸಂಧಿ ಜಗತ್ತಿನ ಪ್ರಮುಖ ತೈಲ ಸಾಗಣೆಯ

ಇರಾನ್ ಕಳುಹಿಸಿರುವ ಪ್ರಸ್ತಾವನೆಯನ್ನು ಅಮೆರಿಕ ಪರಿಶೀಲಿಸುತ್ತಿದೆ ಎಂದು ಇರಾನ್‌ನ ಹಿರಿಯ ಅಧಿಕಾರಿಯೊಬ್ಬರು ರಾಯಿಟರ್ಸ್‌ಗೆ ತಿಳಿಸಿದ್ದಾರೆ. ಆದರೆ ಅಮೆರಿಕ ಸರ್ಕಾರ ಈ ಕುರಿತು ಅಧಿಕೃತವಾಗಿ ಏನು ಪ್ರತಿಕ್ರಿಯಿಸಿದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಇನ್ನೊಂದೆಡೆ, ಯಾವುದೇ ಆರಂಭಿಕ ಮಾತುಕತೆಯಲ್ಲಿ ಇರಾನ್‌ನ ಪರಮಾಣು ಕಾರ್ಯಕ್ರಮದ ವಿಚಾರವೂ ಚರ್ಚೆಯಾಗಬೇಕು ಎಂಬುದು ವಾಷಿಂಗ್ಟನ್‌ನ ನಿಲುವು. ಇರಾನ್‌ನ ಪರಮಾಣು ಚಟುವಟಿಕೆಗಳ ಮೇಲೆ ನಿಯಂತ್ರಣ ಮತ್ತು ಅದರ ಬಳಿ ಇರುವ ಸಮೃದ್ಧೀಕರಿಸಿದ ಯುರೇನಿಯಂ ಸಂಗ್ರಹದ ವಿಚಾರ ಅಮೆರಿಕಕ್ಕೆ ಪ್ರಮುಖವಾಗಿದೆ.

ಫೆಬ್ರವರಿ 28ರಂದು ಅಮೆರಿಕ ಮತ್ತು ಇಸ್ರೇಲ್ ಇರಾನ್ ಮೇಲೆ ದಾಳಿ ನಡೆಸಿದ ಬಳಿಕ ಸಂಘರ್ಷ ತೀವ್ರಗೊಂಡಿತು. ಇದಕ್ಕೆ ಪ್ರತಿಯಾಗಿ ಇರಾನ್ ಇಸ್ರೇಲ್ ಹಾಗೂ ಅಮೆರಿಕದ ಸೇನಾ ನೆಲೆಗಳಿರುವ ಗಲ್ಫ್ ರಾಷ್ಟ್ರಗಳ ಮೇಲೆ ದಾಳಿ ನಡೆಸಿತು. ಇದರ ಪರಿಣಾಮವಾಗಿ ಸಂಘರ್ಷ ಇರಾನ್ ಮತ್ತು ಇಸ್ರೇಲ್ ನಡುವಿನ ಗಡಿಯನ್ನು ಮೀರಿ ಹರಡಿತು. ಲೆಬನಾನ್‌ನಲ್ಲಿ ಇರಾನ್ ಬೆಂಬಲಿತ ಹಿಜ್ಬೊಲ್ಲಾ ಸಂಘಟನೆ ಮತ್ತು ಇಸ್ರೇಲ್ ನಡುವೆ ಘರ್ಷಣೆಗಳು ನಡೆದವು. ಯೆಮನ್‌ನ ಇರಾನ್ ಬೆಂಬಲಿತ ಹೌತಿ ಬಂಡುಕೋರರೂ ಸೌದಿ ಅರೇಬಿಯಾದ ಇಂಧನ ಕೇಂದ್ರಗಳು, ವಿಮಾನ ನಿಲ್ದಾಣಗಳು ಸೇರಿದಂತೆ ಹಲವು ಗುರಿಗಳ ಮೇಲೆ ದಾಳಿ ನಡೆಸಿದ್ದಾರೆ ಎಂದು ವರದಿಯಾಗಿದೆ.

ಅಮೆರಿಕದ ಮಧ್ಯಂತರ ಚುನಾವಣೆ ಬಳಿಕ ಇರಾನ್ ವಿರುದ್ಧ ಸೇನಾ ಕಾರ್ಯಾಚರಣೆಯನ್ನು ಮತ್ತೆ ಆರಂಭಿಸುವ ಸಾಧ್ಯತೆಯನ್ನು ಟ್ರಂಪ್ ತಳ್ಳಿಹಾಕಿಲ್ಲ. ಸಂಘರ್ಷ ಮತ್ತೆ ಆರಂಭವಾದರೆ ಇರಾನ್ ವ್ಯಾಪಕ ಪ್ರತೀಕಾರ ನಡೆಸಬಹುದು ಎಂಬ ಆತಂಕವೂ ವ್ಯಕ್ತವಾಗಿದೆ.

ಈ ಹಿನ್ನೆಲೆಯಲ್ಲಿ ಕತಾರ್ ಸೇರಿದಂತೆ ಮಧ್ಯವರ್ತಿ ರಾಷ್ಟ್ರಗಳು ಅಮೆರಿಕ ಮತ್ತು ಇರಾನ್ ನಡುವೆ ಸಂಧಾನಕ್ಕೆ ಪ್ರಯತ್ನಿಸುತ್ತಿವೆ. ಕತಾರ್ ಮೂಲಕ ಎರಡೂ ದೇಶಗಳ ನಡುವೆ ಸಂದೇಶಗಳ ವಿನಿಮಯ ನಡೆಯುತ್ತಿದೆ. ಆದರೆ ಮಾತುಕತೆ ಯಾವಾಗ ಆರಂಭವಾಗಲಿದೆ ಮತ್ತು ಇರಾನ್ನ ಷರತ್ತುಗಳಿಗೆ ಅಮೆರಿಕ ಒಪ್ಪುತ್ತದೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

ಇರಾನ್ ಪರ ನಿಂತ ರಷ್ಯಾ: ಯುದ್ಧ ನಿಲ್ಲಿಸಲು ಸರ್ವಪ್ರಯತ್ನ–ಪುಟಿನ್

ಮಾಸ್ಕೋ, ನ.6: ಇರಾನ್ ಮತ್ತು ಅಮೆರಿಕ ನಡುವೆ ನಡೆಯುತ್ತಿರುವ ಭೀಕರ ಸಂಘರ್ಷವನ್ನು ಕೊನೆಗೊಳಿಸಲು ಮಾಸ್ಕೋ ಎಲ್ಲ ಪ್ರಯತ್ನಗಳನ್ನು ಮಾಡಲಿದೆ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಭರವಸೆ ನೀಡಿದ್ದಾರೆ. ಇರಾನ್‌ನ ಪರಮಾಣು ಮೂಲಸೌಕರ್ಯಗಳ ಮೇಲಿನ ವೈಮಾನಿಕ ದಾಳಿಯನ್ನು ತೀವ್ರವಾಗಿ ಖಂಡಿಸಿರುವ ಅವರು, ಇದನ್ನು ಒಂದು "ಅನ್ಯಾಯದ ಯುದ್ಧ" ಎಂದು ಕರೆದಿದ್ದಾರೆ.



ಕ್ರೆಮ್ಲಿನ್‌ನಲ್ಲಿ ರಷ್ಯಾ ಅಧ್ಯಕ್ಷರನ್ನು ಭೇಟಿಯಾದ ಇರಾನ್‌ನ ಭದ್ರತಾ ಮುಖ್ಯಸ್ಥ ಮೊಹ್ಸೆನ್ ರೆಜಾಯೀ ಈ ವಿಷಯ ತಿಳಿಸಿದ್ದಾರೆ. ಅಮೆರಿಕದೊಂದಿಗಿನ ಯುದ್ಧವನ್ನು ಕೊನೆಗೊಳಿಸಲು ನೆರವಾಗಲು ಸಾಧ್ಯವಿರುವ ಎಲ್ಲವನ್ನೂ ಮಾಡುವುದಾಗಿ ಪುಟಿನ್ ಹೇಳಿದ್ದಾರೆ ಎಂದು ಇರಾನ್‌ನ ಸರ್ಕಾರಿ ಪ್ರಸಾರ ಮಾಧ್ಯಮ ಪ್ರೆಸ್ ಟಿವಿ ವರದಿ ಮಾಡಿದೆ.

ಇರಾನ್‌ನ ಸರ್ವೋಚ್ಚ ನಾಯಕ ಆಯತೊಲ್ಲಾ ಮೊಜ್ತಬಾ ಖಮೇನಿ ಅವರ ಸಂದೇಶವನ್ನೂ ರೆಜಾಯೀ ಪುಟಿನ್ ಅವರಿಗೆ ತಲುಪಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ರಷ್ಯಾ ಅಧ್ಯಕ್ಷರು ಇರಾನ್ ನಾಯಕನಿಗೆ ತಮ್ಮ ಆತ್ಮೀಯ ಶುಭಾಶಯಗಳನ್ನು ಕಳುಹಿಸಿದ್ದಾರೆ.

ಸಭೆಯ ಬಳಿಕ ಮಾತನಾಡಿದ ರೆಜಾಯೀ, ಉಭಯ ದೇಶಗಳ ನಾಯಕರು ಪ್ರಾದೇಶಿಕ ಬೆಳವಣಿಗೆ, ಯುದ್ಧಾನಂತರದ ವ್ಯವಸ್ಥೆ ಹಾಗೂ ಭವಿಷ್ಯದ ಭದ್ರತಾ ಯೋಜನೆಗಳ ಕುರಿತು ಚರ್ಚಿಸಿದ್ದಾರೆ ಎಂದು ತಿಳಿಸಿದರು.

ಪ್ರಾದೇಶಿಕವಾಗಿ ಎದುರಾಗಿರುವ ಪ್ರಮುಖ ವಿಚಾರಗಳು, ಯುದ್ಧದ ನಂತರದ ಪರಿಸ್ಥಿತಿ ಮತ್ತು ಭದ್ರತಾ ವ್ಯವಸ್ಥೆಗಳ ಬಗ್ಗೆ ಪುಟಿನ್ ಅವರೊಂದಿಗೆ ಮಹತ್ವದ ಸಮಾಲೋಚನೆ ನಡೆಸಲಾಗಿದೆ ಎಂದು ಹೇಳಿದರು. ಇದೇ ವೇಳೆ ಇಂಧನ ಸಹಕಾರದ ಬಗ್ಗೆಯೂ ಚರ್ಚೆ ನಡೆದಿದೆ. ಮುಖ್ಯವಾಗಿ ರಷ್ಯಾ ಮತ್ತು ಇರಾನ್ ನಡುವೆ ಅನಿಲ ಕೊಳವೆ ಮಾರ್ಗ ನಿರ್ಮಿಸುವ ಪ್ರಸ್ತಾವನೆ ಸಭೆಯಲ್ಲಿ ಪ್ರಸ್ತಾಪವಾಗಿದೆ. ಈ ಯೋಜನೆಯಿಂದ ಇರಾನ್‌ನಲ್ಲಿನ ಆಂತರಿಕ ಅನಿಲ ಕೊರತೆಯನ್ನು ನೀಗಿಸುವುದರ ಜೊತೆಗೆ, ನೆರೆಯ ರಾಷ್ಟ್ರಗಳಿಗೆ ಅನಿಲ ಪೂರೈಸಲು ರಷ್ಯಾಕ್ಕೂ ನೆರವಾಗಲಿದೆ ಎಂದು ತಿಳಿಸಿದರು.

ಅಧಿಕಾರಕ್ಕಾಗಿ ಪೈಪೋಟಿ: ಯಾರಾಗ್ತಾರೆ ಇಸ್ರೇಲ್ ಪ್ರಧಾನಿ?

ಜುರೆಸಲೇಮ್, ನ.7: ಹೊಸ ಸರ್ಕಾರ ರಚಿಸುವ ಹೊಣೆ ಯಾರಿಗೆ ಸಿಗಲಿದೆ ಎಂಬ ಕುತೂಹಲ ಹೆಚ್ಚಾಗಿದೆ. ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಮಾಜಿ ಸೇನಾ ಮುಖ್ಯಸ್ಥ ಗಡಿ ಐಸೆನ್‌ಕೋಟ್ ನಡುವೆ ಅಧಿಕಾರಕ್ಕಾಗಿ ಪೈಪೋಟಿ ನಡೆಯುತ್ತಿದೆ. ಚುನಾವಣೆಯಲ್ಲಿ ಯಾರಿಗೂ ಸ್ಪಷ್ಟ ಬಹುಮತ ಸಿಗದ ಹಿನ್ನೆಲೆಯಲ್ಲಿ, ಅಧ್ಯಕ್ಷ ಐಸಾಕ್ ಹೆರ್ಜಾಗ್ ಅವರು ಭಾನುವಾರ ಸರ್ಕಾರ ರಚಿಸಲು ಒಬ್ಬರನ್ನು ಆಯ್ಕೆ ಮಾಡುವುದಾಗಿ ತಿಳಿಸಿದ್ದಾರೆ.

ಇಸ್ರೇಲ್ ಅಧ್ಯಕ್ಷ ಐಸಾಕ್ ಹೆರ್ಜಾಗ್ ಅವರು ನವೆಂಬರ್ 8ರ ಭಾನುವಾರ ಹೊಸ ಸರ್ಕಾರ ರಚಿಸುವ ಜವಾಬ್ದಾರಿಯನ್ನು ಯಾವ ಸಂಸದರಿಗೆ ನೀಡಬೇಕು ಎಂಬುದನ್ನು ಘೋಷಿಸಲಿದ್ದಾರೆ. ರಾಜಕೀಯ ಪಕ್ಷಗಳ ಸಮಾಲೋಚನೆಯಲ್ಲಿ ಮಾಜಿ ಸೇನಾ ಮುಖ್ಯಸ್ಥ ಹಾಗೂ ಯಶಾರ್ ಪಕ್ಷದ ನಾಯಕ ಗಡಿ ಐಸೆನ್‌ಕೋಟ್ ಅವರಿಗೆ 67 ಸಂಸದರ ಬೆಂಬಲ ವ್ಯಕ್ತವಾಗಿದೆ. ಹಾಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಿಗೆ 46 ಸಂಸದರ ಬೆಂಬಲ ದೊರೆತಿದೆ. ಉಳಿದ ಏಳು ಸಂಸದರು ಯಾರನ್ನೂ ಬೆಂಬಲಿಸಿಲ್ಲ.

ಅಧ್ಯಕ್ಷರ ಈ ನಿರ್ಧಾರದಿಂದ ಇಸ್ರೇಲ್ನ ಮುಂದಿನ ರಾಜಕೀಯ ದಿಕ್ಕು ನಿರ್ಧಾರವಾಗಲಿದೆ. ಆದರೆ ಹೆಚ್ಚು ಸಂಸದರ ಬೆಂಬಲ ಪಡೆದ ಮಾತ್ರಕ್ಕೆ ಐಸೆನ್‌ಕೋಟ್‌ಗೆ ಸರ್ಕಾರ ರಚಿಸುವುದು



ಖಚಿತವಲ್ಲ. ವಿವಿಧ ಪಕ್ಷಗಳ ನಡುವೆ ಹೊಂದಾಣಿಕೆ ಇಲ್ಲದಿರುವುದರಿಂದ ಹೊಸ ಮೈತ್ರಿ ಸರ್ಕಾರ ರಚಿಸುವುದು ಸವಾಲಿನ ಕೆಲಸವಾಗಿದೆ ಎಂದು ಅಧ್ಯಕ್ಷ ಹೆರ್ಜಾಗ್ ಹೇಳಿದ್ದಾರೆ.

ಅಕ್ಟೋಬರ್ 27ರಂದು ನಡೆದ ಇಸ್ರೇಲ್ ಸಂಸತ್ ಚುನಾವಣೆಯಲ್ಲಿ ಯಾವುದೇ ಪಕ್ಷ ಅಥವಾ ಮೈತ್ರಿಕೂಟಕ್ಕೆ ಸ್ಪಷ್ಟ ಬಹುಮತ ಸಿಗಲಿಲ್ಲ. ಇಸ್ರೇಲ್ ಸಂಸತ್ತನ್ನು ನೆಸ್ಸೆಟ್ ಎಂದು ಕರೆಯಲಾಗುತ್ತದೆ. ಇಲ್ಲಿ ಒಟ್ಟು 120 ಸ್ಥಾನಗಳಿದ್ದು, ಸರ್ಕಾರ ರಚಿಸಲು ಕನಿಷ್ಠ 61 ಸದಸ್ಯರ ಬೆಂಬಲ ಅಗತ್ಯ. ನೆತನ್ಯಾಹು ನೇತೃತ್ವದ ಮೈತ್ರಿಕೂಟ 53 ಸ್ಥಾನಗಳು, ಐಸೆನ್ಕೋಟ್ ನೇತೃತ್ವದ ವಿರೋಧಿ ಮೈತ್ರಿಕೂಟ 48 ಸ್ಥಾನಗಳು, ಅರಬ್ ಪಕ್ಷಗಳು 19 ಸ್ಥಾನಗಳು.

ಈ ಫಲಿತಾಂಶದಿಂದ ಅರಬ್ ಪಕ್ಷಗಳು ಸರ್ಕಾರ ರಚನೆಯ ಪ್ರಕ್ರಿಯೆಯಲ್ಲಿ ನಿರ್ಣಾಯಕ ಪಾತ್ರ ವಹಿಸುವ ಸಾಧ್ಯತೆ ಎದುರಾಗಿದೆ. ಈ ಪಕ್ಷಗಳು ಐಸೆನ್ಕೋಟ್ ಅವರಿಗೆ ಬೆಂಬಲ ಸೂಚಿಸಿರುವುದರಿಂದ ಅವರ ಬಲ ಹೆಚ್ಚಾಗಿದೆ. ಐಸೆನ್ಕೋಟ್ ಅವರಿಗೆ 67 ಸಂಸದರ ಶಿಫಾರಸು ದೊರೆತಿದ್ದರೂ, ಸರ್ಕಾರ ರಚಿಸಲು ಎಲ್ಲ ಪಕ್ಷಗಳೂ ಒಂದೇ ನಿಲುವಿಗೆ ಬರಬೇಕಿದೆ. ಅರಬ್ ಪಕ್ಷಗಳ ಬೆಂಬಲವನ್ನು ಸ್ವೀಕರಿಸುವ ವಿಚಾರದಲ್ಲಿ ವಿರೋಧಿ ಮೈತ್ರಿಕೂಟದೊಳಗೇ ಭಿನ್ನಾಭಿಪ್ರಾಯಗಳಿವೆ. ಹೀಗಾಗಿ ಈ ಬೆಂಬಲವನ್ನು ನಿಜವಾದ ಬಹುಮತವಾಗಿ ಪರಿವರ್ತಿಸುವುದು ಐಸೆನ್‌ಕೋಟ್ ಮುಂದಿರುವ ದೊಡ್ಡ ಸವಾಲು.

ಅಧ್ಯಕ್ಷ ಹೆರ್ಜಾಗ್ ಕೂಡ ಪಕ್ಷಗಳ ನಡುವಿನ ಪರಸ್ಪರ ವಿರೋಧ ಮತ್ತು ಭಿನ್ನಾಭಿಪ್ರಾಯಗಳ ಕಾರಣದಿಂದ ಯಾರಿಗೆ ಸರ್ಕಾರ ರಚಿಸುವ ಸಾಮರ್ಥ್ಯವಿದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ ಎಂದು ಹೇಳಿದ್ದಾರೆ. ಈ ಹಿನ್ನೆಲೆಯಲ್ಲಿ ಅವರು ಕೆಲವು ಪಕ್ಷಗಳ ನಾಯಕರೊಂದಿಗೆ ಪ್ರತ್ಯೇಕ ಮಾತುಕತೆ ನಡೆಸಲಿದ್ದಾರೆ.

ನೆತನ್ಯಾಹು ಅವರ ಲಿಕುಡ್ ಪಕ್ಷ ಚುನಾವಣೆಯಲ್ಲಿ 27 ಸ್ಥಾನಗಳನ್ನು ಪಡೆದು ಅತಿದೊಡ್ಡ ಏಕೈಕ ಪಕ್ಷವಾಗಿ ಹೊರಹೊಮ್ಮಿದೆ. ಆದರೆ ಅವರ ಮೈತ್ರಿಕೂಟಕ್ಕೆ ಬಹುಮತ ಸಿಗದಿರುವುದು ಹಿನ್ನಡೆಯಾಗಿದೆ. ಇನ್ನು ಅವರ ದೀರ್ಘಕಾಲದ ಮಿತ್ರಪಕ್ಷವಾದ ಯುನೈಟೆಡ್ ತೋರಾ ಜುದಾಯಿಸಂ ಯಾವುದೇ ಅಭ್ಯರ್ಥಿಯನ್ನು ಬೆಂಬಲಿಸದಿರಲು ನಿರ್ಧರಿಸಿರುವುದು ಕೂಡ ನೆತನ್ಯಾಹು ಅವರಿಗೆ ಹಿನ್ನಡೆಯಾಗಿದೆ.

ಇನ್ನೊಂದೆಡೆ, ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ನೆತನ್ಯಾಹು ಆರೋಪಿಸಿದ್ದಾರೆ. ಆದರೆ ಇಸ್ರೇಲ್‌ನ ಕೇಂದ್ರ ಚುನಾವಣಾ ಸಮಿತಿಯು ಚುನಾವಣೆಯ ವಿಶ್ವಾಸಾರ್ಹತೆಗೆ ಧಕ್ಕೆಯಾಗಿಲ್ಲ ಎಂದು ತಿಳಿಸಿದೆ. ಚುನಾವಣಾ ಅಕ್ರಮದ ಆರೋಪಗಳಿಗೆ ಸಂಬಂಧಿಸಿದಂತೆ ನೆತನ್ಯಾಹು ಯಾವುದೇ ದೃಢವಾದ ಸಾಕ್ಷ್ಯ ಒದಗಿಸಿಲ್ಲ ಎಂದು ರಾಯಿಟರ್ಸ್ ವರದಿ ಮಾಡಿದೆ.

ನವೆಂಬರ್ 8ರಂದು ಅಧ್ಯಕ್ಷರು ಆಯ್ಕೆ ಮಾಡುವ ಅಭ್ಯರ್ಥಿಗೆ ಸರ್ಕಾರ ರಚಿಸಲು ಆರಂಭದಲ್ಲಿ 28 ದಿನಗಳ ಕಾಲಾವಕಾಶ ಸಿಗುತ್ತದೆ. ಅಗತ್ಯವಿದ್ದರೆ ಇನ್ನೂ 14 ದಿನಗಳ ವಿಸ್ತರಣೆ ನೀಡಬಹುದು. ಈ ಅವಧಿಯಲ್ಲಿ ಅಭ್ಯರ್ಥಿಯು ಕನಿಷ್ಠ 61 ಸಂಸದರ ಬೆಂಬಲ ಪಡೆದು ಸರ್ಕಾರ ರಚಿಸಬೇಕು. ವಿಫಲವಾದರೆ ಮತ್ತೊಬ್ಬರಿಗೆ ಅವಕಾಶ ನೀಡಬಹುದು. ಅಂತಿಮವಾಗಿ ಯಾರಿಂದಲೂ ಸರ್ಕಾರ ರಚಿಸಲು ಸಾಧ್ಯವಾಗದಿದ್ದರೆ ಇಸ್ರೇಲ್ನಲ್ಲಿ ಮತ್ತೊಂದು ಚುನಾವಣೆ ನಡೆಯುವ ಸಾಧ್ಯತೆಯಿದೆ. ಅಷ್ಟರ ತನಕ ನೆತನ್ಯಾಹು ಹಂಗಾಮಿ ಪ್ರಧಾನಿಯಾಗಿ ಮುಂದುವರಿಯಲಿದ್ದಾರೆ.

ಇರಾಕ್ ವಾಯುಪ್ರದೇಶ ಮುಕ್ತ: ಅಮೆರಿಕಕ್ಕೆ ತೆರಳುವ ಪ್ರಯಾಣಿಕರಿಗೆ ಬಿಗ್ ರಿಲೀಫ್
ಮುಂಬೈ, ದೆಹಲಿಯಿಂದ ಏರ್ ಇಂಡಿಯಾ ನೇರ ವಿಮಾನ ಸೇವೆ ಪುನಾರಂಭ



ನವದೆಹಲಿ, ನ.6: ಅಮೆರಿಕ ಪ್ರಯಾಣ ಬೆಳೆಸುವ ಭಾರತೀಯ ವಿಮಾನ ಪ್ರಯಾಣಿಕರಿಗೆ ಏರ್ ಇಂಡಿಯಾ ಸಂಸ್ಥೆಯು ಸಿಹಿ ಸುದ್ದಿ ನೀಡಿದೆ. ಮಧ್ಯಪ್ರಾಚ್ಯ ಉದ್ವಿಗ್ನತೆಯ ಕಾರಣದಿಂದಾಗಿ ಸ್ಥಗಿತಗೊಂಡಿದ್ದ ಮುಂಬೈ ಮತ್ತು ದೆಹಲಿಯಿಂದ ಅಮೆರಿಕದ ಪ್ರಮುಖ ನಗರಗಳಿಗೆ ಇರಾಕ್ ವಾಯುಪ್ರದೇಶದ ಮೂಲಕ ಸಂಚರಿಸುವ ನೇರ ವಿಮಾನ ಹಾರಾಟವನ್ನು ಏರ್ ಇಂಡಿಯಾ ಪುನರಾರಂಭಿಸಿದೆ.

ಈ ಮೂಲಕ ರೋಮ್ ವಿಮಾನ ನಿಲ್ದಾಣದಲ್ಲಿ ಇಂಧನ ತುಂಬಿಸಿಕೊಳ್ಳಲು ತಾಂತ್ರಿಕ ನಿಲುಗಡೆ ಮಾಡುವ ಅಗತ್ಯವನ್ನು ತಪ್ಪಿಸಿದೆ. ಕಳೆದ ಒಂದು ದಶಕದಿಂದ ಕೇವಲ ಸೇನಾ ಮತ್ತು ಭದ್ರತಾ ಕಾರ್ಯಾಚರಣೆಗಳಿಗೆ ಮೀಸಲಾಗಿದ್ದ ಇರಾಕ್‌ನ ವಾಯುಪ್ರದೇಶವನ್ನು ಇತ್ತೀಚೆಗೆ ಮುಕ್ತಗೊಳಿಸಿರುವುದು ವಿಮಾನಯಾನ ಸಂಸ್ಥೆಯ ಮಾರ್ಗ ಬದಲಾವಣೆಗೆ ಅನುಕೂಲ ಮಾಡಿಕೊಟ್ಟಿದೆ.

ಇದರಿಂದ ಪ್ರಯಾಣದ ಅವಧಿ ಮೂರು ಗಂಟೆ ಕಡಿಮೆಯಾಗಿದ್ದು, ಈ ಹಿಂದೆ 21 ಗಂಟೆ ತೆಗೆದುಕೊಳ್ಳುತ್ತಿದ್ದ ಪ್ರಯಾಣ ಇದೀಗ 18 ಗಂಟೆಗಳಲ್ಲಿ ಪೂರ್ಣಗೊಳ್ಳಲಿದೆ.

ಏರ್ ಇಂಡಿಯಾ ಅಮೆರಿಕಕ್ಕೆ ಒಟ್ಟು 4 ವಿಮಾನಗಳನ್ನು ನಿರ್ವಹಿಸುತ್ತಿದ್ದು, ಎರಡು ವಿಮಾನಗಳು ನ್ಯೂಯಾರ್ಕ್‌ನ ಜೆಎಫ್‌ಕೆ ವಿಮಾನ ನಿಲ್ದಾಣಕ್ಕೆ ಹಾಗೂ ಮತ್ತೆರಡು ನ್ಯೂವಾರ್ಕ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಚರಿಸುತ್ತವೆ.

ಇರಾಕ್‌ನ ವಾಯುಪ್ರದೇಶ ಮುಚ್ಚಿದ್ದರಿಂದ ಅಮೆರಿಕಕ್ಕೆ ತೆರಳುವ ಅತಿ ದೂರದ ವಿಮಾನಗಳು ಸುತ್ತು ಬಳಸಿ ಸಂಚರಿಸಬೇಕಾಗಿತ್ತು. ಮಾರ್ಗಮಧ್ಯೆ ಇಂಧನ ತುಂಬಿಸಿಕೊಳ್ಳಲು ರೋಮ್ ವಿಮಾನ ನಿಲ್ದಾಣದಲ್ಲಿ ನಿಲುಗಡೆ ಮಾಡಲಾಗುತ್ತಿತ್ತು. ಈ ಸಂದರ್ಭದಲ್ಲಿ ಪ್ರಯಾಣಿಕರಿಗೆ ವಿಮಾನದಿಂದ ಕೆಳಗಿಳಿಯಲು ಅವಕಾಶವಿರಲಿಲ್ಲ ಎಂದು ಏರ್ ಇಂಡಿಯಾ ಮೂಲವೊಂದು ತಿಳಿಸಿದೆ.

ಹಿಂದೆ ತಡೆರಹಿತ ವಿಮಾನ ಸೇವೆ ನೀಡುವ ಮೂಲಕ ಎಮಿರೇಟ್ಸ್, ಕತಾರ್ ಮತ್ತು ಎತಿಹಾದ್‌ನಂತಹ ಪ್ರಮುಖ ಗಲ್ಫ್ ವಿಮಾನಯಾನ ಸಂಸ್ಥೆಗಳಿಗಿಂತ ನಾವು ಹೆಚ್ಚಿನ ಅನುಕೂಲ ಹೊಂದಿದ್ದೆವು. ಆ ಸಂಸ್ಥೆಗಳ ವಿಮಾನಗಳು ಮಾರ್ಗಮಧ್ಯೆ ಗಲ್ಫ್ ರಾಷ್ಟ್ರಗಳಲ್ಲಿ ನಿಲುಗಡೆ ಮಾಡುತ್ತಿದ್ದವು. ಇದೀಗ ನಮ್ಮ ವಿಶೇಷ ಅನುಕೂಲ ಮತ್ತೆ ಲಭ್ಯವಾಗಿದೆ ಎಂದು ಮೂಲಗಳು ತಿಳಿಸಿವೆ.

ಗುರುವಾರದಿಂದ ದೆಹಲಿಯಿಂದ ಹೊರಡುವ ಎರಡು ವಿಮಾನಗಳು ರಾಜಸ್ಥಾನ, ಗುಜರಾತ್, ಓಮನ್, ಯುಎಇ, ಕುವೈತ್ ಮತ್ತು ಇರಾಕ್ ವಾಯುಪ್ರದೇಶದ ಮೂಲಕ ಟರ್ಕಿ ತಲುಪಿ, ಅಲ್ಲಿಂದ ಯುರೋಪ್ ಮಾರ್ಗವಾಗಿ ಅಮೆರಿಕಕ್ಕೆ ತೆರಳಿವೆ ಎಂದು ಮತ್ತೊಂದು ಮೂಲ ವಿವರಿಸಿದೆ.

ಇರಾಕ್‌ನ ವಾಯುಪ್ರದೇಶ ಮುಚ್ಚಿದ್ದ ಸಂದರ್ಭದಲ್ಲಿ ದೆಹಲಿಯಿಂದ ಹೊರಟ ವಿಮಾನಗಳು ಭಾರತದ ವಾಯುಪ್ರದೇಶ ದಾಟಿದ ಬಳಿಕ ಒಮಾನ್, ಯೆಮೆನ್ ಮತ್ತು ಸೌದಿ ಅರೇಬಿಯಾದ ದಕ್ಷಿಣ ಭಾಗದ ಮೇಲೆ ಹಾರಾಟ ನಡೆಸಿ, ಇಂಧನ ತುಂಬಿಸಿಕೊಳ್ಳಲು ರೋಮ್‌ಗೆ ತೆರಳುತ್ತಿದ್ದವು. ಅರೇಬಿಯನ್ ಸಮುದ್ರದ ಮೇಲೆ ಹಾರಾಟ ನಡೆಸಿ ಗಲ್ಫ್ ಪ್ರದೇಶ ಪ್ರವೇಶಿಸುತ್ತಿದ್ದ ಮುಂಬೈನ ವಿಮಾನಗಳೂ ಇದೇ ಮಾರ್ಗವನ್ನು ಅನುಸರಿಸುತ್ತಿದ್ದವು.

ಮಾರ್ಗ ಬದಲಾವಣೆಯನ್ನು ದೃಢಪಡಿಸಿರುವ ಏರ್ ಇಂಡಿಯಾ ಅಧಿಕಾರಿ ಯೊಬ್ಬರು, ಜಾಗತಿಕ ವಾಯುಪ್ರದೇಶದಲ್ಲಿ ಹೆಚ್ಚುತ್ತಿರುವ ಆಯ್ಕೆಗಳಿಂದಾಗಿ ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ತೆರಳುವ ವಿಮಾನಗಳ ಮಾರ್ಗ ಯೋಜನೆಯಲ್ಲಿ ಈಗ ನಮಗೆ ಹೆಚ್ಚಿನ ನಮ್ಯತೆ ದೊರೆತಿದೆ ಎಂದು ಹೇಳಿದ್ದಾರೆ.

ವಿಮಾನ ಇಂಧನದ ಬೆಲೆ ನಿರಂತರವಾಗಿ ಏರುತ್ತಿರುವ ಸಂದರ್ಭದಲ್ಲಿ ಹೊಸ ಮಾರ್ಗದಿಂದ ಇಂಧನ ವೆಚ್ಚ ಕಡಿಮೆಯಾಗಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಮೂಲವೊಂದು, ಪ್ರಯಾಣಿಕರ ಸಂಖ್ಯೆ ಮತ್ತು ಸರಕು ಸಾಗಣೆ ಸಾಮರ್ಥ್ಯದ ಮೇಲಿನ ನಿರ್ಬಂಧಗಳಿಂದಾಗಿ ಈ ಲಾಭ ಸರಿದೂಗುತ್ತದೆ ಎಂದು ತಿಳಿಸಿದೆ.

ವಿಮಾನದಲ್ಲಿ ಪೂರ್ಣ ಪ್ರಮಾಣದ ಇಂಧನ ತುಂಬಿಸಿಕೊಂಡು ಹಾರಾಟ ನಡೆಸಿದಾಗ ಅದರ ಒಟ್ಟು ತೂಕ ಹೆಚ್ಚಾಗುತ್ತದೆ. ಇದರಿಂದ ಪ್ರಯಾಣಿಕರು ಮತ್ತು ಸರಕುಗಳನ್ನು ಸಾಗಿಸುವ ಸಾಮರ್ಥ್ಯವನ್ನು ಕಡಿಮೆ ಮಾಡಬೇಕಾಗುತ್ತದೆ. ಹೀಗಾಗಿ ಇಂಧನ ವೆಚ್ಚದಲ್ಲಿ ಸಿಗುವ ಅನುಕೂಲವನ್ನು ಇತರ ಅಂಶಗಳು ಸರಿದೂಗಿಸುತ್ತವೆ ಎಂದು ಮೂಲ ವಿವರಿಸಿದೆ.

ಬಿಸಿಸಿಐ ಹಿರಿಯ ಮಹಿಳಾ ಟಿ20 ಪಂದ್ಯ
ಸೂಪರ್ ಲೀಗ್ ಹಂತಕ್ಕೆ ಮುನ್ನಡೆದ ಕರ್ನಾಟಕ

ಬೆಂಗಳೂರು, ನ.6: ಅಬ್ಬರದ ಆಟ ಮುಂದುವರಿಸಿದ ಕರ್ನಾಟಕ ತಂಡವು ಬಿಸಿಸಿಐ ಸೀನಿಯರ್ ಮಹಿಳೆಯರ ಎಲೈಟ್ ಟಿ20 ಕ್ರಿಕೆಟ್ ಟೂರ್ನಿಯ ಗುಂಪು ಹಂತದ ತನ್ನ ಕೊನೆಯ ಪಂದ್ಯದಲ್ಲಿ ಶುಕ್ರವಾರ 7 ವಿಕೆಟ್‌ಗಳಿಂದ ಚಂಡೀಗಢ ತಂಡವನ್ನು ಸೋಲಿಸಿತು. ಅದರೊಂದಿಗೆ, ಅಜೇಯವಾಗಿ ಸೂಪರ್ ಲೀಗ್ ಹಂತಕ್ಕೆ ಮುನ್ನಡೆಯಿತು.

ಗುಂಪು ಹಂತದ ಎಲ್ಲ 7 ಪಂದ್ಯಗಳನ್ನು ಜಯಿಸಿದ ಶುಭಾ ಸತೀಶ್ ನಾಯಕತ್ವದ ರಾಜ್ಯ ತಂಡವು ಅಂಕಪಟ್ಟಿಯಲ್ಲಿ ಅಗ್ರಸ್ಥಾನ (28 ಅಂಕ) ಉಳಿಸಿಕೊಂಡಿತು.

ಸೂರತ್‌ನ ಸಿ.ಕೆ. ಪೀಠಾವಾಲಾ ಕಾಲೇಜು ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಶುಭಾ ಎದುರಾಳಿ ತಂಡವನ್ನು ಬ್ಯಾಟಿಂಗ್‌ಗೆ ಆಹ್ವಾನಿಸಿದರು. ಬಿ.ಜಿ.ತೇಜಸ್ವಿನಿ (17ಕ್ಕೆ2) ಮತ್ತು ಅನನ್ಯಾ ಹೆಗ್ಡೆ (20ಕ್ಕೆ2) ಅವರು ಪರಿಣಾಮಕಾರಿ ಬೌಲಿಂಗ್ ಮೂಲಕ ಚಂಡೀಗಢ ತಂಡದ ಬ್ಯಾಟರ್‌ಗಳನ್ನು ಕಟ್ಟಿಹಾಕಿದರು.

ನಾಯಕಿ, ಆರಂಭ ಆಟಗಾರ್ತಿ ತಾನ್ಯಾ ಭಾಟಿಯಾ (69; 53, 4x10, 6x1) ಹೋರಾಟ ತೋರಿದರು. ಕೊನೆಯಲ್ಲಿ ಕಶ್ವೀ ಗೌತಮ್ (ಔಟಾಗದೇ 21; 10ಎ) ಬಿರುಸಿನ ಬ್ಯಾಟಿಂಗ್ ಮಾಡಿದರು. ಇದರಿಂದಾಗಿ, ಚಂಡೀಗಢ ತಂಡವು ನಿಗದಿತ ಓವರ್‌ಗಳಲ್ಲಿ 6 ವಿಕೆಟ್‌ಗೆ 140 ರನ್ ಗಳಿಸಿತು.

ಗುರಿ ಬೆನ್ನಟ್ಟಿದ ಕರ್ನಾಟಕ ತಂಡಕ್ಕೆ ವೃಂದಾ ದಿನೇಶ್ (ಔಟಾಗದೇ 60; 39ಎ, 4x5, 6x3) ಮತ್ತು ನಿಕಿ ಪ್ರಸಾದ್ (52; 33ಎ, 4x9, 6x1) ಅವರು ಬಿರುಸಿನ ಅರ್ಧಶತಕ ಗಳಿಸಿ ನೆರವಾದರು. ವೃಂದಾ ಜೊತೆ ಸೇರಿದ ಶುಭಾ (ಅಜೇಯ 18; 13ಎ) ತಂಡವನ್ನು ಗೆಲುವಿನ ದಡ ಸೇರಿಸಿದರು. ರಾಜ್ಯ ತಂಡವು ಇನ್ನೂ 22 ಎಸೆತಗಳು ಬಾಕಿ ಇರುವಂತೆ 3 ವಿಕೆಟ್‌ಗೆ 141 ರನ್ ಗಳಿಸಿ, ಸಂಭ್ರಮಿಸಿತು.

ಸಂಕ್ಷಿಪ್ತ ಸ್ಕೋರು: ಚಂಡೀಗಢ: 20 ಓವರ್‌ಗಳಲ್ಲಿ 6 ವಿಕೆಟ್‌ಗೆ 140 (ತಾನ್ಯಾ ಭಾಟಿಯಾ 69, ಕಶ್ವೀ ಗೌತಮ್ ಔಟಾಗದೇ 21; ಬಿ.ಜಿ.ತೇಜಸ್ವಿನಿ 17ಕ್ಕೆ2, ಅನನ್ಯಾ ಹೆಗ್ಡೆ 20ಕ್ಕೆ2, ದೀಕ್ಷಾ ಹೊನ್ನುಶ್ರೀ 24ಕ್ಕೆ1, ನಿಕಿ ಪ್ರಸಾದ್ 23ಕ್ಕೆ1). ಕರ್ನಾಟಕ: 16.2 ಓವರ್‌ಗಳಲ್ಲಿ 3 ವಿಕೆಟ್‌ಗೆ 141 (ವೃಂದಾ ದಿನೇಶ್ ಔಟಾಗದೇ 60, ನಿಕಿ ಪ್ರಸಾದ್ 52, ಶುಭಾ ಸತೀಶ್ ಅಜೇಯ 18; ನಂದನಿ ಶರ್ಮಾ 16ಕ್ಕೆ1, ಕಶ್ವೀ ಗೌತಮ್ 27ಕ್ಕೆ1). ಪಂದ್ಯದ ಆಟಗಾರ್ತಿ: ನಿಕಿ ಪ್ರಸಾದ್.

ದೆಹಲಿ ಕನ್ನಡ ಶಾಲೆಯಲ್ಲಿ ವಾರ್ಷಿಕ ಕ್ರೀಡಾಕೂಟ



ನವದೆಹಲಿ, ನ.7: ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯಲ್ಲಿ ನ.6 ರಂದು ವಾರ್ಷಿಕ ಕ್ರೀಡಾಕೂಟವನ್ನು ಏರ್ಪಡಿಸಲಾಗಿತ್ತು. ಮುಖ್ಯ ಅತಿಥಿಯಾಗಿ ಮಾತನಾಡಿದ ಕರ್ನಾಟಕ ಬ್ಯಾಂಕ್‌ನ ಉಪ ಮಹಾಪ್ರಬಂಧಕ ಅಕ್ಷಯರಾಜ್ ಆರ್. ರಾವ್ ಮಕ್ಕಳಿಗೆ ಉತ್ತಮ ನಾಗರಿಕರಾಗಲು ಕರೆ ನೀಡಿ, ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೇಶಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಬೇಕೆಂದು ಹೇಳಿದರು. ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಯಾಗಿ ಭಾಗವಹಿಸಿದ್ದ ಅಂತರಾಷ್ಟ್ರೀಯ ಪ್ಯಾರಾ ಬ್ಯಾಡ್ಮಿಂಟನ್ ಚಾಂಪಿಯನ್ ಮತ್ತು ಏಷ್ಯನ್ ಗೇಮ್ಸ್–2026 ರ ಕಂಚಿನ ಪದಕ ವಿಜೇತ, ಶ್ರೀ ಸೂರ್ಯಕಾಂತ್ ಯಾದವ್ ಮಾತನಾಡುತ್ತ, ಕ್ರೀಡಾಕೂಟಗಳಲ್ಲಿ ಗೆಲ್ಲುವುದಕ್ಕಿಂತಲೂ ಭಾಗವಹಿಸುವುದು ಮುಖ್ಯ. ಕ್ರೀಡೆಯು ವಿದ್ಯಾರ್ಥಿಗಳಲ್ಲಿ ಶಿಸ್ತು, ಶ್ರದ್ಧೆ, ಸಮರ್ಪಣಾ ಭಾವ ಇತ್ಯಾದಿ ಮಹೋನ್ನತ ಗುಣಗಳನ್ನು ಬೆಳೆಸುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಅವನೀಂದ್ರನಾಥ್ ರಾವ್ ಮಾತನಾಡಿ, ಆಟವು ಮಕ್ಕಳಲ್ಲಿ ಅಡೆತಡೆಗಳನ್ನು ಎದುರಿಸಿ, ಗುರಿಯನ್ನು ತಲುಪಲು ಸಹಾಯ ಮಾಡುತ್ತದೆ. ಹಾಗಾಗಿ ಎಲ್ಲಾ ಮಕ್ಕಳು ಅಧ್ಯಯನದ ಜೊತೆಗೆ ಒಂದಾದರೂ ಆಟದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಲು ಸಲಹೆ ನೀಡಿದರು. ದೆಹಲಿ ಕನ್ನಡ ಶಾಲೆಯ ವ್ಯವಸ್ಥಾಪಕರಾದ ಬಿ ಆರ್ ಉಮೇಶ್, ದೆಹಲಿ ಕನ್ನಡ ಶಾಲೆಯು ವಿದ್ಯಾರ್ಥಿಗಳ ಸರ್ವಾಂಗೀಣ ಪ್ರಗತಿಗಾಗಿ ಶ್ರಮಿಸುತ್ತಿದೆ. ಪ್ರತಿವರ್ಷ ವಲಯಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ವಿದ್ಯಾರ್ಥಿಗಳು ಅತಿ ಹೆಚ್ಚಿನ ಪದಕಗಳನ್ನು ಪಡೆಯುತ್ತಿದ್ದಾರೆ. ಇದರ ಹಿಂದೆ ಶಾಲೆಯ ದೈಹಿಕ ಶಿಕ್ಷಕರಾದ ಡೆರೆಲ್ ಜೆಸಿಕಾ ಫರ್ನಾಂಡೀಸ್ ಮತ್ತು ಶಿವರಾಮ ಎನ್. ಜೊತೆಗೆ ಎಲ್ಲಾ ಶಿಕ್ಷಕರ ಸಹಕಾರ ಪ್ರಮುಖ ಪಾತ್ರ ವಹಿಸಿದೆ ಎಂದು ಹೇಳಿದರು.

ಶಿಸ್ತು, ಏಕಾಗ್ರತೆ, ಐಕ್ಯವನ್ನು ಸಾರುವ ವಿದ್ಯಾರ್ಥಿಗಳ ಪಥಸಂಚಲನ ಕಾರ್ಯಕ್ರಮಕ್ಕೆ ಮೆರುಗನ್ನು ತಂದುಕೊಟ್ಟಿತ್ತು. ಪ್ರಾಥಮಿಕ ಹಾಗೂ ಹಿರಿಯ ಮಾಧ್ಯಮಿಕ ವಿಭಾಗದ ವಿದ್ಯಾರ್ಥಿಗಳ ನೃತ್ಯ ಪ್ರದರ್ಶನ ಮನೋರಂಜಕವಾಗಿತ್ತು. ನಂತರ ಓಟ, ಉದ್ದಜಿಗಿತ, ಎತ್ತರಜಿಗಿತ, ರಿಲೇ, ಹಗ್ಗ ಜಗ್ಗಾಟ ಇನ್ನಿತರ ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಗೌರವ ಕಾರ್ಯದರ್ಶಿ ಕಾಶಿನಾಥ್ ಬಿರಾದರ್, ಸದಸ್ಯರಾದ ರಾಧಾಕೃಷ್ಣ, ಗಿರೀಶ್ ಎಸ್., ವಿದ್ಯಾರ್ಥಿಗಳ ಪಾಲಕ ಪೋಷಕರು, ಶಿಕ್ಷಕ ಶಿಕ್ಷಕೇತರ ವೃಂದ ಮತ್ತಿತರರು ಉಪಸ್ಥಿತರಿದ್ದರು. ಪ್ರಾಂಶುಪಾಲರಾದ ಪ್ರಶಾಂತ್ ಕುಮಾರ್ ಅವರು ಸ್ವಾಗತಿಸಿದರು. ಉಪಪ್ರಾಂಶುಪಾಲೆ ಪ್ರೇಮಲತಾ ಬಿ. ವಂದಿಸಿದರು. ಪ್ರಾಧ್ಯಾಪಕಿ ಪ್ರೊಮಿಲಾ ದಹಿಯಾ,ಶಿಕ್ಷಕಿ ವಂದನಾ ಮತ್ತು ಶಿಕ್ಷಕಿ ಬಿದಿಶಾ ಚಟರ್ಜಿ ಕಾರ್ಯಕ್ರಮವನ್ನು ನಿರೂಪಿಸಿದರು.

ತಂಡದಲ್ಲಿ ಉಳಿಯಬೇಕಾದರೆ 40 ಕೋಟಿ ಕೊಡಿ: ಮೆಗಾ ಹರಾಜಿಗೂ ಮುನ್ನ ಐಪಿಎಲ್ ಆಟಗಾರರಿಂದ ಭಾರಿ ಬೇಡಿಕೆ

ಮುಂಬೈ, ನ. 6: ಮುಂದಿನ ವರ್ಷ ನಡೆಯಲಿರುವ ಮೆಗಾ ಹರಾಜಿಗೂ ಮುನ್ನ, ಈ ವರ್ಷ ನಡೆಯುತ್ತಿರುವ ಕೊನೆಯ ಮಿನಿ ಹರಾಜು ಪ್ರಕ್ರಿಯೆ ಇದಾಗಿದೆ. ಮಿನಿ-ಹರಾಜಿನಲ್ಲಿ ಹೆಚ್ಚಿನ ತಂಡಗಳಿಗೆ ಕೇವಲ ಐದರಿಂದ ಆರು ಸ್ಥಾನಗಳು ಮಾತ್ರ ಖಾಲಿ ಇರುತ್ತವೆ. ಆದರೆ, ಮೆಗಾ ಹರಾಜಿನಲ್ಲಿ ತಂಡಗಳು ಎಲ್ಲವನ್ನೂ ಶೂನ್ಯದಿಂದ (ಮೊದಲಿನಿಂದ) ಪ್ರಾರಂಭಿಸುತ್ತವೆ. ಈ ಕಾರಣದಿಂದಾಗಿ, ಮೆಗಾ ಹರಾಜುಗಳು ಯಾವಾಗಲೂ ಹೆಚ್ಚಿನ ಆಸಕ್ತಿಯನ್ನು ಸೆಳೆಯುತ್ತವೆ. ಮುಂದಿನ ಮೆಗಾ ಹರಾಜು (ಐಪಿಎಲ್ 2028 ಆವೃತ್ತಿಗಾಗಿ) ಇನ್ನೂ ಒಂದು ವರ್ಷಕ್ಕೂ ಹೆಚ್ಚು ದೂರದಲ್ಲಿದ್ದು, ಬಹುಶಃ 2027ರ ಡಿಸೆಂಬರ್‌ನಲ್ಲಿ ನಡೆಯುವ ಸಾಧ್ಯತೆಯಿದೆ.

'ಕ್ರಿಕ್‌ಬಜ್' ವರದಿ ಪ್ರಕಾರ, ಐಪಿಎಲ್‌ನ ಕೆಲವು 'ಉನ್ನತ ಶ್ರೇಣಿಯ' ಆಟಗಾರರು, ತಮ್ಮನ್ನು ತಂಡದಲ್ಲಿ ಉಳಿಸಿಕೊಳ್ಳಲು 40 ಕೋಟಿ ರೂ. ನೀಡಬೇಕೆಂದು ಬೇಡಿಕೆ ಇಟ್ಟಿದ್ದಾರೆ. ಈ ಮೊತ್ತವನ್ನು ಪಾವತಿಸಿದರೆ ತಾವು ತಮ್ಮ ತಂಡಗಳಲ್ಲೇ ಮುಂದುವರಿಯಲು ಸಿದ್ಧರಿರುವುದಾಗಿ ಅವರು ಆಯಾ ಫ್ರಾಂಚೈಸಿಗಳಿಗೆ ತಿಳಿಸಿದ್ದಾರೆ ಎಂದು ವರದಿ ಹೇಳಿದೆ. ಹರಾಜಿನಲ್ಲಿ ತಮಗೆ ದೊಡ್ಡ ಮೊತ್ತದ ಬಿಡ್‌ಗಳು ಸಿಗುವ ಬಲವಾದ ಸಾಧ್ಯತೆಯಿದೆ ಎಂದು ನಂಬುವ ಇನ್ನೂ ಅನೇಕ ಆಟಗಾರರು ಇದೇ ಹಾದಿಯನ್ನು ಆರಿಸಿಕೊಳ್ಳಬಹುದು ಎಂದೂ ವರದಿ ತಿಳಿಸಿದೆ.

ಐಪಿಎಲ್‌ನಲ್ಲಿ 40 ಕೋಟಿ ರೂಪಾಯಿ ಸಂಬಳ ಎಂಬುದು ಹಿಂದೆಂದೂ ಕಂಡು ಕೇಳರಿಯದ ಸಂಗತಿಯಾಗಿದೆ. ಐಪಿಎಲ್ 2025ರ ಹರಾಜಿನಲ್ಲಿ ರಿಷಬ್ ಪಂತ್ ಅವರನ್ನು ಲಕ್ನೋ ಸೂಪರ್ ಜೈಂಟ್ಸ್ ತಂಡವು 27 ಕೋಟಿಗೆ ಖರೀದಿಸಿತು. ಹರಾಜಿನಲ್ಲಿ ಆಟಗಾರೊಬ್ಬರಿಗಾಗಿ ಫ್ರಾಂಚೈಸಿಯೊಂದು ಪಾವತಿಸಿದ ಅತಿ ದೊಡ್ಡ ಮೊತ್ತ ಇದಾಗಿದೆ.

ಸದ್ಯ, ಒಂದು ತಂಡಕ್ಕೆ ಲಭ್ಯವಿರುವ ಒಟ್ಟು ಮೊತ್ತ (ಪರ್ಸ್) 120 ಕೋಟಿ ರೂಪಾಯಿಗಳಷ್ಟಿದೆ. ಮುಂದಿನ ವರ್ಷ ನಡೆಯಲಿರುವ ಮೆಗಾ ಹರಾಜಿನಲ್ಲಿ ಈ ಮೊತ್ತವು 150 ಕೋಟಿ ರೂಪಾಯಿಗಳಿಗೆ ಏರಿಕೆಯಾಗಬಹುದು ಎಂದು ವರದಿಯೊಂದು ತಿಳಿಸಿದೆ.

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) 2027ರ ಮಿನಿ–ಹರಾಜಿಗೂ ಮುನ್ನ, ತಮ್ಮ ತಂಡಗಳಲ್ಲಿ ಉಳಿಸಿಕೊಳ್ಳುವ ಮತ್ತು ಕೈಬಿಡುವ ಆಟಗಾರರ ಪಟ್ಟಿಯನ್ನು ಅಂತಿಮಗೊಳಿಸಲು 10 ಫ್ರಾಂಚೈಸಿಗಳಿಗೆ ನೀಡಲಾಗಿದ್ದ ಗಡುವನ್ನು ಎರಡು ದಿನಗಳ ಕಾಲ ವಿಸ್ತರಿಸಲಾಗಿದ್ದು, ಈಗ ಅದು ನವೆಂಬರ್ 17ಕ್ಕೆ ನಿಗದಿಯಾಗಿದೆ. ಇನ್ನು, ಈ ಹರಾಜು ಪ್ರಕ್ರಿಯೆಯು ಡಿಸೆಂಬರ್ 16ರಂದು ಗೋವಾದಲ್ಲಿ ನಡೆಯಲಿದೆ.

ಕ್ರಿಕ್‌ಇನ್ಫೋ ವರದಿ ಪ್ರಕಾರ, ಈ ಗಡುವನ್ನು ಆರಂಭದಲ್ಲಿ ನವೆಂಬರ್ 15ಕ್ಕೆ ನಿಗದಿಪಡಿಸಲಾಗಿತ್ತು; ಅಂದೇ ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಐದನೇ ಏಕದಿನ ಅಂತರರಾಷ್ಟ್ರೀಯ ಪಂದ್ಯವೂ ನಡೆಯಲಿದೆ.

ಆಟಗಾರರನ್ನು ಉಳಿಸಿಕೊಳ್ಳುವ ಮತ್ತು ಬಿಡುಗಡೆ ಮಾಡುವ ಪಟ್ಟಿಗಳನ್ನು ಸಲ್ಲಿಸಿದ ನಂತರ, ಐಪಿಎಲ್ ನೋಂದಾಯಿತ ಆಟಗಾರರ ವಿವರಗಳನ್ನು ಫ್ರಾಂಚೈಸಿಗಳೊಂದಿಗೆ ಹಂಚಿಕೊಳ್ಳಲಿದೆ. ಹರಾಜಿಗೆ ಮುಂಚಿನ ವಾರದಲ್ಲಿ, ಹರಾಜಿನ ಅಂತಿಮ ಪಟ್ಟಿ ಮತ್ತು ಆಟಗಾರರ ಗುಂಪುಗಳ ಕ್ರಮವನ್ನು ಬಿಡುಗಡೆ ಮಾಡುವ ಮೊದಲು, ತಂಡಗಳು ಆಟಗಾರರನ್ನು ಶಾರ್ಟ್‌ಲಿಸ್ಟ್ ಮಾಡುತ್ತವೆ.

ಹರಾಜಿಗೂ ಮುನ್ನವೇ ಈಗಾಗಲೇ ಇಬ್ಬರು ಆಟಗಾರರ ವಿನಿಮಯ ನಡೆದಿದೆ. ಡೆಲ್ಲಿ ಕ್ಯಾಪಿಟಲ್ಸ್ ತಂಡವು ರಿಷಭ್ ಪಂತ್ ಅವರನ್ನು ಲಖನೌ ಸೂಪರ್ ಜೈಂಟ್ಸ್‌ನಿಂದ ಮರಳಿ ಕರೆತಂದಿದೆ; ಬದಲಿಗೆ, ಎಡಗೈ ರಿಸ್ಟ್–ಸ್ಪಿನ್ನರ್ ಕುಲದೀಪ್ ಯಾದವ್ ಅವರನ್ನು ಲಖನೌ ತಂಡಕ್ಕೆ ಬಿಟ್ಟುಕೊಟ್ಟಿದೆ.

ಮತ್ತೊಂದು ವಿನಿಮಯ ಪ್ರಕ್ರಿಯೆಯಲ್ಲಿ, ಡೆಲ್ಲಿ ಕ್ಯಾಪಿಟಲ್ಸ್ ತಂಡದ ವೇಗದ ಬೌಲರ್ ಟಿ. ನಟರಾಜನ್ ಅವರು ಸನ್‌ರೈಸರ್ಸ್ ಹೈದರಾಬಾದ್‌ಗೆ ತೆರಳಿದ್ದು, ಪ್ರತಿಯಾಗಿ ಲೆಗ್–ಸ್ಪಿನ್ನರ್ ಜೀಶಾನ್ ಅನ್ಸಾರಿ ದೆಹಲಿ ತಂಡಕ್ಕೆ ಬಂದಿದ್ದಾರೆ.